ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಅಕ್ಟೋಬರ್ 23 ಬುಧವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 187 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ವರುಣದಲ್ಲಿ 501.81 ಕೋಟಿ ವೆಚ್ಚದ 313 ಕಾಮಗಾರಿ

ಮುಡಾ ಹಗರಣ ಆರೋಪದ ನಡುವೆಯೇ ಸ್ವಕ್ಷೇತ್ರಕ್ಕೆ ಭರ್ಜರಿ ಕೊಡುಗೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ

ಮೈಸೂರು, ಅ.22(ಆರ್‌ಕೆ)– ಮೈಸೂರು ಜಿಲ್ಲೆಯ ವರುಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಅಭಿವೃದ್ಧಿಪಡಿಸಿರುವ ಸುಮಾರು 501.81 ಕೋಟಿ ವೆಚ್ಚದ ಯೋಜನೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಚಾಲನೆ ನೀಡಿ, ಕೆಲವು ಕಾರ್ಯಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

ತಿ.ನರಸೀಪುರ–ನಂಜನಗೂಡು ರಸ್ತೆಯ ತಾಯೂರು ಗೇಟ್ ಬಳಿ ಮೈದಾನದಲ್ಲಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಿದ್ದ ಬೃಹತ್ ಕಾರ್ಯಕ್ರಮದಲ್ಲಿ ಒಟ್ಟು 313 ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದ ಮುಖ್ಯಮಂತ್ರಿಗಳು, ಇದೇ ವೇಳೆ ಹಲವು ಇಲಾಖೆಗಳಿಗೆ ಮಂಜೂರಾಗಿರುವ ವಿವಿಧ ಸವಲತ್ತುಗಳನ್ನು ಫಲಾನುಭವಿಗಳಿಗೆ ವಿತರಣೆ ಮಾಡಿದರು. ವರುಣ ಕ್ಷೇತ್ರದಲ್ಲಿ ವಿವಿಧ ಇಲಾಖೆಗಳಿಂದ 2024–25ನೇ ಸಾಲಿಗೆ ಸರ್ಕಾರ ನೀಡಿರುವ 471.20 ಕೋಟಿ ರೂ. ಅಂದಾಜು ವೆಚ್ಚದ ಕಾಮಗಾರಿಗಳಿಗೆ ಶಂಕುಸ್ಥಾಪನೆ, 19.78 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿರುವ ಕಟ್ಟಡಗಳ ಉದ್ಘಾಟನೆ, 10.83 ಕೋಟಿ ರೂ. ಅಂದಾಜು



ವರುಣ ಕ್ಷೇತ್ರದಲ್ಲಿ ಮಂಗಳವಾರ ಫಲಾನುಭವಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿವಿಧ ಸವಲತ್ತುಗಳನ್ನು ವಿತರಿಸಿದರು.

ವೆಚ್ಚದಲ್ಲಿ 2615 ಫಲಾನುಭವಿಗಳಿಗೆ ವಿವಿಧ ಇಲಾಖೆಗಳ ಸವಲತ್ತು ವಿತರಣೆ ಸೇರಿದಂತೆ ಮುಖ್ಯಮಂತ್ರಿಗಳು ಇಂದು ಒಟ್ಟು 501.18 ಕೋಟಿ ರೂ. ವೆಚ್ಚದ ಕಾರ್ಯಗಳಿಗೆ ಶಂಕುಸ್ಥಾಪನೆ, ಕಟ್ಟಡಗಳ ಉದ್ಘಾಟನೆ ಹಾಗೂ ಫಲಾನುಭವಿಗಳಿಗೆ ಸವಲತ್ತು ವಿತರಣೆ ಮಾಡಿದರು.

ಶಂಕುಸ್ಥಾಪನೆ: ಸಣ್ಣ ನೀರಾವರಿ ಇಲಾಖೆಯ 14, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗದ 2, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ 1, ಆರ್‌ಡಿಪಿಆರ್ (ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ) ಯಲ್ಲಿ 35, ಶಾಲಾ ಶಿಕ್ಷಣ ಇಲಾಖೆಯ 22, ಸಮಾಜ ಕಲ್ಯಾಣ ■ 3ನೇ ಪುಟಕ್ಕೆ

ನಾವಿರೋವರೆಗೂ ಗ್ಯಾರಂಟಿ ನಿಲ್ಲಲ್ಲ

ಜನ ನನ್ನೊಂದಿಗೆ ಇರುವವರೆಗೂ ನಾನು ಬಿಜೆಪಿ–ಜೆಡಿಎಸ್ ಷಡ್ಯಂತರಕ್ಕೆ ಜಗ್ಗಲ್ಲ–ಬಗ್ಗಲ್ಲ: ಸಿಎಂ ಘರ್ಜನೆ

ಮೈಸೂರು, ಅ.22(ಆರ್‌ಕೆ)–ರಾಜ್ಯದ ಜನ ನನ್ನ ಜೊತೆ ಇರುವವರೆಗೂ ನಾನು ಬಿಜೆಪಿ ಮತ್ತು ಜೆಡಿಎಸ್ ಷಡ್ಯಂತರಕ್ಕೆ ಹೆದರುವುದಿಲ್ಲ. ನಮ್ಮ ಸರ್ಕಾರ ಇರೋವರೆಗೂ ಗ್ಯಾರಂಟಿ ನಿಲ್ಲಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದಿಲ್ಲಿ ಘೋಷಿಸಿದ್ದಾರೆ. ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ಮೈಸೂರು ಜಿಲ್ಲೆ ತಿ.ನರಸೀಪುರ–ನಂಜನಗೂಡು ರಸ್ತೆಯ ತಾಯೂರು ಗೇಟ್ ಬಳಿಯ ಮೈದಾನದಲ್ಲಿ ಆಯೋಜಿಸಿದ್ದ ಬೃಹತ್ ಕಾರ್ಯಕ್ರಮದಲ್ಲಿ ವರುಣ ಕ್ಷೇತ್ರ ವ್ಯಾಪ್ತಿಯ ಸುಮಾರು 501.81 ಕೋಟಿ ರೂ. ಮೌಲ್ಯದ ವಿವಿಧ ಇಲಾಖೆಯ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ, ಉದ್ಘಾಟನೆ ಹಾಗೂ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ಸವಲತ್ತು ವಿತರಿಸಿ, ಬಳಿಕ ಮಾತನಾಡುತ್ತಿದ್ದರು. ರಾಜ್ಯದ ಜನತೆ ನನ್ನ ಜೊತೆ ಇರುವವರೆಗೂ ನಾನು ಎಲ್ಲಾ ಷಡ್ಯಂತರಗಳನ್ನು ಸೋಲಿಸುತ್ತೇನೆ. ಅವರ ಆಟಗಳಿಗೆ ಜಗ್ಗಲ್ಲ, ಬಗ್ಗಲ್ಲ. ಸಾಮಾಜಿಕ ನ್ಯಾಯದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ವರುಣ ಜನರ ಆಶೀರ್ವಾದದಿಂದ ಎರಡು ಬಾರಿ ಸಿಎಂ ಆಗಿದ್ದೇನೆ. ಈ ಕ್ಷೇತ್ರ ಕಾಂಗ್ರೆಸ್‌ನ ಭದ್ರಕೋಟೆ. ಲೋಕಸಭಾ ಚುನಾವಣೆಯಲ್ಲೂ ಬಿಜೆಪಿಗಿಂತ ಹೆಚ್ಚು ಮತಕೊಟ್ಟಿದ್ದೀರಿ. ನನಗೆ ವಿಶೇಷವಾಗಿ ಆಶೀರ್ವಾದ ಮಾಡಿದ್ದಕ್ಕಾಗಿ ಕ್ಷೇತ್ರದ ಮತದಾರರಿಗೆ ಅನಂತ ಧನ್ಯವಾದ ಅರ್ಪಿಸುತ್ತೇನೆ ಎಂದು ಸಿದ್ದರಾಮಯ್ಯ ನುಡಿದರು.



ಒಂದೇ ಒಂದು ರೂಪಾಯಿ ಲಂಚ ಪಡೆದಿಲ್ಲ: ಒಂದೇ ಒಂದು ರೂಪಾಯಿ ಲಂಚ ಪಡೆದ ಉದಾಹರಣೆ ನನ್ನ ಮೇಲೆ ಇಲ್ಲ. ನನ್ನ ಮೇಲಿನ ಲಂಚದ ಸುಳ್ಳು ಆರೋಪವನ್ನು ಜನತೆ ಸಹಿಸುವುದಿಲ್ಲ. ರಾಜ್ಯದ ಜನತೆ ನನ್ನ ಜೊತೆಗೆ ಇರುವವರೆಗೂ ಷಡ್ಯಂತ್ರಗಳಿಗೆ ಹೆದರಲ್ಲ. 45 ವರ್ಷದ ರಾಜಕೀಯ ಬದುಕಿನಲ್ಲಿ ನನ್ನ ಮೇಲೆ ಭ್ರಷ್ಟಾಚಾರದ ಸಣ್ಣ ಕಪ್ಪುಚುಕ್ಕೆ ಇಲ್ಲ. ■ 3ನೇ ಪುಟಕ್ಕೆ

ಚನ್ನಪಟ್ಟಣ ವಿಧಾನಸಭಾ ಉಪಚುನಾವಣೆ

ಸಿ.ಪಿ.ಯೋಗೇಶ್ವರ್ ಪಟ್ಟಿಗೆ ಕಾಂಗ್ರೆಸ್, ಜೆಡಿಎಸ್ ಕಕ್ಕಾಬಿಕ್ಕಿ



ಬೆಂಗಳೂರು, ಅ. 22(ಕೆಎಂಶಿ)– ವಿಧಾನಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿ ಚನ್ನಪಟ್ಟಣ ವಿಧಾನಸಭಾ ಉಪಚುನಾವಣಾ ಕಣಕ್ಕಿಳಿಯಲು ಮುಂದಾಗಿರುವ ಮಾಜಿ ಸಚಿವ, ಬಿಜೆಪಿ ಮುಖಂಡ ಸಿ.ಪಿ.ಯೋಗೇಶ್ವರ್ ಅವರಿಗೆ ಈಗ ಎಲ್ಲಿಲ್ಲದ ಬೇಡಿಕೆ. ಚನ್ನಪಟ್ಟಣ ಕ್ಷೇತ್ರವನ್ನು ಎನ್‌ಡಿಎ ತೆಕ್ಕೆಯಲ್ಲಿ ಉಳಿಸಿಕೊಳ್ಳಲು ಬಿಜೆಪಿ ಒಂದೆಡೆ ನಿರಂತರ ಪ್ರಯತ್ನ ಮಾಡಿದರೆ, ಇನ್ನೊಂದೆಡೆ ಕಾಂಗ್ರೆಸ್, ಯೋಗೇಶ್ವರ್ ಅವರನ್ನು ಮತ್ತೆ ಮನೆಗೆ ಕರೆತರಲು ಮುಂದಾಗಿದೆ.

ಇದರ ನಡುವೆ ಚನ್ನಪಟ್ಟಣ ಕ್ಷೇತ್ರ ಉಳಿಸಿಕೊಂಡು ತನ್ನ ಅಸ್ತಿತ್ವ ಕಾಪಾಡಿಕೊಳ್ಳಲು ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರು ಇಡೀ ದಿನ ಕ್ಷೇತ್ರದ ಕಾರ್ಯಕರ್ತರೊಂದಿಗೆ ಸಮಾಲೋಚನೆ ನಡೆಸಿದರು. ಸಭೆ ನಡುವೆಯೇ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಹಾಗೂ ಕೇಂದ್ರ ಸಚಿವ ಜೆ.ಪಿ.ನಡ್ಡಾ, ತಮ್ಮ ಸಹೋದ್ಯೋಗಿ ಎಚ್.ಡಿ.ಕುಮಾರ ಸ್ವಾಮಿ ಅವರನ್ನು ಎರಡು ಬಾರಿ ದೂರ ವಾಣಿ ಮೂಲಕ ಸಂಪರ್ಕಿಸಿ, ಜೆಡಿಎಸ್ ಚಿಹ್ನೆಯಡಿ ಯೋಗೇಶ್ವರ್ ಸ್ಪರ್ಧೆಗೆ ನಿಮ್ಮ ಸಹಮತ ಇದೆಯೇ ಎಂದು ಕೇಳಿದ್ದಾರೆ.

ಆದರೆ, ಸಭೆಯಲ್ಲಿ ಜೆಡಿಎಸ್ ಕಾರ್ಯಕರ್ತರು ಯೋಗೇಶ್ವರ್ ಸ್ಪರ್ಧೆಗೆ ವಿರೋಧ ವ್ಯಕ್ತಪಡಿಸಿದ್ದಲ್ಲದೆ, ನಿಖಿಲ್ ಕುಮಾರ ಸ್ವಾಮಿ ಅಥವಾ ಕುಟುಂಬದ ಯಾರನ್ನಾದರೂ ಕಣಕ್ಕಿಳಿಸಿ ಎಂದು ಒತ್ತಾಯ ಮಾಡಿದ್ದಾರೆ. ಇದರಿಂದ ಇಕ್ಕಟ್ಟಿಗೆ ಸಿಲುಕಿದ ಕುಮಾರಸ್ವಾಮಿ, ನಡ್ಡಾ ಅವರ ಸಲಹೆಗೆ ಒಪ್ಪಿದ್ದರೂ ಅದಕ್ಕೆ ಇನ್ನೂ ಅಂತಿಮ ಚಿತ್ರಣ ದೊರೆತಿಲ್ಲ. ಇತ್ತ ಯೋಗೇಶ್ವರ್ ಮಾತ್ರ ನಾನು ಬಿಜೆಪಿ ಚಿಹ್ನೆಯಡಿ ಕಣಕ್ಕಿಳಿಯುವುದಾದರೆ ಒಪ್ಪಿಗೆ, ಇಲ್ಲದಿದ್ದರೆ ನನ್ನ ದಾರಿ ನನಗೆ ಎಂದು ರಾಜ್ಯ ನಾಯಕರಿಗೆ ತಮ್ಮ ಗಟ್ಟಿ ನಿರ್ಧಾರವನ್ನು ಹೇಳುತ್ತಲೇ ಬಂದಿದ್ದಾರೆ. ಮತ್ತೊಂದೆಡೆ ಯೋಗೇಶ್ವರ್ ಅವರನ್ನು ಪಕ್ಷಕ್ಕೆ ಬರಮಾಡಿಕೊಳ್ಳಲು ರಾಜ್ಯ ಕಾಂಗ್ರೆಸ್ ಉಸ್ತುವಾರಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ನಗರಕ್ಕೆ ಧಾವಿಸಿದ್ದಾರೆ. ■ 5ನೇ ಪುಟಕ್ಕೆ

ವಯ್‌ನಾಡು ಮಾರ್ಗಮಧ್ಯೆ ಮೈಸೂರು ವಿಮಾನ ನಿಲ್ದಾಣದಲ್ಲಿ ಬಂದಿಳಿದ

ಸೋನಿಯಾ ಗಾಂಧಿ, ಪ್ರಿಯಾಂಕ ಗಾಂಧಿ

● ಸಿಎಂ, ಡಿಸಿಎಂ ಇತರ ಮುಖಂಡರಿಂದ ಸ್ವಾಗತ ● ರಸ್ತೆ ಮಾರ್ಗವಾಗಿ ವಯ್‌ನಾಡಿಗೆ ಪ್ರಯಾಣ ● ಇಂದು ನಾಮಪತ್ರ ಸಲ್ಲಿಕೆ

ಮೈಸೂರು, ಅ.22(ಎಸ್‌ಬಿಡಿ)– ಕಾಂಗ್ರೆಸ್ ವರಿಷ್ಠರಾದ ಸೋನಿಯಾ ಗಾಂಧಿ ಹಾಗೂ ಪ್ರಿಯಾಂಕ ಗಾಂಧಿ ಮಂಗಳವಾರ ಸಂಜೆ ಮೈಸೂರಿಗೆ ಆಗಮಿಸಿದ್ದರು.

ಕೇರಳದ ವಯ್‌ನಾಡು ಲೋಕಸಭಾ ಕ್ಷೇತ್ರದಿಂದ ಬುಧವಾರ ಪ್ರಿಯಾಂಕ ಗಾಂಧಿ ನಾಮಪತ್ರ ಸಲ್ಲಿಸಲಿರುವ ಹಿನ್ನೆಲೆಯಲ್ಲಿ ನವದೆಹಲಿಯಿಂದ ಮೈಸೂರು ವಿಮಾನ ನಿಲ್ದಾಣಕ್ಕೆ ಬಂದಿಳಿದ ಇವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಸ್ವಾಗತಿಸಿದರು.

ಈ ವೇಳೆ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಕೆ.ವೆಂಕಟೇಶ್, ಸಂಸದರಾದ ಸುನಿಲ್ ಬೋಸ್, ಶ್ರೇಯಸ್ ಪಟೇಲ್, ವಿಧಾನಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ, ಡಾ.ಯತೀಂದ್ರ ಸಿದ್ದರಾಮಯ್ಯ, ಶಾಸಕರಾದ ಕೆ.ಹರೀಶ್ ಗೌಡ, ಡಿ.ರವಿಶಂಕರ್, ದರ್ಶನ್ ಧ್ರುವನಾರಾಯಣ್, ಎ.ಆರ್.ಕೃಷ್ಣಮೂರ್ತಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ. ಬಿ.ಜೆ.ವಿಜಯ್ ಕುಮಾರ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಪುಷ್ಪ ಅಮರನಾಥ್, ಮಾಜಿ ಶಾಸಕರಾದ ಎಂ.ಕೆ.ಸೋಮಶೇಖರ್, ಕಳಲೆ ಕೇಶವಮೂರ್ತಿ ಇನ್ನಿತರ ಮುಖಂಡರು ಅಭಿನಂದಿಸಿದರು.

ರಸ್ತೆ ಮಾರ್ಗದಲ್ಲಿ ಪ್ರಯಾಣ: ಸೋನಿಯಾ ಗಾಂಧಿ, ಪ್ರಿಯಾಂಕ ಗಾಂಧಿ ಹಾಗೂ ಅವರ ಮಕ್ಕಳು ಮೈಸೂರು ವಿಮಾನ ನಿಲ್ದಾಣದಿಂದ ರಸ್ತೆ ಮಾರ್ಗವಾಗಿ ವಯ್‌ನಾಡಿಗೆ ಪ್ರಯಾಣ ಬೆಳೆಸಿದರು. ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಸುರ್ಜೇವಾಲ ವಿಮಾನದ ಮೂಲಕ ಬೆಂಗಳೂರಿಗೆ ತೆರಳಿದರು. ಈ ಮೂವರೂ ಬುಧವಾರ ಬೆಳಗ್ಗೆ ಬೆಂಗಳೂರಿನಿಂದ ವಿಶೇಷ ವಿಮಾನದಲ್ಲಿ ವಯ್‌ನಾಡಿಗೆ ತೆರಳಿ, ಪ್ರಿಯಾಂಕ ಗಾಂಧಿ ಅವರ ಪ್ರಚಾರ ಸಭೆಯಲ್ಲಿ ಭಾಗವಹಿಸಲಿದ್ದಾರೆ.



ದೆಹಲಿಯಿಂದ ಮಂಗಳವಾರ ಸಂಜೆ ಆಗಮಿಸಿದ ಕಾಂಗ್ರೆಸ್ ವರಿಷ್ಠರಾದ ಸೋನಿಯಾ ಗಾಂಧಿ ಹಾಗೂ ಪ್ರಿಯಾಂಕ ಗಾಂಧಿ ಅವರನ್ನು ಮೈಸೂರಿನ ವಿಮಾನ ನಿಲ್ದಾಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇನ್ನಿತರ ಮುಖಂಡರು ಸ್ವಾಗತಿಸಿದರು.

ನಡ್ಡಾ, ಪ್ರಹ್ಲಾದ್ ಜೋಷಿ, ಯೋಗೇಶ್ವರ್‌ಗೆ ಜೆಡಿಎಸ್ ಟಿಕೆಟ್ ಕೊಡಿ ಎಂದಿದ್ದಾರೆ: ಹೆಚ್‌ಡಿಕೆ

ಬೆಂಗಳೂರು, ಅ.22–ಕೇಂದ್ರ ಸಚಿವರೂ ಆದ ಬಿಜೆಪಿ ಅಧ್ಯಕ್ಷ ಜೆ.ಪಿ.ನಡ್ಡಾ, ಪ್ರಹ್ಲಾದ್ ಜೋಷಿ, ಯೋಗೇಶ್ವರ್‌ಗೆ ಜೆಡಿಎಸ್ ಟಿಕೆಟ್ ಕೊಡಿ ಎಂದು ಹೇಳಿದ್ದಾರೆ. ಆದರೆ, ಕಾಂಗ್ರೆಸ್ ನಾಯಕರು ಯೋಗೇಶ್ವರ್ ಸ್ವಾಗತಕ್ಕೆ ಕ್ಯೂ ನಿಂತಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ.

ಚನ್ನಪಟ್ಟಣದ ಜೆಡಿಎಸ್ ಕಾರ್ಯಕರ್ತರು, ಮುಖಂಡರ ಸಭೆಯ ನಂತರ ಸುದ್ದಿಗಾರರ ಜತೆ ಮಾತನಾಡಿದ ಕುಮಾರಸ್ವಾಮಿ, ಚನ್ನಪಟ್ಟಣ ■ 5ನೇ ಪುಟಕ್ಕೆ

ಇ-ಖಾತಾ, ಸರ್ವರ್ ಸಮಸ್ಯೆ, ತಿದ್ದುಪಡಿ ಕಾಯ್ದೆ ಗೊಂದಲ, ಮುಡಾ ಆತಂಕದ ನಡುವೆ

ಆಸ್ತಿ ನೋಂದಣಿ ಆಗದೆ ಬಿಕೋ ಎನ್ನುತ್ತಿವೆ ಉಪನೋಂದಣಾಧಿಕಾರಿಗಳ ಕಚೇರಿಗಳು!

● ಈ ಕಾಲದಲ್ಲಿ ಇಂತಹ ಸಮಸ್ಯೆಗಿಲ್ಲವೆ ಪರಿಹಾರ ● ಸರ್ಕಾರದ ಆದಾಯಕ್ಕೂ ಭಾರಿ ಪ್ರಮಾಣದಲ್ಲಿ ಕತ್ತರಿ

ಮೈಸೂರು, ಅ.22(ಎಸ್‌ಬಿಡಿ)– ಇ–ಖಾತಾ ಕಡ್ಡಾಯ, ತಿದ್ದುಪಡಿ ಕಾಯ್ದೆಯಲ್ಲಿನ ಗೊಂದಲ, ಸರ್ವರ್ ಸಮಸ್ಯೆ ಹೀಗೆ ಹಲವು ಕಾರಣಗಳಿಂದ ಆಸ್ತಿ ನೋಂದಣಿಗೆ ಬ್ರೇಕ್ ಬಿದ್ದಿರುವ ಪರಿಣಾಮ ಉಪನೋಂದಣಾಧಿಕಾರಿಗಳ ಕಚೇರಿಗಳು ಬಿಕೋ ಎನ್ನುತ್ತಿವೆ. ಇದರೊಂದಿಗೆ ಸರ್ಕಾರದ ಪ್ರಮುಖ ಆದಾಯ ಮೂಲಕ್ಕೂ ಭಾರೀ ಹೊಡೆತ ಬಿದ್ದಿದೆ.

ರಾಜ್ಯಾದ್ಯಂತ ಸ್ಥಿರಾಸ್ತಿ ದಸ್ತಾವೇಜು ನೋಂದಣಿ ಅಥವಾ ಆಸ್ತಿ ನೋಂದಣಿಗೆ ಅ.7ರಿಂದ ಸರ್ಕಾರ ಇ–ಖಾತಾ ಕಡ್ಡಾಯಗೊಳಿಸಿದೆ. ಆದರೆ ಸರ್ವರ್ ಸಮಸ್ಯೆ, ಕರಡು ಖಾತಾಗಳಲ್ಲಿನ ದೋಷ, ಅಗತ್ಯ ದಾಖಲೆಗಳ ಕೊರತೆ ಇನ್ನಿತರ ಕಾರಣದಿಂದ ಸಕಾಲಕ್ಕೆ ಇ–ಖಾತಾ ದೊರಕುತ್ತಿಲ್ಲ. ಕೆಲವು ಪ್ರಕರಣಗಳಲ್ಲಿ ತಿಂಗಳಾದರೂ ಈ ಪ್ರಕ್ರಿಯೆ ಪೂರ್ಣಗೊಳ್ಳುವುದಿಲ್ಲ. ಇ–ಖಾತಾ ಇಲ್ಲದೆ ಆಸ್ತಿ ನೋಂದಣಿ ಸಾಧ್ಯವಿಲ್ಲದಿರುವುದರಿಂದ ಸಾರ್ವಜನಿಕರು ಕಂಗಾಲಾಗಿದ್ದಾರೆ. ಆಸ್ತಿ ನೋಂದಣಿ, ಅಡಮಾನ ಸಾಲ ಪಡೆಯುವುದು ಸೇರಿದಂತೆ ಯಾವುದೇ ವಹಿವಾಟು ನಡೆಸಲಾಗದೆ ಅತಂತ್ರಗೊಂಡಿದ್ದಾರೆ. ವೈದ್ಯಕೀಯ ತುರ್ತು, ವಿವಾಹ ಇನ್ನಿತರ ಕಾರಣಗಳಿಗೆ ತಕ್ಷಣಕ್ಕೆ ಆಸ್ತಿ ಮಾರಾಟ ಅಥವಾ ಅಡಮಾನ ಸಾಲ ಪಡೆಯಬೇಕಾದ ಅನಿವಾರ್ಯತೆಯಲ್ಲಿರುವವರು ಪರಿತಪಿಸುವಂತಾಗಿದೆ.

ತಿದ್ದುಪಡಿ ಕಾಯ್ದೆ ಆತಂಕ: ಇ–ಖಾತಾ ಗೊಂದಲದ ನಡುವೆ ತಿದ್ದುಪಡಿ ಕಾಯ್ದೆಯಲ್ಲಿನ ತಿದ್ದುಪಡಿಯಿಂದ ಉಪನೋಂದಣಾಧಿಕಾರಿಗಳಲ್ಲಿ ಆತಂಕ ಸೃಷ್ಟಿಯಾಗಿರುವುದು ಆಸ್ತಿ ನೋಂದಣಿ ಮೇಲೂ ಪರಿಣಾಮ ಬೀರಿದೆ. ಕೇಂದ್ರದ ನೋಂದಣಿ ಕಾಯ್ದೆ–1908ಗೆ ತಿದ್ದುಪಡಿ ತರುವ ಕರ್ನಾಟಕ ನೋಂದಣಿ ತಿದ್ದುಪಡಿ ಕಾಯ್ದೆ–2023ಕ್ಕೆ ರಾಷ್ಟ್ರಪತಿಗಳು ಅ.8ರಂದು ಅಂಕಿತ ಹಾಕಿದ್ದು, ರಾಜ್ಯ ಸರ್ಕಾರ ಅ.19ರಂದು ಅಧಿಕೃತವಾಗಿ ರಾಜ್ಯಪತ್ರದಲ್ಲಿ ಪ್ರಕಟಿಸಿದೆ. ಈ ತಿದ್ದುಪಡಿ ಕಾಯ್ದೆಯಲ್ಲಿ ಉಪನೋಂದಣಾಧಿಕಾರಿಗಳ ಗುರಿಯಾಗಿಸಿರುವ ಕಠಿಣ ನಿಬಂಧನೆಗಳಿವೆ ಎಂದು ಅವರು ಕಂಗಾಲಾಗಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯದ ಕೆಲವು ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ಕಳೆದೆರಡು ದಿನಗಳಿಂದ ಆಸ್ತಿ ಸೇರಿದಂತೆ ಎಲ್ಲ ರೀತಿಯ ದಸ್ತಾವೇಜುಗಳ ನೋಂದಣಿಯನ್ನೂ ಸ್ಥಗಿತಗೊಳಿಸಲಾಗಿದೆ ಎಂದು ತಿಳಿದುಬಂದಿದೆ.



ಮಂಗಳವಾರ ಜನರಿಲ್ಲದೆ ಬಿಕೋ ಎನ್ನುತ್ತಿದ್ದ ಮೈಸೂರು ಉತ್ತರ ಉಪನೋಂದಣಾಧಿಕಾರಿ ಕಚೇರಿ ಆವರಣ.

> ನಾವು ಆಸ್ತಿ ನೋಂದಣಿ ಸ್ಥಗಿತಗೊಳಿಸಿಲ್ಲ. ಶುಲ್ಕ ಪಾವತಿ ನಂತರದ ಪ್ರಕ್ರಿಯೆಗೆ ಯಾವುದೇ ಸಮಸ್ಯೆಯಾಗಿಲ್ಲ. ಸೋಮವಾರವೂ ನಮ್ಮ ಕಚೇರಿಯಲ್ಲಿ ಸುಮಾರು 28 ನೋಂದಣಿಯಾಗಿವೆ. ಆದರೆ ಇ–ಖಾತಾ ಕಡ್ಡಾಯಗೊಳಿಸಿದ ಬಳಿಕ ಮೊದಲ ಹಂತದ ದಾಖಲೆ ಸಲ್ಲಿಕೆ ವಿಳಂಬವಾಗುತ್ತಿದೆ. ಡಾಕ್ಯುಮೆಂಟ್‌ಗಳ ಸಂಖ್ಯೆ ಗಣನೀಯವಾಗಿ ಇಳಿಕೆಯಾಗಿದೆ. ಕೆಲವು ತಾಂತ್ರಿಕ ಸಮಸ್ಯೆಗಳೂ ಇದ್ದು, ಸರಿಪಡಿಸುವ ಕ್ರಮ ನಡೆದಿದೆ.
> -ಸಂತೋಷ್, ಉಪನೋಂದಣಾಧಿಕಾರಿ, ಮೈಸೂರು ಉತ್ತರ

ಮೈಸೂರು ಕಚೇರಿಗಳೂ ಖಾಲಿ: ನಗರದಲ್ಲಿರುವ ಮೈಸೂರು ಉತ್ತರ, ದಕ್ಷಿಣ, ಪೂರ್ವ, ಪಶ್ಚಿಮ ಸೇರಿದಂತೆ ಜಿಲ್ಲೆಯಲ್ಲಿ 14 ಉಪನೋಂದಣಾಧಿಕಾರಿಗಳ ಕಚೇರಿಗಳಿವೆ. ಇ–ಖಾತಾ, ತಿದ್ದುಪಡಿ ಕಾಯ್ದೆ, ಸರ್ವರ್ ಸಮಸ್ಯೆಗಳ ಪರಿಣಾಮ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯ ಬಹುತೇಕ ಎಲ್ಲಾ ಕಚೇರಿಗಳಲ್ಲೂ ಆಸ್ತಿ ನೋಂದಣಿ ಗಣನೀಯವಾಗಿ ಕಡಿಮೆಯಾಗಿದೆ. ಸಾಮಾನ್ಯ ದಿನಗಳ ಅರ್ಧದಷ್ಟೂ ನೋಂದಣಿಯೂ ನಡೆಯುತ್ತಿಲ್ಲ. ಇ–ಖಾತಾ ಕಡ್ಡಾಯವಾದ ನಂತರ ದಸ್ತಾವೇಜುಗಳ ಸಂಖ್ಯೆ ಗಣನೀಯವಾಗಿ ಇಳಿಕೆಯಾಗಿದೆ. ಶುಲ್ಕ ಪಾವತಿ ಹಂತದಲ್ಲಿದ್ದ ಪ್ರಕರಣಗಳನ್ನು ಮಾತ್ರ ಪೂರ್ಣಗೊಳಿಸಲಾಗುತ್ತಿದೆ. ಪರಿಣಾಮ ಸದಾ ಜನರಿಂದ ಗಿಜಿಗುಡುತ್ತಿದ್ದ ಉಪನೋಂದಣಾಧಿ ಕಚೇರಿಗಳು ಬಿಕೋ ಎನ್ನುತ್ತಿವೆ.

ಮುಡಾ ಪ್ರಕರಣವೂ ಕಾರಣ?: ನಗರ ವ್ಯಾಪ್ತಿಯ ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ಮುಡಾ ಅನುಮೋದಿತ ಬಡಾವಣೆಗಳ ನಿವೇಶನಗಳ ನೋಂದಣಿ ಪ್ರಮುಖವಾಗಿತ್ತು. ಆದರೆ 50:50ರ ಅನುಪಾತದಲ್ಲಿ ನಿವೇಶನ ಹಂಚಿಕೆಯಲ್ಲಿ ಹಗರಣ ಸಂಬಂಧ ಕೇಸ್ ದಾಖಲಾಗಿ, ಲೋಕಾಯುಕ್ತ ಹಾಗೂ ಇಡಿ ತನಿಖೆ ಆರಂಭಿಸಿರುವ ಪರಿಣಾಮ ■ 5ನೇ ಪುಟಕ್ಕೆ

ದೇವರಸನಹಳ್ಳಿ ಗ್ರಾಪಂ ಉಪಾಧ್ಯಕ್ಷೆ ಪತಿ ಅನುಮಾನಾಸ್ಪದ ಸಾವು ಪ್ರಕರಣ ಭೇದಿಸಿದ ಪೊಲೀಸರು

ಅಧಿಕಾರ, ಅನುದಾನ ಲೂಟಿಗೆ ನಡೆದ ಸಂಚಿನ ಹತ್ಯೆ

● ಹಾಲಿ ಸದಸ್ಯ ಗೋವರ್ಧನ್ ಸೇರಿ ನಾಲ್ವರ ಬಂಧನ ● ಅ.6ರಂದು ನಂಜುಂಡಸ್ವಾಮಿ ಮಾರಣಾಂತಿಕವಾಗಿ ಗಾಯಗೊಂಡಿದ್ದ ಸ್ಥಿತಿಯಲ್ಲಿ ಪತ್ತೆಯಾಗಿದ್ದರು: ನಂತರ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದರು



ಬಂಧಿತ ಗೋವರ್ಧನ್

ನಂಜನಗೂಡು, ಅ.22– ತಾಲೂಕಿನ ದೇವರಸನಹಳ್ಳಿ ಗ್ರಾಪಂ ಉಪಾಧ್ಯಕ್ಷೆ ಪತಿ ಅನುಮಾನಾಸ್ಪದ ಸಾವಿನ ಪ್ರಕರಣ ಭೇದಿಸುವಲ್ಲಿ ನಂಜನಗೂಡು ಗ್ರಾಮಾಂತರ ಠಾಣೆ ಪೊಲೀಸರು ಯಶಸ್ವಿಯಾಗಿದ್ದು, ಬಿಜೆಪಿ ಮುಖಂಡ, ಗ್ರಾಪಂ ಸದಸ್ಯ ಗೋವರ್ಧನ್ ಸೇರಿದಂತೆ ನಾಲ್ವರನ್ನು ಬಂಧಿಸಿದ್ದಾರೆ.

ಬಿಜೆಪಿ ಗ್ರಾಮಾಂತರ ಮಂಡಲ ಯುವ ಮೋರ್ಚಾ ಅಧ್ಯಕ್ಷ ಹಾಗೂ ಹಾಲಿ ದೇವರಸನಹಳ್ಳಿ ಗ್ರಾಪಂ ಸದಸ್ಯ ಗೋವರ್ಧನ್ (36), ನಗರದ ನೀಲಕಂಠನಗರ ನಿವಾಸಿ ಜಾಹೀರ್ (25), ಹಳ್ಳದಕೇರಿ ನಿವಾಸಿ ಮಣಿಕಂಠ (24), ಕೆಎಚ್‌ಬಿ ಕಾಲೋನಿ ನಿವಾಸಿ ಮಹೇಂದ್ರ (25) ಬಂಧಿತರು.

ವಿವರ: ತಾಲೂಕಿನ ದೇವರಸನಹಳ್ಳಿ ಗ್ರಾಪಂ ಉಪಾಧ್ಯಕ್ಷೆ ಸೌಭಾಗ್ಯ ಅವರ ಪತಿ ಕೆಬ್ಬೇಪುರ ಗ್ರಾಮದ ನಂಜುಂಡಸ್ವಾಮಿ (47) ತಾಲೂಕಿನ ಹೊಸೂರು ಸಮೀಪ ಅ.6ರ ಭಾನುವಾರ ರಾತ್ರಿ ಮಾರಣಾಂತಿಕವಾಗಿ ಗಾಯಗೊಂಡ ಸ್ಥಿತಿಯಲ್ಲಿ ಗದ್ದೆ ಬದುವಿನಲ್ಲಿ ಬಿದ್ದಿದ್ದರು. ಸೋಮವಾರ ಬೆಳಗ್ಗೆ ವಾಯು ವಿಹಾರಕ್ಕೆ ತೆರಳಿದ್ದವರು ಗಾಯಾಳು ನಂಜುಂಡಸ್ವಾಮಿ ಅವರನ್ನು ನಗರದ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಅವರು ಸಾವನ್ನಪ್ಪಿದ್ದರು. ಈ ಸಂಬಂಧ ಗ್ರಾಪಂ ಉಪಾಧ್ಯಕ್ಷೆ ಸೌಭಾಗ್ಯ ಅವರು ನನ್ನ ಪತಿಯನ್ನು ರಾಜಕೀಯ ಕಾರಣಕ್ಕೆ ಕೊಲೆ ಮಾಡಲಾಗಿದೆ. ಈ ಸಂಬಂಧ ಸೂಕ್ತ ತನಿಖೆ ನಡೆಸುವಂತೆ ನೀಡಿದ ದೂರನ್ನು ಸ್ವೀಕರಿಸಿದ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಸುನೀಲ್ ಕುಮಾರ್ ನೇತೃತ್ವದ ತಂಡ ತನಿಖೆ ಕೈಗೊಂಡಿತ್ತು. ಕಳೆದ 15 ತಿಂಗಳ ಹಿಂದೆ ತನ್ನ ಸಂಬಂಧಿ ಸುಮತಿ ಅವರನ್ನು ದೇವರಸನಹಳ್ಳಿ ಗ್ರಾಪಂ ಅಧ್ಯಕ್ಷೆಯಾಗಿ ಮಾಡಿದ್ದ ಗೋವರ್ಧನ್, ನೆಪಮಾತ್ರಕ್ಕೆ ಅವರನ್ನು ಅಧ್ಯಕ್ಷೆ ಸ್ಥಾನದಲ್ಲಿ ಕೂರಿಸಿ, ಎಲ್ಲಾ ವ್ಯವಹಾರವನ್ನು ತಾನೇ ನೋಡಿಕೊಳ್ಳುತ್ತಿದ್ದ ಎನ್ನಲಾಗಿದೆ. ಈ ಹಿಂದೆ ನಡೆದ ಮಾತುಕತೆಯಂತೆ 15 ತಿಂಗಳ ಅಧಿಕಾರಾವಧಿ ನಂತರ ಹಾಲಿ ಉಪಾಧ್ಯಕ್ಷೆ ಸೌಭಾಗ್ಯ ಅವರಿಗೆ ಅಧಿಕಾರ ಬಿಟ್ಟು ಕೊಡಬೇಕಿತ್ತು. ಮಾತು ಕೊಟ್ಟಂತೆ ಅಧಿಕಾರ ಬಿಟ್ಟುಕೊಡುವಂತೆ ಗೋವರ್ಧನ್‌ನನ್ನು ನಂಜುಂಡಸ್ವಾಮಿ ಕೇಳಿಕೊಂಡಿದ್ದರು. ಇನ್ನು 3 ತಿಂಗಳಲ್ಲಿ ಗ್ರಾಪಂಗೆ 15ನೇ ■ 5ನೇ ಪುಟಕ್ಕೆ

ಆಂಧ್ರಪ್ರದೇಶ ರಾಜ್ಯಪಾಲರಿಂದ ಇಂದು ಜೆಎಸ್ಎಸ್ ಪಿಜಿ ಹಾಸ್ಟೆಲ್ ಕಟ್ಟಡ ಉದ್ಘಾಟನೆ



ಜೆಎಸ್ಎಸ್ ಪಿಜಿ ಹಾಸ್ಟೆಲ್ ಕಟ್ಟಡ



ಅಬ್ದುಲ್ ನಜೀರ್

ಮೈಸೂರು, ಅ. 22– ಮೈಸೂರಿನ ಜೆಎಸ್ಎಸ್ ಆಸ್ಪತ್ರೆ ಆವರಣದಲ್ಲಿ ಜೆಎಸ್ಎಸ್ ವೈದ್ಯಕೀಯ ಕಾಲೇಜಿನ ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ ನಿರ್ಮಿಸಿರುವ ವಿದ್ಯಾರ್ಥಿನಿಲಯ ಕಟ್ಟಡದ ಉದ್ಘಾಟನೆಯನ್ನು ನಾಳೆ (ಅ.23) ಮಧ್ಯಾಹ್ನ 3.15ಕ್ಕೆ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಆಂಧ್ರಪ್ರದೇಶದ ರಾಜ್ಯಪಾಲರು ಹಾಗೂ ಸುಪ್ರಿಂಕೋರ್ಟ್‌ನ ವಿಶ್ರಾಂತ ನ್ಯಾಯಮೂರ್ತಿಗಳಾದ ಎಸ್. ಅಬ್ದುಲ್ ನಜೀರ್ ಉದ್ಘಾಟಿಸಲಿದ್ದಾರೆ.

ಸಂಸದ ಯದುವೀರ್ ಒಡೆಯರ್, ಶಾಸಕ ಟಿ.ಎಸ್.ಶ್ರೀವತ್ಸ ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ.

ವಿದ್ಯಾರ್ಥಿನಿಲಯದ ಕಟ್ಟಡವು 3500 ಚದರ ಮೀಟರ್ ವಿಸ್ತೀರ್ಣವಿದೆ. 101 ಕೊಠಡಿಗಳಿರುತ್ತವೆ. 100 ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಬಹುದಾಗಿರುತ್ತದೆ. ಪುರುಷರು ಮತ್ತು ಮಹಿಳೆಯರಿಗೆ ಪ್ರತ್ಯೇಕ ವಿಭಾಗಗಳಿವೆ. ಎಲ್ಲಾ ರೀತಿಯ ಆಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.

ಕಟ್ಟಡದ ಉದ್ಘಾಟನೆ ನಂತರ ಆಸ್ಪತ್ರೆ ಆವರಣದ ಶ್ರೀ ರಾಜೇಂದ್ರ ಶತಮಾನೋತ್ಸವ ಸಭಾಂಗಣದಲ್ಲಿ ಸಭಾ ಕಾರ್ಯಕ್ರಮವಿರುತ್ತದೆ. ವಿವಿಧ ಸಂಘ ಸಂಸ್ಥೆಗಳವರು, ವಿದ್ಯಾರ್ಥಿಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಕೋರಿದೆ. ರಾಜ್ಯಪಾಲರು ಕಾರ್ಯಕ್ರಮಕ್ಕೂ ಮೊದಲು ಮೈಸೂರು ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿರುವ ಶ್ರೀ ಸುತ್ತೂರು ಮಠಕ್ಕೆ 2.45ಕ್ಕೆ ಭೇಟಿ ನೀಡಲಿದ್ದಾರೆ.

ಮೈಸೂರು ವಿವಿ ಪ್ರಾಚ್ಯವಿದ್ಯಾ ಸಂಶೋಧನಾಲಯದ 133ನೇ ಸಂಸ್ಥಾಪನಾ ದಿನಾಚರಣೆ

'ಸತ್ಯಾ–ಭದ್ರ ಕೃತಿ ಸಮೀಕ್ಷಾ' ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ 'ಅಲಂಕಾರಸುಧಾನಿಧಿ' ಗ್ರಂಥ, ನೂತನ ವೆಬ್‌ಸೈಟ್ ಲೋಕಾರ್ಪಣೆ

ಮೈಸೂರು, ಅ.22(ಜಿಎ)–ಮೈಸೂರು ವಿಶ್ವವಿದ್ಯಾನಿಲಯದ ಪ್ರಾಚ್ಯವಿದ್ಯಾ ಸಂಶೋಧನಾಲಯದ 133ನೇ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ವಿಜ್ಞಾನ ಭವನದಲ್ಲಿ 'ಸತ್ಯಾ-ಭದ್ರ ಕೃತಿ ಸಮೀಕ್ಷಾ' ರಾಷ್ಟ್ರೀಯ ವಿಚಾರ ಸಂಕಿರಣ ಮತ್ತು 'ಅಲಂಕಾರ ಸುಧಾನಿಧಿ' ಗ್ರಂಥ ಹಾಗೂ ಸಂಶೋಧನಾಲಯದ ನೂತನ ವೆಬ್‌ಸೈಟ್ ಲೋಕಾರ್ಪಣೆಗೊಳಿಸಲಾಯಿತು.


ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್ ಮಾತನಾಡಿ, 1891ರಲ್ಲಿ ಹತ್ತನೇ ಚಾಮರಾಜ ಒಡೆಯರ್ ಅವರು ಸ್ಥಾಪಿಸಿದ ಮೈಸೂರು ವಿಶ್ವವಿದ್ಯಾನಿಲಯಕ್ಕಿಂತಲೂ ಪುರಾತನ ಸಂಸ್ಥೆಯಾದ ಪ್ರಾಚ್ಯ ವಿದ್ಯಾ ಸಂಶೋಧನಾಲಯದ 133ನೇ ಸಂಸ್ಥಾಪನಾ ದಿನಾಚರಣೆಗೆ ನಡೆಸುತ್ತಿರುವುದು ಬಹಳ ಸಂತಸವಾಗಿದೆ ಎಂದರು.

ಕಾರ್ಯಕ್ರಮದ ದಿವ್ಯಸಾನ್ನಿಧ್ಯವನ್ನು ವಹಿಸಿರುವ ರಾಮಾನುಜಾಚಾರ್ಯರ ಪಂಥವನ್ನು ಅನುಸರಿಸುವ ಯದುಗಿರಿ ಯತಿರಾಜ ನಾರಾಯಣ ರಾಮಾನುಜ ಜೀಯರ್ ಸ್ವಾಮೀಜಿ ಅವರು ಹತ್ತು ಹಲವು ಸಾಮಾಜಿಕ ಹಾಗೂ ಧಾರ್ಮಿಕ ಕಾರ್ಯಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡವರಾಗಿದ್ದು, ವಿಶೇಷವಾಗಿ ಅನೇಕ ಹಳ್ಳಿಗಳನ್ನು ದತ್ತು ತೆಗೆದುಕೊಂಡು ಅವುಗಳನ್ನು ಉದ್ಧಾರ ಮಾಡುತ್ತಿದ್ದಾರೆ. ಜನಸಾಮಾನ್ಯರ ಅನುಕೂಲಕ್ಕಾಗಿ ಅನೇಕ ಬ್ಲಡ್ ಬ್ಯಾಂಕ್‌ಗಳನ್ನು ಮಾಡಿದ್ದಾರೆ. ಅದೇ ರೀತಿ ಇಸ್ಕಾನ್ ಸಂಸ್ಥೆಯಲ್ಲಿ ಬಹಳಷ್ಟು ಧಾರ್ಮಿಕ ಪುನಶ್ಚೇತನ ಶಿಬಿರಗಳನ್ನು ಮಾಡುವ ಮೂಲಕ ಧಾರ್ಮಿಕ ಸೇವೆ ಹಾಗೂ ಸಾಮಾಜಿಕ ಸೇವೆ ಎರಡರಲ್ಲಿಯೂ ನಮಗೆಲ್ಲ ಮಾರ್ಗದರ್ಶಕರಾಗಿ ಮುಂಚೂಣಿಯಲ್ಲಿದ್ದಾರೆ ಎಂದರು.

ಸಂಶೋಧನಾಲಯದ ಅಧಿಕೃತ ಜಾಲತಾಣ ಲೋಕಾರ್ಪಣೆಗೊಳ್ಳುತ್ತಿರುವುದು ಅತ್ಯಂತ ಸಂತಸದ ಸಂಗತಿ. ಜಿಜ್ಞಾಸುಗಳು ಪ್ರಪಂಚದ ಯಾವುದೇ ಭಾಗದಲ್ಲಿದ್ದರೂ ಅಲ್ಲಿಂದಲೇ ಅಂತರ್ಜಾಲದ ಮಾಧ್ಯಮದಿಂದ ಪ್ರಾಚ್ಯವಿದ್ಯಾ ಸಂಶೋಧನಾಲಯದಲ್ಲಿರುವ ಯಾವುದೇ ಪುಸ್ತಕವನ್ನು ನೋಡಲು ಸಾಧ್ಯವಾಗುವಂತೆ ವೆಬ್‌ಸೈಟ್ ಅನ್ನು ಡಿಸೈನ್ ಮಾಡಿರುವುದು ಪ್ರಾಚ್ಯ ವಿದ್ಯಾ ಸಂಶೋಧನಾಲಯಕ್ಕೆ ಹೆಮ್ಮೆತರುವಂತಹದ್ದಾಗಿದ್ದು, ಈ ವೆಬ್‌ಸೈಟ್‌ನಿಂದ ಪ್ರಪಂಚದ ಎಲ್ಲ ಭಾಗದ ಜಿಜ್ಞಾಸುಗಳು ಜ್ಞಾನದ ಲಾಭವನ್ನು ಪಡೆದಲ್ಲಿ ಪ್ರಾಚ್ಯ ವಿದ್ಯಾ ಸಂಶೋಧನಾಲಯದ ಶ್ರಮ ಸಾರ್ಥಕವಾಗುವುದು ಎಂದು ತಿಳಿಸಿದರು.

ವಿಜಯನಗರ ಸಾಮ್ರಾಜ್ಯದ ದೊರೆಗಳಾದ ಹಕ್ಕಬುಕ್ಕ ಹಾಗೂ ಹರಿಹರರ ಕಾಲದಲ್ಲಿ ಪ್ರವರ್ಧಮಾನಕ್ಕೆ ಬಂದಂತಹ ಶ್ರೇಷ್ಠ ಕೃತಿಕಾರರು ಸಾಯಣಾಚಾರ್ಯರು. ಅಲಂಕಾರಶಾಸ್ತ್ರಕ್ಕೆ ಸಂಬಂಧಪಟ್ಟಂತಹ ಅವರ 'ಅಲಂಕಾರಸುಧಾ ನಿಧಿ' ಅನ್ನುವ ಗ್ರಂಥ ಪ್ರಾಚ್ಯವಿದ್ಯಾ ಸಂಶೋಧನಾಲಯದ ಸಂಗ್ರಹದಲ್ಲಿದ್ದು ಸಂಶೋಧನಾಲಯದ ನಿರ್ದೇಶಕ ಮಧುಸೂಧನಾಚಾರ್ಯರ ಕೋರಿಕೆಯ ಮೇರೆಗೆ ವಿದ್ವಾನ್ ಗಣೇಶ್ ಹಾಗೂ ಅವರ ಶಿಷ್ಯ ಶಶಿಕಿರಣ್‌ರವರು ಬಹಳ ಅಚ್ಚುಕಟ್ಟಾಗಿ ಈ ಗ್ರಂಥವನ್ನು ಮಾಡಿಕೊಟ್ಟಿದ್ದಾರೆ. ಅಷ್ಟೇ ಅಲ್ಲದೆ ಸಂಪೂರ್ಣ ಮುದ್ರಣದ ವೆಚ್ಚವನ್ನು ತಾವೇ ಸಾಯಣಾಚಾರ್ಯರ ಮೇಲಿನ ಗೌರವದಿಂದ ಭರಿಸಿದ್ದು ಬಹಳ ಆಶ್ಚರ್ಯ ಹಾಗೂ ಸಂತಸ ತಂದಿದೆ. ಅವರಿಂದ ಇನ್ನೂ ಹತ್ತು ಹಲವು ಕೃತಿಗಳು ಲೋಕಾರ್ಪಣೆಗೊಳ್ಳಲಿ ಎಂದು ಆಶಿಸುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಯದುಗಿರಿ ಯತಿರಾಜ ನಾರಾಯಣ ರಾಮಾನುಜ ಜೀಯರ್ ಸ್ವಾಮೀಜಿ ಅವರು ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ಶತಾವಧಾನಿ ಡಾ.ರಾ.ಗಣೇಶ್, ವಿವಿ ಕುಲಸಚಿವರಾದ ಶೈಲಜಾ, ಹಣಕಾಸು ಅಧಿಕಾರಿ ರೇಖಾ, ಸಂಶೋಧನಾಲಯ ನಿರ್ದೇಶಕ ಡಾ.ಡಿ.ಪಿ.ಮಧುಸೂಧನಾಚಾರ್ಯ, ಡಾ.ಬಿ.ಎನ್.ಶಶಿಕಿರಣ್ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರು ವಿಶ್ವವಿದ್ಯಾನಿಲಯದ ಪ್ರಾಚ್ಯವಿದ್ಯಾ ಸಂಶೋಧನಾಲಯದ 133ನೇ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ವಿಜ್ಞಾನ ಭವನದಲ್ಲಿ 'ಅಲಂಕಾರಸುಧಾನಿಧಿ' ಗ್ರಂಥವನ್ನು ಮಂಗಳವಾರ ಲೋಕಾರ್ಪಣೆಗೊಳಿಸಲಾಯಿತು.

ಪ್ರತಿಭಾನ್ವಿತರಿಗೆ ಸನ್ಮಾನ...



ಮೈಸೂರು ಟಿ.ಕೆ.ಲೇಔಟ್‌ನ ಮಿತ್ರ ಹಿಂದಿ ವಿದ್ಯಾಲಯದ ವಿದ್ಯಾರ್ಥಿಗಳಾದ ಗಾನವ್, ಶಶಾಂಕ್ ಅವರು ಇತ್ತೀಚೆಗೆ ನಡೆದ ಪ್ರವೀಣ್ ಉತ್ತರಾರ್ಧ ಪರೀಕ್ಷೆಯಲ್ಲಿ ಉತ್ತಮ ಅಂಕಗಳೊಂದಿಗೆ ತೇರ್ಗಡೆಯಾದರು. ಇವರಿಗೆ ಮಾರ್ಗದರ್ಶನ ನೀಡಿದ ವಿದ್ಯಾಲಯದ ಹಿರಿಯ ವಿದ್ಯಾರ್ಥಿ ಅನನ್ಯ ಅವರನ್ನು ಸನ್ಮಾನಿಸಲಾಯಿತು. ಚಿತ್ರದಲ್ಲಿ ಶ್ರೀಮತಿ ಮಂಜುಳಾ ಯಶವಂತ್, ಯಶವಂತ್, ಶ್ರೀಮತಿ ಅನ್ನಪೂರ್ಣೇಶ್ವರಿ, ವಿದ್ಯಾಲಯದ ರಘುವೀರ್ ಮತ್ತಿತರರು ಉಪಸ್ಥಿತರಿದ್ದರು.

ಜೆಡಿಎಸ್, ಬಿಜೆಪಿ ವಿರುದ್ಧ ದಲಿತ ಸಂಘರ್ಷ ಸಮಿತಿ ಪ್ರತಿಭಟನೆ

ಕಾಂಗ್ರೆಸ್ ಸರ್ಕಾರ ಅಸ್ಥಿರಗೊಳಿಸಲು ಯತ್ನ ಎಂದು ಆಕ್ರೋಶ

ಮೈಸೂರು, ಅ.22(ಜಿಎ)–ಜೆಡಿಎಸ್ ಹಾಗೂ ಬಿಜೆಪಿ ಪಕ್ಷಗಳು ಕಾಂಗ್ರೆಸ್ ಪಕ್ಷದ ವಿರುದ್ಧ ನಡೆಸುತ್ತಿರುವ ಪಿತೂರಿ ಖಂಡಿಸಿ ದಲಿತ ಸಂಘರ್ಷ ಸಮಿತಿ (ಸಂಯೋಜಕ) ಸದಸ್ಯರು ಮೈಸೂರು ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಮಂಗಳವಾರ ಪ್ರತಿಭಟನೆ ನಡೆಸಿದರು.

ರಾಜ್ಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷವು ನಾಗರಿಕರ ಸಮಸ್ಯೆಗಳನ್ನು ಮರೆತು, ಕಾಂಗ್ರೆಸ್ ವಿರುದ್ಧ ಸಂವಿಧಾನ ವಿರೋಧಿ ಚಟುವಟಿಕೆ ನಡೆಸುತ್ತಿದೆ. ಜನಪ್ರತಿನಿಧಿಗಳು ಪ್ರಜೆಗಳ ಸಮಗ್ರ ಅಭಿವೃದ್ಧಿ, ಅವರ ಜೀವನ ಕ್ರಮ ಹಾಗೂ ಹಿತಾಸಕ್ತಿ ಕಾಪಾಡಲು ಮುಂದಾಗಬೇಕು. ಆದರೆ ಈಚೆಗೆ ರಾಜಕೀಯ ಪಕ್ಷಗಳು ತಾರತಮ್ಯ, ಅಸಮಾನತೆ ಹೋಗಲಾಡಿಸುವ ಕೆಲಸ ಮಾಡುತ್ತಿಲ್ಲ ಎಂದು ದೂರಿದರು.

ಆರ್‌ಎಸ್‌ಎಸ್ ಮತ್ತು ಸಂಘ ಪರಿವಾರದ ಸಂಘಟನೆಗಳು ಚುನಾವಣೆಯನ್ನು ಕೇಂದ್ರವಾಗಿರಿಸಿ ಹಿಂದುತ್ವ, ಅಖಂಡ ಭಾರತ ಮುಂತಾದ ಭಾವನಾತ್ಮಕ ವಿಷಯ ಪ್ರಚಾರ ಮಾಡುತ್ತಾ ಮನುಧರ್ಮ ಶಾಸ್ತ್ರವನ್ನು ಮರುಸ್ಥಾಪಿಸಲು ಹೊರಟಿದ್ದಾರೆ. ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸುವ ಸಂಚು ನಡೆಯುತ್ತಿರುವುದು ಖಂಡನೀಯ' ಎಂದರು. ಸಂವಿಧಾನ ವಿರೋಧಿ ಚಟುವಟಿಕೆಯಲ್ಲಿ ತೊಡಗಿರುವ ಬಿಜೆಪಿ ಮತ್ತು ಜೆಡಿಎಸ್ ಪಕ್ಷವನ್ನು ಕಾನೂನುಬದ್ಧವಾಗಿ ನಿಯಂತ್ರಿಸಲು ರಾಷ್ಟ್ರಪತಿ ಮಾರ್ಗಸೂಚಿ ರಚಿಸಬೇಕು. ಅಂಬೇಡ್ಕರ್ ಸಿದ್ಧಾಂತ ಅಪ್ರಸ್ತುತಗೊಳಿಸಲು ಹೊರಟಿರುವ ಕೋಮುವಾದಿಗಳ ಹುನ್ನಾರ ತಡೆಯಬೇಕು' ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಸಂಘಟನೆಯ ರಾಜ್ಯ ಸಂಸ್ಥಾಪಕ ಸಂಯೋಜಕ ವಿ.ನಾಗರಾಜ, ಎಚ್.ಎನ್.ಅಣ್ಣಯ್ಯ, ಕಾರ್ಯ ಬಸವಣ್ಣ, ಸುನೀತಾ, ಪ್ರಕಾಶ್, ಕೆ.ಗೋವಿಂದು ಹುನ್ನಗಳ್ಳಿ ಪಾಲ್ಗೊಂಡಿದ್ದರು.



ದಲಿತ ಸಂಘರ್ಷ ಸಮಿತಿ (ಸಂಯೋಜಕ) ಸದಸ್ಯರು ಮೈಸೂರು ಡಿಸಿ ಕಚೇರಿ ಮುಂಭಾಗ ಮಂಗಳವಾರ ಪ್ರತಿಭಟನೆ ನಡೆಸಿದರು.

ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ಓರಿಯಂಟೇಷನ್ ಕಾರ್ಯಕ್ರಮ



ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ಓರಿಯಂಟೇಷನ್ ಕಾರ್ಯಕ್ರಮ ನಡೆಯಿತು.

ಮೈಸೂರು,ಅ.22–ಮೈಸೂರಿನ ಕೃಷಿಕ್ ಸರ್ವೋದಯ ಫೌಂಡೇಷನ್ ವತಿಯಿಂದ ಸ್ಪರ್ಧಾತ್ಮಕ ಪರೀಕ್ಷೆಗಳ ಒಂದು ದಿನದ ಉಚಿತ ಓರಿಯಂಟೇಷನ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ವಿಶ್ರಾಂತ ಉಪ ಕುಲಪತಿ ಡಾ.ಎನ್.ಎಸ್.ರಾಮೇಗೌಡ ಉದ್ಘಾಟಿಸಿ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಮುಖ್ಯವಾಗಿ ಕೆಎಎಸ್ ಪರೀಕ್ಷೆಗಳಲ್ಲಿ ಗೆಲ್ಲುವ ಛಲ ಇರಬೇಕು ಎಂದು ಅಭ್ಯರ್ಥಿಗಳನ್ನು ಹುರಿದುಂಬಿಸಿದರು.

ನಿವೃತ್ತ ಡೆಪ್ಯುಟಿ ಕಮೀಷನರ್ ಮತ್ತು ಗುಲ್ಬರ್ಗ ವಿವಿ ನಿವೃತ್ತ ಉಪಕುಲಪತಿ ಡಾ.ವಿ.ಬೋರೇಗೌಡ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳು ಸಂಪೂರ್ಣವಾಗಿ ತೊಡಗಿಸಿಕೊಳ್ಳಬೇಕು ಎಂದರು. ಮೈಸೂರು ಶಾಖೆ ಉಪಾಧ್ಯಕ್ಷ ಬಿ.ಕೆ.ಶಿವಣ್ಣ, ಟ್ರಸ್ಟಿಗಳಾದ ಕೆ.ಎಂ.ಚಂದ್ರೇಗೌಡ, ಕಾರ್ಯದರ್ಶಿ ಹೆಚ್.ಕಿಶೋರ್ ಚಂದ್ರ ಖಜಾಂಚಿ ಎಸ್.ವಿ.ಗೌಡಪ್ಪ, ಜಂಟಿ ಕಾರ್ಯದರ್ಶಿ ವೈ.ಕೆ.ಕೆಂಚೇಗೌಡ ಮತ್ತಿತರರು ಉಪಸ್ಥಿತರಿದ್ದರು.

ಹೆಚ್.ಎಸ್.ವೇದಾವತಿಗೆ ಪಿಹೆಚ್.ಡಿ



ಮೈಸೂರು,ಅ.22–ಡಾ.ಎನ್.ಕುಮಾರಸ್ವಾಮಿ ಅವರ ಮಾರ್ಗದರ್ಶನದಲ್ಲಿ ಮೈಸೂರಿನ ಶ್ರೀ ಜಯಚಾಮರಾಜೇಂದ್ರ ಕಾಲೇಜ್ ಆಫ್ ಇಂಜಿನಿಯರಿಂಗ್‌ನ ರಸಾಯನಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕಿ ವೇದಾವತಿ ಹೆಚ್.ಎಸ್. ಸಂಶೋಧನೆ ನಡೆಸಿ ಸಾದರಪಡಿಸಿದ 'ಡಿಸೈನ್ ಆಫ್ ನ್ಯಾನೋ ಮೆಟೀರಿಯಲ್ಸ್ ಆಂಡ್ ಪಾಲಿಮರ್ ನ್ಯಾನೊ ಕಾಂಪೋಸಿಟ್ಸ್ ಫಾರ್ ಸೆಲೆಕ್ಟೆಡ್ ಅಪ್ಲಿಕೇಶನ್ಸ್' ಮಹಾಪ್ರಬಂಧವನ್ನು ಬೆಳಗಾವಿಯ ವಿಶ್ವೇಶ್ವರ ಟೆಕ್ನಾಲಜಿ ಯುನಿವರ್ಸಿಟಿ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.

ಅ.26ರಿಂದ ಭಾರತ ಕಮ್ಯುನಿಸ್ಟ್ ಪಕ್ಷದ 24ನೇ ಜಿಲ್ಲಾ ಸಮ್ಮೇಳನ

ಮೈಸೂರು, ಅ.22(ಜಿಎ)–ಭಾರತ ಕಮ್ಯುನಿಸ್ಟ್ ಪಕ್ಷದ(ಮಾರ್ಕ್ಸ್‌ವಾದಿ) 24ನೇ ಜಿಲ್ಲಾ ಸಮ್ಮೇಳನವು ಅ.26, 27ರಂದು ನಗರದ ಸುಬ್ಬರಾಯನಕೆರೆ ಮೈದಾನದ ಪಂಡಿತ್ ನಾರಾಯಣಾಚಾರ್ಯ ಕಲ್ಯಾಣ ಮಂಟಪದಲ್ಲಿ ನಡೆಯಲಿದೆ ಎಂದು ಪಕ್ಷದ ಜಿಲ್ಲಾ ಪದಾಧಿಕಾರಿ ಲ.ಜಗನ್ನಾಥ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅ.26ರಂದು ಬೆಳಿಗ್ಗೆ 10.30ಕ್ಕೆ ರೈತ– ಕಾರ್ಮಿಕರ ಬೃಹತ್ ಮೆರವಣಿಗೆ ಗನ್‌ಹೌಸ್ ಬಳಿಯಿಂದ ಹೊರಟು ಸ್ವಾತಂತ್ರ್ಯ ಹೋರಾಟಗಾರರ ಉದ್ಯಾನವನ ತಲುಪಲಿದೆ. ಅಲ್ಲಿ 11.30ಕ್ಕೆ ಬಹಿರಂಗ ಸಭೆ ನಡೆಯಲಿದೆ. ಕೇರಳ ಸಂಸದ ವಿ.ಶಿವದಾಸನ್ ಪ್ರಧಾನ ಭಾಷಣ ಮಾಡುವರು. ಜಿಲ್ಲಾ ಕಾರ್ಯದರ್ಶಿ ಜಗದೀಶ್ ಸೂರ್ಯ ಅಧ್ಯಕ್ಷತೆ ವಹಿಸಲಿದ್ದು, ರಾಜ್ಯ ಕಾರ್ಯದರ್ಶಿ ಯು.ಬಸವರಾಜ್, ಎಚ್.ಎಸ್.ಸುನಂದಾ ಅತಿಥಿಗಳಾಗಿ ಭಾಗವಹಿಸುವರು' ಎಂದು ತಿಳಿಸಿದರು.

ಕಲ್ಯಾಣ ಮಂಟಪದಲ್ಲಿ ನಡೆಯುವ ಪ್ರತಿನಿಧಿ ಸಮ್ಮೇಳನದಲ್ಲಿ ಸುಮಾರು 200 ಮಂದಿ ಪಾಲ್ಗೊಳ್ಳಲಿದ್ದಾರೆ. ಕೇಂದ್ರ, ರಾಜ್ಯ ಸರ್ಕಾರಗಳ ನೀತಿಗಳು, ಜಿಲ್ಲೆಯ ರೈತರು, ಕಾರ್ಮಿಕರನ್ನು ಬಾಧಿಸುತ್ತಿರುವ ಸಮಸ್ಯೆಗಳು, ಜನಸಾಮಾನ್ಯರ ಅಗತ್ಯಗಳ ಕುರಿತು ಚರ್ಚಿಸಲಾಗುವುದು. ಮುಂದಿನ ಕಾರ್ಯಕ್ರಮ, ಚಟುವಟಿಕೆಗಳನ್ನು ರೂಪಿಸುವ ಪ್ರಮುಖ ನಿರ್ಣಯ ಕೈಗೊಳ್ಳಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಜಿ.ಜಯರಾವ್, ಮೆಹಬೂಬ್, ಸುಬ್ರಹ್ಮಣ್ಯ, ಕೆ.ಬಸವರಾಜು ಉಪಸ್ಥಿತರಿದ್ದರು.

ಮೂತ್ರಪಿಂಡ ಕ್ಯಾನ್ಸರ್‌ಗೆ ಯಶಸ್ವಿ ಶಸ್ತ್ರಚಿಕಿತ್ಸೆ

ಮೈಸೂರು, ಅ.22(ಜಿಎ)–ಬಲ ಮೂತ್ರಪಿಂಡದ ಕ್ಯಾನ್ಸರ್‌ನಿಂದ ಬಳಲುತ್ತಿದ್ದ ಮಂಡ್ಯ ಮೂಲದ 65 ವರ್ಷದ ರೋಗಿಗೆ ಕಾವೇರಿ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಯಶಸ್ವಿ ಶಸ್ತ್ರಚಿಕಿತ್ಸೆ ನಡೆಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಆಸ್ಪತ್ರೆ ಅಧ್ಯಕ್ಷ ಡಾ.ಚಂದ್ರಶೇಖರ್ ಈ ವಿಷಯ ತಿಳಿಸಿ, ರೋಗಿಯು ಸುಮಾರು ಆರು ತಿಂಗಳಿನಿಂದ ಹೊಟ್ಟೆನೋವು, ತೂಕ ಇಳಿಯುವಿಕೆ, ಹಸಿವಿನ ಕೊರತೆ, ದೈನಂದಿನ ಕೆಲಸ ಕಾರ್ಯ ಮಾಡಲು ಸಮಸ್ಯೆ ಎದುರಿಸುತ್ತಿದ್ದರು. ತಪಾಸಣೆ ನಡೆಸಿದಾಗ ಹೊಟ್ಟೆ ಬಲಭಾಗದಲ್ಲಿ ಗಂಟು, ಬಲಗಾಲಿನಲ್ಲಿ ಉಬ್ಬುವಿಕೆ ಕಂಡುಬಂತು. ಬಲ ಮೂತ್ರಪಿಂಡದಲ್ಲಿ ಕ್ಯಾನ್ಸರ್ ಕೋಶಗಳು ಇರುವುದು ಪತ್ತೆಯಾಯಿತು. 3ನೇ ಹಂತದಲ್ಲಿದ್ದ ಕ್ಯಾನ್ಸರ್ ಇತರೆಡೆಗೆ ಹರಡಿರಲಿಲ್ಲ. ಬಲ ಮೂತ್ರಪಿಂಡವನ್ನು ಸಂಪೂರ್ಣವಾಗಿ ತೆಗೆದುಹಾಕಿದ್ದು, ರೋಗಿ ಚೇತರಿಸಿಕೊಂಡಿದ್ದಾರೆ' ಎಂದರು. ಸುದ್ದಿಗೋಷ್ಠಿಯಲ್ಲಿ ಡಾ.ಮಧುಪ್ರಕಾಶ್, ಡಾ.ಕೆ.ಉಮೇಶ್ ಇದ್ದರು.

ಮಹಾಜನ ಪ್ರೌಢಶಾಲೆಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ




ಮಹಾಜನ ಪ್ರೌಢಶಾಲೆಯಲ್ಲಿ ವಾಲ್ಮೀಕಿ ಜಯಂತಿ ಆಚರಿಸಲಾಯಿತು. ಈ ವೇಳೆ ಶಾಲೆ ಮುಖ್ಯೋಪಾಧ್ಯಾಯಿನಿ ಸುಜಾ, ಅಧ್ಯಾಪಕ ಕಾರ್ಯದರ್ಶಿ ಬೀರೇಗೌಡ, ಸಹ ಶಿಕ್ಷಕರಾದ ಯೋಗಾನರಸಿಂಹ, ಕು. ಇಂದ್ರಾಂಜಲಿ, ರಮೇಶ್ ಮತ್ತಿತರರಿದ್ದರು.

ಮಾಂಟೆಸರಿ ನರ್ಸರಿ ನೇರ ಪರೀಕ್ಷೆಗೆ ಅರ್ಜಿ

ಮೈಸೂರು, ಅ.22– ಭಾರತ ಸರ್ಕಾರ ಹಾಗೂ ನ್ಯಾಷನಲ್ ಡಿಜಿಟಲ್ ಲಿಟ್ರೆಸಿ ಮಿಷನ್‌ನ ಸಹಭಾಗಿತ್ವದಲ್ಲಿ ರಾಷ್ಟ್ರೀಯ ಕಂಪ್ಯೂಟರ್ ಸಾಕ್ಷರತಾ ಸಮಿತಿಯು 2024–25ನೇ ಸಾಲಿನ ಮಾಂಟೆಸರಿ ಹಾಗೂ ನರ್ಸರಿ ಪ್ರಶಿಕ್ಷಕರ ನೇರ ಪರೀಕ್ಷೆಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಪಿಯುಸಿ, ಡಿಪ್ಲೊಮಾ ನಂತರದ ಯಾವುದೇ ವಿದ್ಯಾರ್ಹತೆ ಹೊಂದಿರುವ 18ರಿಂದ 50ರ ವಯೋಮಾನದ ಎಲ್ಲಾ ವರ್ಗದ ಆಸಕ್ತರು ಇದರ ಫಲಾನುಭವಿಗಳಾಗಿರುತ್ತಾರೆ. ಮಾಂಟೆಸರಿ ಶಿಕ್ಷಣ ವ್ಯವಸ್ಥೆ, ಮಾದರಿ ಹಾಗೂ ಪಠ್ಯಕ್ರಮ, ಮಕ್ಕಳ ಬೆಳವಣಿಗೆ, ಆರೋಗ್ಯ ಮತ್ತು ಪೌಷ್ಟಿಕತೆ, ಬೆಳವಣಿಗೆಯ ಹಂತಗಳು ಮತ್ತು ಕಂಪ್ಯೂಟರ್ ಫಂಡಮೆಂಟಲ್ಸ್ ಕುರಿತ ಪ್ರಶ್ನೆಪತ್ರಿಕೆಗಳಿರುತ್ತವೆ. ನೇರ ಪರೀಕ್ಷೆಗಾಗಿ ನೋಂದಾಯಿಸಿಕೊಳ್ಳಬಯಸುವವರು ಹಾಗೂ ತರಬೇತಿಯ ಅವಶ್ಯಕತೆ ಇರುವವರು ಅರ್ಜಿಗಳಿಗಾಗಿ ಇದೇ ಅ.31ರೊಳಗೆ 8310306882, 9964790442 ಸಂಪರ್ಕಿಸಿ.

ಮೈಸೂರು ಹಾಗೂ ಸುತ್ತಮುತ್ತ ಇಂದು...




ಇಂದಿನ ಪಂಚಾಂಗ

23.10.2024 ಬುಧವಾರ, ಮಳೆ ನಕ್ಷತ್ರ: ಚಿತ್ತ, 10.10.2024ರಿಂದ 23.10.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಶರದ್ ಋತು, ಅಶ್ವಯುಜ ಮಾಸ, ಕೃಷ್ಣ ಪಕ್ಷ, ತಿಥಿ: ಷಷ್ಠಿ, ನಕ್ಷತ್ರ: ಆರ್ದ್ರಾ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

- **ಜೆಎಸ್ಎಸ್ ಆಯುರ್ವೇದ ಆಸ್ಪತ್ರೆ :** ಮೂತ್ರಪಿಂಡ (ಕಿಡ್ನಿ) ಕಾಯಿಲೆಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9ರಿಂದ ಸಂಜೆ 4.30ರವರೆಗೆ.
- **ಜೆಎಸ್ಎಸ್ಎಸ್ ಸಿಂಹ ಸುಬ್ಬಲಕ್ಷ್ಮಿ ಪ್ರಥಮ ದರ್ಜೆ ಕಾಲೇಜು, ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗ:** ಮೈಸೂರು ನಗರ ಅಂತರ ಕಾಲೇಜು ಮಹಿಳಾ ಥ್ರೋಬಾಲ್ ಮತ್ತು ಖೋ ಖೋ ಪಂದ್ಯಾವಳಿ, ಮುಖ್ಯ ಅತಿಥಿಗಳು : ಪ್ರೊಫೆಷನಲ್ ಸೈಕ್ಲಿಸ್ಟ್ ಲೋಕೇಶ್ ನರಸಿಂಹಾಚಾರ್, ಟೆರೇಷಿಯನ್ ಕಾಲೇಜು ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಆಂತೋಣಿ ಮೋಸೆಸ್, ಅಧ್ಯಕ್ಷತೆ : ಜೆಎಸ್ಎಸ್ಎಸ್ ಕಾರ್ಯದರ್ಶಿ ಶ್ರೀಮತಿ ವನಜಾ ಬಿ. ಪಂಡಿತ್, ಉಪಸ್ಥಿತರು : ಜೆಎಸ್ಎಸ್ಎಸ್ ಪ್ರಿನ್ಸಿಪಾಲ್ ಡಾ. ಟಿ.ಎಸ್.ರಾಕೇಶ್, ಆಡಳಿತ ಮಂಡಳಿ ಸದಸ್ಯರಾದ ಶ್ರೀಮತಿ ಅನುಪಮಾ ಬಿ.ಪಂಡಿತ್, ಸಿಇಓ ಆರ್.ಕೆ.ಭರತ್, ಸ್ಥಳ: ಜೆಎಸ್ಎಸ್ಎಸ್ ಸಭಾಂಗಣ, ಬೆಳಗ್ಗೆ 9.30ಕ್ಕೆ.
- **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್ ಮುಖ್ಯ ರಸ್ತೆ, ಬೆಳಗ್ಗೆ 10 ರಿಂದ.
- **ಕಾವೇರಿ ಆಯುರ್ವೇದ ಆಸ್ಪತ್ರೆ :** ಉಚಿತ ಆರೋಗ್ಯ ತಪಾಸಣೆ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್, ಬೆಳಗ್ಗೆ 10 ರಿಂದ
- **ಮೈಸೂರು ವಿಶ್ವವಿದ್ಯಾನಿಲಯ, ಗಣಿತ ಅಧ್ಯಯನ ವಿಭಾಗ :** ಗ್ರಾಫ್ ಸಿದ್ಧಾಂತ ಮತ್ತು ಅಲೈಡ್ ವಿಷಯಗಳು ಕುರಿತು ರಾಷ್ಟ್ರೀಯ ಸಮ್ಮೇಳನ, ಉದ್ಘಾಟನೆ : ಗುಲ್ಬರ್ಗಾ ವಿವಿ ಪ್ರಾಧ್ಯಾಪಕ ವಿ.ಆರ್. ಕುಲ್ಲಿ, ಅಧ್ಯಕ್ಷತೆ : ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಸ್ಥಳ: ಗಣಿತಶಾಸ್ತ್ರ ಅಧ್ಯಯನ ವಿಭಾಗದ ಸೆಮಿನಾರ್ ಹಾಲ್, ಮಾನಸಗಂಗೋತ್ರಿ, ಬೆಳಗ್ಗೆ 10ಕ್ಕೆ.
- **ಸರ್ಕಾರಿ ಪ್ರಥಮ ದರ್ಜೆ ಕಾಲೇಜು :** ಸಾಂಸ್ಕೃತಿಕ ಮತ್ತು ವಿವಿಧ ವೇದಿಕೆಗಳ ಉದ್ಘಾಟನಾ ಸಮಾರಂಭ, ಉದ್ಘಾಟನೆ : ಶಾಸಕ ಟಿ.ಎಸ್. ಶ್ರೀವತ್ಸ, ಮುಖ್ಯ ಅತಿಥಿಗಳು : ಜಾನಪದ ವಿದ್ವಾಂಸ ಡಾ. ಪಿ.ಕೆ. ರಾಜಶೇಖರ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಪ್ರೊ. ಎನ್. ಮಾಯಾದೇವಿ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ
- **ಶ್ರೀ ನಟರಾಜ ವಸತಿ ಪ್ರಥಮ ಮಹಿಳಾ ಕಾಲೇಜು :** ವ್ಯಕ್ತಿತ್ವ ವಿಕಸನ ಕಾರ್ಯಾಗಾರ, ಸಾನ್ನಿಧ್ಯ : ಶ್ರೀನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಅಧ್ಯಕ್ಷತೆ : ಶ್ರೀ ನಟರಾಜ ಪ್ರತಿಷ್ಠಾನ ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಉಪಸ್ಥಿತರು : ಪ್ರಿನ್ಸಿಪಾಲ್ ಡಾ. ಎಂ. ಶಾರದಾ, ಸಂಯೋಜಕರಾದ ಶ್ರೀಮತಿ ಎನ್. ಹೇಮಶ್ರೀ, ಸ್ಥಳ: ಶ್ರೀ ನಟರಾಜ ಸಭಾ ಭವನ, ಬೆಳಗ್ಗೆ 10.30ಕ್ಕೆ.
- **ಶ್ರೀ ಭುವನೇಶ್ವರಿ ಸೇವಾ ಟ್ರಸ್ಟ್ :** ವೀರ ರಾಣಿ ಕಿತ್ತೂರು ಚನ್ನಮ್ಮ ಜಯಂತಿ ಆಚರಣೆ, ಮುಖ್ಯ ಅತಿಥಿಗಳು : ಬಿಜೆಪಿ ನಗರಾಧ್ಯಕ್ಷ ಎಲ್. ನಾಗೇಂದ್ರ, ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾರಾಜ್, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ಸಮಾಜ ಸೇವಕ ಕೆ. ರಘುರಾಮ್ ವಾಜಪೇಯಿ, ನಗರಪಾಲಿಕೆ ಮಾಜಿ ಸದಸ್ಯೆ ಪ್ರಮೀಳಾ ಭರತ್, ಬಿಜೆಪಿ ನಗರ ಉಪಾಧ್ಯಕ್ಷೆ ಹೇಮಾ ನಂದೀಶ್, ಅಂಬಾ ಭವಾನಿ ಸಮಾಜ ಮಹಿಳಾ ಅಧ್ಯಕ್ಷೆ ಸವಿತಾ ಘಾಟ್ಕೆ, ಸ್ಥಳ: ಸ್ವಾತಂತ್ರ್ಯ ಹೋರಾಟಗಾರರ ಉದ್ಯಾನವನ, ನಾರಾಯಣಶಾಸ್ತ್ರಿ ರಸ್ತೆ, ಬೆಳಗ್ಗೆ 11ಕ್ಕೆ.
- **ಮೈಸೂರು ವಿಶ್ವವಿದ್ಯಾನಿಲಯ, ಯುವರಾಜ ಕಾಲೇಜು :** 2024–25ನೇ ಸಾಲಿನ ಜ್ಞಾನವಾಹಿನಿ ಸಾಂಸ್ಕೃತಿಕ, ಶೈಕ್ಷಣಿಕ, ಕ್ರೀಡೆ, ಎನ್‌ಸಿಸಿ, ಎನ್‌ಎಸ್‌ಎಸ್ ಚಟುವಟಿಕೆಗಳ ಉದ್ಘಾಟನಾ ಸಮಾರಂಭ, ಅಧ್ಯಕ್ಷತೆ : ಕಾಲೇಜು ಪ್ರಾಂಶುಪಾಲ ಪ್ರೊ. ಹೆಚ್. ಸೋಮಶೇಖರಪ್ಪ, ಉದ್ಘಾಟನೆ : ಮೈಸೂರು ವಿವಿ ಕುಲಸಚಿವ ಪ್ರೊ.ಎನ್. ನಾಗರಾಜ, ಮುಖ್ಯ ಭಾಷಣಕಾರರು : ನಿವೃತ್ತ ಪ್ರಾಂಶುಪಾಲ ಪ್ರೊ. ಸಿ.ಎ. ಶ್ರೀಧರ, ಉಪಸ್ಥಿತರು : ಆಡಳಿತಾಧಿಕಾರಿ ಪ್ರೊ. ಎಂ.ಕೆ. ಮಹೇಶ್, ಪರೀಕ್ಷಾ ನಿಯಂತ್ರಣಾಧಿಕಾರಿ ಪ್ರೊ. ಕೆ. ಅಜಯ್ ಕುಮಾರ್, ಜ್ಞಾನವಾಹಿನಿ ಸಮಿತಿ ಸಂಚಾಲಕ ಜಿ. ಕೃಷ್ಣಮೂರ್ತಿ, ಸಂಯೋಜಕ ಪ್ರೊ. ಬಿ.ಎಂ. ವೆಂಕಟೇಶ್, ಸ್ಥಳ: ಅಮೃತ ಮಹೋತ್ಸವ ಸಭಾಂಗಣ, ಕಾಲೇಜು ಆವರಣ, ಬೆಳಗ್ಗೆ 11ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ : 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ವಾದ್ಯ ವೈಭವ–ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ: ಚೈತ್ರಿಕಾ. ಎಸ್., 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಜಯಂತಿ. ವಿ. ಭಟ್, ವ್ಯಾಖ್ಯಾನ–ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್, 6.50 ರೈತರಿಗೆ ಸಲಹೆ, 7.15 ವಾತ್ಸಲ್ಯವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಮಕ್ಕಳ ರಕ್ಷಣಾ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, 8.30 ಹಾಸನಾಂಬೆ ದರ್ಶನ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಜಿಲ್ಲಾಡಳಿತ, ಹಾಸನ, 8.45 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ–ಕರ್ನಾಟಕ ಮುಕ್ತ ವಿದ್ಯಾಲಯ ಅಂದರೆ ಓಪನ್ ಸ್ಕೂಲ್‌ನಲ್ಲಿ ಇರುವ ಅಧ್ಯಯನ ಅವಕಾಶಗಳು ಕುರಿತು ಮೈಸೂರಿನ ಜೆ.ಎಸ್.ಎಸ್. ಕರ್ನಾಟಕ ಮುಕ್ತ ವಿದ್ಯಾಲಯದ ನಿರ್ದೇಶಕರಾದ ಸಿ.ಎಸ್. ಶಿವಸ್ವಾಮಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 9.45 ಹಾಸನ ದರ್ಶನ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಜಿಲ್ಲಾ ಪ್ರವಾಸೋದ್ಯಮ ಇಲಾಖೆ, ಹಾಸನ, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ:ಅಬ್ದುಲ್ ಹಲೀಂ ಜಾಫರ್‌ಖಾನ್–ಸಿತಾರ್ ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.30 ಆಯುಷ್ ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.35 ದೇವರನಾಮ–ಪಿ. ಸುರಭಿ, 12.45 ಜನಪದ ಸಂಗೀತ, 1.00 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ : ಶಭಾನ ಮತ್ತು ಕೀರ್ತಿ, ಪರಿಕಲ್ಪನೆ : ಅಬ್ದುಲ್ ರಶೀದ್, 1.20 ಹಾಸನಾಂಬೆ ದರ್ಶನ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಜಿಲ್ಲಾಡಳಿತ, ಹಾಸನ, 1.25 ಭಾವಗೀತೆಗಳು–ಲಕ್ಷ್ಮೀ ನಾಗರಾಜ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಬಾಲಕೃಷ್ಣ ಡಿ– ವೀಣಾ ವಾದನ, 4.00 ಮಹಿಳಾರಂಗ, 4.45 ಹಿಂದಿ ಪಾಠ–ಡಾ. ಸ್ಮಿತಾ ಚಿಪ್ಳೂಣ್‌ಕರ್, 6.50 ಕೃಷಿರಂಗ: ಕೃಷಿ ದೀವಿಗೆ 'ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ' ಕುರಿತ ಬಾನುಲಿ ಸರಣಿ ಸಾವಯವ ಕೃಷಿಯ ಪ್ರಾಮುಖ್ಯತೆ ಹಾಗೂ ಸವಾಲುಗಳ ಕುರಿತು ನಾಗನಹಳ್ಳಿಯ ಸಾವಯವ ಕೃಷಿ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರಾದ ಡಾ. ಸಿ. ರಾಮಚಂದ್ರ ಅವರೊಂದಿಗೆ ಸಂದರ್ಶನ, ಸಂದರ್ಶಕರು : ಎನ್. ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 ಕ್ಷಿತಿಜ ಲಿಟರರಿ ಗುರು –ಸಾಹಿತ್ಯ ಸಾಧಕರೊಂದಿಗೆ ಸಂವಾದ, 8.30 ರೇಡಿಯೋ ಸರಣಿ 'ಸ್ವಚ್ಛ ಆನಂದ', ರಚನೆ–ಎ. ಎಸ್. ಪ್ರಕಾಶ್, ನಿರ್ಮಾಣ–ಉಮೇಶ್. ಎಸ್. ಎಸ್., 9.30 ಹಿಂದುಸ್ಥಾನಿ ಶಾಸ್ತ್ರೀಯಸಂಗೀತ : ಸಂಜನಾ ಕೌಶಿಕ್–ಹಾಡುಗಾರಿಕೆ, ರಾಗ್ ಮಲ್ಹಾರ್ಸ್, 10.00 ಜನಪದ ಸಂಗೀತ, 10.30 ಸವಿನೆನಪು

ಸ್ವಕ್ಷೇತ್ರಕ್ಕೆ ಮುಖ್ಯಮಂತ್ರಿಗಳಿಂದ 3,045 ಕೋಟಿ ಅನುದಾನ

ಡಾ.ಹೆಚ್.ಸಿ.ಮಹದೇವಪ್ಪ ವಿವರಣೆ

ಮೈಸೂರು, ಅ.22(ಆರ್‌ಕೆ)– ಮುಖ್ಯಮಂತ್ರಿ ಸಿದ್ದರಾಮಯ್ಯ, ತಮ್ಮ ಸ್ವಕ್ಷೇತ್ರಕ್ಕೆ ಸುಮಾರು 3,045 ಕೋಟಿ ಅನುದಾನ ನೀಡಿ, ಸರ್ವಾಂಗೀಣ ಅಭಿವೃದ್ಧಿ ಮಾಡಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಇಂದಿಲ್ಲಿ ತಿಳಿಸಿದ್ದಾರೆ.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ತಿ.ನರಸೀಪುರ–ನಂಜನಗೂಡು ರಸ್ತೆಯ ತಾಯೂರು ಗೇಟ್ ಮೈದಾನದಲ್ಲಿ ಆಯೋಜಿಸಲಾಗಿದ್ದ ವರುಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಇಲಾಖೆಗಳ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ಇಂದು 501.81 ಕೋಟಿ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಸಿಕ್ಕಿದೆ. ವರುಣ ಕ್ಷೇತ್ರಕ್ಕೆ ಇದೇ ಮೊದಲ ಬಾರಿ ಅಲ್ಲದೆ, ಕಳೆದ ಬಾರಿ ನಮ್ಮ ಸರ್ಕಾರ ಅಧಿಕಾರದಲ್ಲಿದ್ದಾಗ ಸಿದ್ದರಾಮಯ್ಯನವರು ಸುಮಾರು 2 ಸಾವಿರ ಕೋಟಿ ಅನುದಾನ ನೀಡಿದ್ದರು. ಒಟ್ಟಾರೆ ಮುಖ್ಯಮಂತ್ರಿಗಳ ಸ್ವಕ್ಷೇತ್ರಕ್ಕೆ ಸುಮಾರು 3045 ಸಾವಿರ ಕೋಟಿ ಅನುದಾನವನ್ನು ನೀಡಿ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಕಾರಣರಾಗಿದ್ದಾರೆ ಎಂದು ತಿಳಿಸಿದರು. ಅಂಬೇಡ್ಕರ್, ಗಾಂಧೀಜಿ ಹಾಗೂ ಕುವೆಂಪು ಅವರ ನಡೆಯಂತೆ ಧ್ವನಿ ಇಲ್ಲದವರ ಧ್ವನಿಯಾಗಿ ಇಂದು ನಮ್ಮ ಸರ್ಕಾರ ನಡೆಯುತ್ತಿದೆ. ಸರ್ವ ಜನಾಂಗದ ಶಾಂತಿಯ ತೋಟವಾಗಿರುವ ಕರ್ನಾಟಕದಲ್ಲಿ ಸಮ ಸಮಾಜವನ್ನು ನಿರ್ಮಿಸಿ, ಪ್ರತಿಯೊಬ್ಬ ವ್ಯಕ್ತಿಯು ಯಾವುದೇ ಸೌಲಭ್ಯದಿಂದ ವಂಚಿತರಾಗದಂತೆ ಮಾಡುವುದೇ ಸರ್ಕಾರದ ಉದ್ದೇಶ ಎಂದು ಹೇಳಿದರು.

ಇಂದು ಗ್ಯಾರಂಟಿ ಯೋಜನೆಗಳಿಂದ ರಾಜ್ಯದಲ್ಲಿ ಪ್ರತಿಯೊಂದು ಕುಟುಂಬವು ಪ್ರತ್ಯಕ್ಷವಾಗಿ ಮಾಸಿಕ ಆದಾಯ ಇಲ್ಲದ ಕುಟುಂಬಗಳು 5 ಸಾವಿರ ರೂ.ಗಳನ್ನು ಪಡೆದುಕೊಳ್ಳುತ್ತಿವೆ. ಇದು ರಾಜಕೀಯ, ಜಾತಿ, ಧರ್ಮ ಹಾಗೂ ಜನಾಂಗವನ್ನು ಬಿಟ್ಟು ಮಾಡಿರುವಂತಹ ಮಹತ್ಕಾರ್ಯವಾಗಿದ್ದು, ಪ್ರಾಮಾಣಿಕತೆಯಿಂದ, ನೈತಿಕತೆಯಿಂದ ರಾಜ್ಯವನ್ನು ಅಭಿವೃದ್ಧಿ ಪಥದಲ್ಲಿ ಮುನ್ನಡೆಸುವ ಕೆಲಸವನ್ನು ಸಿದ್ದರಾಮಯ್ಯ ನೇತೃತ್ವದ ನಮ್ಮ ಸರ್ಕಾರ ಮಾಡುತ್ತಿದೆ ಎಂದು ನುಡಿದರು. ರೇಷ್ಮೆ ಸಚಿವ ಕೆ. ವೆಂಕಟೇಶ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ನಮ್ಮ ಸರ್ಕಾರ ಜನಸಾಮಾನ್ಯರಿಗೆ ಯಾವುದೇ ಕೊರತೆ ಆಗದಂತೆ ಅವರ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡುತ್ತಿದೆ. ಬಡಜನರು, ರೈತರು ಹಾಗೂ ಮಹಿಳೆಯರಿಗಾಗಿ ವಿವಿಧ ಯೋಜನೆಗಳನ್ನು ಜಾರಿಗೆ ತರಲಾಗಿದ್ದು, ಅದರ ಮುಂದುವರೆದ ಭಾಗವಾಗಿ ಇಂದು ಆಸಕ್ತ ಮಹಿಳೆಯರಿಗೆ ನಾಟಿಕೋಳಿಗಳನ್ನು ವಿತರಿಸಲಾಗುತ್ತಿದ್ದು, ಇದನ್ನು ಸದುಪಯೋಗಪಡಿಸಿಕೊಂಡು ಸಂತಾನೋತ್ಪತ್ತಿಯನ್ನು ಹೆಚ್ಚಿಸಿ ಅವುಗಳಿಂದ ಲಾಭ ಪಡೆಯಬಹುದಾಗಿದೆ. ಇವುಗಳನ್ನು ವರುಣ ಕ್ಷೇತ್ರದ 2000 ಮಹಿಳೆಯರಿಗೆ ನೀಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಕ್ಷೇತ್ರದ ಮಹಿಳೆಯರಿಗೆ ಈ ಯೋಜನೆ ತಲುಪಲಿದೆ ಎಂದು ತಿಳಿಸಿದರು. ಫಲಾನುಭವಿಗಳನ್ನು ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಮಾಡುವ ಉದ್ದೇಶ ಹೊಂದಿದ್ದೇನೆ. ಅದಕ್ಕಾಗಿ ತಾವು ಕೇವಲ 500 ಕೋಟಿ ರೂ. ಅನುದಾನವನ್ನು ಮಂಜೂರು ಮಾಡುವಂತೆ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದ ಸಚಿವರು, ಕೋಳಿ ಸಾಕಣೆಯನ್ನು ಅಭಿವೃದ್ಧಿಪಡಿಸಿ ಜನರಿಗೆ ಪೌಷ್ಟಿಕ ಆಹಾರ ಒದಗಿಸಲು ಈ ಯೋಜನೆ ಉಪಯುಕ್ತಕಾರಿ ಎಂದರು.

ಸಣ್ಣ ನೀರಾವರಿ ಸಚಿವ ಎನ್.ಎಸ್. ಬೋಸರಾಜು ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚುನಾವಣಾ ಪೂರ್ವದಲ್ಲಿ ಘೋಷಿಸಿದಂತೆ ವಾರ್ಷಿಕ 56 ಸಾವಿರ ಕೋಟಿ ವೆಚ್ಚದಲ್ಲಿ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿ ಮಾಡಿದ್ದು, ಇಂದು ಯೋಜನೆಗಳ ಪ್ರಯೋಜನವನ್ನು ರಾಜ್ಯದ ಪ್ರತಿಯೊಂದು ಕುಟುಂಬವು ಪಡೆದುಕೊಳ್ಳುತ್ತಿದೆ. ಇದರಿಂದಲೇ ರೈತರ, ಬಡವರ ಮತ್ತು ಮಹಿಳೆಯರ ಅಭಿವೃದ್ಧಿಗಾಗಿ ನಮ್ಮ ಸರ್ಕಾರ ಬದ್ಧವಾಗಿದೆ ಎಂದರು. ಪೌರಾಡಳಿತ ಸಚಿವ ರಹೀಂ ಖಾನ್ ಮಾತನಾಡಿ, ರಾಜ್ಯದಲ್ಲಿ ಪುರಸಭೆಯಲ್ಲಿ ಸುಮಾರು ವರ್ಷಗಳಿಂದಲೂ ಅನೇಕ ಸಮಸ್ಯೆಗಳಿತ್ತು. ಇಂದು ನಮ್ಮ ಸಿದ್ಧರಾಮಯ್ಯನವರ ಸರ್ಕಾರ ರಾಜ್ಯದ ಎಲ್ಲಾ ಟಿಎಂಸಿ, ಸಿಎಂಸಿ 10 ಸಾವಿರ ಕೋಟಿ ತೆರಿಗೆ ಹಣ ಸಂಗ್ರಹವಾಗುತ್ತಿದೆ. ಬೇರೆ ಸರ್ಕಾರ ಅಧಿಕಾರಲ್ಲಿದ್ದಾಗ ಜನರಿಗೆ ಮನೆ ಕೊಟ್ಟಿಲ್ಲ. ಇಂದು ನಮ್ಮ ಸರ್ಕಾರ ಬಡಜನರಿಗೆ ಮನೆ ಭಾಗ್ಯ, ಕುಡಿಯುವ ನೀರು, ವಿದ್ಯುತ್, ರಸ್ತೆ ಇನ್ನೂ ಮುಂತಾದ ಸಮಸ್ಯೆಗಳನ್ನು ಬಗೆಹರಿಸುತ್ತಿದೆ. ಬಡ ಜನರ ಹಸಿವನ್ನು ನೀಗಿಸುವ ಸಲುವಾಗಿ 200 ಹೊಸ ಇಂದಿರಾ ಕ್ಯಾಂಟೀನ್ ಅನ್ನು ನಿರ್ಮಾಣ ಮಾಡಿದೆ. 2023ರ ವಿಧಾನಸಭಾ ಚುನಾವಣೆಯಲ್ಲಿ ಆಶ್ವಾಸನೆ ಕೊಟ್ಟಂತಹ ಪಂಚ ಗ್ಯಾರಂಟಿ ಯೋಜನೆಗಳನ್ನು ನಮ್ಮ ಸರ್ಕಾರ ಜಾರಿಗೆ ತಂದಿದೆ ಎಂದು ಹೇಳಿದರು.



ಮೈಸೂರು ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ತಿ.ನರಸೀಪುರ–ನಂಜನಗೂಡು ರಸ್ತೆಯ ತಾಯೂರು ಗೇಟ್ ಮೈದಾನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಹಿಳಾ ಸ್ವ–ಸಹಾಯ ಗುಂಪುಗಳ ವಸ್ತುಪ್ರದರ್ಶನ ಮಳಿಗೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಿದರು.

ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಅಭಿವೃದ್ಧಿ ಕುಂಠಿತವಾಗಿಲ್ಲ: ಡಾ.ಯತೀಂದ್ರ

ಮೈಸೂರು, ಅ.22(ಆರ್‌ಕೆ)–ವಿಧಾನಸಭಾ ಚುನಾವಣಾ ಪೂರ್ವದಲ್ಲಿ ಘೋಷಣೆ ಮಾಡಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿರುವುದರಿಂದ ರಾಜ್ಯದ ಅಭಿವೃದ್ಧಿ ಯೋಜನೆಗಳು ಕುಂಠಿತವಾಗಿಲ್ಲ ಎಂದು ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ತಿಳಿಸಿದ್ದಾರೆ.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ತಿ.ನರಸೀಪುರ–ನಂಜನಗೂಡು ರಸ್ತೆಯ ತಾಯೂರು ಗೇಟ್ ಮೈದಾನದಲ್ಲಿ ಆಯೋಜಿಸಲಾಗಿದ್ದ ವರುಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ವರ್ಷಕ್ಕೆ 58 ಸಾವಿರ ಕೋಟಿ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಲಾಗುತ್ತಿದ್ದು, ಇದರಿಂದ ತೆರಿಗೆ ಹಣವನ್ನು ಜನರ ಕಲ್ಯಾಣಕ್ಕಾಗಿ ಬಳಸಲಾಗುತ್ತಿದೆ. ಈ ಹಿಂದೆ ಇದ್ದ ಸರ್ಕಾರಗಳು ಜನರಿಗೆ ಕಲ್ಯಾಣ ಯೋಜನೆಗಳನ್ನು ನೀಡುವಲ್ಲಿ ವಿಫಲವಾಗಿದ್ದವು. ಇದರಿಂದ ಆರ್ಥಿಕ ಅಸಮಾನತೆ ಹೆಚ್ಚಾಗಿತ್ತು ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಈ ಅಸಮಾನತೆಯನ್ನು ಹೋಗಲಾಡಿಸಲು ರಾಜ್ಯದ ಸಂಪನ್ಮೂಲವನ್ನು ಸಮಾನವಾಗಿ ಹಂಚಿಕೆ ಮಾಡುತ್ತಿದೆ. ಕೇಂದ್ರ ಸರ್ಕಾರದ ತೆರಿಗೆಯಿಂದಾಗಿ ಬೆಲೆ ಏರಿಕೆ, ಬಡವರ ನಿರ್ಲಕ್ಷ್ಯ, ಶ್ರೀಮಂತರಿಗೆ ಪ್ರೋತ್ಸಾಹ ನೀಡಿದಂತಾಗಿದೆ.



ಅಂಗವಿಕಲರಿಗೆ ತ್ರಿಚಕ್ರ ವಾಹನಗಳನ್ನು ವಿತರಿಸಲಾಯಿತು.



ಐದು ವಾರಗಳ ನಾಟಿಕೋಳಿ ಮರಿಗಳನ್ನು ಫಲಾನುಭವಿಗಳಿಗೆ ಮುಖ್ಯಮಂತ್ರಿಗಳು ವಿತರಿಸಿದರು.



ಸಿದ್ದರಾಮಯ್ಯ ಅವರು ಕೃಷಿ ಯಂತ್ರೋಪಕರಣಗಳನ್ನು ವಿತರಿಸಿದರು.

501.81 ಕೋಟಿ ವೆಚ್ಚದ 313 ಕಾಮಗಾರಿ

ಒಂದನೇ ಪುಟದಿಂದ

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ 8, ಲೋಕೋಪಯೋಗಿ ಇಲಾಖೆಯ 21, ನೀರಾವರಿ ಇಲಾಖೆಯ 77, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ 16, ಪಂಚಾಯತ್‌ರಾಜ್ ಇಂಜಿನಿಯರಿಂಗ್ ವಿಭಾಗದ 13, ತಿ.ನರಸೀಪುರ ಪುರಸಭೆ ವ್ಯಾಪ್ತಿಯ 1 ಹಾಗೂ ಉತ್ತನಹಳ್ಳಿ ಗ್ರಾಮದ ದೇವಸ್ಥಾನ ಕಾಂಪೌಂಡ್ ನಿರ್ಮಾಣದ 1 ಸೇರಿ ಒಟ್ಟು 264 ಕಾಮಗಾರಿಗಳನ್ನು 47 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕೈಗೊಂಡಿರುವ ಕಾಮಗಾರಿಗಳಿಗೆ ಸಿದ್ದರಾಮಯ್ಯ ಇಂದು ಶಂಕುಸ್ಥಾಪನೆ ನೆರವೇರಿಸಿದರು.

ಸವಲತ್ತು ವಿತರಣೆ: ಕೃಷಿ ಇಲಾಖೆಯಿಂದ 118, ತೋಟಗಾರಿಕೆ ಇಲಾಖೆಯ 3, ರೇಷ್ಮೆ ಇಲಾಖೆಯ 32, ಪಶುಪಾಲನಾ ಇಲಾಖೆಯ 2000, ವಿಕಲಚೇತನರು, ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ 19, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ 36, ಡಾ. ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ 8, ಗ್ರಾಮೀಣ ವಸತಿ ಯೋಜನೆಯಿಂದ 270, ನಗರ ವಸತಿ ಯೋಜನೆಯಡಿ 72, ಸಮಾಜ ಕಲ್ಯಾಣ ಇಲಾಖೆಯಿಂದ 2 ಹಾಗೂ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ 55 ಸೇರಿ 2616 ಮಂದಿಗೆ ವಿವಿಧ ಸವಲತ್ತುಗಳನ್ನು ಇದೇ ವೇಳೆ ವಿತರಿಸಲಾಯಿತು.

ಬೆಳಗ್ಗೆ 11.15 ಗಂಟೆಗೆ ಆರಂಭವಾಗಬೇಕಿದ್ದ ಕಾರ್ಯಕ್ರಮ ಒಂದೂವರೆ ಗಂಟೆ ತಡವಾಗಿ ಮಧ್ಯಾಹ್ನ 1 ಗಂಟೆಗೆ ಆರಂಭವಾಗಿ ಮಧ್ಯಾಹ್ನ 3.15 ಗಂಟೆಗೆ ಮುಕ್ತಾಯಗೊಂಡಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಚಿವರಾದ ಕೆ.ವೆಂಕಟೇಶ್, ಎನ್.ಎಸ್.ಬೋಸರಾಜು, ರಹೀಂಖಾನ್, ಶಾಸಕರಾದ ಡಿ.ರವಿಶಂಕರ್, ದರ್ಶನ್ ಧ್ರುವನಾರಾಯಣ್, ವಿಧಾನಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ, ಡಾ.ಯತೀಂದ್ರ ಸಿದ್ದರಾಮಯ್ಯ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷೆ ಡಾ.ಪುಷ್ಪಾ ಅಮರನಾಥ್, ವಿಧಾನಪರಿಷತ್ ಮಾಜಿ ಸದಸ್ಯ ಮರಿತಿಬ್ಬೇಗೌಡ, ಕಾಂಗ್ರೆಸ್ ಮುಖಂಡರಾದ ಬಿ.ಎಂ.ರಾಮು, ಎಂ.ಲಕ್ಷ್ಮಣ್, ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ, ಡಿಐಜಿ ಬೋರಲಿಂಗಯ್ಯ, ತಾಯೂರು ಗ್ರಾಪಂ ಅಧ್ಯಕ್ಷೆ ಮಣಿಕೃಷ್ಣ, ಉಪಾಧ್ಯಕ್ಷೆ ಬಸಮ್ಮ ರಂಗಸ್ವಾಮಿ ಸೇರಿದಂತೆ ಹಲವರು ಉಪಸ್ಥಿತದ್ದರು.

ಜನಸಾಗರ: ವರುಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಭರಪೂರ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಹಾಗೂ ವಿವಿಧ ಸವಲತ್ತು ವಿತರಣೆಗಾಗಿ ಏರ್ಪಡಿಸಿದ್ದ ಬೃಹತ್ ಕಾರ್ಯಕ್ರಮಕ್ಕೆ ತಾಯೂರು ಸುತ್ತಮುತ್ತಲಿನ ಗ್ರಾಮಗಳಿಂದ ಸಾವಿರಾರು ಮಂದಿ ಜನ ನೆರೆದಿದ್ದರು. ಮುಖ್ಯಮಂತ್ರಿ ಸಿದ್ದರಾಮಯ್ಯನವರು ವೇದಿಕೆಗೆ ಆಗಮಿಸುತ್ತಿದ್ದಂತೆಯೇ ಹರ್ಷೋದ್ಗಾರ ಮೊಳಗಿತಲ್ಲದೆ, ಅಭಿಮಾನಿಗಳು ಹಾರ ಹಾಕಲು ಮುಗಿಬಿದ್ದರು. ಮುಖ್ಯಮಂತ್ರಿಗಳ ಹೆಸರು ಹೇಳಿದ ತಕ್ಷಣ ಜೋರು ಚಪ್ಪಾಳೆ, ಸಿಳ್ಳೆ ಮೊಳಗಿಸಿ ಜನರು ತಮ್ಮ ಉತ್ಕಟ ಅಭಿಮಾನ ಮೆರೆದದ್ದು ವಿಶೇಷವಾಗಿತ್ತು.

ವ್ಯಾಪಕ ಪೊಲೀಸ್ ಭದ್ರತೆ: ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ತಾಯೂರು ಗೇಟ್ ಬಳಿ ಮೈದಾನದಲ್ಲಿ ಆಯೋಜಿಸಿದ್ದ ಬೃಹತ್ ಕಾರ್ಯಕ್ರಮಕ್ಕೆ ಎಸ್‌ಪಿ ಎನ್.ವಿಷ್ಣುವರ್ಧನ ಅವರ ನೇತೃತ್ವದಲ್ಲಿ ಹೆಚ್ಚುವರಿ ಪೊಲೀಸ್ ಅಧಿಕಾರಿಗಳು ಹಾಗೂ ಪೊಲೀಸರನ್ನು ನಿಯೋಜಿಸಿ ಭಾರಿ ಬಂದೋಬಸ್ತ್ ಮಾಡಲಾಗಿತ್ತು. ತಾಯೂರು ಗೇಟ್‌ನಿಂದ ಮೈಸೂರುವರೆಗೆ ಮಾರ್ಗದುದ್ದಕ್ಕೂ ಪೊಲೀಸರು ಭದ್ರತೆ ನಿರ್ವಹಿಸಿ, ಗಣ್ಯರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ನಾವಿರೋವರೆಗೂ ಗ್ಯಾರಂಟಿ ನಿಲ್ಲಲ್ಲ: ಮುಖ್ಯಮಂತ್ರಿ ಸಿದ್ದರಾಮಯ್ಯ

ಹಿಂದುಳಿದ ವರ್ಗದವನಾದ ನಾನು ಎರಡು ಬಾರಿ ಮುಖ್ಯಮಂತ್ರಿ ಆದೆ ಎಂಬ ಕಾರಣಕ್ಕೆ ಬಿಜೆಪಿಗೆ ಹೊಟ್ಟೆಕಿಚ್ಚು.

ಸ್ವಂತ ಮನೆ ಇಲ್ಲ: ನಾನು ಎರಡು ಬಾರಿ ಮುಖ್ಯಮಂತ್ರಿ ಆದರೂ ಮೈಸೂರಿನಲ್ಲಿ ಒಂದೂ ಸ್ವಂತ ಮನೆ ಇಲ್ಲ. ಮರಿಸ್ವಾಮಿ ಮನೇಲಿ ಇದ್ದೀನಿ. ಕುವೆಂಪು ನಗರದ ವಿಶ್ವಮಾನವ ಜೋಡಿ ರಸ್ತೆಯಲ್ಲಿ 3 ವರ್ಷದಿಂದ ಮನೆ ಕಟ್ಟುತ್ತಲೇ ಇದ್ದೀನಿ. ಇನ್ನು ಪೂರ್ತಿ ಆಗಿಲ್ಲ, ನನಗೆ ವರ್ಚಸ್ಸು ಕೊಡುವವರು ಮತದಾರರು, ನಿಮಗೆ ಪ್ರಾಮಾಣಿಕವಾಗಿದ್ದೇನೆ ಎಂದು ನುಡಿದರು.

ಬಡವರಿಗೆ ಶಕ್ತಿ ತುಂಬುವ ಕೆಲಸ: ನಮ್ಮ ಸರ್ಕಾರ ಅಧಿಕಾರದಲ್ಲಿ ಇದ್ದಾಗಲೆಲ್ಲಾ ರಾಜ್ಯದ ಎಲ್ಲ ಬಡವರಿಗೆ ಆರ್ಥಿಕ ಶಕ್ತಿ ತುಂಬುವ ಕಾರ್ಯಕ್ರಮಗಳನ್ನು ಜಾರಿ ಮಾಡಿದ್ದೇನೆ. ಹತ್ತು ಹಲವು ಭಾಗ್ಯಗಳನ್ನು ಕೊಡುವ ಜೊತೆಗೆ ಹಲವು ನಿಗಮಗಳ ಸಾಲ ಮನ್ನಾ ಮಾಡಿದ್ದೇನೆ. ಡಾ. ಅಂಬೇಡ್ಕರ್ ಆಶಯದಂತೆ ಬಡವರಿಗೆ ಆರ್ಥಿಕ ಶಕ್ತಿ ಕೊಡುವ ಕಾರ್ಯಕ್ರಮ ರೂಪಿಸಿ ಜಾರಿ ಮಾಡಿದ್ದೇನೆ. ಎರಡನೇ ಬಾರಿ ಮುಖ್ಯಮಂತ್ರಿ ಆದಾಗಲೂ ಎಲ್ಲಾ ಜಾತಿ, ಧರ್ಮದ ಬಡವರ, ಮಧ್ಯಮ ವರ್ಗದವರ ಬದುಕಿಗೆ ಆಸರೆ ಆಗುವ ಐದು ಗ್ಯಾರಂಟಿ ಯೋಜನೆಗಳನ್ನು ರೂಪಿಸಿ ಜಾರಿ ಮಾಡಿದ್ದೇವೆ. ಪ್ರತೀ ವರ್ಷ ಈ ಗ್ಯಾರಂಟಿಗಳ ಮೂಲಕ 56 ಸಾವಿರ ಕೋಟಿ ರೂ.ಗಳನ್ನು ಜನರಿಗಾಗಿ ವಿನಿಯೋಗಿಸುತ್ತಿದ್ದೇವೆ. ದೇಶದಲ್ಲಿ ನುಡಿದಂತೆ ನಡೆದುಕೊಂಡಿರುವ ಪಕ್ಷ ಯಾವುದಾದರೂ ಇದ್ದರೆ ಅದು ಕಾಂಗ್ರೆಸ್ ಪಕ್ಷ ಎಂದು ಸಿದ್ದರಾಮಯ್ಯ ಇದೇ ವೇಳೆ ಭಾವನಾತ್ಮಕವಾಗಿ ಹೇಳಿದರು.

ಬಿಜೆಪಿ, ಜೆಡಿಎಸ್ ಲೂಟಿ ಮಾಡಿದವು: ಕೇಂದ್ರದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಸರ್ಕಾರವಾಗಲೀ, ರಾಜ್ಯದಲ್ಲಿದ್ದ ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಎಚ್.ಡಿ.ಕುಮಾರಸ್ವಾಮಿ ಸರ್ಕಾರಗಳು ಜನರ ಕಲ್ಯಾಣ ಮಾಡದೆ ಲೂಟಿ ಮಾಡಿದವು. ಬಿಜೆಪಿ ಸಾಮಾಜಿಕ ನ್ಯಾಯ ವಿರೋಧಿ, ಬಡವರ ವಿರೋಧಿ, ಮೂರು ಬಾರಿ ಪ್ರಧಾನಿ ಆಗಿರುವ ಮೋದಿ ಅವರು ಕೊಟ್ಟ ಮಾತಿನಂತೆ ನಡೆದ ಉದಾಹರಣೆ ಇದೆಯಾ, ಇಷ್ಟು ವರ್ಷ ಪ್ರಧಾನಿಯಾಗಿ ಮೋದಿ ಬಡವರ ಪರವಾಗಿ ಒಂದೇ ಒಂದು ಯೋಜನೆ ಜಾರಿ ಮಾಡಿದ್ದಾರ ಎಂದು ಪ್ರಶ್ನಿಸಿದ ಸಿದ್ದರಾಮಯ್ಯ, ಕೇಂದ್ರಕ್ಕೆ ಅತೀ ಹೆಚ್ಚು ತೆರಿಗೆ ಕಟ್ಟುವವರು ಕರ್ನಾಟಕದವರು, ನಮ್ಮ ಪಾಲಿನ ತೆರಿಗೆ ಪಡೆಯಲು ಭಿಕ್ಷೆ ಬೇಡಬೇಕಾ ಎಂದು ಪ್ರಶ್ನಿಸಿದರು.

ಬಿಹಾರ ಮತ್ತು ಗುಜರಾತ್ ರಾಜ್ಯಗಳಿಗೆ ಹೆಚ್ಚು ತೆರಿಗೆ ಪಾಲು ಕೊಟ್ಟು ನಮ್ಮ ರಾಜ್ಯಕ್ಕೆ ಮಾತ್ರ ಕೇವಲ ಆರು ಸಾವಿರ ಕೋಟಿ ರೂ. ನೀಡಲಾಗಿದೆ, ಇದನ್ನು ಸಹಿಸಲು ಸಾಧ್ಯವಿಲ್ಲ. ಈ ಅನ್ಯಾಯದ ವಿರುದ್ಧ ದೆಹಲಿಗೆ ಹೋಗಿ ಪ್ರತಿಭಟನೆ ಮಾಡಿದೆವು, ಬಿಜೆಪಿ–ಜೆಡಿಎಸ್‌ನ ಒಬ್ಬ ಲೋಕಸಭಾ ಸದಸ್ಯನೂ ರಾಜ್ಯದ ಪಾಲನ್ನು ಕೇಳುವ ಧೈರ್ಯ ಮಾಡಲಿಲ್ಲ, ಮಾಡುವುದೂ ಇಲ್ಲ. ಕೇಂದ್ರ ಸರ್ಕಾರದ ಈ ದ್ರೋಹದ ವಿರುದ್ಧ ರಾಜ್ಯದ ಜನತೆ ಮಾತನಾಡಬೇಕು ಎಂದು ಮುಖ್ಯಮಂತ್ರಿಗಳು ಇದೇ ವೇಳೆ ಕರೆ ನೀಡಿದರು.

ನಮ್ಮ ಸರ್ಕಾರ ಇರೋವರೆಗೂ ಗ್ಯಾರಂಟಿ ನಿಲ್ಲಲ್ಲ: ರಾಜ್ಯಕ್ಕೆ ವಿಶೇಷ ಅನುದಾನದ ಜೊತೆಗೆ ನೀರಾವರಿ ಯೋಜನೆಗೆ 5,495 ಕೋಟಿ ರೂ. ನೀಡಲು ಶಿಫಾರಸ್ಸು ಮಾಡಿದ್ದ ನಿರ್ಮಲಾ ಸೀತಾರಾಮನ್ ಈ ಹಣವನ್ನೂ ಕೊಡಲಿಲ್ಲ. ರಾಜ್ಯದ ಪೆರಿಫೆರಲ್ ರಸ್ತೆಗೆ, ಬೆಂಗಳೂರು ಕೆರೆಗಳ ಅಭಿವೃದ್ಧಿಗೆ 3 ಸಾವಿರ ಕೋಟಿ ರೂ. ಕೊಡುವುದಾಗಿ ಘೋಷಿಸಿದ್ದರು, ಆದರೆ ನಯಾಪೈಸೆ ಕೊಡಲಿಲ್ಲ ಎಂದರು.

ನನಗೆ ಮೈಸೂರಲ್ಲಿ ಸ್ವಂತ ಮನೆಯಿಲ್ಲ; ಬಾಡಿಗೆ ಮನೆಯಲ್ಲಿದ್ದೇನೆ!

ಮೈಸೂರು, ಅ. 22(ಆರ್‌ಕೆ)– ನನಗೆ ಮೈಸೂರಲ್ಲಿ ಸ್ವಂತ ಮನೆ ಎಂಬುದಿಲ್ಲ; ಸ್ನೇಹಿತರ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದೇನೆ. ಮುಖ್ಯಮಂತ್ರಿಯಾದ ನಾನು ಬಾಡಿಗೆ ಮನೆಯಲ್ಲಿರಬೇಕಾ? ಎಂದು ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ.

ನಾನು ಎರಡು ಬಾರಿ ರಾಜ್ಯದಲ್ಲಿ ಮುಖ್ಯಮಂತ್ರಿಯಾಗಿದ್ದರೂ ಈಗಲೂ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದೇನೆ. ಮೈಸೂರಿನ ಕುವೆಂಪುನಗರದ ವಿಶ್ವಮಾನವ ಜೋಡಿ ರಸ್ತೆಯಲ್ಲಿ ಕಳೆದ 3 ವರ್ಷದಿಂದ ಒಂದು ಮನೆ ಕಟ್ಟಿಸುತ್ತಿದ್ದೇನೆ. ಅದು ಇನ್ನೂ ಪೂರ್ಣವಾಗಿಲ್ಲ ಎಂದರು. ಸುಳ್ಳು ಆರೋಪ ಮಾಡಿ ನನ್ನ ವರ್ಚಸ್ಸಿಗೆ ಕಪ್ಪುಚುಕ್ಕೆ ಇಡುವ ದುರುದ್ದೇಶದಿಂದ ಬಿಜೆಪಿ ಮತ್ತು ಜೆಡಿಎಸ್ ನನ್ನ ಪತ್ನಿಗೆ ಆಕೆಯ ಅಣ್ಣ ಅರಿಶಿನ ಕುಂಕುಮಕ್ಕಾಗಿ ನೀಡಿದ್ದ ಜಮೀನಿನ ವಿಚಾರವಾಗಿ ಆರೋಪಗಳನ್ನು ಮಾಡಿ ಪ್ರಕರಣ ದಾಖಲಿಸಿದ್ದಾರೆ. ಆ ಸಂಬಂಧ ನೀಡಿದ್ದ ನಿವೇಶನಗಳನ್ನೂ ಈಗ ವಾಪಸ್ ನೀಡಿದ್ದೇವೆ. ಆದರೆ ಸತ್ಯಕ್ಕೆ ಜಯ ಸಿಗುತ್ತೆ. ಸತ್ಯಮೇವ ಜಯತೆ ಎಂಬಂತೆ ಅವರ ಆರೋಪಗಳು ನಿರಾಧಾರ ಎಂಬುದು ತಿಳಿಯುತ್ತದೆ ಎಂದೂ ಸಿದ್ದರಾಮಯ್ಯನವರು ಮಾರ್ಮಿಕವಾಗಿ ನುಡಿದರು. ನಾನು ಯಾರಿಂದಲೂ ಹಣ ಪಡೆದಿಲ್ಲ. ಅದರ ಅಗತ್ಯವೂ ನನಗಿಲ್ಲ. ಬಡವರ ಪರ ಯಾವುದೇ ಜಾತಿ, ಧರ್ಮ, ಪಂಗಡದ ಭೇದವಿಲ್ಲದೆ ಪ್ರಾಮಾಣಿಕವಾಗಿ ಆಡಳಿತ ನಡೆಸಿಕೊಂಡು ಬಂದಿದ್ದೇನೆ. 40 ವರ್ಷದ ಸುದೀರ್ಘ ರಾಜಕೀಯ ಜೀವನದಲ್ಲಿ ಎಂದೂ ಒಂದೇ ಒಂದು ಕಪ್ಪುಚುಕ್ಕೆ ಬಾರದಂತೆ ನಡೆದುಕೊಂಡಿದ್ದೇನೆ. ಎಂದೆಂದಿಗೂ ನಾನು ಬಡವರ ಪರ ಇರುತ್ತೇನೆ. ಸಾಮಾಜಿಕ ನ್ಯಾಯ, ಸಮಾನತೆ, ದೀನ–ದಲಿತರ ಬಗ್ಗೆ ಕಳಕಳಿಯಿಂದ ನಿಮಗೆ ಗೌರವ ತಂದು ಕೊಡುತ್ತೇನೆಯೇ ಹೊರತು ಅಗೌರವ ತರುವ ಕೆಲಸ ಮಾಡುವುದಿಲ್ಲ ಎಂದು ಪುನರುಚ್ಚರಿಸಿದರು.

ನಟ ದರ್ಶನ್ ಜಾಮೀನು ಅರ್ಜಿ ವಿಚಾರಣೆ ಅ.28ಕ್ಕೆ ಮುಂದೂಡಿಕೆ



ಬೆಂಗಳೂರು, ಅ.22– ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿರುವ ನಟ ದರ್ಶನ್ ಸಲ್ಲಿಸಿರುವ ಜಾಮೀನು ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಅ.28ಕ್ಕೆ ಮುಂದೂಡಿದೆ. ಇಂದು ಹೈಕೋರ್ಟ್ ನ್ಯಾಯಮೂರ್ತಿ ಎಸ್. ವಿಶ್ವಜಿತ್ ಶೆಟ್ಟಿ ಅವರಿದ್ದ ನ್ಯಾಯಪೀಠ, ದರ್ಶನ್ ಜಾಮೀನು ಅರ್ಜಿ ವಿಚಾರಣೆ ನಡೆಸಿತು. ಅರ್ಜಿದಾರರ ಪರವಾಗಿ ವಾದಿಸಿದ ಹಿರಿಯ ವಕೀಲ ಸಿ.ವಿ.ನಾಗೇಶ್, ಬೆನ್ನುಹುರಿ ನೋವಿನಿಂದ ಬಳಲುತ್ತಿರುವ ದರ್ಶನ್ ಅವರನ್ನು ವಿಮ್ಸ್ ಆಸ್ಪತ್ರೆಗೆ ನಿನ್ನೆ ದಾಖಲಿಸಲಾಗಿದೆ. ಹೀಗಾಗಿ ಅನಾರೋಗ್ಯದ ಕಾರಣಕ್ಕೂ ಜಾಮೀನು ಕೇಳುತ್ತಿದ್ದೇವೆ ಎಂದು ನ್ಯಾಯಾಲಯದ ಗಮನಕ್ಕೆ ತಂದರು. ಈ ಸಂಬಂಧ ಜೈಲು ಅಧಿಕಾರಿಗಳಿಂದ ದರ್ಶನ್ ಅವರ ವೈದ್ಯಕೀಯ ವರದಿ ಕೇಳಿದ ನ್ಯಾಯಾಲಯ, ಆಕ್ಷೇಪ ಸಲ್ಲಿಕೆಗೆ ಎಸ್‌ಪಿಪಿ ಪ್ರಸನ್ನ ಕುಮಾರ್ ಅವರಿಗೆ ಸೂಚಿಸಿ ಮುಂದಿನ ವಿಚಾರಣೆಯನ್ನು ಅಕ್ಟೋಬರ್ 28ಕ್ಕೆ ಮುಂದೂಡಿತು.

ನಕ್ಕರೆ ಅದೇ ಸ್ವರ್ಗ

ಹೆಂಡತಿ : ರೀ..ರೀ..
ಗಂಡ : ಏನೇ ಅದು..
ಹೆಂಡತಿ : ಹಿಂದ್ಗಡೆ ಸೀಟಿನವನು ನನ್ನ ಕಾಲಿನ ಮೇಲೆ ಕಾಲ್ ಹಾಕುತ್ತಿದ್ದಾನೆ.
ಗಂಡ : ಅಷ್ಟೇನಾ.. ಹಿಂದಕ್ಕೆ ತಿರುಗಿ ನಿನ್ನ ಮುಖ ತೋರಿಸು. ಕಾಲು ಹಾಕುವುದನ್ನು ನಿಲ್ಲಿಸುತ್ತಾನೆ.

ಮೈಸೂರು ಮಿತ್ರ

ಬುಧವಾರ, 23 ಅಕ್ಟೋಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಕನ್ನಡ ನುಡಿ ಬಹಳ ಚಂದ. ಏಕೆಂದರೆ ಅದರಲ್ಲಿ ಏನೇ ಗೀಚಿದರೂ ಆಗುವುದು ಶ್ರೀಗಂಧ. ಸಿಂಗಾರದ ಗಣಿ ಅದರ ಶಬ್ದ ಸಂಪತ್ತು. ಬಂಗಾರಕ್ಕಿಂತಲೂ ಶ್ರೇಷ್ಠ ನುಡಿಮುತ್ತು. –ದಿನಕರ ದೇಸಾಯಿ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಊರಿಗೆ ದೊರೆ ಆದರೂ ತಾಯಿಗೆ ಮಗನೆ.

ನಿಮ್ಮ ಪತ್ರಗಳು

■ ಹೊಸ ಕಾನೂನಿನ ಬಗ್ಗೆ ಅರಿವು ಅಗತ್ಯ

ಮಾನ್ಯರೆ,

ಭಾರತೀಯ ನ್ಯಾಯ ಸಂಹಿತಾ, ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ, ಮತ್ತು ಭಾರತೀಯ ಸಾಕ್ಷಿ ಅಧಿನಿಯಮ ಎಂಬ ಮೂರು ಹೊಸ ಕ್ರಿಮಿನಲ್ ಕಾನೂನುಗಳು ಜುಲೈ ಒಂದರಿಂದ ದೇಶಾದ್ಯಂತ ಜಾರಿಗೆ ಬಂದು ಕ್ರಿಮಿನಲ್ ಪ್ರಕ್ರಿಯೆಯಲ್ಲಿ ಹೊಸ ಅಧ್ಯಾಯ ತೆರೆದಿವೆ. ಕಳೆದ ಡಿಸೆಂಬರ್‌ನಲ್ಲಿ ಈ ಮೂರು ಹೊಸ ಕ್ರಿಮಿನಲ್ ಕಾನೂನುಗಳು ಸಂಸತ್ತಿನಲ್ಲಿ ಅಂಗೀಕರಿಸಲ್ಪಟ್ಟು, ಈ ಮೂರು ಹೊಸ ಕ್ರಿಮಿನಲ್ ಕಾನೂನುಗಳು ಕ್ರಮವಾಗಿ ಅಸ್ತಿತ್ವದಲ್ಲಿರುವ ಭಾರತೀಯ ದಂಡ ಸಂಹಿತೆ (IPC), ಕ್ರಿಮಿನಲ್ ಪ್ರೊಸೀಜರ್ ಕೋಡ್ ಮತ್ತು ಭಾರತೀಯ ಸಾಕ್ಷ್ಯ ಕಾಯಿದೆಗಳನ್ನು ಬದಲಿಸಲು ಹೊಂದಿಸಲಾಗಿದೆ ಎಂದು ಸರ್ಕಾರ ತಿಳಿಸಿದೆ.

ಹೊಸ ಕಾನೂನುಗಳ ಬಗ್ಗೆ ಈಗಾಗಲೇ ಟೀಕೆಗಳ ಕೋಲಾಹಲ ಎದ್ದಿದೆ. ಅನೇಕ ಕಾನೂನು ತಜ್ಞರು ಅದರ ಅನುಷ್ಠಾನವನ್ನು ವಿರೋಧಿಸುತ್ತಿದ್ದಾರೆ ಮತ್ತು ಹೊಸ ಕ್ರಿಮಿನಲ್ ಕಾನೂನುಗಳನ್ನು ಜಾರಿಗೊಳಿಸುವ ಮೊದಲು ಹೆಚ್ಚಿನ ಚರ್ಚೆಗಳು ನಡೆಯಬೇಕಿತ್ತು ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಮೂರು ಹೊಸ ಕಾನೂನಿನಲ್ಲಿ ನ್ಯಾಯಾಲಯದ ಅಧಿಕಾರವನ್ನು ಕಡಿಮೆಗೊಳಿಸಿ ಪೊಲೀಸ್ ವ್ಯವಸ್ಥೆಗೆ ಹೆಚ್ಚಿನ ಬಲ ತುಂಬಲಾಗಿದೆ ಎಂಬ ತರ್ಕ ಒಂದೆಡೆಯಾದರೆ, ಇನ್ನೊಂದೆಡೆ ಈ ಹೊಸ ಕಾನೂನುಗಳು ಕೆಲವು ಪ್ರಕ್ರಿಯೆಗಳನ್ನು ಸರಳಗೊಳಿಸಿವೆ, ನ್ಯಾಯದಾನವು ತ್ವರಿತವಾಗಿ ಹಾಗೂ ಹೆಚ್ಚು ದಕ್ಷವಾಗಿ ಆಗುತ್ತದೆ ಎಂಬ ಭರವಸೆಯನ್ನು ನೀಡಿವೆ. ಅಪರಾಧ ನಡೆದಿರುವ ಬಗ್ಗೆ ಎಲೆಕ್ಟ್ರಾನಿಕ್ ಸಂವಹನ ಮಾಧ್ಯಮದ ಮೂಲಕವೂ ಮಾಹಿತಿ ನೀಡಬಹುದು. ವ್ಯಕ್ತಿಗಳು ಈಗ ಯಾವುದೇ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಬಹುದು. ಗಂಭೀರ ಸ್ವರೂಪದ ಅಪರಾಧ ಪ್ರಕರಣಗಳಲ್ಲಿ ವಿಧಿವಿಜ್ಞಾನ ಪರೀಕ್ಷೆಯನ್ನು ಕಡ್ಡಾಯಗೊಳಿಸಲಾಗಿದೆ. ದೋಷಾರೋಪ ನಿಗದಿಗೆ, ವಿಚಾರಣೆ ಮುಂದೂಡುವುದಕ್ಕೆ ಹಾಗೂ ಆದೇಶ ನೀಡುವುದಕ್ಕೆ ಕಾಲಮಿತಿ ನಿಗದಿ ಮಾಡಲಾಗಿದೆ. ಇವೆಲ್ಲವೂ ಸಂತ್ರಸ್ತರ ಹಿತವನ್ನು ಗಮನದಲ್ಲಿ ಇರಿಸಿಕೊಂಡು ರೂಪಿಸಿರುವ ಕ್ರಮಗಳು ಎಂದು ಕೇಂದ್ರ ಸರ್ಕಾರ ತಾನು ತಂದಿರುವ ಹೊಸ ಕಾನೂನಿನ ಬಗ್ಗೆ ಸಮರ್ಥಿಸಿಕೊಂಡಿದೆ.

ಇಷ್ಟೆಲ್ಲಾ ಆಗಿಯೂ ವಿರೋಧ ಪಕ್ಷಗಳು ಈ ಕಾನೂನುಗಳ ಕುರಿತಂತೆ ಅಪಸ್ವರ ಎತ್ತುತ್ತಿರುವುದು ಗಮನಾರ್ಹ ಸಂಗತಿಯಾಗಿದೆ. ಒಟ್ಟಿನಲ್ಲಿ ಸರ್ಕಾರ ಸದುದ್ದೇಶದಿಂದ ರೂಪಿಸಿರುವ ಈ ಹೊಸ ಕಾನೂನುಗಳ ಅನುಷ್ಠಾನ ಕೂಡಾ ಪರಿಣಾಮಕಾರಿಯಾಗಿಯೇ ಆಗಬೇಕಾಗಿರುವುದು ಮುಖ್ಯವಾಗಿದೆ. ಅಲ್ಲದೇ ಈ ಮೂರು ಹೊಸ ಕಾನೂನುಗಳ ಬಗ್ಗೆ, ಅದರಲ್ಲಿರುವ ಸಾಧಕ ಬಾಧಕಗಳನ್ನು ಒಳಗೊಂಡಂತೆ ಮೊದಲು ಸಾರ್ವಜನಿಕರಿಗೆ ಹಾಗೂ ಸಂಬಂಧಿತರಿಗೆ ನೂತನ ಕಾನೂನುಗಳ ಬಗ್ಗೆ ಅರಿವು ಮೂಡಿಸುವ ಕೆಲಸ ತುರ್ತಾಗಿ ಆಗಬೇಕಾಗಿದೆ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

■ ಸ್ವಚ್ಛತೆ, ರಸ್ತೆ ರಿಪೇರಿ ನಗರಗಳ ಹೃದಯ ಭಾಗಕ್ಕೆ ಮಾತ್ರ ಸೀಮಿತವಾಗದಿರಲಿ

ಮಾನ್ಯರೇ,

ಮೈಸೂರು ನಗರವು ಸುಮಾರು 15 ರಿಂದ 20 ಕಿಲೋಮೀಟರ್‌ವರೆಗೂ ವಿಸ್ತರಣೆಯಾಗಿದೆ. ಈ ವ್ಯಾಪ್ತಿಯಲ್ಲಿ ಹಲವಾರು ಬಡಾವಣೆಗಳು ನಿರ್ಮಾಣಗೊಂಡಿರುತ್ತವೆ. ಅದರಲ್ಲಿ ಬಹಳಷ್ಟು ಬಡಾವಣೆಗಳು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಅನುಮೋದನೆಗೊಂಡಿರುವ ಖಾಸಗಿ ಬಡಾವಣೆಗಳಾಗಿರುತ್ತವೆ. ಈ ಬಡಾವಣೆಗಳಿಗೆ ಪ್ರಾಧಿಕಾರವು ಯಾವುದೇ ಮೂಲಸೌಕರ್ಯವನ್ನು ಒದಗಿಸಿಲ್ಲದ ಕಾರಣ ಅಲ್ಲಿನ ನಿವಾಸಿಗಳು ದಿನನಿತ್ಯದ ಕಸವನ್ನು ರಸ್ತೆ ಬದಿಗಳಲ್ಲಿ ಸುರಿಯುತ್ತಿರುವುದು ಸರ್ವೇ ಸಾಮಾನ್ಯವಾಗಿದೆ. ಇನ್ನು ಹಲವಾರು ರಸ್ತೆಗಳು, ಚರಂಡಿಗಳು ದುರಸ್ತಿಯನ್ನು ಕಾಣದೆ ಹಾಳಾಗಿರುತ್ತವೆ. ಬಡಾವಣೆಗಳಲ್ಲಿನ ಸ್ವಚ್ಛತೆ ಮತ್ತು ರಿಪೇರಿಗಳ ಬಗ್ಗೆ ಸಂಬಂಧಪಟ್ಟ ಕ್ಷೇತ್ರದ ಜನಪ್ರತಿನಿಧಿಗಳಾಗಲೀ ಅಥವಾ ಅಧಿಕಾರಿಗಳಾಗಲೀ ಗಮನಹರಿಸಬೇಕೆಂದು ಮನವಿ.

–ಶಿವಪ್ರಕಾಶ್ ಎ ಎಸ್, ವಕೀಲರು, ಮೈಸೂರು

■ ಕಿತ್ತೂರು ರಾಣಿ ಚೆನ್ನಮ್ಮನಿಗೆ ನಮೋ ನಮಃ

ಮಾನ್ಯರೆ,

ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಪ್ರಪ್ರಥಮ ಮಹಿಳೆ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯ ದಿನವಾದ ಇಂದು (23.10.2024) ಈ ಧೀರ ಮಹಿಳೆಯನ್ನು ನೆನಪಿಸಿಕೊಳ್ಳುವುದು ಪುಣ್ಯದ ಕಾರ್ಯವಾಗಿದೆ. ರಾಣಿ ಚೆನ್ನಮ್ಮ ಕಿತ್ತೂರಿನ ಹುಲಿಯಂತೆ ಬ್ರಿಟಿಷ್ ಸರ್ಕಾರದ ವಿರುದ್ಧ ಗರ್ಜಿಸುತ್ತಿದ್ದರು. ಬ್ರಿಟೀಷರ ವಿರುದ್ಧ ನಿರಂತರವಾಗಿ ಹೋರಾಡಿ, ಕಡೆಗೆ ತನ್ನ ಕೆಲವು ಆಪ್ತರ ಒಳಸಂಚಿನಿಂದಾಗಿ ಬ್ರಿಟೀಷರಿಗೆ ಸೆರೆಯಾದರು. ಕಿತ್ತೂರನ್ನು ಬ್ರಿಟೀಷರ ದಾಸ್ಯದ ಸಂಕೋಲೆಯಿಂದ ಬಿಡಿಸಲು ಅಹರ್ನಿಶಿ ಹೋರಾಡಿದ ಈ ವೀರ ಮಹಿಳೆಯ ದೇಶಾಭಿಮಾನ ಪ್ರಾತಃಸ್ಮರಣೀಯವಾಗಿದೆ. 1824ರಲ್ಲಿ ಬ್ರಿಟೀಷರನ್ನು ಕಿತ್ತೂರಿನಿಂದ ಒದ್ದೋಡಿಸಿದ್ದ ಚೆನ್ನಮ್ಮನಿಗೆ ಮಲ್ಲಪ್ಪಶೆಟ್ಟಿ ಸೇರಿದಂತೆ ಕೆಲವು ಆಪ್ತರು ದ್ರೋಹ ಬಗೆದರು. ಅವರ ಸಂಚಿಗೆ ಬಲಿಯಾದ ಚೆನ್ನಮ್ಮ ಎರಡನೇ ಬಾರಿಯ ಬ್ರಿಟೀಷರ ಆಕ್ರಮಣದಲ್ಲಿ ಕಿತ್ತೂರಿನ ಸ್ವಾತಂತ್ರ್ಯದ ಕನಸು ಕಾಣುತ್ತಲೇ, ಬಂಧಿಖಾನೆಯಲ್ಲೇ ತನ್ನ ದೇಹತ್ಯಾಗ ಮಾಡಿ ಇತಿಹಾಸ ನಿರ್ಮಿಸಿದ್ದಾರೆ. ಚೆನ್ನಮ್ಮನ ದೇಶಪ್ರೇಮ ಅಮೋಘ ಹಾಗೂ ಅಪೂರ್ವವಾದದ್ದು. ಆಕೆಯ ಹೆಸರಿನಲ್ಲಿ ಕನ್ನಡದಲ್ಲಿ ಬಿ.ಆರ್.ಪಂತುಲು ನಿರ್ದೇಶನದಲ್ಲಿ 'ಕಿತ್ತೂರು ಚೆನ್ನಮ್ಮ' ಎಂಬ ಚಲನಚಿತ್ರ ನಿರ್ಮಾಣಗೊಂಡಿದೆ.

ಚೆನ್ನಮ್ಮನ ಪಾತ್ರಧಾರಿಯಾಗಿ ಹಿರಿಯ ನಟಿ ಪದ್ಮಶ್ರೀ ಬಿ.ಸರೋಜದೇವಿ ಅತ್ಯಂತ ಅಮೋಘವಾದ ರೀತಿಯಲ್ಲಿ ನಟಿಸಿ ಚೆನ್ನಮ್ಮನ ಪಾತ್ರಕ್ಕೆ ಜೀವ ತುಂಬಿದ್ದಾರೆ. ಜನರು ಅವರನ್ನು ಈಗಲೂ ಚೆನ್ನಮ್ಮ ಎಂದು ಪ್ರೀತಿಯಿಂದ ಕರೆಯುತ್ತಾರೆ. ಬೆಳಗಾವಿ ಜಿಲ್ಲೆಗೆ ಸೇರಿದ ಕಿತ್ತೂರು ಎಂಬ ಪುಟ್ಟ ಊರಿನ ಹೆಸರನ್ನು ಇಡೀ ವಿಶ್ವಭೂಪಟದಲ್ಲಿ ರಾರಾಜಿಸಲು ಕಾರಣೀಕರ್ತಳಾದ ವೀರ ಮಹಿಳೆ ಕಿತ್ತೂರು ರಾಣಿ ಚೆನ್ನಮ್ಮನಿಗೆ ನಮೋ ನಮಃ.


–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

■ ಸಾರಿಗೆ ಅಧಿಕಾರಿಗಳಿಗೆ ಅಭಿನಂದನೆ

ಮಾನ್ಯರೆ,

ಮೈಸೂರು ವಿಭಾಗದ ಸಾರಿಗೆ ಅಧಿಕಾರಿಗಳು ಮೈಸೂರು ಹೊರವರ್ತುಲ ರಸ್ತೆಯಲ್ಲಿ ಮೈಸೂರು ನಗರ ಸಾರಿಗೆ ಬಸ್‌ಗಳ ಸಂಚಾರವನ್ನು ಆರಂಭಿಸಿರುವುದು ಸರಿಯಾದ ನಿರ್ಧಾರವಾಗಿದೆ. ಇದರಿಂದ ನಾರಾಯಣ ಹೃದಯಾಲಯ, ಮೇಟಗಳ್ಳಿ ಜಿಲ್ಲಾ ಆಸ್ಪತ್ರೆ, ಜಯದೇವ ಆಸ್ಪತ್ರೆ, ಮಣಿಪಾಲ್ ಆಸ್ಪತ್ರೆಗೆ ತೆರಳುವ ರೋಗಿಗಳಿಗೆ, ಗಾರ್ಮೆಂಟ್ಸ್‌ಗೆ ತೆರಳುವ ಮಹಿಳೆಯರಿಗೆ, ವಿದ್ಯಾರ್ಥಿಗಳಿಗೆ ಬಹಳ ಉಪಯುಕ್ತವಾಗಿದೆ. ಯಾವುದೇ ಕಾರಣಕ್ಕೂ ಈ ಬಸ್‌ಗಳ ಸಂಚಾರ ರದ್ದುಗೊಳಿಸಬಾರದು ಎಂದು ಈ ಮೂಲಕ ಮನವಿ.

–ಪ್ರಯಾಣಿಕರು, ಕಾರ್ಮಿಕರು, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಯೋಗಾಂಗಗಳಾದ ಯಮ ಮತ್ತು ನಿಯಮ

ಹಿಂದಿನ ಲೇಖನದಲ್ಲಿ ಯೋಗದ ಮೊದಲನೆಯ ಅಂಗವಾದ ಯಮದ ಪರಿಚಯವನ್ನು ಮಾಡಿಕೊಂಡೆವು. ಈಗ ನಿಯಮದ ಕಡೆಗೆ ಗಮನಹರಿಸೋಣ. ಯಮವು ಬಾಹ್ಯ ಪ್ರಪಂಚದಲ್ಲಿ ಯೋಗಿಯು ಅನುಸರಿಸಬೇಕಾದ ಶಿಸ್ತನ್ನು ತಿಳಿಸಿದರೆ ನಿಯಮವು ಯೋಗಿಯ ಒಳಗಿನ ಪ್ರಪಂಚದಲ್ಲಿ ಪಾಲಿಸಬೇಕಾದ ಶಿಸ್ತನ್ನು ತಿಳಿಸುತ್ತದೆ. ಪತಂಜಲಿ ಮಹರ್ಷಿಗಳು ಐದು ನಿಯಮಗಳನ್ನು ಸೂತ್ರದಲ್ಲಿ ಪ್ರತಿಪಾದಿಸಿದ್ದಾರೆ.

'ಶೌಚ–ಸಂತೋಷ–ತಪಸ್–ಸ್ವಾಧ್ಯಾಯ–
ಈಶ್ವರ ಪ್ರಣಿಧಾನಾನಿ ನಿಯಮಾಃ'

ಮೊದಲನೆಯ ನಿಯಮ ಶೌಚ, ಎಂದರೆ ಶುಚಿತ್ವ. ಇದು ಶುದ್ಧಿಯನ್ನು ಹೇಳುತ್ತದೆ. ಯೋಗಿಯು ತನ್ನ ಶರೀರ, ವಸ್ತ್ರ, ಮನೆ ಇವುಗಳನ್ನು ಮಾತ್ರವಲ್ಲ, ಮನಸ್ಸನ್ನೂ, ಬುದ್ಧಿಯನ್ನೂ ಶುಚಿಯಾಗಿಟ್ಟುಕೊಳ್ಳಬೇಕು. ಮನೆಯಲ್ಲಿ ಹೇಗೆ ಧೂಳು ತುಂಬಿಕೊಳ್ಳುವುದೋ ಹಾಗೆ ಮನಸ್ಸಿನಲ್ಲೂ ಕೊಳೆ ನಮಗೇ ತಿಳಿಯದಂತೆ ತುಂಬಿಕೊಳ್ಳುತ್ತದೆ. ಕಾಮ, ಕ್ರೋಧ, ಲೋಭ, ಮೋಹ, ಮದ, ಮಾತ್ಸರ್ಯ ಮುಂತಾದ ದುರ್ಗುಣಗಳೇ ಈ ಧೂಳು, ಕೊಳೆ. ಕಂಡದ್ದೆಲ್ಲ ತನಗೆ ಬೇಕೆಂಬ ಆಶೆ ಕಾಮ. ಕೋಪ ಬಂದಾಗ ಅದನ್ನು ತಡೆಯದೆ ಪ್ರತಿಕ್ರಿಯೆಯನ್ನು ಮಾಡಲು ಹೊರಡುವುದು ಕ್ರೋಧ. ಎಷ್ಟು ಧನವಿದ್ದರೂ ವ್ಯಯಿಸದೆ ಕಷ್ಟಪಡುತ್ತಾ ಆ ಧನವನ್ನು ಉಳಿಸಿಕೊಳ್ಳಲು ಯತ್ನಿಸುವುದು ಲೋಭ. ವಸ್ತುವಿನಲ್ಲಿ ಇಲ್ಲದ ಗುಣಗಳನ್ನು ಸ್ವಯಂ ಆರೋಪಿಸಿಕೊಂಡು ಅದಕ್ಕಾಗಿ ಇತರ ಎಲ್ಲವನ್ನೂ ಕಡೆಗಣಿಸಿ ಹೆಣಗಾಡು ವುದು ಮೋಹ. ತನ್ನ ಕಾರ್ಯಗಳು, ಗುಣಗಳು, ಸಾಧನೆಗಳು ದೊಡ್ಡವೆಂದು ಭಾವಿಸಿ ಗರ್ವಪಡುವುದು, ತನಗೆ ಸಮಾನರು ಇಲ್ಲವೆಂದು ಜಂಭದಿಂದ ವರ್ತಿಸುವುದು ಮದ, ಇತರರಿಗೆ ಒಳ್ಳೆಯದು ಆದಾಗ, ಕೀರ್ತಿ ಬಂದಾಗ ಸಹಿಸದೆ ಕರುಬುವುದು ಮಾತ್ಸರ್ಯ. ಇವೆಲ್ಲ ಮನಸ್ಸಿನಲ್ಲಿ ಸೇರಿಕೊಳ್ಳುವ ಕೊಳೆಗಳು. ಇವುಗಳನ್ನು ಗುಡಿಸಿ ಹಾಕಿ ಮನಸ್ಸನ್ನು ಶುಭ್ರವಾಗಿ ಇಟ್ಟುಕೊಳ್ಳುವುದು ಶೌಚ. ಶರೀರದ ಶುಚಿತ್ವ ಕ್ಕಿಂತ ಮನಸ್ಸಿನ ಶುಚಿತ್ವವು ಹೆಚ್ಚು ಮುಖ್ಯ. ಅದರಲ್ಲೂ ಹಣದ ವಿಷಯದಲ್ಲಿ ಶುಚಿಯಾಗಿರುವುದು ಅತ್ಯಂತ ಮುಖ್ಯ.

ಸರ್ವೇಷಾಮೇವ ಶೌಚಾನಾಮ್ ಅರ್ಥಶೌಚಂ ಪ್ರಶಸ್ಯತೇ।
ಯೋಽರ್ಥೇ ಶುಚಿಃ ಸ ಹಿ ಶುಚಿಃ ನ ಮೃದ್ವಾರಿಶುಚಿಃ ಶುಚಿಃ ॥

(ಎಲ್ಲ ಶುಚಿತ್ವಗಳಿಗಿಂತ ಹಣದಲ್ಲಿ ಶುಚಿತ್ವದಿಂದಿರುವುದೇ ಪ್ರಶಸ್ತವಾದ ಶುಚಿತ್ವ. ಹಣದಲ್ಲಿ ಯಾವನು ಶುಚಿಯಾಗಿರುವನೋ ಅವನೇ ಶುಚಿ. ಸಾಬೂನು, ನೀರು ಇತ್ಯಾದಿಗಳಿಂದ ಮಾತ್ರ ಶುಚಿಯಾಗಿದ್ದವನು ನಿಜವಾಗಿ ಶುಚಿಯಲ್ಲ) ಇದು ಮೊದಲನೆಯ ನಿಯಮ.

ಎರಡನೆಯ ನಿಯಮ ಸಂತೋಷ. ಸಂತೋಷ ಎಂದರೆ ತೃಪ್ತಿ. ತೃಪ್ತಿ ಇದ್ದವರಿಗೆ ನೆಮ್ಮದಿ ಇದೆ, ಶಾಂತಿಯೂ ಇದೆ. ದೇವರು ತನಗೆ ಕೊಟ್ಟುದು ಸಾಲದೆಂದು ಅನೇಕರು ಅತೃಪ್ತರಾಗಿ ದೇವರನ್ನೇ ನಿಂದಿಸಲು ತೊಡಗುತ್ತಾರೆ. ನನ್ನನ್ನು ಶ್ರೀಮಂತರ ಮನೆಯಲ್ಲಿ ಹುಟ್ಟುವಂತೆ ಆ ದೇವರು ಏಕೆ ಮಾಡಲಿಲ್ಲ ಎಂದು ಅನೇಕರ ಕೊರಗು. ನನ್ನನ್ನು ಮನ್ಮಥನಂತೆ ಸುಂದರನನ್ನು ಮಾಡಲಿಲ್ಲ ಎಂಬುದು ಕೆಲವರ ದೂರು. ನನ್ನನ್ನು ತೆಳ್ಳಗೆ ಸೃಷ್ಟಿಸಬೇಕಾಗಿತ್ತು ಎಂದು ಕೆಲವರು, ನನ್ನನ್ನು ಸ್ವಲ್ಪ ದಪ್ಪವಾಗುವ ಹಾಗೆ ಮಾಡಬೇಕಾಗಿತ್ತು ಎಂದು ಹಲವರು ಆಕ್ಷೇಪಿಸುತ್ತಿರುತ್ತಾರೆ.

ಭಗವಂತನು ಅಥವಾ ಪ್ರಕೃತಿಯು ನಮಗೆ ಕೊಟ್ಟಿರುವ ಅಮೂಲ್ಯ ಕೊಡುಗೆಗಳನ್ನು ಕುರಿತು ಅವರು ಯೋಚಿಸುವುದಿಲ್ಲ. ನಮ್ಮ ಕಣ್ಣುಗಳಿಗೆ, ಕೈಗಳಿಗೆ, ಕಾಲುಗಳಿಗೆ, ಕಿವಿಗಳಿಗೆ ಬೆಲೆಯನ್ನು ಕಟ್ಟಲು ಸಾಧ್ಯವೆ? ಇವುಗಳನ್ನಿತ್ತಿರುವ ಪ್ರಕೃತಿಗೆ ನಾವು ಕೃತಜ್ಞರಾಗಿರದೆ, ನಮಗೆ ಅದನ್ನು ಕೊಟ್ಟಿಲ್ಲ. ಇದನ್ನು ಕೊಟ್ಟಿಲ್ಲ ಎಂದು ದೂರುವುದು ಸರಿಯೇ? ಕೊಟ್ಟ ಕುದುರೆಯನ್ನು ಏರಿ ಹೋರಾಡದೆ ಬೇರೆ ಕುದುರೆಯನ್ನು ಕೊಡಬೇಕಾಗಿತ್ತು ಎನ್ನುವವರನ್ನು ಶಿವನು ಮೆಚ್ಚುವನೆ? ಇದೇ ರೀತಿಯಾಗಿ ಅಧ್ಯಾಪಕ ವೃತ್ತಿಯಲ್ಲಿರುವವರು ನಾನು ಇಂಜಿನಿಯರ್ ಆಗಿರಬೇಕಿತ್ತು ಎಂದೂ ಇಂಜಿನಿಯರ್ ಆಗಿರುವವನು ನಾನು ಡಾಕ್ಟರ್ ಆಗಿರಬೇಕಿತ್ತು ಎಂದೂ ಆಶೆಪಟ್ಟುಕೊಂಡು ಅತೃಪ್ತರಾಗಿ ಕುದಿದರೆ ಫಲವೇನು? ಆದ್ದರಿಂದ ಸಂತೋಷ ಎಂಬ ನಿಯಮವು ಯೋಗಿಗೆ ಅತ್ಯಾವಶ್ಯಕ. **ಸಂತೋಷ ಏವ ಪುರುಷಸ್ಯ ಪರಂ ನಿಧಾನಮ್** – ತೃಪ್ತಿಯೇ ಮನುಷ್ಯನ ಮಹಾನಿಧಿ ಎಂಬುದು ಸದಾ ಮನಸ್ಸಿನಲ್ಲಿರಬೇಕು.

ಮೂರನೆಯ ನಿಯಮ ತಪಸ್ಸು. ಯೋಗಿಯಾಗಲು ಬಯಸುವ ವ್ಯಕ್ತಿ ಸಮಾಜದ ಮಧ್ಯದಲ್ಲಿದ್ದರೂ ತಪಸ್ಸನ್ನು ಆಚರಿಸಬೇಕು. ಅದಕ್ಕಾಗಿ ವಿಂಧ್ಯಾರಣ್ಯಕ್ಕೋ ಹಿಮಾಲಯದ ಗುಹೆಗೋ ಹೋಗಬೇಕಾಗಿಲ್ಲ. ಉದ್ದವಾದ ಗಡ್ಡವನ್ನು ಬೆಳೆಸಿ ಜಟೆಗಳಿಂದ ಅಲಂಕೃತರಾಗಬೇಕಾಗಿಲ್ಲ. ಮಾತಿನಲ್ಲಿ, ಮನಸ್ಸಿನಲ್ಲಿ, ಕಾಯದಲ್ಲಿ ಸರಿಯಾಗಿದ್ದರೆ ಅದೇ ತಪಸ್ಸು. ಶ್ರೀ ಕೃಷ್ಣನು ಭಗವದ್ಗೀತೆಯಲ್ಲಿ ಹೇಳಿದ್ದಾನೆ–

ದೇವದ್ವಿಜ ಗುರುಪ್ರಾಜ್ಞ ಪೂಜನಂ ಶೌಚಮಾರ್ಜವಮ್ !
ಬ್ರಹ್ಮಚರ್ಯ ಮಹಿಂಸಾ ಚ ಶಾರೀರಂ ತಪ ಉಚ್ಯತೇ॥ (17.14)

ದೇವರನ್ನೂ, ದ್ವಿಜರನ್ನೂ, ಗುರುಗಳನ್ನೂ, ಪ್ರಾಜ್ಞರನ್ನೂ ಗೌರವಿಸುವುದು, ಶುಚಿತ್ವವನ್ನು ಕಾಪಾಡಿಕೊಳ್ಳುವುದು, ಕುಟಿಲತೆಯಿಲ್ಲದೆ ನೇರ ವ್ಯವಹಾರ ಮಾಡುವುದು, ಬ್ರಹ್ಮಚರ್ಯವನ್ನು ಪಾಲಿಸುವುದು, ಅಹಿಂಸೆಯ ಆಚರಣೆ– ಇವು ಶರೀರಕ್ಕೆ ಸಂಬಂಧಿಸಿದ ತಪಸ್ಸು

ಅನುದ್ವೇಗಕರಂ ವಾಕ್ಯಂ ಸತ್ಯಂ ಪ್ರಿಯಹಿತಂ ಚ ಯತ್।
ಸ್ವಾಧ್ಯಾಯಾಭ್ಯಸನಂ ಚೈವ ವಾಙ್ಮಯಂ ತಪ ಉಚ್ಯತೇ॥ (17.15)

ಯಾರಲ್ಲೂ ಉದ್ವೇಗವನ್ನು ಹುಟ್ಟಿಸದ ಮಾತು, ಕೇಳುವವರಿಗೆ ಹಿತವೂ ಸತ್ಯವೂ ಆದ ನುಡಿ, ಒಳ್ಳೆಯ ಗ್ರಂಥಗಳ ಅಧ್ಯಯನ– ಇವೆಲ್ಲ ವಾಙ್ಮಯ (ಮಾತಿಗೆ ಸಂಬಂಧಿಸಿದ) ತಪಸ್ಸು.

ಮನಃ ಪ್ರಸಾದಃ ಸೌಮ್ಯತ್ವಂ ಮೌನಮಾತ್ಮವಿನಿಗ್ರಹಃ।
ಭಾವಸಂಶುದ್ಧಿರಿತ್ಯೇತತ್ ತಪೋ ಮಾನಸಮುಚ್ಯತೇ॥ (17.16)

ಮನಸ್ಸನ್ನು ಪ್ರಸನ್ನವಾಗಿ ಇಟ್ಟುಕೊಳ್ಳುವುದು, ಸೌಮ್ಯ ಭಾವನೆಗಳನ್ನು ಬೆಳೆಸಿಕೊಳ್ಳುವುದು, ಹೆಚ್ಚು ಮಾತನಾಡದೆ ಮೌನದಿಂದ ಇರುವುದು, ಬುದ್ಧಿ, ಮನಸ್ಸು, ಇಂದ್ರಿಯ–ಇವನ್ನೆಲ್ಲ ನಿಯಂತ್ರಣದಲ್ಲಿ ಇರಿಸಿಕೊಳ್ಳುವುದು, ಎಲ್ಲರಿಗೂ ಲೇಸನ್ನು ಬಯಸುವ ಭಾವನೆಗಳನ್ನು ಹೊಂದಿರುವುದು, ಯಾರಿಗೂ ಕೆಡುಕನ್ನು ಬಯಸದಿರುವುದು ಮಾನಸ (ಮನಸ್ಸಿಗೆ ಸಂಬಂಧಿಸಿದ) ತಪಸ್ಸು ಎನಿಸಿಕೊಳ್ಳುತ್ತದೆ. ಈ ಮೂರು ವಿಧವಾದ ತಪಸ್ಸನ್ನು ಸಮಾಜದಲ್ಲಿದ್ದುಕೊಂಡೇ ಮಾಡಬಹುದಲ್ಲವೆ? ಇದಕ್ಕಾಗಿ ಹಿಮಾಲಯಕ್ಕೋ ವಿಂಧ್ಯಾರಣ್ಯಕ್ಕೋ ಹೋಗಬೇಕಾದ ಆವಶ್ಯಕತೆಯಿಲ್ಲ.

ಮೇಲೆ ಹೇಳಿದ ಮೂರು ವಿಧವಾದ ತಪಸ್ಸನ್ನು ಶ್ರದ್ಧೆಯಿಂದ ಸ್ವಾರ್ಥವಿಲ್ಲದೆ ಮಾಡಿದರೆ ಅದು ಸಾತ್ತ್ವಿಕ ತಪಸ್ಸಾಗುತ್ತದೆ.

ಶ್ರದ್ಧಯಾ ಪರಯಾ ತಪ್ತಂ ತಪಸ್ತತ್ ತ್ರಿವಿಧಂ ನರೈಃ।
ಅಫಲಾಕಾಂಕ್ಷಿಭಿರ್ಯುಕ್ತೈಃ ಸಾತ್ತ್ವಿಕಂ ಪರಿಚಕ್ಷತೇ॥ (17.17)

(ಅತ್ಯಂತ ಶ್ರದ್ಧೆಯಿಂದ ಫಲಾಪೇಕ್ಷೆಯಿಲ್ಲದೆ ಯೋಗಿಗಳಿಂದ ಮಾಡಲ್ಪಡುವ ತಪಸ್ಸನ್ನು ಸಾತ್ತ್ವಿಕ ತಪಸ್ಸೆಂದು ಜ್ಞಾನಿಗಳು ಕರೆಯುತ್ತಾರೆ)

ಸ್ವಾರ್ಥದಿಂದ ಮಾಡುವ ತಪಸ್ಸು ರಾಜಸ.

ಸತ್ಕಾರಮಾನಪೂಜಾರ್ಥಂ ತಪೋ ದಂಭೇನ ಚೈವ ಯತ್ ।
ಕ್ರಿಯತೇ ತದಿಹ ಪ್ರೋಕ್ತಂ ರಾಜಸಂ ಚಲಮಧ್ರುವಮ್ । (17.18)

(ಯಾರಾದರೂ ಸತ್ಕಾರವನ್ನು ಮಾಡಲಿ, ಸಮ್ಮಾನವನ್ನು ಏರ್ಪಡಿಸಲಿ. ಎಲ್ಲರೂ ಬಂದು ನನ್ನನ್ನು ಪೂಜಿಸಲಿ ಎಂಬ ಅಪೇಕ್ಷೆಯಿಂದ ತಪಸ್ಸನ್ನು ಮಾಡಿದರೆ, ಡಂಭಾಚಾರಕ್ಕಾಗಿ ಜನರು ನೋಡಲಿ ಎಂಬ ಬಯಕೆಯಿಂದ ತಪಸ್ಸನ್ನು ಆಚರಿಸಿದರೆ, ಅದು ರಾಜಸ ತಪಸ್ಸು. ಅಂತಹ ತಪಸ್ಸು ದೀರ್ಘಕಾಲ ನಡೆಯದು).

ಮೌಢ್ಯದಿಂದ ಮಾಡಿದರೆ ಅದು ತಾಮಸ ತಪಸ್ಸು.

ಮೂಢಗ್ರಾಹೇಣಾತ್ಮನೋ ಯತ್ ಪೀಡಯಾಕ್ರಿಯತೇ ತಪಃ।
ಪರಸ್ಯೋತ್ಸಾದನಾರ್ಥಂ ವಾ ತತ್ತಾಮಸಮುದಾಹೃತಮ್॥ (17.19)

(ಅಜ್ಞಾನದಿಂದ, ತನ್ನ ಶರೀರಕ್ಕೆ ಪೀಡೆಯನ್ನು ಕೊಟ್ಟು ಮಾಡುವ ತಪಸ್ಸು, ಬೇರೆಯವರಿಗೆ ತೊಂದರೆಯನ್ನು ಕೊಡುವುದಕ್ಕಾಗಿ ಮಾಡುವ ತಪಸ್ಸು ಕೇವಲ ತಾಮಸ ತಪಸ್ಸು)

ಯೋಗಿಯಾಗಬೇಕೆಂಬ ಉದ್ದೇಶವನ್ನುಳ್ಳವರು ಸಾತ್ತ್ವಿಕ ತಪಸ್ಸನ್ನೇ ಮಾಡಬೇಕು. ರಾಜಸ–ತಾಮಸ ತಪಸ್ಸನ್ನು ಮಾಡಿದರೆ ಯೋಗಸಿದ್ಧಿ ಆಗದು.

ನಾಲ್ಕನೆಯ ನಿಯಮವನ್ನು 'ಸ್ವಾಧ್ಯಾಯ' ಎಂದು ಪತಂಜಲಿ ಮಹರ್ಷಿಗಳು ಕರೆದಿದ್ದಾರೆ. ತನ್ನ ಜ್ಞಾನದ ವೃದ್ಧಿಗಾಗಿ ಯೋಗಿಯು ಸದಾ ಮಾಡುವ ಅಧ್ಯಯನವೇ ಸ್ವಾಧ್ಯಾಯ. ಜ್ಞಾನವೆಂಬ ಸಮುದ್ರದಲ್ಲಿ ನಾವು ಪಡೆದುಕೊಳ್ಳುವ ಜ್ಞಾನ ಬೊಗಸೆಯಷ್ಟು ಮಾತ್ರ. ಆದ್ದರಿಂದ ನಿತ್ಯವೂ ಬೆಳೆಯುತ್ತಿರುವ ಜ್ಞಾನದ ಒಂದು ಅಂಶವಾದರೂ ನಮ್ಮದಾಗಲಿ ಎಂಬ ದೃಷ್ಟಿಯಿಂದ ಯೋಗಿಯು ಸದಾ ಅಧ್ಯಯನಶೀಲನಾಗಿರಬೇಕು. ಇದು ಸ್ವಾಧ್ಯಾಯ.

ಸ್ವಾಧ್ಯಾಯ ಶಬ್ದಕ್ಕೆ ಜಪ ಎಂಬ ಅರ್ಥವನ್ನು ವ್ಯಾಸಭಾಷ್ಯದಲ್ಲಿ ಹೇಳಿದ್ದಾರೆ. ಓಂಕಾರಾದಿ ಮಂತ್ರಗಳ ಜಪವೂ ಸ್ವಾಧ್ಯಾಯ. ಯೋಗಿಯು ಈ ಜಪದಲ್ಲಿ ನಿರತನಾಗಿರಬೇಕು.

ಐದನೆಯ ನಿಯಮ ಈಶ್ವರ ಪ್ರಣಿಧಾನ. ಜಗದೀಶ್ವರನಿಗೆ ಯೋಗಿಯು ಸಂಪೂರ್ಣ ಶರಣಾಗತನಾಗಬೇಕು. ಸರ್ವಜ್ಞನೂ, ಎಲ್ಲ ಗುರುಗಳ ಗುರುವೂ ಆದ ಈಶ್ವರನ ಅನುಗ್ರಹವಿಲ್ಲದೆ ಯೋಗವು ಸಿದ್ಧಿಸುವುದಿಲ್ಲ. ಈ ಶರಣಾಗತಿಯನ್ನೇ ವಿಶಿಷ್ಟಾದ್ವೈತವೇದಾಂತದಲ್ಲಿ 'ಪ್ರಪತ್ತಿ' ಎಂದು ಹೇಳಿದ್ದಾರೆ.

ಯೋಗಾಂಗಗಳ ಅನುಷ್ಠಾನದಿಂದ ಅಶುದ್ಧಿಯು ಕ್ಷೀಣಿಸುತ್ತದೆ. ಆಗ ಜ್ಞಾನದೀಪ್ತಿಯು ಉಂಟಾಗಿ ಪ್ರಕೃತಿ–ಪುರುಷ ವಿವೇಕವು ಉಂಟಾಗುತ್ತದೆ. ಆ ವಿವೇಕವೇ ಕೈವಲ್ಯಕ್ಕೆ ದ್ವಾರ, ಎಂದರೆ ಮೋಕ್ಷದ ಬಾಗಿಲು. ಮಾನವ ಜನ್ಮದ ಪರಮಲಕ್ಷ್ಯ ಕೈವಲ್ಯಪ್ರಾಪ್ತಿ. ಅದಕ್ಕಿರುವ ಮಾರ್ಗ ಅಷ್ಟಾಂಗಯೋಗ. ಆ ಎಂಟು ಅಂಗಗಳಲ್ಲಿ ಮೊದಲನೆಯದಾದ ಯಮನಿಯಮಗಳ ಅನುಷ್ಠಾನದಿಂದ ಯೋಗಾಭ್ಯಾಸವು ಆರಂಭಗೊಳ್ಳಲಿ.





ಸೋನಿಯಾ ಗಾಂಧಿ, ಪ್ರಿಯಾಂಕಾ ಗಾಂಧಿಗೆ ಮೈಸೂರು ಕಾಂಗ್ರೆಸ್ ಮುಖಂಡರ ಸ್ವಾಗತ... ವಯನಾಡು ಲೋಕಸಭಾ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಶ್ರೀಮತಿ ಪ್ರಿಯಾಂಕಾ ಗಾಂಧಿ ಬುಧವಾರ ನಾಮಪತ್ರ ಸಲ್ಲಿಸುವ ಹಿನ್ನೆಲೆಯಲ್ಲಿ ವಯನಾಡಿಗೆ ತೆರಳುವ ಮಾರ್ಗ ಮಧ್ಯೆ ಮೈಸೂರಿನ ವಿಮಾನ ನಿಲ್ದಾಣಕ್ಕೆ ಬಂದಿಳಿದಾಗ ಅವರನ್ನು ಶಾಸಕ ಕೆ.ಹರೀಶ್‌ಗೌಡ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಆತ್ಮೀಯವಾಗಿ ಸ್ವಾಗತಿಸಿದರು. ಈ ವೇಳೆ ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಕೆ.ವೆಂಕಟೇಶ್, ಡಾ. ಹೆಚ್.ಸಿ.ಮಹದೇವಪ್ಪ, ಶಾಸಕರಾದ ಡಿ.ರವಿಶಂಕರ್, ಎ.ಆರ್.ಕೃಷ್ಣಮೂರ್ತಿ, ಎಂಎಲ್‌ಸಿ ಡಾ. ಡಿ.ತಿಮ್ಮಯ್ಯ, ಡಾ. ಬಿ.ಜೆ.ವಿಜಯಕುಮಾರ್ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರಲ್ಲಿ ನಾವು ಉಸಿರಾಡುವ ಗಾಳಿ ಶುದ್ಧವಿಲ್ಲ...!

•ಮಾಲಿನ್ಯದ ಬಗ್ಗೆ ಸರ್ಕಾರಕ್ಕೆ ಎನ್‌ಜಿಟಿ ನೋಟಿಸ್ •ಗ್ರೀನ್ ಪೀಸ್ ಇಂಡಿಯಾ ವರದಿ ಅನ್ವಯ ಸ್ವಯಂಪ್ರೇರಿತ ದೂರು ದಾಖಲು



ಮೈಸೂರು,ಅ.22(ಬಿಎಲ್‌ಯು)– ಹಸಿರಿನಿಂದ ಕಂಗೊಳಿಸುವ ಚಾಮುಂಡಿ ಬೆಟ್ಟ, ಸಾಕಷ್ಟು ಸಸ್ಯ ಸಮೃದ್ಧತೆ, ಜೊತೆಗೆ ಹತ್ತಾರು ಕೆರೆಗಳಿಂದ ಆವೃತ್ತವಾಗಿದ್ದರೂ ಮೈಸೂರಿನ ಗಾಳಿಯ ಗುಣಮಟ್ಟ ಉತ್ತಮವಾಗಿಲ್ಲ. ನಾವು ಶುದ್ಧ ಗಾಳಿ ಉಸಿರಾಡುತ್ತಿದ್ದೇವೆ ಎಂಬುದು ಮೈಸೂರು ಜನರ ಭಾವನೆ ಮಾತ್ರವಲ್ಲ ನೆಮ್ಮದಿಯೂ ಆಗಿದೆ. ಆದರೆ ಮೈಸೂರಿನ ಗಾಳಿ ಗುಣಮಟ್ಟ ತೀರಾ ಹದಗೆಟ್ಟಿದ್ದು, ವಾಯುಮಾಲಿನ್ಯ ಹೆಚ್ಚಾಗಿದೆ ಎಂಬ ಆತಂಕಕಾರಿ ವಿಚಾರವನ್ನು ಪರಿಸರ ಸಂಬಂಧಿ ಸ್ವಯಂ ಸೇವಾ ಸಂಸ್ಥೆ ಗ್ರೀನ್ ಪೀಸ್ ಇಂಡಿಯಾ ಅಧ್ಯಯನ ವರದಿ ಹೇಳಿದ್ದು, ಈ ಸಂಬಂಧ ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿ ಸ್ವಯಂಪ್ರೇರಿತ ದೂರು ದಾಖಲಿಸಿದೆ.

ಗ್ರೀನ್ ಪೀಸ್ ಇಂಡಿಯಾ ಸಂಸ್ಥೆ ಮೈಸೂರು ಸೇರಿದಂತೆ ದೇಶದ ಹಲವು ನಗರಗಳ ವಾಯುಮಾಲಿನ್ಯದ ಬಗ್ಗೆ ಆಧುನಿಕ ಉಪಕರಣ ಬಳಸಿ ವೈಜ್ಞಾನಿಕವಾಗಿ ಅಧ್ಯಯನ ನಡೆಸಿತ್ತು. ಈ ಅಧ್ಯಯನದಲ್ಲಿ ಮೈಸೂರಿನ ಗಾಳಿ ಗುಣಮಟ್ಟ ತೀರಾ ಹದಗೆಟ್ಟಿದೆ ಎಂದು ಸಂಸ್ಥೆಯ ಸ್ಪೇರ್ ದಿ ಏರ್ ಎರಡು ಅಧ್ಯಯನ ವರದಿಯಲ್ಲಿ ಆತಂಕ ವ್ಯಕ್ತವಾಗಿದೆ.

ಗ್ಯಾಸ್ ಛೇಂಬರ್‌ನಂತಾಗಿರುವ ರಾಷ್ಟ್ರ ರಾಜಧಾನಿ ದೆಹಲಿಯ ವಾಯುಮಾಲಿನ್ಯ ಸರಿಪಡಿಸಲು ಹರಸಾಹಸಪಡಬೇಕಾದ ಮಟ್ಟಕ್ಕೆ ಹದಗೆಟ್ಟಿದೆ. ದೆಹಲಿ ಸೇರಿದಂತೆ ವಾಯುಮಾಲಿನ್ಯ ಹದಗೆಟ್ಟಿರುವ ನಗರಗಳನ್ನು ನೋಡಿದಾಗ ಮೈಸೂರು ಜನರು ನಾವೇ ಪುಣ್ಯವಂತರು, ನಮ್ಮಲ್ಲಿ ಶುದ್ಧ ಗಾಳಿ ಇದೆ ಎಂದು ತಿಳಿದಿದ್ದರು.

ಆದರೆ ವಾಯುಮಾಲಿನ್ಯಪೀಡಿತ ದೇಶದ ನಗರಗಳ ಪಟ್ಟಿಯಲ್ಲಿ ಮೈಸೂರು ಸೇರಿರುವುದು ಆತಂಕಕಾರಿ ಸಂಗತಿಯಾಗಿದೆ. ಕರ್ನಾಟಕದ ಮೈಸೂರು, ಬೆಂಗಳೂರು ಹಾಗೂ ಮಂಗಳೂರಿನಲ್ಲಿ ವಾಯುಮಾಲಿನ್ಯ ಹೆಚ್ಚಾಗುತ್ತಿದ್ದು, ಗಾಳಿ ಗುಣಮಟ್ಟ ತೀರಾ ಹದಗೆಟ್ಟಿದೆ ಎಂದು ಗ್ರೀನ್ ಪೀಸ್ ಇಂಡಿಯಾ ಸಂಸ್ಥೆ ವರದಿ ಮಾಡಿದೆ.

ಗ್ರೀನ್ ಪೀಸ್ ಇಂಡಿಯಾ ಸಂಸ್ಥೆಯು ಕೊಚ್ಚಿ, ಚೆನ್ನೈ, ಹೈದರಾಬಾದ್, ಅಮರಾವತಿ, ವಿಜಯವಾಡ, ವಿಶಾಖಪಟ್ಟಣ, ಮೈಸೂರು, ಬೆಂಗಳೂರು, ಮಂಗಳೂರು ಹಾಗೂ ಪುದುಚೇರಿ ನಗರದಲ್ಲಿನ ವಾಯುಮಾಲಿನ್ಯ ಪ್ರಮಾಣದ ಬಗ್ಗೆ ಅಧ್ಯಯನ ನಡೆಸಿತ್ತು. ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯೂಹೆಚ್‌ಒ) ನಿಗದಿ ಮಾಡಿದ ಗುಣಮಟ್ಟದ ಮಾರ್ಗಸೂಚಿಯಾದ ಪಿಎಂ 2.5 ಮತ್ತು ಪಿಎಂ 10 ಗುಣಮಟ್ಟಗಳನ್ನು ಮೈಸೂರಿನ ಗಾಳಿ ಗುಣಮಟ್ಟ ಮೀರಿದೆ.

ವಿಶ್ವ ಆರೋಗ್ಯ ಸಂಸ್ಥೆ ಮಾರ್ಗಸೂಚಿಗಳೊಂದಿಗೆ ಹೋಲಿಸಿದಾಗ ವಾರ್ಷಿಕ ಸರಾಸರಿ ಪಿಎಂ 2.5 (ಉಸಿರಾಡುವ ಕಣಗಳು) ಮೈಸೂರಿನಲ್ಲಿ ಐದು ಪಟ್ಟು ಹೆಚ್ಚಿದೆ.

ಡಬ್ಲ್ಯೂಹೆಚ್‌ಒ ನಿಗದಿ ಮಾಡಿದ ಮಾನದಂಡಕ್ಕಿಂತ ಪಿಎಂ 2.5 ಗಾಳಿ ಗುಣಮಟ್ಟ ಮೈಸೂರು ಮಾತ್ರವಲ್ಲದೆ ಹೈದರಾಬಾದ್, ಚೆನ್ನೈ, ಕೊಚ್ಚಿ, ಅಮರಾವತಿ, ವಿಜಯವಾಡ, ವಿಶಾಖಪಟ್ಟಣ, ಪುದುಚೇರಿ, ಮಂಗಳೂರು, ಬೆಂಗಳೂರಿನಲ್ಲಿ ಹೆಚ್ಚಾಗಿದೆ ಎಂದು ಗ್ರೀನ್ ಪೀಸ್ ಇಂಡಿಯಾದ ಅಧ್ಯಯನ ವರದಿಯಲ್ಲಿ ತಿಳಿಸಿದೆ.

ಪಿಎಂ 2.5 ಉಸಿರಾಡುವ ಕಣಗಳಾಗಿದ್ದು, ವಾಯುಮಾಲಿನ್ಯದ ಸಂದರ್ಭದಲ್ಲಿ ಈ ಕಣಗಳ ಗಾತ್ರ ಹೆಚ್ಚಾಗುತ್ತದೆ.

ಉಸಿರಾಡುವ ಕಣಗಳು ಗಾತ್ರ ಹೆಚ್ಚಾದರೆ ಜನರ ಆರೋಗ್ಯದ ಮೇಲೆ ಸಹಜವಾಗಿಯೇ ದುಷ್ಪರಿಣಾಮ ಬೀರುತ್ತದೆ. ಉಸಿರಾಡಲು ತೊಂದರೆ ಉಂಟಾಗಿ ಹಲವು ರೀತಿಯ ಖಾಯಿಲೆ ಕಾರಣವಾಗುತ್ತದೆ.

ಮೈಸೂರು, ಬೆಂಗಳೂರು ಹಾಗೂ ಮಂಗಳೂರು ನಗರಗಳ ಗಾಳಿ ಗುಣಮಟ್ಟ ಹದಗೆಟ್ಟಿರುವ ಬಗ್ಗೆ ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿ ತೀವ್ರ ಕಳವಳ ವ್ಯಕ್ತಪಡಿಸಿದೆ.

ಗ್ರೀನ್ ಪೀಸ್ ಸಂಸ್ಥೆ ವರದಿ ಆಧರಿಸಿ ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿಯ ಮುಖ್ಯಸ್ಥ ನ್ಯಾಯಮೂರ್ತಿ ಪ್ರಕಾಶ್ ಶ್ರೀವಾತ್ಸವ, ನ್ಯಾಯಮೂರ್ತಿ ಅರುಣ್ ಕುಮಾರ್ ತ್ಯಾಗಿ ಮತ್ತು ನ್ಯಾಯಮೂರ್ತಿ ಡಾ.ಸೆಂಥಿಲ್ ವೆಲ್ ಅವರನ್ನೊಳಗೊಂಡ ತ್ರಿಸದಸ್ಯ ಪೀಠ ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡಿದೆ.

ಈ ಸಂಬಂಧ ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿಯು ಕೇಂದ್ರ ಅರಣ್ಯ, ಪರಿಸರ ಹಾಗೂ ತಾಪಮಾನ ಬದಲಾವಣೆ ಸಚಿವಾಲಯ, ಕರ್ನಾಟಕ, ತಮಿಳುನಾಡು, ತೆಲಂಗಾಣ, ಆಂಧ್ರ ಪ್ರದೇಶ ಮತ್ತು ಕೇರಳ ರಾಜ್ಯಗಳ ಮಾಲಿನ್ಯ ನಿಯಂತ್ರಣ ಮಂಡಳಿಗಳನ್ನು ಪ್ರತಿವಾದಿಗಳಾಗಿ ಪರಿಗಣಿಸಿ, ನೋಟಿಸ್ ಜಾರಿ ಮಾಡಿದೆ. ಗಾಳಿ ಗುಣಮಟ್ಟ ಹದಗೆಟ್ಟಿರುವುದು ವಾಯುಮಾಲಿನ್ಯ ನಿಯಂತ್ರಣ ಕಾಯ್ದೆ 1981 ಹಾಗೂ ಪರಿಸರ ಸಂರಕ್ಷಣಾ ಕಾಯ್ದೆ 1986 ರ ನಿಯಮಗಳ ಸ್ಪಷ್ಟ ಉಲ್ಲಂಘನೆ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ಈ ಮೂಲಕ ಕೂಡಲೇ ಗಾಳಿಯ ಗುಣಮಟ್ಟ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಮುಂದಾಗಬೇಕು ಎಂದು ಸರ್ಕಾರಕ್ಕೆ ಕಟ್ಟಾಜ್ಞೆ ಮಾಡಿದೆ.

ರೆಸ್ಪರಬಲ್ ಡಸ್ಟ್ ಸ್ಯಾಂಪ್ಲರ್ ಉಪಕರಣ ಬಳಕೆ

ಗಾಳಿಯ ಗುಣಮಟ್ಟವನ್ನು ಅಳೆಯಲು ಆರ್‌ಡಿಎಸ್ (ರೆಸ್ಪರಬಲ್ ಡಸ್ಟ್ ಸ್ಯಾಂಪ್ಲರ್) ಉಪಕರಣವನ್ನು ಬಳಸಲಾಗುತ್ತದೆ. ಮೈಸೂರಿನ ಕೆಆರ್ ಎಸ್ ರಸ್ತೆಯ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯಲ್ಲಿ ಈ ಉಪಕರಣ ಅಳವಡಿಸಿ ಪ್ರತಿ ದಿನ ಗಾಳಿಯ ಗುಣಮಟ್ಟ ಅಳೆಯಲಾಗುತ್ತದೆ. ಆದರೆ ಮೈಸೂರಿನಲ್ಲಿ ಗಾಳಿ ಗುಣಮಟ್ಟ ಉತ್ತಮವಾಗಿದ್ದು, ಮೈಸೂರಲ್ಲಿ ಪರಿಸರ ಮಾಲಿನ್ಯ ಇಲ್ಲ ಎಂದು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಯೊಬ್ಬರು ಸ್ಪಷ್ಟಪಡಿಸಿದ್ದಾರೆ.

ಹಾಗೆಂದ ಮಾತ್ರಕ್ಕೆ ಗ್ರೀನ್ ಪೀಸ್ ಇಂಡಿಯಾ ವರದಿಯನ್ನು ಅಲ್ಲಗಳೆಯುವಂತಿಲ್ಲ. ಗ್ರೀನ್ ಪೀಸ್ ಸಂಸ್ಥೆ 1971ರಲ್ಲಿ ಸ್ಥಾಪನೆಯಾಗಿದ್ದು, ಸ್ವತಂತ್ರವಾದ ಜಾಗತಿಕ ಸ್ವಯಂ ಸೇವಾ ಸಂಸ್ಥೆಯಾಗಿದೆ. ಆಧುನಿಕ ಉಪಕರಣಗಳನ್ನು ಬಳಸಿ ವೈಜ್ಞಾನಿಕ ರೀತಿಯಲ್ಲಿ ಸಂಶೋಧನೆ ಮಾಡುವ ಮೂಲಕ ಮೈಸೂರಿನ ಪರಿಸರ ಮಾಲಿನ್ಯ ಹದಗೆಟ್ಟಿದೆ ಎಂದು ಗ್ರೀನ್ ಪೀಸ್ ಇಂಡಿಯಾ ವರದಿ ಹೇಳಿದೆ. ಈ ಹಿನ್ನೆಲೆಯಲ್ಲಿ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಕೂಡ ಗ್ರೀನ್ ಪೀಸ್ ಇಂಡಿಯಾದ ವರದಿ ಆಧರಿಸಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ನೋಟಿಸ್ ಜಾರಿ ಮಾಡಿದೆ. ಈ ಮೂಲಕ ವಾಯುಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ತುರ್ತಾಗಿ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದೆ.

“ ಜಿಲ್ಲಾಡಳಿತದ ಗಮನಕ್ಕೆ ಬಂದಿಲ್ಲ

ಮೈಸೂರಿನಲ್ಲಿ ವಾಯುಮಾಲಿನ್ಯವುಂಟಾಗಿರುವ ಬಗ್ಗೆ ರಾಷ್ಟ್ರೀಯ ಹಸಿರು ನ್ಯಾಯ ಮಂಡಳಿ ನೋಟಿಸ್ ಜಾರಿ ಮಾಡಿರುವ ವಿಚಾರ ಜಿಲ್ಲಾಡಳಿತದ ಗಮನಕ್ಕೆ ಬಂದಿಲ್ಲ. ನ್ಯಾಯ ಮಂಡಳಿ ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿರಬಹುದು. ಅದು ಸದ್ಯಕ್ಕೆ ನಮ್ಮ ಗಮನಕ್ಕೆ ಬಂದಿಲ್ಲ.

–ಜಿ.ಲಕ್ಷ್ಮಿಕಾಂತ ರೆಡ್ಡಿ, ಜಿಲ್ಲಾಧಿಕಾರಿ, ಮೈಸೂರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ ಬುಧವಾರ 23 ಅಕ್ಟೋಬರ್ 2024

ಅಭಿನಂದನೆ...



ಮೈಸೂರು ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್‌ಗೆ ನಡೆದ ನಿರ್ದೇಶಕರ ಚುನಾವಣೆಯಲ್ಲಿ ಜಯಗಳಿಸಿದ ಎಂ.ಶಿವಪ್ರಕಾಶ್ ಅವರನ್ನು ನಗರಪಾಲಿಕೆ ಮಾಜಿ ಸದಸ್ಯ ಮಾದೇಶ್ ಅವರ ನಿವಾಸದಲ್ಲಿ ಅಭಿನಂದಿಸಲಾಯಿತು. ಈ ವೇಳೆ ಮದನ್ ಮಾದೇಶ್, ಪಡುವಾರಹಳ್ಳಿ ಪಾಪಣ್ಣ, ಸುಣ್ಣದಕೇರಿ ರಮೇಶ್, ಕೃಷ್ಣ, ಪ್ರದೀಪ್, ನಾಗು, ಸತ್ಯನಾರಾಯಣ್, ರಮೇಶ್‌ಬಾಬು, ರವಿ ಮತ್ತಿತರರು ಉಪಸ್ಥಿತರಿದ್ದರು.

ಗುಜರಾತ್‌ನಲ್ಲಿ ಫೇಕ್ ಕೋರ್ಟ್!

ಶಿಕ್ಷೆ ವಿಧಿಸುತ್ತಿದ್ದ ನಕಲಿ 'ಜಡ್ಜ್' ಸೇರಿ ಹಲವರ ಬಂಧನ

ಗಾಂಧಿನಗರ: ಗುಜರಾತ್‌ನ ಗಾಂಧಿನಗರದಲ್ಲಿ ವ್ಯಕ್ತಿಯೊಬ್ಬ ತಮ್ಮ ಕಚೇರಿಯಲ್ಲೇ ನಕಲಿ ನ್ಯಾಯಾಲಯ ತೆರೆದು ನ್ಯಾಯಾಧೀಶರಂತೆ ಆದೇಶ ಹೊರಡಿಸಿರುವ ಪ್ರಕರಣ ಬೆಳಕಿಗೆ ಬಂದಿದೆ. ಇದು ಬಹಿರಂಗಗೊಂಡ ನಂತರ ಪೊಲೀಸರು ಆರೋಪಿ ಬಂಧಿಸಿ, ಜೈಲಿಗೆ ಕಳುಹಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಗುಜರಾತ್ ಪೊಲೀಸರು, ಗಾಂಧಿನಗರದಲ್ಲಿರುವ ತಮ್ಮ ಕಚೇರಿಯಲ್ಲಿ ವ್ಯಕ್ತಿಯೊಬ್ಬರು ನಕಲಿ ನ್ಯಾಯಮಂಡಳಿ ಸ್ಥಾಪಿಸಿದ್ದಾರೆ. ಅದಲ್ಲದೇ ಅದರ ನ್ಯಾಯಾಧೀಶರೆಂದು ತಾವೇ ಪ್ರಸ್ತುತಪಡಿಸಿ ನಿಜವಾದ ನ್ಯಾಯಾಲಯದಂತಹ ವಾತಾವರಣವನ್ನು ಸೃಷ್ಟಿಸಿ ಆದೇಶ ಹೊರಡಿಸಿದರು.

ಆರೋಪಿ ಮೋರಿಸ್ ಸಾಮ್ಯುಯೆಲ್ ಕ್ರಿಶ್ಚಿಯನ್ 2019ರಲ್ಲಿ ಸರ್ಕಾರಿ ಭೂಮಿಗೆ ಸಂಬಂಧಿಸಿದ ಪ್ರಕರಣದಲ್ಲಿ ತನ್ನ ಕಕ್ಷಿದಾರನ ಪರ ವಾಗಿ ಆದೇಶವನ್ನು ನೀಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಇದು ಕಳೆದ 5 ವರ್ಷಗಳಿಂದ ಈ ನಕಲಿ ನ್ಯಾಯಾಲಯವನ್ನು ನಡೆಸುತ್ತಿದೆ ಎಂದು ಸೂಚಿಸುತ್ತದೆ ಎಂದು ಪೊಲೀಸರು ಹೇಳಿದ್ದಾರೆ.

ಒಂದನೇ ಪುಟದಿಂದ

ಟಿಕೆಟ್ ಕೊಡಿ ಎಂದಿದ್ದಾರೆ: ಹೆಚ್‌ಡಿಕೆ

ಕಾರ್ಯಕರ್ತರ ಸಭೆಯಲ್ಲಿ ಅವರ ಭಾವನೆಗಳನ್ನು ಅರಿತುಕೊಂಡಿದ್ದೇನೆ. ಸ್ಥಳೀಯವಾಗಿ ಬಿಜೆಪಿ ನಾಯಕರಲ್ಲಿ ಗೊಂದಲವಿದೆ. ಇನ್ನೂ ಮೂರು ದಿನ ಸಮಯವಿದೆ. ಎಲ್ಲಾ ಬೆಳವಣಿಗೆ ಗಮನಿಸಿ ನಿರ್ಧಾರ ಕೈಗೊಳ್ಳುತ್ತೇನೆ ಎಂದು ತಿಳಿಸಿದರು. ಬೆಳಗ್ಗೆಯಿಂದ ಎಲ್ಲಾ ಕಾಂಗ್ರೆಸ್ ನಾಯಕರು ಯೋಗೇಶ್ವರ್ ಅವರು ಕಾಂಗ್ರೆಸ್ ಪಕ್ಷಕ್ಕೆ ಬಂದರೆ ಸ್ವಾಗತ ಎಂದು ಸಾಲು ಸಾಲಾಗಿ ಹೇಳಿಕೆಗಳನ್ನು ಕೊಡುತ್ತಿದ್ದಾರೆ. ಸಿಎಂ, ಡಿಸಿಎಂ ಸೇರಿದಂತೆ ಕೈ ಪಕ್ಷದ ಅನೇಕ ನಾಯಕರು ಸ್ವಾಗತ ಕೋರುತ್ತಿದ್ದಾರೆ. ಮೂರು ದಿನಗಳ ಹಿಂದೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ನಡ್ಡಾ ಅವರು ನನ್ನ ಮುಂದೆ ಪ್ರಸ್ತಾವನೆ ಇಟ್ಟಿದ್ದರು. ಅವರಿಗೆ ಜೆಡಿಎಸ್ ಪಕ್ಷದಿಂದಲೇ ಬಿ-ಫಾರಂ ಕೊಡಿ ಎಂದು ಕೇಳಿದ್ದರು. ಅವರ ಮಾತಿಗೆ ಗೌರವ ಕೊಡಲು ನಾವು ನಿರ್ಧಾರ ಮಾಡಿದ್ದೆವು. ಪಕ್ಷದ ವೇದಿಕೆಯಲ್ಲಿ ಕೂಡ ಈ ಬಗ್ಗೆ ಸಮಾಲೋಚನೆ ನಡೆಸಿದ್ದೆ ಎಂದು ಕೇಂದ್ರ ಸಚಿವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಮೊದಲು ಯಾವ ಪಕ್ಷದಿಂದಲಾದರೂ ಟಿಕೆಟ್ ಕೊಟ್ಟರೆ ನಿಲ್ಲುತ್ತೇನೆ ಎಂದು ಯೋಗೇಶ್ವರ್ ಹೇಳುತ್ತಿದ್ದರು. ಆಮೇಲೆ ವರಸೆ ಬದಲಿಸಿದರು. ಈಗ ಬಿಎಸ್ಪಿಯಿಂದ ನಿಲ್ಲುತ್ತೇನೆ ಎನ್ನುತ್ತಿದ್ದಾರೆ. ಕಾಂಗ್ರೆಸ್ ನಾಯಕರು ನೋಡಿದರೆ ಈಗಾಗಲೇ ಸ್ವಾಗತ ಕೋರಲಿಕ್ಕೆ ಕ್ಯೂ ನಿಂತುಕೊಂಡಿದ್ದಾರೆ. ಪ್ರಹ್ಲಾದ್ ಜೋಶಿ ಅವರು ಫೋನ್ ಕರೆ ಮಾಡಿ ಯೋಗೇಶ್ವರ್‌ಗೆ ಟಿಕೆಟ್ ಕೊಡಿ ಎಂದು ಮನವಿ ಮಾಡಿದ್ದರು. ಮತ್ತೆ ನಡ್ಡಾ ಅವರೂ ಕರೆ ಮಾಡಿ ಯೋಗೇಶ್ವರ್ ಜೆಡಿಎಸ್‌ನಿಂದಲೇ ಅಭ್ಯರ್ಥಿಯಾಗಲಿ ಎಂದು ಹೇಳಿದ್ದಾರೆ ಎಂದರು.

ಕಾಂಗ್ರೆಸ್, ಜೆಡಿಎಸ್ ಕಕ್ಕಾಬಿಕ್ಕಿ

ನಿನ್ನೆ ಕಾಂಗ್ರೆಸ್ ಸೇರುವುದು ನಿಶ್ಚಿತವಾಗಿತ್ತಾದರೂ, ಇಂದು ಯೋಗೇಶ್ವರ್ ಗೊಂದಲಕ್ಕೆ ಸಿಲುಕಿದಂತೆ ಕಾಣುತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಆ ಪಕ್ಷದ ಮುಖಂಡರು, ಯೋಗೇಶ್ವರ್ ಅವರನ್ನು ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡು ಚನ್ನಪಟ್ಟಣ ಕ್ಷೇತ್ರದಿಂದ ಕಣಕ್ಕಿಳಿಸಲು ಬಹಳ ಉತ್ಸುಕತೆಯಿಂದ ಇದ್ದಾರೆ.

ಯೋಗೇಶ್ವರ್ ಪರ ಮುಖ್ಯಮಂತ್ರಿ ಅವರು ಬಹಿರಂಗವಾಗೇ ಹೇಳಿಕೆ ನೀಡಿದ್ದಾರೆ, ಇಷ್ಟಾದರೂ ಜೆಡಿಎಸ್ ನಿರ್ಧಾರದ ಮೇಲೆ ತಮ್ಮ ಮುಂದಿನ ಹೆಜ್ಜೆ ಎಂದು ಚಿತ್ರನಟರೂ ಆದ ಯೋಗೇಶ್ವರ್ ಕಾದು ನೋಡುವ ತಂತ್ರಕ್ಕೆ ಇಳಿದಿದ್ದಾರೆ.

ಉಪನೋಂದಣಾಧಿಕಾರಿಗಳ ಕಚೇರಿಗಳು!

ಮುಡಾ ಕಾರ್ಯಚಟುವಟಿಕೆಗೆ ಬ್ರೇಕ್ ಬಿದ್ದಿದೆ. ಇನ್ನು ಆಸ್ತಿ ನೋಂದಣಿಗೆ ಅಗತ್ಯವಾಗಿ ರುವ ಇ-ಖಾತಾ ಪ್ರಕ್ರಿಯೆಯೂ ನಡೆದಿದೆ. ಇನ್ನು ನಗರಪಾಲಿಕೆಯೂ ಇ-ಖಾತೆ ನೀಡಿಲ್ಲ ಎನ್ನಲಾಗಿದೆ. ಸ್ಥಳೀಯ ಸಂಸ್ಥೆಗಳು ನೀಡಿದ ಖಾತೆಯ ಮ್ಯಾಪ್‌ಗೆ ಸಂಬಂಧಿಸಿದ ತಾಂತ್ರಿಕ ಸಮಸ್ಯೆಯೂ ಇದೆ. ಹಾಗಾಗಿ ಮುಡಾ ಕಟ್ಟಡದಲ್ಲಿರುವ ಕಚೇರಿ ಸೇರಿ ನಗರದಲ್ಲಿರುವ ಐದು ಉಪನೋಂದಣಾಧಿಕಾರಿ ಕಚೇರಿಗಳೂ ವಹಿವಾಟಿಲ್ಲದೆ ಮಂಕಾಗಿವೆ.

ಸರ್ಕಾರದ ಬೊಕ್ಕಸಕ್ಕೂ ನಷ್ಟ: ಸರ್ಕಾರದ ಪ್ರಮುಖ ಆದಾಯ ಮೂಲಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯೂ ಒಂದು. ಮೈಸೂರಿನ ಒಂದು ಉಪ ನೋಂದಣಿ ಕಚೇರಿಯಲ್ಲೇ ಮಾಸಿಕ 10-15 ಕೋಟಿ ರೂ. ವಹಿವಾಟು ನಡೆಯುತ್ತದೆ. ರಾಜ್ಯಾದ್ಯಂತ ನೋಂದಣಿ ಹಾಗೂ ಮುದ್ರಾಂಕ ಶುಲ್ಕದಿಂದ ಸಾವಿರಾರು ಕೋಟಿ ರೂ. ಸಂಗ್ರಹವಾಗುತ್ತದೆ. ಆದರೆ ಆಗಾಗ್ಗೆ ಕಾಡುವಂತಹ ಸರ್ವರ್ ಸಮಸ್ಯೆ, ತಂತ್ರಾಂಶ ಉನ್ನತೀಕರಣ, ಇ-ಖಾತಾ ವಿಳಂಬ ಇನ್ನಿತರ ಅದ್ವಾನಗಳಿಂದಾಗಿ ಆಸ್ತಿ ನೋಂದಣಿ ಅಯೋ ಮಯವಾಗಿದೆ. ಈ ಮೂಲಕ ಸರ್ಕಾರಕ್ಕೆ ಭಾರೀ ಆರ್ಥಿಕ ನಷ್ಟವೂ ಆಗುತ್ತಿದೆ. ಆದರೂ ಪಾರದರ್ಶಕ ಹಾಗೂ ಸರಳ ಉಪಕ್ರಮಗಳಿಗೆ ಗಮನಹರಿಸದಿರುವುದು ವಿಷಾಧನೀಯ.

ಸಾರ್ವಜನಿಕರು ಹೈರಾಣ: ಒಂದೆಡೆ ಇ-ಖಾತಾ ಒದಗಿಸಲು ಸಾಧ್ಯವಾಗದೆ ಆಸ್ತಿ ಮಾಲೀಕರು ಹೆಣಗಾಡುತ್ತಿದ್ದಾರೆ. ಮತ್ತೊಂದೆಡೆ ತಿದ್ದುಪಡಿ ಕಾಯ್ದೆಯಲ್ಲಿ ನಕಲಿ ದಾಖಲೆ ಆಧರಿಸಿ ಆಸ್ತಿ ದಸ್ತಾವೇಜು ನೋಂದಣಿ ಅಥವಾ ನಕಲಿ ದಸ್ತಾವೇಜು ಸೃಷ್ಟಿ ಮಾಡಿದರೆ ಜಿಲ್ಲಾ ನೋಂದಣಾಧಿಕಾರಿಗಳಿಗೆ ರದ್ದುಪಡಿಸಲು ಅಧಿಕಾರ ನೀಡಲಾಗಿದೆ. ಜತೆಗೆ ನಕಲಿ ದಾಖಲೆ ಆಧರಿಸಿ ನೋಂದಣಿ ಮಾಡಿದ ಉಪ ನೋಂದಣಾಧಿಕಾರಿಗಳಿಗೆ 3 ವರ್ಷದವರೆಗೆ ಜೈಲು ಶಿಕ್ಷೆಗೆ ಗುರಿಪಡಿ ಸಬಹುದು ಎಂದು ಹೇಳಲಾಗಿದೆ. ಇದರಿಂದ ಉಪನೋಂದಣಾಧಿಕಾರಿ ಗಳೂ ವಿವಿಧ ಕಾರಣಗಳನ್ನು ನೀಡಿ, ನೋಂದಣಿ ಪ್ರಕ್ರಿಯೆಯನ್ನು ಮುಂದೂ ಡುತ್ತಿದ್ದಾರೆ ಎನ್ನಲಾಗಿದೆ. ಬಿ-ಖಾತಾ, ಕಂದಾಯ ನಿವೇಶನ ಸೇರಿ ಬಹುತೇಕ ಆಸ್ತಿಗಳಿಗೆ ಇ-ಖಾತಾ ಇಲ್ಲ. ಇದರಿಂದಾಗಿ ಬ್ಯಾಂಕ್‌ಗಳಿಂದ ಮಂಜೂರಾದ ಸಾಲವನ್ನೂ ಬಿಡುಗಡೆ ಮಾಡಿಸಿಕೊಳ್ಳಲೂ ಸಾಧ್ಯವಾಗುತ್ತಿಲ್ಲ. ಒಟ್ಟಾರೆ ಸಮರ್ಪಕ ಸಿದ್ಧತೆ ಇಲ್ಲದೆ ಸರ್ಕಾರ ದಿಢೀರ್ ಅನುಷ್ಠಾನಗೊಳಿಸಿರುವ ವ್ಯವಸ್ಥೆಗಳಿಂದ ಸಾರ್ವಜನಿಕರು ಪರಿತಪಿಸುತ್ತಿದ್ದಾರೆ.

ಊಟಿಗೆ ನಡೆದ ಸಂಚಿನ ಹತ್ಯೆ

ಹಣಕಾಸು ಯೋಜನೆಯಡಿ 1.20 ಕೋಟಿ ರೂ. ಅನುದಾನ ಬರುತ್ತಿತ್ತು. ಒಂದು ವೇಳೆ ಅಧಿಕಾರ ಬಿಟ್ಟುಕೊಟ್ಟಲ್ಲಿ ಆ ಅನುದಾನದ ಕಮಿಷನ್ ಕೂಡ ನನಗೆ ದಕ್ಕುವುದಿಲ್ಲ ಎಂಬುದನ್ನು ಅರಿತು ಉಪಾಧ್ಯಕ್ಷೆ ಸೌಭಾಗ್ಯ ಅವರ ಪತಿ ನಂಜುಂಡಸ್ವಾಮಿಗೆ ಒಂದು ಗತಿ ಕಾಣಿ ಸಿದರೆ ಅಧಿಕಾರ ಸುಮತಿ ಅವರಲ್ಲೇ ಉಳಿಯುತ್ತದೆ ಎಂದು ಸಂಚು ರೂಪಿಸಿದ ಗೋವರ್ಧನ್, ಜಾಹೀರ್ ನನ್ನು ಸಂಪರ್ಕಿಸಿ ನಿನಗೆ ಆಟೋ ತೆಗೆದುಕೊಡುತ್ತೇನೆ. ಸ್ವಲ್ಪ ದುಡ್ಡನ್ನು ಕೊಡುತ್ತೇನೆ ಎಂದು ಆಮಿಷ ಒಡ್ಡಿ ನೀನು ನಂಜುಂಡಸ್ವಾಮಿಗೆ ಒಂದು ಗತಿ ಕಾಣಿಸು ಎಂದು ಸುಪಾರಿ ಕೊಟ್ಟಿದ್ದ ಎಂದು ಹೇಳಲಾಗಿದೆ.

ಜಾಹೀರ್ ತನ್ನ ಸ್ನೇಹಿತರಾದ ಮಣಿಕಂಠ ಮತ್ತು ಮಹೇಂದ್ರನೊಂದಿಗೆ ಸೇರಿ ಅ.5ರಂದು ನಂಜುಂಡಸ್ವಾಮಿ ಮೇಲೆ ಹಲ್ಲೆ ಮಾಡಲು ಸಂಚು ರೂಪಿಸಿದ್ದ. ಆದರೆ ಅಂದು ಮಳೆ ಹೆಚ್ಚಾಗಿದ್ದರಿಂದ ಯೋಜನೆ ವಿಫಲವಾಯಿತು. ಅ.6ರಂದು ಗ್ರಾಮ ಪಂಚಾಯ್ತಿ ಇತರ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಸಂಬಂಧ ಗೋವರ್ಧನ್ ನೇತೃತ್ವದಲ್ಲಿ ನಂಜುಂಡ ಸ್ವಾಮಿ ಎಲ್ಲರೊಂದಿಗೆ ನಗರದ ಖಾಸಗಿ ಡಾಬಾವೊಂದರಲ್ಲಿ ಸೇರಿ ಮಾತುಕತೆ ನಡೆಸಿ, ರಾತ್ರಿ ಎಲ್ಲರೂ ಅಲ್ಲೇ ಊಟ ಮಾಡಿದ್ದರು. ನಂತರ ಜಾಹೀರ್‌ಗೆ ಕರೆ ಮಾಡಿದ ಗೋವರ್ಧನ್ ಈಗ ಇಲ್ಲಿ ಊಟ ಮುಗಿಸಿ ನಂಜುಂಡಸ್ವಾಮಿ ಹೊರಟಿದ್ದಾನೆ. ದೇವರಸನಹಳ್ಳಿ ಗ್ರಾಪಂ ಬಿಟ್ಟ ನಂತರ ಅವನಿಗೆ ಒಂದು ಗತಿ ಕಾಣಿಸು ಎಂದು ಕರೆ ಮಾಡಿ, 20 ನಿಮಿಷಕ್ಕೂ ಹೆಚ್ಚು ಕಾಲ ಸಂಭಾಷಣೆ ನಡೆಸಿದ್ದಾನೆ.

ಮಾರಕಾಸ್ತ್ರ ಹಿಡಿದು ನಂಜುಂಡ ಸ್ವಾಮಿ ಬರುವಿಕೆಗೆ ಕಾದಿದ್ದ ಜಾಹೀರ್, ಮಣಿಕಂಠ ಮತ್ತು ಮಹೇಂದ್ರ, ಬೈಕ್‌ನಲ್ಲಿ ಬಂದ ನಂಜುಂಡಸ್ವಾಮಿ ಯನ್ನು ಅಡ್ಡಗಟ್ಟಿ ಮೊದಲು ಕೈ ಕಾಲು ಮುರಿದು, ತಲೆಗೆ ಒಡೆದು ಗಂಭೀರ ವಾಗಿ ಗಾಯ ಗೊಳಿಸಿ, ಅಲ್ಲಿಂದ ಪರಾರಿಯಾಗಿದ್ದರು. ಇದೀಗ ಆರೋಪಿಗಳು ಪೊಲೀಸರ ತನಿಖೆ ವೇಳೆ ನೈಜ ಸಂಗತಿಯನ್ನು ಬಿಚ್ಚಿಟ್ಟಿದ್ದಾರೆ.


ಗ್ರಾಮಾಂತರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಸುನೀಲ್ ಕುಮಾರ್ ಮಾತನಾಡಿ, ಘಟನೆ ನಡೆದ ದಿನ ಉಪಾಧ್ಯಕ್ಷೆ ಸೌಭಾಗ್ಯ ನೀಡಿದ ದೂರಿನನ್ವಯ, ತನಿಖೆ ಮುಂದುವರಿಸಿದಾಗ ಗೋವರ್ಧನ್ ಅವರ ಮೊಬೈಲ್ ಕರೆಯನ್ನು ಪರಿಶೀಲಿಸಿ, ಅದರನ್ವಯ ಶಂಕಿತರ ವಿಚಾರಣೆಗೆ ಒಳಪಡಿಸಿದಾಗ ಪ್ರಕರಣ ಬಯಲಾಗಿದೆ. ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಬೆಂಗಳೂರು ದಕ್ಷಿಣ ಭಾಗದಲ್ಲಿ 2ನೇ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಸೂಕ್ತ

ಹಳೇ ಮೈಸೂರು ಭಾಗದ ಶಾಸಕರಿಂದ ಸರ್ಕಾರಕ್ಕೆ ಮನವಿ

ಮೈಸೂರು, ಅ.22(ಬಿಎಲ್‌ಯು)- ಸಿಲಿಕಾನ್ ಸಿಟಿ ಬೆಂಗಳೂರಿನ ದಕ್ಷಿಣ ಭಾಗದಲ್ಲಿ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸಬೇಕೆಂದು ಮಂಡ್ಯ, ರಾಮನಗರ ಹಾಗೂ ಹಳೇ ಮೈಸೂರು ಭಾಗದ ಶಾಸಕರು ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಲ್ಲಿ ಮನವಿ ಮಾಡಿರುವ ಹಳೇ ಮೈಸೂರು ಭಾಗದ ಶಾಸಕರು, ಈ ಸಂಬಂಧ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ಹಾಗೂ ನಾಗರಿಕ ವಿಮಾನಯಾನ ಸಚಿವಾಲಯಕ್ಕೆ ಶಿಫಾರಸು ಮಾಡುವಂತೆ ಕೋರಿದ್ದಾರೆ.



ಸಾಂದರ್ಭಿಕ ಚಿತ್ರ

ಬೆಂಗಳೂರಿನ ಕೆಂಪೇಗೌಡ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ಸಂಖ್ಯೆ ಹಾಗೂ ವಿಮಾನ ದಟ್ಟಣೆ ಹೆಚ್ಚಾಗಿರುವ ಕಾರಣ ಮತ್ತೊಂದು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಮಾಡಬೇಕೆಂದು ಸರ್ಕಾರ ಚಿಂತನೆ ನಡೆಸಿದೆ. ಈಗ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸಂಚರಿಸುವ ಅರ್ಧದಷ್ಟು ಪ್ರಯಾಣಿಕರು ದಕ್ಷಿಣ ಬೆಂಗಳೂರಿನವರಾಗಿದ್ದಾರೆ. ಎಲೆಕ್ಟ್ರಾನಿಕ್ ಸಿಟಿ, ಬೊಮ್ಮನಹಳ್ಳಿ, ಬನ್ನೇರುಘಟ್ಟ ರಸ್ತೆ, ಜಯನಗರ, ಜೆ.ಪಿ. ನಗರ, ಮೈಸೂರು ರಸ್ತೆ, ಮಾಗಡಿ ರಸ್ತೆ ಸೇರಿದಂತೆ ಬೆಂಗಳೂರು ದಕ್ಷಿಣ ಭಾಗದ ಜನರು ಹೆಚ್ಚಾಗಿ ಪ್ರಯಾಣ ಮಾಡುತ್ತಿದ್ದಾರೆ. ಈ ಹಿನ್ನೆಲೆ ಬೆಂಗಳೂರು ದಕ್ಷಿಣ ಭಾಗದಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣವಾದರೆ ಈ ಭಾಗದ ಜನರಿಗೆ ಅನುಕೂಲವಾಗಿ ವಾಣಿಜ್ಯ ಚಟುವಟಿಕೆ ಹೆಚ್ಚಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಅಲ್ಲದೆ ಎಲೆಕ್ಟ್ರಾನಿಕ್ ಸಿಟಿ, ಕನಕಪುರ ರಸ್ತೆ, ಬನ್ನೇರುಘಟ್ಟ ರಸ್ತೆ, ಮೈಸೂರು ರಸ್ತೆಗೆ ಮೆಟ್ರೋ , ನೈಸ್ ರಸ್ತೆ, ಹಾಗೂ ಹೊರವರ್ತುಲ ರಸ್ತೆ ಸಂಪರ್ಕ ಇರುವ ಕಾರಣ ಸಂಚಾರ ದಟ್ಟಣೆ ಕಿರಿಕಿರಿ ತಪ್ಪಿಸಬಹುದು ಎಂದು ಹೇಳಿದ್ದಾರೆ.

ರನ್ ವೇ ನಿರ್ಮಾಣಕ್ಕೆ 3.5 ಕಿಲೋ ಮೀಟರ್ ಉದ್ದ ಸಮತಟ್ಟು ಭೂಮಿ ಅವಶ್ಯಕತೆ ಇರುವ ಕಾರಣ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಬೆಂಗಳೂರು ದಕ್ಷಿಣ ಭಾಗ ಸೂಕ್ತವಾಗಿದೆ ಎಂದು ತಿಳಿಸಿದ್ದಾರೆ.

ಬೆಂಗಳೂರು-ಮೈಸೂರು ನಡುವಿನ ಎಕ್ಸ್‌ಪ್ರೆಸ್ ವೇಯಿಂದ ರಾಮನಗರ, ಚನ್ನಪಟ್ಟಣ, ಮದ್ದೂರು ಭಾಗದ ಆರ್ಥಿಕ ಚಟುವಟಿಕೆ ಮತ್ತಷ್ಟು ಗರಿಗೆದರಲಿದೆ. ಬೆಂಗಳೂರು ನಂತರ ಮೈಸೂರು ಎರಡನೇ ಐಟಿ ನಗರವಾಗಿ ಹೊರ ಹೊಮ್ಮುತ್ತಿದೆ. ಅಲ್ಲದೆ ಮೈಸೂರು ಪ್ರವಾಸಿಗರನ್ನು ಆಕರ್ಷಿಸುತ್ತಿರುವ ಕಾರಣ ಬೆಂಗಳೂರು ದಕ್ಷಿಣ ಭಾಗದಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸುವುದು ಸೂಕ್ತ ಎಂದು ಅಭಿಪ್ರಾಯಪಟ್ಟಿದ್ದಾರೆ.

ಬೆಂಗಳೂರು ದಕ್ಷಿಣ ಭಾಗದಲ್ಲಿ ಕೈಗಾರಿಕಾ ಕಾರಿಡಾರ್ ಇದ್ದು, ಕುಡಿಯುವ ನೀರಿನ ಸೌಲಭ್ಯ ಕೂಡ ಉತ್ತಮವಾಗಿದೆ. ಇದರಿಂದ ಇಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವಾದರೆ ಈ ಭಾಗದ ವಾಣಿಜ್ಯ ಚಟುವಟಿಕೆಗೆ ಮತ್ತಷ್ಟು ವೇಗ ದೊರೆಯಲಿದೆ ಎಂದಿದ್ದಾರೆ.

ಮುಂಬೈ ಹಾಗೂ ಪುಣೆ ಮಾದರಿಯಲ್ಲಿ ಬೆಂಗಳೂರು ಹಾಗೂ ಮೈಸೂರು ವಾಣಿಜ್ಯ ನಗರಿಯಾಗಿ ಹೊಮ್ಮಲಿದೆ. ಇದನ್ನೆಲ್ಲಾ ಗಮನದಲ್ಲಿಟ್ಟುಕೊಂಡು ಬೆಂಗಳೂರು ದಕ್ಷಿಣ ಭಾಗದಲ್ಲಿ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಮಾಡಬೇಕೆಂದು ಶಾಸಕರು ಮನವಿ ಮಾಡಿದ್ದಾರೆ.

ಶಾಸಕರಾದ ಹೆಚ್.ಎ.ಇಕ್ಬಾಲ್ ಹುಸೇನ್, ಹೆಚ್.ಸಿ.ಬಾಲಕೃಷ್ಣ, ಪಿ.ಎಂ. ನರೇಂದ್ರ ಸ್ವಾಮಿ, ಎ.ಬಿ.ರಮೇಶ್ ಬಂಡಿ ಸಿದ್ದೇಗೌಡ, ಕೆ.ಎಂ.ಉದಯ್, ಪಿ.ರವಿ ಕುಮಾರ್, ಶಿವಣ್ಣ, ಎನ್.ಶ್ರೀನಿವಾಸ್, ವಿಧಾನಪರಿಷತ್ ಸದಸ್ಯರಾದ ಎಸ್.ರವಿ, ದಿನೇಶ್ ಗೂಳಿಗೌಡ, ಪುಟ್ಟಣ್ಣ, ಮಂಡ್ಯ ಲೋಕಸಭಾ ಕ್ಷೇತ್ರದ ಪರಾಜಿತ ಅಭ್ಯರ್ಥಿ ಸ್ಟಾರ್ ಚಂದ್ರು ಸಹಿ ಮಾಡಿ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದಾರೆ.

ದೇಶವು ಶಸ್ತ್ರದ ನಾಡಲ್ಲ, ಶಾಸ್ತ್ರದ ನಾಡು, ಅಧ್ಯಯನಕ್ಕೆ ಹೆಚ್ಚು ಒತ್ತು ನೀಡಿ

ಪದವಿ ಪ್ರದಾನ ಸಮಾರಂಭದಲ್ಲಿ ಹೈಕೋರ್ಟ್ ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಅಭಿಮತ

ಮೈಸೂರು,ಅ.22(ಜಿಎ)-ಪದವಿ ಪಡೆದವರು ನಮ್ಮ ಓದು ಅಂತ್ಯವಾಯಿತು ಎಂದು ಅಧ್ಯಯನ ಮಾಡುವುದನ್ನು ಅಂತ್ಯಗೊಳಿಸಬೇಡಿ. ನಮ್ಮ ದೇಶ ಅಧ್ಯಯನಶೀಲ ದೇಶವಾಗಿದ್ದು, ಅಧ್ಯಯನಕ್ಕೆ ಹೆಚ್ಚು ಒತ್ತು ನೀಡಿ ಎಂದು ರಾಜ್ಯ ಹೈಕೋರ್ಟ್‌ನ ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್, ಸಲಹೆ ನೀಡಿದರು.

ಮೈಸೂರು ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ವತಿಯಿಂದ ಕರ್ನಾಟಕ ರಾಜ್ಯ ಮುಕ್ತ ವಿವಿ ಘಟಿಕೋತ್ಸವ ಭವನದಲ್ಲಿ ಆಯೋಜಿಸಿದ್ದ 'ವಿಶಿಖಾನುಪ್ರವೇಶ' ಪದವಿ ಪ್ರದಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.



ಮೈಸೂರು ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ವತಿಯಿಂದ ಕರ್ನಾಟಕ ರಾಜ್ಯ ಮುಕ್ತ ವಿವಿ ಘಟಿಕೋತ್ಸವ ಭವನದಲ್ಲಿ ಆಯೋಜಿಸಿದ್ದ 'ವಿಶಿಖಾನುಪ್ರವೇಶ' ಪದವಿ ಪ್ರದಾನ ಸಮಾರಂಭದಲ್ಲಿ ಓವರ್ ಹಾಲ್ ಟಾಪರ್‌ಗಳಾದ ಪೂಜಾ ಪಾಟೀಲ್ ಮತ್ತು ಪಿ.ಭವನ್ ಕುಮಾರ್‌ಗೆ ಪದವಿ ಪ್ರದಾನ ಮಾಡಲಾಯಿತು.

ಭಾರತ ದೇಶವು ಶಸ್ತ್ರ ನಾಡಲ್ಲ. ಶಾಸ್ತ್ರದ ನಾಡಾಗಿದ್ದು, ಅಧ್ಯಯನಕ್ಕೆ ಹೆಚ್ಚು ಒತ್ತು ನೀಡುತ್ತದೆ. ಇಲ್ಲಿ ವೈದ್ಯಶಾಸ್ತ್ರವು ಸಂಪೂರ್ಣ ಅಭಿವೃದ್ಧಿಗೊಂಡಿಲ್ಲ. ಪದವಿ ಪಡೆದುಕೊಳ್ಳುತ್ತಿರುವವರು ಕ್ಷೇತ್ರವನ್ನು ವೈಜ್ಞಾನಿಕವಾಗಿ ಅಧ್ಯಯನ ಮಾಡಬೇಕು. ಅಧ್ಯಯನ ಶೀಲರಾಗದಿದ್ದರೆ ನಿಂತ ನೀರಾಗತ್ತೇವೆ. ಪದವಿ ಪಡೆದವರು ವೈಜ್ಞಾನಿಕವಾಗಿ ಅಧ್ಯಯನ ಮಾಡಿ ದೇಶಕ್ಕೆ ಕೊಡುಗೆ ನೀಡಬೇಕು ಎಂದರು.

ದೇಶದ ಕೆಲವೇ ರಾಜ್ಯಗಳಲ್ಲಿ ಅಲ್ಲಿನ ಸರ್ಕಾರಗಳು ವೈದ್ಯರ ಮೇಲೆ ಹಲ್ಲೆ ಮಾಡಬಾರದು. ವೈದ್ಯರಿಗೆ ಹಿಂಸೆ ಮಾಡಿದರೆ ಅವರಿಗೆ ಶಿಕ್ಷೆ ಆಗುವ ಕಾನೂನು ರಚನೆ ಆಗಿದೆ. ವೈದ್ಯರ ಮೇಲೆ ಯಾವುದೇ ಕಾನೂನು ಕ್ರಮ ಜರುಗಿಸುವ ಹಾಗಿಲ್ಲ. ಆಸ್ಪತ್ರೆಯ ಮುಂದೆ ಪ್ರತಿಭಟನೆ ಮಾಡದೆ ಇರುವ ಕಾನೂನು ಅನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದೆ. ಅದರಂತೆ ನಾನು ಕೆಲವು ತೀರ್ಪುಗಳನ್ನು ಬರೆದಿದ್ದೇನೆ. ನೀವುಗಳು ಈ ವಿಷಯದಲ್ಲಿ ರಾಜ್ಯ ಸರ್ಕಾರಕ್ಕೆ ಆಭಾರಿಯಾಗಬೇಕಿದೆ ಎಂದು ತಿಳಿಸಿದರು.

ಮತ್ತೊಂದೆಡೆ ವೈದ್ಯರು ತಮ್ಮ ಸೇವೆಗೆ ಮೀರಿದ ಹಣ ಸಂದಾಯ ಮಾಡುತ್ತಿದ್ದಾರೆ ಎಂಬ ಆರೋಪಗಳು ಕೇಳಿಬರುತ್ತಿವೆ. ಅದನ್ನು ಸುಳ್ಳು ಮಾಡಬೇಕಿರುವ ಜವಾಬ್ದಾರಿ ನಿಮ್ಮ ಮೇಲಿದೆ. ಯಾವುದೇ ವೈರಸ್ ತಾರತಮ್ಯವನ್ನು ಮಾಡುವುದಿಲ್ಲ. ದಲಿತ, ಹಿಂದುಳಿದ ಮತ್ತು ನಿರುದ್ಯೋಗಿಗಳಿಗೆ ರೋಗಗಳು ಬೇಗ ಬರುತ್ತದೆ. ಇಂತಹ ಸಂದರ್ಭದಲ್ಲಿ ಅವರಿಗೆ ಸೂಕ್ತ ಚಿಕಿತ್ಸೆ ನೀಡುವ ಮೂಲಕ ನಿಮ್ಮ ಕಾರ್ಯಕ್ಷಮತೆ ಮೆರೆಯಿರಿ. ಹಣ ಗಳಿಸಲು ಮುಂದಾಗಬೇಡಿ. ಇದರ ಬಗ್ಗೆ ಗಮನವಿರಲಿ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ 82 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಈ ವೇಳೆ ಪೂಜಾ ಪಾಟೀಲ್ ಪ್ರಥಮ ಮತ್ತು ಪಿ.ಭವನ್‌ಕುಮಾರ್ ದ್ವಿತೀಯ ಟಾಪರ್ ಆಗಿ ಹೊರ ಹೊಮ್ಮಿದರು. ಆಯುಷ್ ಇಲಾಖೆ ಆಯುಕ್ತ ಡಾ.ಶ್ರೀನಿವಾಸಲು, ದೂರದರ್ಶನ ನಿರೂಪಕ ಡಾ.ನಾ.ಸೋಮೇಶ್ವರ, ಪ್ರಾಂಶುಪಾಲ ಡಾ.ಗಜಾನನ ಹೆಗಡೆ, ಸ್ಥಾನಿಕ ವೈದ್ಯೆ ಶಶಿರೇಖಾ, ಪ್ರಾಧ್ಯಾಪಕರಾದ ಡಾ.ಎಂ.ಡಿ. ಸಂಜಯ್‌ಕುಮಾರ್, ಡಾ.ಕೆ.ಶ್ರೀನಿವಾಸ ಯಾದವ್ ಮತ್ತಿತರರು ಉಪಸ್ಥಿತರಿದ್ದರು.

ಸಿಲಿಂಡರ್ ಸ್ಫೋಟ; 6 ಮಂದಿ ಸಾವು

ಲಕ್ನೋ: ಬುಲಂದ್‌ಶಹರ್ ಜಿಲ್ಲೆಯ ಸಿಕಂದರಾಬಾದ್ ಪ್ರದೇಶದ ಆಶಾಪುರಿ ಕಾಲೋನಿಯಲ್ಲಿ ಮನೆ ಕುಸಿದು ಆಕ್ಸಿಜನ್ ಸಿಲಿಂಡರ್ ಸ್ಫೋಟಗೊಂಡು 6 ಮಂದಿ ಸಾವನ್ನಪ್ಪಿ ಮೂವರು ಗಾಯಗೊಂಡಿದ್ದಾರೆ.

ಮೃತರನ್ನು ರಿಯಾಜುದ್ದೀನ್ ಅಲಿಯಾಸ್ ರಾಜು (50), ಅವರ ಪತ್ನಿ ರುಖ್ಸಾನಾ (45), ಸಲ್ಮಾನ್ (16), ತಮನ್ನಾ (24), ಹಿವ್ವಾ (3) ಮತ್ತು ಆಸ್ ಮೊಹಮ್ಮದ್ (26) ಎಂದು ಗುರುತಿಸಲಾಗಿದೆ. ರಿಯಾಜುದ್ದೀನ್ ಎಂಬ ವ್ಯಕ್ತಿಯ ಮನೆಯಲ್ಲಿ ಈ ಘಟನೆ ಸಂಭವಿಸಿದ್ದು, ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ 19 ಜನರು ವಾಸಿಸುತ್ತಿದ್ದರು ಎಂದು ಬುಲಂದ್‌ಶಹರ್‌ನ ಜಿಲ್ಲಾ ಮ್ಯಾಜಿಸ್ಟ್ರೇಟ್ ಚಂದ್ರಪ್ರಕಾಶ್ ಸಿಂಗ್ ತಿಳಿಸಿದ್ದಾರೆ.

8 ನಿವಾಸಿಗಳನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ರಿಯಾಜುದ್ದೀನ್ ಅವರ ಪತ್ನಿ ಆಸ್ಪತ್ರೆಗೆ ದಾಖಲಾಗಿ ವಾಪಸಾದ ನಂತರ ಚಿಕಿತ್ಸೆಗಾಗಿ ಆಕ್ಸಿಜನ್ ಸಿಲಿಂಡರ್ ಮತ್ತು ಅದರ ಪರಿಕರಗಳನ್ನು ಕುಟುಂಬವು ಇತ್ತೀಚೆಗೆ ತಂದಿತ್ತು. ಮಾಹಿತಿ ಮೇರೆಗೆ ಪೊಲೀಸರು ಮತ್ತು ಅಗ್ನಿಶಾಮಕ ದಳದ ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆ ಆರಂಭಿಸಿದ್ದಾರೆ ಎಂದು ಮೀರತ್ ವಲಯದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಧ್ರುವಕಾಂತ್ ಠಾಕೂರ್ ತಿಳಿಸಿದ್ದಾರೆ.

ಸಿ.ಪಿ.ಯೋಗೇಶ್ವರ್ ಕಾಂಗ್ರೆಸ್ ಸೇರ್ಪಡೆಯ ಸುಳಿವು ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಮುನ್ಸೂಚನೆ



ಮೈಸೂರು, ಅ.22(ಬಿಎಲ್‌ಯು)- ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತ ಮತ್ತು ಸಂವಿಧಾನದ ಮೌಲ್ಯ ಒಪ್ಪಿ ಯಾರೇ ಪಕ್ಷಕ್ಕೆ ಬಂದರೂ ಅವರಿಗೆ ಸ್ವಾಗತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಜಿ ಶಾಸಕ ಸಿ.ಪಿ.ಯೋಗೇಶ್ವರ್ ಕಾಂಗ್ರೆಸ್ ಸೇರ್ಪಡೆ ಬಗ್ಗೆ ಮುನ್ಸೂಚನೆ ನೀಡಿದ್ದಾರೆ.


ಮೈಸೂರಿನ ರಾಮಕೃಷ್ಣನಗರದ ತಮ್ಮ ನಿವಾಸದಲ್ಲಿ ಇಂದು ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಈಗಾಗಲೇ ಸಂಡೂರಿಗೆ ತುಕಾರಾಂ ಪತ್ನಿಗೆ ಟಿಕೆಟ್ ಘೋಷಣೆ ಮಾಡಿದ್ದೇವೆ ಎಂದರು.

ಇಂದು ರಾತ್ರಿ ವೇಳೆಗೆ ಚನ್ನಪಟ್ಟಣ ಹಾಗೂ ಶಿಗ್ಗಾಂವಿ ಟಿಕೆಟ್ ಘೋಷಣೆ ಮಾಡುತ್ತೇವೆ. ಈ ಮೂಲಕ ಮೂರು ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಲು ಎಲ್ಲಾ ತಯಾರಿ ಮಾಡಿಕೊಂಡಿದ್ದೇವೆ ಎಂದರು.

ಚನ್ನಪಟ್ಟಣ ಕ್ಷೇತ್ರಕ್ಕೆ ಮಾಜಿ ಸಂಸದ ಡಿ.ಕೆ.ಸುರೇಶ್ ಹೆಸರು ಕೂಡ ಚಾಲ್ತಿಯಲ್ಲಿದೆ. ಆದರೆ ನಮ್ಮ ಪಕ್ಷದ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅಲ್ಲಿರುವ ಕಾರಣ ಸೂಕ್ತ ಅಭ್ಯರ್ಥಿಯನ್ನು ಅವರೇ ತೀರ್ಮಾನ ಮಾಡುತ್ತಾರೆ. ಈ ಹಿನ್ನೆಲೆ ಒಳ್ಳೆಯ ಅಭ್ಯರ್ಥಿ ಕಣಕ್ಕಿಳಿಸುವಂತೆ ಸಲಹೆ ನೀಡಿದ್ದೇನೆ ಎಂದು ಸಿದ್ದರಾಮಯ್ಯ ತಿಳಿಸಿದರು.

ಸಿಲಿಕಾನ್ ಸಿಟಿ ಬೆಂಗಳೂರು ಸೇರಿದಂತೆ ರಾಜ್ಯದ ಇತರೆಡೆ ಸುರಿಯುತ್ತಿರುವ ಮಳೆ ಅನಾಹುತದ ಬಗ್ಗೆ ವರದಿ ಪಡೆದಿದ್ದೇನೆ. ಈಗ ಮಳೆ ಅನಾಹುತದಿಂದ ನಷ್ಟವಾಗಿರುವವರಿಗೆ ಪರಿಹಾರ ನೀಡುವ ಬಗ್ಗೆ ಸಿದ್ಧತೆ ಮಾಡಿಕೊಂಡಿದ್ದೇವೆ ಎಂದು ಹೇಳಿದರು. ಮುಡಾ ಕಚೇರಿ ಮೇಲೆ ಇಡಿ ದಾಳಿ ಕುರಿತಂತೆ ಕೇಳಿದ ಪ್ರಶ್ನೆಗೆ ಯಾವುದೇ ಪ್ರತಿಕ್ರಿಯೆ ನೀಡದೆ ಸಿದ್ದರಾಮಯ್ಯ ಮುನ್ನಡೆದರು.

ಸಂಸದ, ಖ್ಯಾತ ಹೃದ್ರೋಗ ತಜ್ಞ ಡಾ.ಸಿ.ಎನ್.ಮಂಜುನಾಥ್‌ರಿಗೆ ಅಭಿನಂದನೆ...



ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದರೂ ಆದ ಖ್ಯಾತ ಹೃದ್ರೋಗ ತಜ್ಞ ಡಾ. ಸಿ.ಎನ್.ಮಂಜುನಾಥ್ ಅವರನ್ನು ಬೆಂಗಳೂರಿನ ಅವರ ಸ್ವಗೃಹದಲ್ಲಿ ಆತ್ಮೀಯವಾಗಿ ಅಭಿನಂದಿಸಲಾಯಿತು. ಮೈಸೂರಿನಲ್ಲಿ ನಡೆದ ಧನ್ಯವಾದ ಧನ್ವಂತರಿ ಕಾರ್ಯಕ್ರಮದ ಆಯೋಜಕರೂ ಆದ ವಿದ್ಯಾವಿಕಾಸ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕವೀಶ್ ಗೌಡ, ನಮ್ಮೂರು ನಮ್ಮೋರು ಸಮಾಜ ಸೇವಾ ಟ್ರಸ್ಟಿನ ಅಧ್ಯಕ್ಷ ಬೀಡನಹಳ್ಳಿ ಸತೀಶ್‌ಗೌಡ, ಜಿಲ್ಲಾ ಒಕ್ಕಲಿಗರ ಸಂಘದ ನಿರ್ದೇಶಕರಾದ ಚೇತನ್, ರವಿ ಎ., ಉದ್ಯಮಿಗಳಾದ ಹರ್ಷ, ವಿವೇಕ್ ಸಿಂಹ, ಸಿದ್ದೇಶ್ವರ್ ಉಪಸ್ಥಿತರಿದ್ದರು.

ಕೆಆರ್‌ಎಸ್ ಜಲಾಶಯ ವೀಕ್ಷಿಸಿದ ಕಾವೇರಿ ಕುಟುಂಬದ ಸದಸ್ಯರು

ಹವಾಮಾನ ಬದಲಾವಣೆ, ಪ್ರಕೃತಿ ಸಂಪತ್ತು ನಾಶ, ನೀರಿನ ಅಸಮರ್ಪಕ ಬಳಕೆಯಿಂದ ಎರಡು ರಾಜ್ಯಗಳ ನಡುವೆ ವಾಟರ್‌ಗಾಗಿ ಹೋರಾಟ

ಮೈಸೂರು, ಅ.22(ಜಿಎ)-ಕಾವೇರಿ ಕುಟುಂಬದ ಸದಸ್ಯರು ಕೆಆರ್‌ಎಸ್ ಜಲಾಶಯವನ್ನು ವೀಕ್ಷಿಸಿ, ಪ್ರಸ್ತುತ ಜಲಾಶಯದ ನೀರಿನ ಸ್ಥಿತಿಗತಿ ಕುರಿತು ಅವಲೋಕನ ನಡೆಸಿದರು.

ಇದಕ್ಕೂ ಮುನ್ನ ಮೈಸೂರಿನ ಕರ್ಜನ್ ಪಾರ್ಕ್ ಆವರಣದಲ್ಲಿರುವ ತೋಟಗಾರಿಕೆ ಇಲಾಖೆ ಸಭಾಂಗಣದಲ್ಲಿ ಕಾವೇರಿ ಕುಟುಂಬದ ಸದಸ್ಯರ ವತಿಯಿಂದ ಆಯೋಜಿಸಿದ್ದ ಕಾವೇರಿ ಸಮನ್ವಯ ಸಭೆಯಲ್ಲಿ ಚರ್ಚಿಸಿದ ನಂತರ ಎಲ್ಲರೂ ಕೆಆರ್‌ಎಸ್‌ಗೆ ತೆರಳಿ ಜಲಾಶಯ ವೀಕ್ಷಿಸಿದರು.



ಮೈಸೂರಿನ ತೋಟಗಾರಿಕೆ ಇಲಾಖೆ ಸಭಾಂಗಣದಲ್ಲಿ ಕಾವೇರಿ ಕುಟುಂಬದ ಸದಸ್ಯರ ವತಿಯಿಂದ ಆಯೋಜಿಸಿದ್ದ ಕಾವೇರಿ ಸಮನ್ವಯ ಸಭೆಯಲ್ಲಿ ರೈತ ಮುಖಂಡ ಕುರುಬೂರು ಶಾಂತಕುಮಾರ್ ಮಾತನಾಡಿದರು.

ಸಭೆಯಲ್ಲಿ ಮಾತನಾಡಿದ ಕಾವೇರಿ ಕುಟುಂಬ ಸಂಚಾಲಕ ಪ್ರೊ.ಜನಕರಾಜ್, ಮುಕ್ತ ಮನಸ್ಸಿನ ಚರ್ಚೆ ನಡೆಸಿದರೆ ಯಾವುದೇ ಸಮಸ್ಯೆಗೂ ಖಂಡಿತ ಪರಿಹಾರ ಸಿಗುತ್ತದೆ. ಹವಾಮಾನ ಬದಲಾವಣೆ, ಪ್ರಕೃತಿ ಸಂಪತ್ತು ನಾಶ, ನೀರಿನ ಅಸಮರ್ಪಕ ಬಳಕೆಯಿಂದ ನೀರಿಗಾಗಿ ಎರಡು ರಾಜ್ಯಗಳ ನಡುವೆ ಹೋರಾಟ ನಡೆಯುತ್ತಿದೆ. ನಾವೆಲ್ಲ ಮುಂದಿನ ದಿನಗಳನ್ನು ಗಮನಿಸಿ ಚಿಂತನೆ ಮಾಡಿದರೆ ಖಂಡಿತ ಕಾವೇರಿ ಕುಟುಂಬದ ಕಾರ್ಯ ಯಶಸ್ವಿಯಾಗುತ್ತದೆ ಎಂದರು.

ಜನತಂತ್ರ ವ್ಯವಸ್ಥೆಯು ಕಾವೇರಿ ನೀರಿನ ಸಮಸ್ಯೆ ಬಗೆಹರಿಸುವಲ್ಲಿ ವಿಫಲವಾದ ಕಾರಣ ಸರ್ವೋಚ್ಛ ನ್ಯಾಯಾಲಯ ಮಧ್ಯಪ್ರವೇಶ ಮಾಡಿ ಆದೇಶ ಹೊರಡಿಸಿದೆ. ನಾವು ಕಾವೇರಿ ಕುಟುಂಬದ ಸಭೆಗಳ ಮೂಲಕ ಜನತಂತ್ರ ವ್ಯವಸ್ಥೆಯನ್ನು ಗೆಲ್ಲಬೇಕು ಎಂದು ಪ್ರಯತ್ನ ಮಾಡಿದರೂ ಕೆಲವು ಕಾರಣಗಳಿಂದ ವಿಫಲವಾದೆವು ಎಂದು ಹೇಳಿದರು.

ಈ ವೇಳೆ ರೈತ ಮುಖಂಡ ಕುರುಬೂರು ಶಾಂತಕುಮಾರ್ ಮಾತನಾಡಿ, ಹೆಚ್ಚುವರಿ ಮಳೆಯ ನೀರು ಸಮುದ್ರಕ್ಕೆ ಸೇರುವ ಬದಲು ರೈತರು ಸದ್ಬಳಕೆ ಮಾಡಿಕೊಳ್ಳಲು ವಿಶಾಲ ಚಿಂತನೆ ನಡೆಸಬೇಕು. ಎಲ್ಲಾ ಸರ್ಕಾರಗಳು ರೈತರನ್ನು ತುಳಿಯುತ್ತಿವೆ. ನಾವು ರೈತ ಕುಟುಂಬದ ಸದಸ್ಯರಾಗಿ ಚಿಂತನೆ ನಡೆಸಬೇಕಾಗಿದೆ. ಅದಕ್ಕಾಗಿ ಕಾವೇರಿ ಕುಟುಂಬದ ಮುಂದುವರೆದ ಸಭೆಯನ್ನು ಕರೆಯಲಾಗಿದೆ. ಕಾವೇರಿ ಕುಟುಂಬ 16 ಸಭೆಗಳನ್ನು ನಡೆಸಿ ಎರಡು ರಾಜ್ಯಗಳ ನಡುವೆ ಸಮನ್ವಯ ಕಾಯ್ದುಕೊಂಡಿದ್ದೇವೆ ಎಂದು ತಿಳಿಸಿದರು.

ತಮಿಳುನಾಡು ರೈತ ಮುಖಂಡ ಪಿ.ಆರ್.ಪಾಂಡ್ಯ ಮಾತನಾಡಿ, ಕಾವೇರಿ ನೀರಿನ ಸಮಸ್ಯೆಗೆ ಕಾವೇರಿ ಕುಟುಂಬದ ಮೂಲಕ ಪರಿಹಾರ ಕಂಡುಕೊಂಡರೆ ದೇಶವೇ ಅಚ್ಚರಿಯಾಗಿ ನೋಡುತ್ತದೆ. ರೈತರ ಒಗ್ಗಟ್ಟಿನ ಶಕ್ತಿ ಪ್ರದರ್ಶನವಾಗಲಿದೆ. ಎರಡು ರಾಜ್ಯಗಳು ಒಮ್ಮತ ತೀರ್ಮಾನ ಕೈಗೊಂಡರೆ ಕಾವೇರಿ ಪ್ರಾಧಿಕಾರದ ಮುಂದೆ ನಾವೇ ಅಪೀಲು ಮಾಡೋಣ. ಕರ್ನಾಟಕದ ರೈತ ಮುಖಂಡರು ರಾಶಿ ಮನರ್ ಸ್ಥಳ ವೀಕ್ಷಣೆಗೆ ಬಂದರೆ ನಾವು ಸ್ವಾಗತ ನೀಡುತ್ತೇವೆ ಎಂದರು.

ಈ ಸಂದರ್ಭದಲ್ಲಿ ಡಾ.ಪ್ರಕಾಶ್ ಕಮ್ಮರಡಿ, ರೈತ ಮುಖಂಡರಾದ ತಮಿಳುನಾಡಿನ ಟಿ.ಎನ್. ಪಾಂಡ್ಯನ್, ರಾಮನಗೌಂಡರ್, ಸುಧಾ ಧರ್ಮಲಿಂಗಂ, ಪಾಂಡಿಚೇರಿ ಸೋಮುಪಿಳ್ಳೆ, ಕೇರಳದ ಕೆ.ವಿ.ಬಿಜು, ಬಿನಯ್ ಥಾಮಸ್, ಪ್ರೊ.ಶಿವಲಿಂಗಯ್ಯ, ಸುನಂದ ಜಯರಾಮ್, ಕೆ. ಬೋರಯ್ಯ, ಮಂಜೇಶ್‌ಗೌಡ, ನದೀಮ್, ಕನಕಪುರ ಗಜೇಂದ್ರ, ಹೊನ್ನೂರ್ ಪ್ರಕಾಶ್, ನಾಗಾರ್ಜುನ್, ಹಾಸನ ಧರ್ಮರಾಜ್, ಅತ್ತಳ್ಳಿ ದೇವರಾಜ್, ಬರಡನಪುರ ನಾಗರಾಜ್, ಸುರೇಶಗೌಡ, ಮಹೇಶ, ನೀಲಕಂಠಪ್ಪ, ಮಂಜುನಾಥ್, ಕಿರಗಸೂರು ಶಂಕರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಲೋಕಪಾವನಿ-ಗೆಂಡೆ ಹೊಸಹಳ್ಳಿ ಗ್ರಾಮದವರೆಗೆ ರಸ್ತೆ ಅಗಲೀಕರಣಕ್ಕೆ ಆಗ್ರಹಿಸಿ ಗ್ರಾಮಸ್ಥರ ಪ್ರತಿಭಟನೆ


ರಸ್ತೆ ಅಗಲೀಕರಣ ಮಾಡುವಂತೆ ಒತ್ತಾಯಿಸಿ ಗ್ರಾಮಸ್ಥರು ಮನವಿ ಪತ್ರ ಸಲ್ಲಿಸಿದರು.

ಶ್ರೀರಂಗಪಟ್ಟಣ: ತಾಲೂಕಿನ ಬಾಬುರಾಯನಕೊಪ್ಪಲು ಬಳಿಯ ಲೋಕಪಾವನಿ ವೃತ್ತದಿಂದ ಗೆಂಡೆಹೊಸಹಳ್ಳಿ ಗ್ರಾಮದವರಿಗೆ ರಸ್ತೆ ಅಗಲೀಕರಣ ಮಾಡುವಂತೆ ವಿವಿಧ ಗ್ರಾಮಸ್ಥರು ಲೋಕೋಪಯೋಗಿ ಇಲಾಖೆಗೆ ಮುತ್ತಿಗೆ ಹಾಕಿ ಪ್ರತಿಭಟಿಸಿದರು.

ತಾಲೂಕಿನ ಲೋಕಪಾವನಿ ನದಿಯ ಮೂಲಕ ಹಾದು ಹೋಗುವ ಮಂಡ್ಯ-ಬನ್ನೂರು ಮಾರ್ಗದ ಶ್ರೀನಿವಾಸ ಅಗ್ರಹಾರ, ಮರಳಗಾಲ, ದೊಡ್ಡಪಾಳ್ಯ, ಮಂಡ್ಯಕೊಪ್ಪಲು ವೃತ್ತ ಸೇರಿದಂತೆ ಗೆಂಡೆಹೊಸಳ್ಳಿ ಗ್ರಾಮದವರೆಗಿನ ರಸ್ತೆ ಸಂಪೂರ್ಣವಾಗಿ ಗುಂಡಿ ಬಿದ್ದು, ಜೊತೆಗೆ ರಸ್ತೆಯ ಎರಡು ಬದಿಯಲ್ಲಿ ಗಿಡಗೆಂಟಿಗಳು ಬೆಳೆದು, ತಿರುವಿನಲ್ಲಿ ಬರುವ ವಾಹನಗಳು ಎದುರು ಬರುವ ವಾಹನ ಸವಾರರಿಗೆ ಕಾಣದೆ ಪ್ರತಿ ನಿತ್ಯ ಅಪಘಾತಗಳು ಸಂಭವಿಸುತ್ತಿವೆ ಎಂದು ಪ್ರತಿಭಟನಾಕಾರರು ದೂರಿದರು.

ರಸ್ತೆ ಬದಿಯಲ್ಲಿ ಹಾಳೆತ್ತರ ಬೆಳೆದಿರುವ ಗಿಡಗಂಟಿಗಳಿಂದ ಪಾದಚಾರಿಗಳು, ರಸ್ತೆಯಲ್ಲೆ ನಡೆದು ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ವಾಹನಗಳ ಭಯ ಒಂದೆಡೆಯಾದರೆ, ವಿಷಜಂತುಗಳಾದ ಹಾವು, ಚೇಳುಗಳು ಭೀತಿ ಎದುರಾಗಿದೆ. ಕೂಡಲೇ ಈ ಮಾರ್ಗದ ರಸ್ತೆಯನ್ನು ಅಗಲೀಕರಣ ಜೊತೆಗೆ ಗಿಡಗಂಟಿಗಳನ್ನು ತೆರವುಗೊಳಿಸುವಂತೆ ಗ್ರಾಮಸ್ಥರು ಒತ್ತಾಯಿಸಿ ಪಿಡಬ್ಲ್ಯೂಡಿ ಇಲಾಖೆ ಎಇ ಯತೀಶ್ ಕುಮಾರ್ ಅವರಿಗೆ ಮನವಿ ಸಲ್ಲಿಸಿದರು. ಒಂದು ವೇಳೆ ನಮ್ಮ ಮನವಿಗೆ ಶೀಘ್ರ ಸ್ಪಂದಿಸದಿದ್ದಲ್ಲಿ ಈ ಭಾಗದ ಎಲ್ಲಾ ಗ್ರಾಮಗಳ ಗ್ರಾಮಸ್ಥರು ರಸ್ತೆ ತಡೆ ನಡೆಸುವುದಾಗಿ ಎಚ್ಚರಿಸಿದರು.

ಪಿಡಬ್ಲ್ಯೂಡಿ ಇಲಾಖೆ ಎಇ ಯತೀಶ್ ಕುಮಾರ್ ಗ್ರಾಮಸ್ಥರಿಂದ ಮನವಿ ಸ್ವೀಕರಿಸಿ ಮಾತನಾಡಿ, ಈಗಾಗಲೇ ರಸ್ತೆಯ ಎರಡು ಬದಿಯ ಪಾದಚಾರಿ ಮಾರ್ಗದ ಗಿಡಗಂಟೆ ಹಾಗೂ ರಸ್ತೆಗೆ ಬಾಗಿಕೊಂಡಿರುವ ಮರಗಳ ರಂಬೆ ಕತ್ತರಿಸಲು ಟೆಂಡರ್ ಕರೆದು ಗುತ್ತಿಗೆ ನೀಡಲಾಗಿದೆ. ಸದ್ಯ ಮಳೆ ನಿಂತ ಒಂದೆರಡು ದಿನಗಳಲ್ಲಿ ಗುತ್ತಿಗೆದಾರು ಕಾರ್ಯನಿರ್ವಹಿಸಲಿದ್ದಾರೆ ಎಂದು ಭರವಸೆ ನೀಡಿದರು.

ಈ ವೇಳೆ ಉದ್ಯೋಗದಾತ ಸಂಸ್ಥೆಯ ಡಿ.ಬಿ.ರುಕ್ಮಾಂಗ, ನಾರಾಯಣಗೌಡ, ದೊಡ್ಡಪಾಳ್ಯ ಮಲ್ಲೇಶ್, ಮಂಜೇಶ್. ಪವನ್ ಚಂದ್ರು ಛಾಯಾಸುತ. ವಕೀಲರಾದ ಅಭಿಷೇಕ್, ದರಗುಪ್ಪೆ ಲೋಕೇಶ್, ಗೌಡಳ್ಳಿ ದೇವರಾಜ್, ಮಾದೇವಪುರ ಸುರೇಶ್. ಚನ್ನಗಿರಿ ಕೊಪ್ಪಲು ತಮ್ಮಣ್ಣ, ಗೋಪಾಲ್ ಗೌಡ, ಕಾಂತರಾಜ್ ಸೇರಿದಂತೆ ಇತರರು ಇತರರಿದ್ದರು

ರಾಷ್ಟ್ರಮಟ್ಟದ ಕಬಡ್ಡಿ ಪಂದ್ಯಾವಳಿಗೆ ಅನಿಕೇತನ ಶಾಲೆಯ ವಿದ್ಯಾರ್ಥಿ ಆಯ್ಕೆ



ಭಾರತೀನಗರ.ಅ.22- ಇಲ್ಲಿಗೆ ಸಮೀಪದ ಹುಲಿಗೆರೆಪುರ ಗೇಟ್ ಬಳಿಯ ಅನಿಕೇತನ ವಿದ್ಯಾಸಂಸ್ಥೆ ವಿದ್ಯಾರ್ಥಿ ಎಚ್.ಸಿ. ಸಂದೀಪ್ ರಾಜ್ಯ ಮಟ್ಟದ ಕಬಡ್ಡಿ ಪಂದ್ಯಾವಳಿಯಲ್ಲಿ ಮೈಸೂರು ವಿಭಾಗದಿಂದ ಪ್ರತಿನಿಧಿಸಿ ಪ್ರಥಮ ಸ್ಥಾನ ಗಳಿಸುವ ಮೂಲಕ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಮಂಗಳೂರಿನಲ್ಲಿ ನಡೆದ ರಾಜ್ಯ ಮಟ್ಟದ ಕಬಡ್ಡಿ ಪಂದ್ಯಾವಳಿಯ ಫೈನಲ್‌ನಲ್ಲಿ ಎಚ್.ಸಿ.ಸಂದೀಪ್ ಪ್ರಥಮ ಸ್ಥಾನ ಗಳಿಸಿದ್ದಾರೆ. ಹಾಗಾಗಿ ರಾಷ್ಟ್ರಮಟ್ಟದ ಪಂದ್ಯಾವಳಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ಈ ವಿದ್ಯಾರ್ಥಿ ಸಾಧನೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಚ್. ಕಾಳೀರಯ್ಯ, ಶಾಲೆಯ ಆಡಳಿತ ಮಂಡಳಿ, ಶಿಕ್ಷಕ ವೃಂದದರು ಅಭಿನಂದನೆ ಸಲ್ಲಿಸಿದ್ದಾರೆ.

ಡಿ.14ರಿಂದ ಸರ್ವಧರ್ಮ ಸಮ್ಮೇಳನ

ಕೋಡಿ ಮಠದ ಶ್ರೀಗಳಿಗೆ ಆಹ್ವಾನ


ತಾಲೂಕಿನ ಬೆಡದಹಳ್ಳಿಯ ಶ್ರೀಪಂಚಭೂತೇಶ್ವರ ಮಠದಲ್ಲಿ ನಡೆಯುತ್ತಿರುವ ಸರ್ವಧರ್ಮ ಸಮ್ಮೇಳನ ಹಾಗೂ ಧಾರ್ಮಿಕ ಸಭೆಯಲ್ಲಿ ಭಾಗವಹಿಸುವಂತೆ ಕೋಡಿ ಮಠದ ಶ್ರೀಗಳಿಗೆ ಅಧಿಕೃತ ಆಹ್ವಾನ ನೀಡಿದರು.

ಕೆ.ಆರ್.ಪೇಟೆ,ಅ.21- ತಾಲೂಕಿನ ಬೆಡದಹಳ್ಳಿಯ ಶ್ರೀಪಂಚ ಭೂತೇಶ್ವರ ಸುಕ್ಷೇತ್ರದ ದಶಮಾನೋತ್ಸವ ಸಂಭ್ರಮದ ಹಿನ್ನೆಲೆಯಲ್ಲಿ ಡಿ.14 ಮತ್ತು 15 ರಂದು ನಡೆಯುತ್ತಿರುವ ಸರ್ವಧರ್ಮ ಸಮ್ಮೇಳನ ಹಾಗೂ ಧಾರ್ಮಿಕ ಸಭೆಯಲ್ಲಿ ಭಾಗವಹಿಸುವಂತೆ ಸುಕ್ಷೇತ್ರ ಕೋಡಿಮಠದ ಶ್ರೀಗಳಿಗೆ ಅಧಿಕೃತ ಆಹ್ವಾನ ನೀಡಲಾಯಿತು.

ಪಂಚ ಭೂತೇಶ್ವರ ಕ್ಷೇತ್ರದ ಪೀಠಾಧಿಪತಿ ಶ್ರೀ ರುದ್ರಮುನಿ ಸ್ವಾಮೀಜಿಗಳು ಭಕ್ತರ ನಿಯೋಗದೊಂದಿಗೆ ಅರಸೀಕೆರೆ ತಾಲೂಕಿನ ಹಾರನಹಳ್ಳಿಯ ಸುಕ್ಷೇತ್ರ ಕೋಡಿಮಠಕ್ಕೆ ಭೇಟಿ ನೀಡಿ ಜಗದ್ಗುರುಗಳಾದ ಶ್ರೀ ಡಾ.ಶಿವಾನಂದ ಶಿವಯೋಗಿ ಯೋಗಿ ರಾಜೇಂದ್ರ ಮಹಾ ಸ್ವಾಮೀಜಿ ಅವರನ್ನು ಭೇಟಿ ಮಾಡಿ ಬೆಡದಹಳ್ಳಿಯ ಪಂಚಭೂತೇಶ್ವರ ಕ್ಷೇತ್ರದಲ್ಲಿ ಡಿ.14 ಮತ್ತು 15ರಂದು ನಡೆಯುತ್ತಿರುವ ಸರ್ವಧರ್ಮ ಸಮ್ಮೇಳನ ಹಾಗೂ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಆಹ್ವಾನ ನೀಡಲಾಯಿತು.

ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಜಗದ್ಗುರುಗಳು, ಮೈಸೂರಿನ ಸುತ್ತೂರು ಪೀಠದ ಜಗದ್ಗುರುಗಳು, ಶ್ರವಣಬೆಳಗೊಳ ಜೈನಮಠದ ಭಟ್ಟಾರಕವರ್ಯ ಶ್ರೀಗಳು, ತೆಂಡೇಕೆರೆ ಬಾಳೆಹೊನ್ನೂರು ಶಾಖಾಮಠದ ಶ್ರೀ ಗಂಗಾಧರ ಶಿವಾಚಾರ್ಯ ಸ್ವಾಮೀಜಿಗಳು ಭಾಗವಹಿಸುತ್ತಿದ್ದು ಶ್ರೀಮಠದ ಭಕ್ತರ ಕೋರಿಕೆ ಹಾಗೂ ಅಭೀಷ್ಠೆಯಂತೆ ಜಗದ್ಗುರುಗಳಾದ ಕೋಡಿಶ್ರೀಗಳು ಭಾಗವಹಿಸುವಂತೆ ಮನವಿ ಮಾಡಲಾಯಿತು.

ಎರಡು ದಿನಗಳ ಕಾಲ ನಡೆಯಲಿರುವ ಧಾರ್ಮಿಕ ಕಾರ್ಯಕ್ರಮ ಹಾಗೂ ವಿವಿಧ ಸಾಧಕರಿಗೆ ಪಂಚಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಪೌರಕಾರ್ಮಿಕರನ್ನು ಸನ್ಮಾನಿಸಿ ಗೌರವಿಸುವುದು ಸೇರಿದಂತೆ ನಮ್ಮ ಸಂಸ್ಕೃತಿ ಪರಂಪರೆಯನ್ನು ಪ್ರತಿಬಿಂಬಿಸುವ ವಿಶೇಷ ಕಾರ್ಯಕ್ರಮಗಳನ್ನು ರೂಪಿಸಿ, ಆಯೋಜಿಸಲಾಗುತ್ತಿದೆ ಎಂದು ರುದ್ರಮುನಿ ಸ್ವಾಮೀಜಿಗಳು ಕಾರ್ಯಕ್ರಮದ ರೂಪುರೇಷೆಗಳನ್ನು ಮನವರಿಕೆ ಮಾಡಿಕೊಟ್ಟ ಹಿನ್ನೆಲೆಯಲ್ಲಿ ಕೋಡಿಮಠದ ಶ್ರೀಗಳು ಸರ್ವ ಧರ್ಮ ಸಮ್ಮೇಳನದಲ್ಲಿ ಭಾಗವಹಿಸಲು ಸಮ್ಮತಿ ಸೂಚಿಸಿದರು.

ಭಕ್ತರ ನಿಯೋಗದಲ್ಲಿ ಬೆಡದಹಳ್ಳಿ ಪಂಚಭೂತೇಶ್ವರ ಮಠದ ಟ್ರಸ್ಟಿನ ಕಾರ್ಯದರ್ಶಿ ಕಾಂತರಾಜು, ಬಳ್ಳೇಕೆರೆ ಕೆ.ಮನು, ಕಿಕ್ಕೇರಿ ಬಲರಾಂ, ಸಯ್ಯದ್ ಖಲೀಲ್, ಕೆ.ಆರ್.ನೀಲಕಂಠ, ಶರಥ್‌ಗೌಡ ಮತ್ತಿತರರು ಉಪಸ್ಥಿತರಿದ್ದರು.

ಮಳವಳ್ಳಿ ತಾಲೂಕಿನಲ್ಲಿ ಆಡಳಿತ ವ್ಯವಸ್ಥೆ ಕುಸಿತ

ತಹಸೀಲ್ದಾರ್ ಇಲ್ಲ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರ್‌ಎಫ್‌ಒ, ಸಮಾಜ ಕಲ್ಯಾಣ ಇಲಾಖೆಗಳಲ್ಲಿಯೂ ಅಧಿಕಾರಿಗಳಿಲ್ಲ

- ವೈಶ್ಯಾವಾಟಿಕೆ, ಗಾಂಜಾ ಹಾವಳಿ, ಜೂಜು ಸೇರಿ ಅಕ್ರಮ ಚಟುವಟಿಕೆ

ಮಂಡ್ಯ,ಅ.22- ಮಳವಳ್ಳಿ ತಾಲೂಕಿನಲ್ಲಿ ಆಡಳಿತ ವ್ಯವಸ್ಥೆ ಸಂಪೂರ್ಣ ಕುಸಿದಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಮಾಜಿ ಶಾಸಕ ಹಾಗೂ ಜೆಡಿಎಸ್ ಎಸ್ಸಿ ಘಟಕದ ರಾಜ್ಯಾಧ್ಯಕ್ಷ ಕೆ.ಅನ್ನದಾನಿ ಕಿಡಿಕಾರಿದರು.

ಮಂಗಳವಾರ ನಗರದ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳವಳ್ಳಿಯ ಪ್ರಮುಖ ಇಲಾಖೆಯಲ್ಲಿ ಅಧಿಕಾರಿಗಳೇ ಇಲ್ಲದಂತಾಗಿದೆ. ತಹಶೀಲ್ದಾರ್ ವರ್ಗಾವಣೆಯಾಗಿ ಮೂರು ತಿಂಗಳು ಕಳೆದರೂ ಆ ಸ್ಥಳಕ್ಕೆ ಮತ್ತೊಬ್ಬ ಅಧಿಕಾರಿಯ ನೇಮಕವಾಗಿಲ್ಲ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರ್‌ಎಫ್‌ಒ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ವರ್ಗಾವಣೆಯಾಗಿ ತಿಂಗಳುಗಟ್ಟಲೇ ಕಳೆದಿದ್ದರೂ ಈವರೆಗೆ ಅಧಿಕಾರಿಗಳು ಆಯಾ ಕಟ್ಟಿನ ಜಾಗಕ್ಕೆ ಬಂದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಧಿಕಾರಿಗಳು ಮಳವಳ್ಳಿ ತಾಲೂಕಿಗೆ ಬಂದು ಕೆಲಸ ಮಾಡಲು ಭಯ ಪಡುತ್ತಿದ್ದಾರೆ. ಅಧಿಕಾರಿಗಳ ಮೇಲೆ ಕ್ಷೇತ್ರದ ಶಾಸಕರ ದರ್ಪ ಹೆಚ್ಚಾಗಿದೆ. ಅಧಿಕಾರಿಗಳನ್ನು ನಿಂದಿಸುವುದು, ಅವರಿಂದ ವೈಯಕ್ತಿಕವಾಗಿ ನಿರೀಕ್ಷೆ ಮಾಡುವುದು ಹೆಚ್ಚಾಗಿರುವುದರಿಂದ ಮಳವಳ್ಳಿ ತಾಲೂಕಿಗೆ ಅಧಿಕಾರಿಗಳು ಆಗಮಿಸಿ ಜನರ ಸೇವೆ ಮಾಡಲು ಹಿಂದೇಟು ಹಾಕುತ್ತಿದ್ದಾರೆ. ಇದಕ್ಕೆ ಶಾಸಕರೇ ನೇರ ಹೊಣೆ ಎಂದು ಆರೋಪಿಸಿದರು.



ಇತ್ತೀಚೆಗೆ ಮಳವಳ್ಳಿ ತಾಲೂಕಿನ ಹಳ್ಳದ ಕೊಪ್ಪಲು ಗ್ರಾಮದ ಗರ್ಭಿಣಿಯೊಬ್ಬರು ಹೆರಿಗೆಗಾಗಿ ತಾಲೂಕು ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ ಅಲ್ಲಿನ ವೈದ್ಯರು ಸಾಮಾನ್ಯ ಹೆರಿಗೆ ಮಾಡಲು ನಿರಾಕರಿಸಿ ಶಸ್ತ್ರ ಚಿಕಿತ್ಸೆ ಮೂಲಕ ಹೆರಿಗೆ ಮಾಡಿಸಿಕೊಳ್ಳುವಂತೆ ಒತ್ತಡ ಹೇರಿದ್ದರು. ಅದಕ್ಕೆ ಅವರು ಒಪ್ಪದಿದ್ದಾಗ ಸಾಮಾನ್ಯ ಹೆರಿಗೆ ಮಾಡದೆ ಮಗು ಸಾವಿಗೆ ವೈದ್ಯರು ಕಾರಣರಾಗಿದ್ದಾರೆ. ಇದಕ್ಕೆ ಹೊಣೆ ಯಾರು ಎಂದು ಪ್ರಶ್ನಿಸಿದರು.

ಮಳವಳ್ಳಿ ತಾಲೂಕು ಆಸ್ಪತ್ರೆಗೆ ನಾನು ಶಾಸಕನಾಗಿದ್ದ ಅವಧಿಯಲ್ಲಿ ಐಸಿಯು, ಮಕ್ಕಳ ಚಿಕಿತ್ಸಾ ವಿಭಾಗ, ಕಟ್ಟಡ ನವೀಕರಣ ಹೀಗೆ ಹಲವು ಅಭಿವೃದ್ಧಿ ಕೆಲಸಗಳು ಆಗಿದ್ದವು. ಆದರೆ ಇಂದಿನ ಶಾಸಕರು ನನ್ನ ವಿರುದ್ಧ ಭ್ರಷ್ಟಾಚಾರ ಆರೋಪ ಮಾಡಿದ್ದರು. ಪ್ರಸ್ತುತ ಅವರೇ ಶಾಸಕರಾಗಿದ್ದಾರೆ. ಆಸ್ಪತ್ರೆಯ ಅಭಿವೃದ್ಧಿಗೆ ಏನು ಕೊಡುಗೆ ಕೊಟ್ಟಿದ್ದಾರೆ. ವೈದ್ಯರಿಲ್ಲದ ಪರಿಣಾಮ ಆಸ್ಪತ್ರೆಯಲ್ಲಿ ಇಂಥ ದುರ್ಘಟನೆ ನಡೆಯುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದು ಕಿಡಿಕಾರಿದರು.

ಇತ್ತೀಚೆಗೆ ಮಳವಳ್ಳಿ ತಾಲೂಕಿನ ಮಾರೇಹಳ್ಳಿ ಬಳಿ ಟೆಂಪೋದಲ್ಲೇ ವೇಶ್ಯಾವಾಟಿಕೆ ನಡೆಯುತ್ತಿರುವ ಆರೋಪ ಬಂದಿದೆ. ಜೊತೆಗೆ ಗಾಂಜಾ ಹಾವಳಿ, ಜೂಜು ಸೇರಿದಂತೆ ಅಕ್ರಮ ಚಟುವಟಿಕೆಗಳು ತಾಲೂಕಿನಲ್ಲಿ ಎಗ್ಗಿಲ್ಲದೆ ಸಾಗುತ್ತಿದೆ. ಹೀಗಿದ್ದರೂ ಶಾಸಕರು ಕಡಿವಾಣ ಹಾಕಲು ಮುಂದಾಗುತ್ತಿಲ್ಲ ಏಕೆ?, ಕೇವಲ ಎಫ್‌ಐಆರ್ ಮಾಡಿ ಪ್ರಕರಣವನ್ನು ತನಿಖೆ ಮಾಡದೆ ಸುಮ್ಮನಾಗುತ್ತಿದ್ದಾರೆ. ಜೊತೆಗೆ ಇದರಲ್ಲಿ ಕೆಲ ಕಾಂಗ್ರೆಸ್ ಕಾರ್ಯಕರ್ತರ ಪಾತ್ರವಿರುವ ಬಗ್ಗೆ ಮಾಹಿತಿ ಬಂದಿದೆ ಎಂದು ಆರೋಪಿಸಿದರು.

2022ರಲ್ಲಿ ನಾನು ಶಾಸಕನಾಗಿದ್ದಾಗ ಟ್ಯೂಷನ್ ಶಿಕ್ಷಕ ಕಾಂತರಾಜು ಎಂಬಾತ ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ ಮಾಡಿ ಕೊಲೆ ಮಾಡಿದ್ದ. ಅವನನ್ನು ಹೆಡೆಮುರಿ ಕಟ್ಟಿ ಬಂಧಿಸಿ ತ್ವರಿತಗತಿಯಲ್ಲಿ ಜೀವಾವಧಿ ಶಿಕ್ಷೆ ಕೊಡಿಸುವಲ್ಲಿ ಯಶಸ್ವಿಯಾಗಿದ್ದೇವೆ. ಅವನಿಗೆ ಶಿಕ್ಷೆಯಾಗುವುದರಲ್ಲಿ ಶಾಸಕನಾಗಿ ನನ್ನ ಜವಾಬ್ದಾರಿಯೂ ಇತ್ತು. ಹೀಗೆ ದಿಟ್ಟತನದಿಂದ ಅಪರಾಧ ಪ್ರಕರಣವನ್ನು ಬೇಧಿಸುವಲ್ಲಿ ಶಾಸಕರು ವಿಫಲರಾಗಿದ್ದಾರೆ ಎಂದು ದೂರಿದರು.

ಇತ್ತೀಚೆಗೆ ಟಿ.ಕೆ.ಹಳ್ಳಿಯಲ್ಲಿ ಕಾವೇರಿ 5ನೇ ಹಂತದ ಕುಡಿಯುವ ನೀರು ಯೋಜನೆಗೆ ಸಿಎಂ, ಡಿಸಿಎಂ ಚಾಲನೆ ನೀಡಿದ್ದಾರೆ. ಈ ಯೋಜನೆ ಬೆಂಗಳೂರಿನ 110 ಹಳ್ಳಿಗಳಿಗೆ ನೀರು ಸರಬರಾಜು ಮಾಡಲು 5500 ಸಾವಿರ ಕೋಟಿ ರೂ. ವೆಚ್ಚ ಮಾಡಲಾಗಿದೆ. ಆದರೆ ಯೋಜನೆಯಲ್ಲಿಯೇ ಸರಬರಾಜು ಮಾಡುವ ಮಾರ್ಗದುದ್ದಕ್ಕೂ ಸಿಗುವ ಗ್ರಾಮಗಳಿಗೂ ನೀರು ಸರಬರಾಜು ಮಾಡಬೇಕು ಎಂಬ ನಿಯಮ ಹಾಗೂ ಆದೇಶವಿದೆ. ಅದರ ಬಗ್ಗೆ ಯಾವುದೇ ಮಾಹಿತಿಯನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಕಾರ್ಯಕ್ರಮದಲ್ಲಿ ನೀಡಿಲ್ಲ. ಇದರಿಂದ ಮಳವಳ್ಳಿ ತಾಲೂಕಿನ ಹಲಗೂರು, ಗೊಲ್ಲರಹಳ್ಳಿ, ಗುಂಡಾಪುರ, ಟಿ.ಕೆ.ಹಳ್ಳಿ ಆಶ್ರಯ ಬಡಾವಣೆ, ಕೆಂಪಯ್ಯನದೊಡ್ಡಿ, ನಂದೀಪುರ, ದಳವಾಯಿಕೋಡಿಹಳ್ಳಿ, ಬಾಳೆಹೊನ್ನಿಗ ಸೇರಿದಂತೆ ಭಾಗದ ಯಾವುದೇ ಗ್ರಾಮಕ್ಕೆ ನೀರು ಸರಬರಾಜು ಮಾಡಲು ಕ್ರಮವಹಿಸಿಲ್ಲ ಎಂದು ಹೇಳಿದರು.

ಕೆಆರ್‌ಎಸ್ ಜಲಾಶಯದಿಂದ ಸರಿಯಾದ ಸಮಯಕ್ಕೆ ನೀರು ಸರಬರಾಜು ಮಾಡದ ಹಿನ್ನೆಲೆಯಲ್ಲಿ ಮಳವಳ್ಳಿ ತಾಲೂಕಿನ ಕೊನೇ ಭಾಗ ಸೇರಿದಂತೆ ಇತರೆ ಕಡೆ ಬೆಳೆ ಬಿತ್ತನೆ ಮಾಡಲು ಸಾಧ್ಯವಾಗಿಲ್ಲ. ಈಗ ಮಳೆ ಸುರಿಯುತ್ತಿದ್ದರೂ ಬಿತ್ತನೆ ಕಾಲ ಮುಗಿದಿದೆ. ಇದರಿಂದ ಆ ಭಾಗದ ರೈತರು ಸಂಕಷ್ಟಕ್ಕೆ ಒಳಗಾಗಿದ್ದಾರೆ. ಆದ್ದರಿಂದ ಎಲ್ಲ ರೈತರಿಗೂ ಬೆಳೆ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಮನ್‌ಮುಲ್ ಉಪಾಧ್ಯಕ್ಷ ರಘುನಂದನ್ ಉಪಸ್ಥಿತರಿದ್ದರು.

ವಿಪ್ರ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ನೆರವು


ವಿಪ್ರ ವಿದ್ಯಾರ್ಥಿಗಳಿಗೆ ನಗದು ಪ್ರೋತ್ಸಾಹ, ಪ್ರತಿಭಾ ಪುರಸ್ಕಾರ ನೀಡಲಾಯಿತು.

ಕಿಕ್ಕೇರಿ: ಓದಿನಷ್ಟೆ ನೈತಿಕ ಮೌಲ್ಯ ಮುಖ್ಯವಾಗಿದ್ದು, ವಿದ್ಯಾರ್ಥಿ ದಿಸೆಯಲ್ಲಿ ಸನ್ನಡತೆ ರೂಪಿಸಿಕೊಂಡು ಭವಿಷ್ಯದ ಮಾದರಿ ಮಕ್ಕಳಾಗಿ ಎಂದು ಮೈಸೂರು ವಿಶ್ವವಿದ್ಯಾಲಯದ ನಿವೃತ್ತ ಪ್ರೊಫೆಸರ್ ಎಂ.ಎಸ್. ಕೃಷ್ಣಮೂರ್ತಿ ತಿಳಿಸಿದರು.

ಪಟ್ಟಣದ ವಿಪ್ರ ಬಾಂಧವ ಸೇವಾ ಸಮಿತಿ ಸುಬ್ಬರಾಯ ಛತ್ರದಲ್ಲಿ ವಿಪ್ರ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಪ್ರತಿಭಾ ಪುರಸ್ಕಾರ ಹಾಗೂ ಪ್ರೋತ್ಸಾಹಧನ ವಿತರಣಾ ಸಮಾರಂಭದಲ್ಲಿ ಮಾತನಾಡುತ್ತ, ವಿಪ್ರ ಸಮಾಜ ಜ್ಞಾನದಲ್ಲಿ ಮೇಲಾಗಿದೆ. ತಮ್ಮ ಸಮಾಜಕ್ಕೆ ಇದುವರೆವಿಗೂ ವಿಪ್ರ ಜಾತಿ ಪ್ರಮಾಣ ಪತ್ರ ಸರ್ಕಾರದಿಂದ ಸಿಗದಿರುವುದು ಬೇಸರವಾಗಿದೆ ಎಂದರು.

ಕಿಕ್ಕೇರಿ ಬಲು ದೊಡ್ಡ ಸಂಸ್ಕೃತಿಯ ತಾಣವಾಗಿದೆ. ಇಲ್ಲಿ ನಡೆಯುವ ಪ್ರತಿ ಕಾರ್ಯಕ್ರಮ ರಾಜ್ಯಕ್ಕೆ ಮಾದರಿಯಾಗಿದೆ. ವಿದ್ಯಾರ್ಥಿಗಳ ಜ್ಞಾನ ಶಿಕ್ಷಣಕ್ಕೆ ನೆರವಾಗುವ ಕೆಲಸ ಸರ್ವಶ್ರೇಷ್ಠವಾಗಿದೆ. ವಿವಿಧ ಜಿಲ್ಲೆಯ ಅರ್ಹ ವಿದ್ಯಾರ್ಥಿಗಳನ್ನು ಗುರ್ತಿಸಿ ನೆರವು ನೀಡುವ ಕೆಲಸ ನಿರಂತರವಾಗಿರಲಿ ಎಂದು ಆಶಿಸಿದರು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಡಿಗ್ರಿ, ಮೆಡಿಕಲ್, ಇಂಜಿನಿಯರಿಂಗ್ ಓದುತ್ತಿರುವ ಪ್ರತಿಭಾನ್ವಿತ ಹಾಗೂ ಬಡ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು ನೀಡಿ ಗೌರವಿಸಿ, ಉತ್ತೇಜಿಸಲಾಯಿತು. ಸಮಾಜದ ಗಣ್ಯರಾದ ನಿವೃತ್ತ ಶಿಕ್ಷಕ ಎಸ್.ಜಿ. ಸತ್ಯನಾರಾಯಣ, ಪಂಚಮಿ ಸೇವಾ ಸಮಿತಿ ಅಧ್ಯಕ್ಷ ಕೆ.ಎನ್. ಗೌರಿಶಂಕರ್, ಪಂಚಮಿ ಸೇವಾ ಸಮಿತಿ ಗೌರವಾಧ್ಯಕ್ಷ ಕೆ.ಆನಂದಮೂರ್ತಿ ಅವರನ್ನು ಗೌರವಿಸಲಾಯಿತು.

ಜಿಲ್ಲಾ ಬ್ರಾಹ್ಮಣ ಸಂಘದ ಮಾಜಿ ಅಧ್ಯಕ್ಷ ಎಸ್.ಶಂಕರನಾರಾಯಣಶಾಸ್ತ್ರೀ, ಅರವಿಂದ್ ಕಾರಂತ್, ಶ್ರೀಮತಿ, ಕೆ.ಬಿ. ವೆಂಕಟೇಶ್, ಮಹಬಲಶರ್ಮ ಮತ್ತಿತರರು ಇದ್ದರು.

ಕಾವೇರಿ ನದಿಯಲ್ಲಿ ತಮ್ಮ ತಾಯಿಯ ಅಸ್ಥಿ ವಿಸರ್ಜಿಸಿದ ಚಿತ್ರನಟ ಸುದೀಪ್

ಶ್ರೀರಂಗಪಟ್ಟಣ: ಪಟ್ಟಣದ ಗಂಜಾಂ ಗೋಸಾಯಿಘಾಟ್ ಬಳಿಯ ಕಾವೇರಿ ನದಿಯಲ್ಲಿ ಚಿತ್ರನಟ ಸುದೀಪ್ ಅವರ ತಾಯಿ ಸರೋಜಮ್ಮನ ಅವರ ಅಸ್ಥಿ ವಿಸರ್ಜನೆ ಕಾರ್ಯ ನಡೆಸಲಾಯಿತು. ನಟ ಸುದೀಪ್ ತಮ್ಮ ಸಹೋದರಿಯರು ಸೇರಿದಂತೆ ಕುಟುಂಬಸ್ಥರೊಂದಿಗೆ ಗೋಸಾಯಿಘಾಟ್‌ಗೆ ಆಗಮಿಸಿ, ವೈದಿಕ ಶ್ರಾದ್ಧಾ ಕಾರ್ಯದ ಪೂಜೆಯಲ್ಲಿ ಭಾಗಿಯಾಗಿ ಅಸ್ಥಿ ವಿಸರ್ಜನಾ ಕಾರ್ಯವನ್ನು ನೆರವೇರಿಸಿದರು.

ಶ್ರೀರಂಗಪಟ್ಟಣದ ಶ್ರೀ ಕ್ಷಾಂಬಿಕ ದೇವಾಲಯದ ಅರ್ಚಕ ರಾಘವೇಂದ್ರ ಶರ್ಮ ಅವರ ನೇತೃತ್ವದಲ್ಲಿ ಕಾವೇರಿ ನದಿ ದಡದಲ್ಲಿ ಅಸ್ಥಿ ವಿಸರ್ಜನಾ ಶ್ರಾದ್ಧಾ ಕಾರ್ಯಗಳು ಧಾರ್ಮಿಕ ವಿಧಿ ವಿಧಾನದಂತೆ ಸುದೀಪ್ ನಡೆಸಿಕೊಟ್ಟರು. ಪೂಜಾ ಕಾರ್ಯದ ಸುತ್ತಲೂ ಪಟ್ಟಣದ ಪೊಲೀಸರು ಬಿಗಿ ಭದ್ರತೆ ಒದಗಿಸಿದ್ದರು. ಈ ವೇಳೆ ಸ್ಥಳದಲ್ಲಿದ್ದ ಮಾಧ್ಯಮದವರ ಬಳಿ ನಟ ಸುದೀಪ್ ಆಗಮಿಸಿ, ಶ್ರಾದ್ಧಾ ಕಾರ್ಯದ ಚಿತ್ರೀಕರಣ ಮಾಡದಂತೆ ಮಾಧ್ಯಮದವರಲ್ಲಿ ಮನವಿ ಮಾಡಿದರು.

ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಂಡ್ಯ,ಅ.22- ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಾದ ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಉದ್ಯಮ ಶೀಲತಾ ಯೋಜನೆ, ಮೈಕ್ರೋ ಕ್ರೆಡಿಟ್ ಯೋಜನೆ, ಗಂಗಾ ಕಲ್ಯಾಣ ಯೋಜನೆಯಡಿ ಸಾಲಸೌಲಭ್ಯ ಕಲ್ಪಿಸಲು ಅರ್ಹ ಫಲಾಪೇಕ್ಷಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಅರ್ಹ ಪರಿಶಿಷ್ಟ ಪಂಗಡಗಳಿಗೆ ಸೇರಿದ ಅರ್ಜಿದಾರರು ವಿವಿಧ ಯೋಜನೆಯಡಿ 18 ವರ್ಷದಿಂದ 50 ವರ್ಷದ ವಯೋಮಿತಿಯಲ್ಲಿರಬೇಕು. ಕೃಷಿ ಮತ್ತು ಕೃಷಿ ಆಧಾರಿತ ಚಟುವಟಿಕೆಗಳಿಗೆ ಕನಿಷ್ಟ ವಯೋಮಿತಿ 18 ರಿಂದ 60 ವರ್ಷಗಳು. ಅರ್ಜಿದಾರರು ಪರಿಶಿಷ್ಟ ಪಂಗಡದ ನಿಗಮಕ್ಕೆ ಸಂಬಂಧಿಸಿದ/ವ್ಯಾಪ್ತಿಗೆ ಒಳಪಡುವ ಉಪ ಜಾತಿಯ ಫಲಾಪೇಕ್ಷಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ. ಈ ಹಿಂದೆ ನಿಗಮದಿಂದ ಯಾವುದೇ ಸಾಲ ಸೌಲಭ್ಯ ಪಡೆಯದ ಕುಟುಂಬದ ಫಲಾಪೇಕ್ಷಿಗಳು ಮಾತ್ರ ಅರ್ಜಿ ಸಲ್ಲಿಸುವುದು. ಸೌಲಭ್ಯ ಕೋರಿ ಆನ್‌ಲೈನ್ ಮೂಲಕ ಸೇವಾ ಸಿಂಧು ಪೋರ್ಟಲ್‌ನಲ್ಲಿ https://Sevasindu.karnataka.gov.in ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಸೇವಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದು.

ಆಹಾರ ಪದಾರ್ಥದ ಜೊತೆಗೆ ಬೆಲ್ಲ ವಿತರಣೆಗೆ ಚಿಂತನೆ


ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿರುವ ಆಹಾರ ಆಯೋಗದ ಅಧ್ಯಕ್ಷ ಡಾ.ಕೃಷ್ಣ.

ಮಂಡ್ಯ,ಅ.22- ರಾಜ್ಯದ ಪ್ರತೀ ಪಡಿತರ ಅಂಗಡಿಗಳಲ್ಲಿ ತಿಂಗಳಿಗೊಮ್ಮೆ ನೀಡುವ ಆಹಾರ ಪದಾರ್ಥಗಳ ಜೊತೆಗೆ ಬೆಲ್ಲ ವಿತರಣೆಗೆ ಚಿಂತನೆ ನಡೆಸಲಾಗಿದೆ ಎಂದು ಕರ್ನಾಟಕ ಆಹಾರ ಆಯೋಗದ ಅಧ್ಯಕ್ಷ ಡಾ.ಕೃಷ್ಣ ತಿಳಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಡಿತರ ಅಂಗಡಿಗಳಲ್ಲಿ ಈಗಾಗಲೇ ಗುಣಮಟ್ಟದ ಆಹಾರ ಪದಾರ್ಥಗಳನ್ನು ವಿತರಣೆ ಮಾಡಲಾಗುತ್ತಿದೆ. ಇದರ ಜೊತೆಗೆ ಬೆಲ್ಲ ವಿತರಣೆ ಮಾಡಿದರೆ, ರಾಜ್ಯದಲ್ಲಿ ಕಬ್ಬು ಉತ್ಪಾದನೆ ಮಾಡುವ ರೈತರಿಗೆ ಪ್ರೋತ್ಸಾಹ ನೀಡಿದಂತಾಗುತ್ತದೆ. ಅದರಲ್ಲೂ ಅತಿ ಹೆಚ್ಚು ಕಬ್ಬು ಬೆಳೆಯುವ ರಾಜ್ಯದ ಮಂಡ್ಯ ಮತ್ತು ಬೆಳಗಾವಿ ಜಿಲ್ಲೆಗಳ ರೈತರಿಗೆ ಅತಿ ಹೆಚ್ಚು ಲಾಭವಾಗಲಿದೆ ಎಂದು ಹೇಳಿದರು. ಈ ಬಗ್ಗೆ ಈಗಾಗಲೇ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಆಹಾರ ಸಚಿವ ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ್ದು, ಶೀಘ್ರವೇ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಜೊತೆಗೆ ಸರ್ಕಾರ ಪಡಿತರ ವಿತರಣೆಗೆ ಸಂಬಂಧಿಸಿದಂತೆ ಒಂದು ಕಾರ್ಡ್, ಒಂದು ನೇಷನ್ ಯೋಜನೆಯನ್ನು ಜಾರಿಗೆ ತಂದಿದ್ದು, ರೇಷನ್ ಕಾರ್ಡ್ ಹೊಂದಿದ ಒಂದು ಕುಟುಂಬ ರಾಜ್ಯದ ಯಾವುದೇ ಮೂಲೆಯಲ್ಲಿ ವಾಸ ಮಾಡಿದರೂ ಸ್ಥಳೀಯ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಪಡೆಯಬಹುದು. ಹಾಗೊಂದು ವೇಳೆ ಪಡಿತರ ಕೊಡಲು ಹಿಂದೇಟು ಹಾಕಿದರೆ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬಹುದು ಎಂದು ಹೇಳಿದರು.

ಪಡಿತರ ವಿತರಣೆ ಮಾತ್ರವಲ್ಲದೆ, ಹಾಸ್ಟೆಲ್‌ಗಳಲ್ಲಿ ಮಕ್ಕಳ ಪ್ರವೇಶಾತಿಗೆ ತಕ್ಕಂತೆ ಆಹಾರ ಸೌಲಭ್ಯ ಒದಗಿಸಬೇಕು. ಆಹಾರದ ಗುಣಮಟ್ಟದಲ್ಲಿ ವ್ಯತ್ಯಾಸವಾಗಬಾರದು. ಹೋಟೆಲ್‌ಗಳಲ್ಲೂ ಸಹ ಗುಣಮಟ್ಟದ ಆಹಾರ ಒದಗಿಸಬೇಕು. ಒಂದು ವೇಳೆ ಇವುಗಳಲ್ಲಿ ನ್ಯೂನತೆ ಕಂಡು ಬಂದರೆ ದೂರು ನೀಡಬಹುದು ಎಂದು ಹೇಳಿದರು.

ಗೋಷ್ಠಿಯಲ್ಲಿ ಆಹಾರ ಆಯೋಗದ ಸದಸ್ಯರಾದ ಲಿಂಗರಾಜು ಕೋಟೆ, ಮಾರುತಿ, ರೋಹಿಣಿ, ಸುಮಂತರಾವ್, ವಿಜಯಲಕ್ಷ್ಮಿ, ಆಹಾರ ಹಾಗೂ ನಾಗರೀಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಸಿ.ಪಿ.ಕೃಷ್ಣಕುಮಾರ್ ಇದ್ದರು.

ಜೇನುಗಾರಿಕೆಗೆ ತರಬೇತಿ

ಮಂಡ್ಯ,ಅ.22- ತೋಟಗಾರಿಕೆ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಭಾಗಮಂಡಲ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 2024-25 ನೇ ಸಾಲಿನಲ್ಲಿ ಇಲಾಖಾ ವತಿಯಿಂದ ಮಂಡ್ಯ ಜಿಲ್ಲೆಯ ಅಭ್ಯರ್ಥಿಗಳಿಗೆ ನವೆಂಬರ್ 5 ರಿಂದ 2025 ನೇ ಫೆಬ್ರವರಿ 4 ರವರೆಗೆ ರೈತರ ಮಕ್ಕಳಿಗೆ 3 ತಿಂಗಳ ಜೇನುಗಾರಿಕೆ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಆಸಕ್ತರು ಅರ್ಜಿಯನ್ನು ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರ ಕಚೇರಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ಇಲಾಖಾ ವೆಬ್‌ಸೈಟ್ https:horticulture dir.karnataka.gov.inನಲ್ಲಿ ಅ.25ರವರೆಗೆ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಗಳನ್ನು ಆಯಾ ಜಿಲ್ಲೆಗಳ ತೋಟಗಾರಿಕೆ ಉಪ ನಿರ್ದೇಶಕರ ಕಚೇರಿಗೆ ಸಲ್ಲಿಸುವಾಗ ಅರ್ಜಿ ಶುಲ್ಕದ ಬಾಬ್ತು ಸಾಮಾನ್ಯ ಅಭ್ಯರ್ಥಿಗಳಿಗೆ ರೂ. 20, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ರೂ 10 ಮೌಲ್ಯದ ಇಂಡಿಯನ್ ಪೋಸ್ಟರ್ ಆರ್ಡರ್/ಡಿಮ್ಯಾಂಡ್ ಡ್ರಾಫ್ಟ್ ಅನ್ನು ಜಿಲ್ಲೆಗಳ ತೋಟಗಾರಿಕೆ ಉಪನಿರ್ದೇಶಕರ ಹೆಸರಿನಲ್ಲಿ ಪಡೆದು ಅರ್ಜಿ ಜೊತೆ ಲಗತ್ತಿಸಬೇಕು.

ಪ್ರಬುದ್ಧರನ್ನು ಈ ಬಾರಿ ಸಮ್ಮೇಳನಾಧ್ಯಕ್ಷರನ್ನಾಗಿ ಆಯ್ಕೆ ಮಾಡಿ



ಮಂಡ್ಯ,ಅ.22- ಸಾಹಿತ್ಯೇತರರನ್ನು ಸಮ್ಮೇಳನಾಧ್ಯಕ್ಷರಾಗಿ ಮಾಡಿದರೆ ಅದು ಇಡೀ ಪ್ರಪಂಚಕ್ಕೆ ಮಾಡುವ ಮೋಸ, ಕಡ್ಡಾಯವಾಗಿ ಸಾಹಿತಿಗಳನ್ನೇ ಅದರಲ್ಲೂ ಪ್ರಬುದ್ಧರನ್ನು ಸಮ್ಮೇಳನಾಧ್ಯಕ್ಷರನ್ನಾಗಿ ಮಾಡಬೇಕು ಎಂದು ಚಲನಚಿತ್ರ ನಟ ಹಾಗೂ ರಂಗಕರ್ಮಿ ಮಂಡ್ಯ ರಮೇಶ್ ಒತ್ತಾಯಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಆಯೋಜಿಸಲಾಗಿದ್ದ ವಾರದ ಸಾಹಿತ್ಯ ಅತಿಥಿ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಕನ್ನಡ ಸಾಹಿತ್ಯ ಸಮ್ಮೇಳನ ಆಗುತ್ತಿರುವ ದಿಸೆಯಿಂದ ಸಾಹಿತಿಗಳೇ ಸಮ್ಮೇಳನಾಧ್ಯಕ್ಷರಾಗಬೇಕೆಂಬುದು ನನ್ನ ಕಡಾಖಂಡಿತ ವಾದವಾಗಿದ್ದು ತುಂಬಾ ಪ್ರಬುದ್ಧ, ಚಿಂತನೆಯುಳ್ಳ ಯೋಗ್ಯರನ್ನೇ ಆಯ್ಕೆ ಮಾಡಬೇಕು, ಮಂಡ್ಯದಲಿ ಈ ಹಿಂದೆ ನಡೆದ ಎರಡೂ ಅಖಿಲ ಭಾರತ ಸಾಹಿತ್ಯ ಸಮ್ಮೇಳನದಲ್ಲಿ ಜಯದೇವ ನಿಗಾಡೆ ಹಾಗೂ ಚದುರಂಗರಂತಹ ಉತ್ತಮ ವ್ಯಕ್ತಿಗಳನ್ನು ಆಯ್ಕೆ ಮಾಡಲಾಗಿದ್ದು, ಅದೇ ರೀತಿ ಅದ್ಭುತ ಆಯ್ಕೆಯನ್ನು ಮಾಡಬೇಕಿದೆ. ಸಾಹಿತಿಗಳಲ್ಲದೆ ರಾಜಕಾರಣಿಗಳು, ಮಠಾಧೀಶರು ಮತ್ಯಾರನ್ನಾದರು ಆಯ್ಕೆ ಮಾಡಿದರೆ ಅದು ಕನ್ನಡ ಜನಕ್ಕೆ ಮಾಡುವ ದೊಡ್ಡ ಮೋಸ ಎಂದರು.

ನಾಲೆಯಲ್ಲಿ ಅಪರಿಚಿತ ಶವ ಪತ್ತೆ

ಶ್ರೀರಂಗಪಟ್ಟಣ,ಅ,22- ಕೆ.ಆರ್. ಸಾಗರ ಟೋಲ್ ಬಳಿ ಇರುವ ಆರ್‌ಬಿಎಲ್‌ಎಲ್ ನಾಲೆಯಲ್ಲಿ ಸುಮಾರು 40 ರಿಂದ 45 ವಯಸ್ಸಿನ ಅಪರಿಚಿತ ಗಂಡಸ್ಸಿನ ಶವ ಪತ್ತೆಯಾಗಿದೆ. ನೀಲಿ ಬಣ್ಣದ ಶರ್ಟ್, ಕಪ್ಪು ಪ್ಯಾಂಟ್, ದುಂಡುಮುಖ, ಸುಮಾರು 5.2 ಅಡಿ ಎತ್ತರ, ಬಲಗೈ ಮೇಲೆ ಹುಲಿಯ ಚಿತ್ರ, ಕಪ್ಪು-ಕೆಂಪು ದಾರ ಹಾಗೂ ಎಡಗೈ ಮೇಲೆ ಗಣಪತಿ ಚಿತ್ರದ ಗುರುತು ಇದ್ದು, ಮುಖದ ಕೆಲವೆಡೆ ಜಲಚರ ಪ್ರಾಣಿಗಳು ತಿಂದಿದೆ.

ವಾರಸುದಾರರು ಕೆಆರ್‌ಎಸ್ ಪೊಲೀಸ್ ಠಾಣೆ ಅಥವಾ ಸಬ್‌ಇನ್ಸ್‌ಪೆಕ್ಟರ್ ಅವರನ್ನು ಮೊ. ಸಂಖ್ಯೆ 9480804856 ಮೂಲಕ ಸಂಪರ್ಕಿಸಲು ಕೋರಲಾಗಿದೆ.

ಕರ್ತವ್ಯ ನಿರತ ಪುರಸಭೆ ಮುಖ್ಯಾಧಿಕಾರಿ ರಾಜು.ಕೆ.ವಠಾರ ಹೃದಯಾಘಾತದಿಂದ ನಿಧನ



ಕೆ.ಆರ್.ಪೇಟೆ,ಅ.22-ಇಲ್ಲಿನ ಪುರಸಭೆಯ ಮುಖ್ಯಾಧಿಕಾರಿಯಾಗಿ ಕಳೆದ ನಾಲ್ಕು ತಿಂಗಳಿನಿಂದ ಕರ್ತವ್ಯ ನಿರ್ವಹಿಸುತ್ತಿದ್ದ ರಾಜು.ಕೆ.ವಠಾರ(58) ಇಂದು ಮಧ್ಯಾಹ್ನ ಕರ್ತವ್ಯ ನಿರತರಾಗಿದ್ದಾಗಲೇ ಹೃದಯಾಘಾತದಿಂದ ನಿಧನ ಹೊಂದಿದ್ದಾರೆ.

ತಮ್ಮ ಕೊಠಡಿಯಲ್ಲಿ ಕುಸಿದು ಬಿದ್ದ ಅವರನ್ನು ಕೂಡಲೇ ಕಚೇರಿಯ ಸಿಬ್ಬಂದಿಗಳು ಪಟ್ಟಣದ ದುಂಡಶೆಟ್ಟಿ ಲಕ್ಷ್ಮಮ್ಮ ಸ್ಮಾರಕ ತಾಲೂಕು ಆಸ್ಪತ್ರೆಗೆ ಕರೆದೊಯ್ಯುತ್ತಿದ್ದ ವೇಳೆ ಮಾರ್ಗದ ಮಧ್ಯದಲ್ಲಿಯೇ ನಿಧನರಾದರು. ಕಳೆದ ನಾಲ್ಕು ತಿಂಗಳ ಹಿಂದೆಯಷ್ಟೇ ಪುರಸಭೆಗೆ ಮುಖ್ಯಾಧಿಕಾರಿಯಾಗಿ ವರ್ಗಾವಣೆಗೊಂಡು ಆಗಮಿಸಿದ್ದ ರಾಜು ಕೆವಠಾರ ಅವರು ತಮ್ಮ ದಕ್ಷ ಆಡಳಿತದಿಂದ ಹೆಸರು ಗಳಿಸಿದ್ದರು. ಮೂಲತಃ ವಿಜಯಪುರ ಪಟ್ಟಣದವರಾಗಿರುವ ರಾಜು ವಠಾರ್ ದೇವನಹಳ್ಳಿ ಪಟ್ಟಣದ ನಿವಾಸಿಯಾಗಿದ್ದು, ಪತ್ನಿ, ಪುತ್ರ ಹಾಗೂ ಪುತ್ರಿಯನ್ನು ಅಗಲಿದ್ದಾರೆ.

ಸಮಸ್ಯೆಗಳನ್ನು ಧೈರ್ಯದಿಂದ ಎದುರಿಸಿ ಬದುಕು ಸಾಗಿಸಿ

ಜೀರ್ಣೋದ್ಧಾರಗೊಂಡ ಕಾಶಿ ವಿಶ್ವನಾಥ ದೇವಾಲಯ ಉದ್ಘಾಟಿಸಿದ ಕುಮಾರಸ್ವಾಮಿ ಸಲಹೆ


ಪಾಂಡವಪುರ ತಾಲೂಕಿನ ಎಣ್ಣೆಹೊಳೆಕೊಪ್ಪಲು ಗ್ರಾಮದಲ್ಲಿ ನೂತನವಾಗಿ ಜೀರ್ಣೋದ್ಧಾರಗೊಂಡ ಶ್ರೀಕಾಶಿ ವಿಶ್ವನಾಥಸ್ವಾಮಿ ದೇವಸ್ಥಾನದ ಸಮಾರಂಭವನ್ನು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಉದ್ಘಾಟಿಸಿದರು.

ಪಾಂಡವಪುರ,ಅ.22- ಬದುಕಿನಲ್ಲಿ ಬರುವ ಸಮಸ್ಯೆಗಳನ್ನು ಧೈರ್ಯದಿಂದ ಎದುರಿಸಿ ಬದುಕು ಸಾಗಿಸಬೇಕೆ ಹೊರತು ಸಮಸ್ಯೆಗೆ ಹೆದರಿ ರೈತ ಸಮೂಹ ಅನಾಹುತ ಮಾಡಿಕೊಳ್ಳಬಾರದು ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ತಾಲೂಕಿನ ಎಣ್ಣೆಹೊಳೆಕೊಪ್ಪಲು ಗ್ರಾಮದ ಕಾವೇರಿ ನದಿ ಪಕ್ಕದಲ್ಲಿ ನೂತನವಾಗಿ ಜೀರ್ಣೋದ್ಧಾರಗೊಂಡಿರುವ ಶ್ರೀಕಾಶಿ ವಿಶ್ವನಾಥ ದೇವಾಲಯದ ಪುನರ್ ಪ್ರತಿಷ್ಠಾಪನ ಕುಂಭಾಭಿಷೇಕ ಮಹೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಿ.ಎಸ್.ಪುಟ್ಟರಾಜು ಅವರು ಸಚಿವರಾಗಿದ್ದ ಸಂದರ್ಭದಲ್ಲಿ ದೇವಸ್ಥಾನದ ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ ಮಾಡಿಸಿ ನಂತರ ಗ್ರಾಮಸ್ಥರು, ಹೆಣ್ಣುಮಕ್ಕಳು, ಅಳಿಯಂದಿರ ಸಹಕಾರದಿಂದ ದೇವಸ್ಥಾನವನ್ನು ಜೀರ್ಣೋದ್ಧಾರ ಮಾಡಲಾಗಿದೆ. ಕಾಶಿವಿಶ್ವನಾಥ ಕುಟುಂಬಗಳು ನೆಮ್ಮದಿಯಿಂದ ಬದುಕಲು ಅನುಗ್ರಹ ನೀಡಲಿ ಎಂದು ಪ್ರಾರ್ಥನೆ ಮಾಡುತ್ತೇನೆ ಎಂದರು.

ಹಿಂದೆ ನಮ್ಮ ಹಳ್ಳಿಗಳಲ್ಲಿ ಸರಿಯಾದ ರಸ್ತೆಗಳು, ವಿದ್ಯುತ್, ಸಾರಿಗೆ ವ್ಯವಸ್ಥೆಗಳು ಇಲ್ಲದಂತಹ ಸಂದರ್ಭದಲ್ಲೂ ನಮ್ಮ ಹಳಿಯ ಜನರು ನೆಮ್ಮದಿಯಿಂದ ಬದುಕು ನಡೆಸುತ್ತಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಜನರು ಸಮಸ್ಯೆಗಳು ಬಂದಾಗ ಪರಸ್ಪರ ಸ್ಪಂಧನೆ ನೀಡಿ, ಸಹಭಾಳ್ವೆ ಹಾಗೂ ನೆಮ್ಮದಿಯಿಂದ ಬದುಕುವುದೇ ಕಡಿಮೆ ಯಾಗುತ್ತಿದೆ. ನಾವು ನೋಡಿದಂತಹ ಹಿಂದಿನ ನಮ್ಮ ಹಳ್ಳಿಗಳ ಜನರ ಬದುಕನ್ನು ನಾವು ನಮ್ಮ ಮುಂದಿನ ಪೀಳಿಗೆಯ ಮಕ್ಕಳು ಮೊಮ್ಮಕ್ಕಳು ಕಾಣಲು ಸಾಧ್ಯವಿಲ್ಲ ಎಂದು ವಿಷಾಧಿಸಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತನಾಡಿ, ಕಾವೇರಿ ನದಿ ಪ್ರವಾಹ ಬಂದಂತಹ ಸಂದರ್ಭದಲ್ಲಿ ಎಣ್ಣೆಹೊಳೆ ಕೊಪ್ಪಲು ಗ್ರಾಮಕ್ಕೆ ನೀರು ನುಗ್ಗಿ ಅನಾಹುತ ಸೃಷ್ಟಿಸುತ್ತಿತ್ತು. ನಾನು ಸಚಿವನಾಗಿದ್ದ ಸಂದರ್ಭದಲ್ಲಿ ಮುಖ್ಯಮಂತ್ರಿಯಾಗಿದ್ದ ಎಚ್.ಡಿ.ಕುಮಾರಸ್ವಾಮಿ ಅವರ ಗಮನಕ್ಕೆ ತಂದು ತಡೆಗೋಡೆ ನಿರ್ಮಾಣಕ್ಕೆ 10 ಕೋಟಿ ಅನುದಾನ ಮಂಜೂರು ಮಾಡಿಸಿ ಅದೇ ಯೋಜನದಲ್ಲಿ 65 ಲಕ್ಷ ಹಣವನ್ನು ಕಾಶಿವಿಶ್ವನಾಥ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಬಿಡುಗಡೆ ಮಾಡಿಸಲಾಗಿತ್ತು. ಉಳಿದ ಹಣವನ್ನು ಗ್ರಾಮದ ಹೆಣ್ಣುಮಕ್ಕಳು, ಅಳಿಯಂದಿರು ಹಾಗೂ ಗ್ರಾಮಸ್ಥರು ಸಹಕಾರದಿಂದ 1.50 ಕೋಟಿ ವೆಚ್ಚದಲ್ಲಿ ದೇವಸ್ಥಾನವನ್ನು ಜೀರ್ಣೋದ್ಧಾರ ಮಾಡಲಾಗಿದೆ. ಜತೆಗೆ ದೇವಸ್ಥಾನದ ಅಡುಗೆ ಮನೆ ನಿರ್ಮಾಣಕ್ಕೆ ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರು 10 ಲಕ್ಷ ಅನುದಾನ ನೀಡಲಿದ್ದಾರೆ ಎಂದರು.

ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ, ಎಚ್.ಟಿ.ಮಂಜು, ಎಂಎಲ್‌ಸಿ ವಿವೇಕಾನಂದ, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಡಾ.ಎನ್.ಎಸ್. ಇಂದ್ರೇಶ್, ಜಿಪಂ ಮಾಜಿ ಸದಸ್ಯರಾದ ಸಿ.ಅಶೋಕ್, ಎಚ್.ಮಂಜುನಾಥ್, ಜೆಡಿಎಸ್ ಅಧ್ಯಕ್ಷ ಮಲ್ಲೇಶ್, ದೇವಸ್ಥಾನ ಜೀರ್ಣೋದ್ಧಾರ ಸಮಿತಿ ಅಧ್ಯಕ್ಷ ವೈ.ಎಸ್. ದಿಲೀಪ್, ಉಪಾಧ್ಯಕ್ಷ ವೈ.ಡಿ.ಸುರೇಶ್ ಕುಮಾರ್, ಕಾರ್ಯದರ್ಶಿ ಆರ್.ಜನಾರ್ಧನ್, ಖಜಾಂಚಿ ಡಿ.ದೀಪು, ವೈ.ಸಿ.ನಿರಂಜನ್, ರವಿಕುಮಾರ್, ಪ್ರದೀಪ್‌ಕುಮಾರ್, ಗಂಗಾಧರ್, ಶ್ರೀಕಂಠೇಗೌಡ, ಪ್ರಕಾಶ್, ವೆಂಕಟೇಶ್, ರಾಜು, ದೊರಸ್ವಾಮಿ, ಗಿರೀಶ್ ಸೇರಿದಂತೆ ಗ್ರಾಮದ ಹೆಣ್ಣು ಮಕ್ಕಳು, ಅಳಿಯಂದಿರು, ಗ್ರಾಮಸ್ಥರು ಮುಖಂಡರು ಭಾಗವಹಿಸಿದ್ದರು.

ಮೈಸೂರು ಮಿತ್ರ

ಬುಧವಾರ 23 ಅಕ್ಟೋಬರ್ 2024

ಮಹಾಜನ ಕಾಲೇಜಲ್ಲಿ ಕೈಜೆನ್ ಕಾರ್ಯಕ್ರಮ



ಮೈಸೂರಿನ ಮಹಾಜನ ಪ್ರಥಮ ದರ್ಜೆ ಕಾಲೇಜಿನ ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ ಕೈಜೆನ್ ಕಾರ್ಯಕ್ರಮ ನಡೆಯಿತು.

ಮೈಸೂರು,ಅ.22–ಮಹಾಜನ ಪ್ರಥಮ ದರ್ಜೆ ಕಾಲೇಜಿನ ವ್ಯವಹಾರ ನಿರ್ವಹಣಾ ವಿಭಾಗವು ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ ಕೈಜೆನ್ (KAIZEN) ಉದ್ಘಾಟನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮವು ಶೈಕ್ಷಣಿಕ ವರ್ಷದ ವಿಭಾಗದ ಕಾರ್ಯಕ್ರಮಕ್ಕೆ ಚಾಲನೆ ನೀಡಿತು.

ಇದು ವಿದ್ಯಾರ್ಥಿಗಳಿಗೆ ನಿರ್ವಹಣಾ ಕೌಶಲಗಳನ್ನು ಪ್ರದರ್ಶಿಸಲು ವೇದಿಕೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ ಹಾಗೂ ಸೃಜನಶೀಲತೆ ಮತ್ತು ವೃತ್ತಿಪರರೊಂದಿಗೆ ನೆಟ್‌ವರ್ಕ್ ಅನ್ನು ಬೆಳೆಸುವಲ್ಲಿ ಸಹಾಯಕವಾಗಿದೆ.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಎಲ್.ಲಕ್ಷ್ಮೀ, ಸೀನಿಯರ್ ಆಪರೇಷನ್ಸ್ ಮ್ಯಾನೇಜರ್–ಹೆಚ್‌ಆರ್, ಇನ್‌ಫೋಸಿಸ್ ಬಿಪಿಎಂ ಲಿ. ಮತ್ತು ಇತರ ಗಣ್ಯರು ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ, ನಂತರ ಮಾತನಾಡಿದ ಅವರು, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಇದು ಒಂದು ವೇದಿಕೆಯಾಗಿದೆ. ಇದರ ಸದುಪಯೋಗವನ್ನು ಪಡೆದುಕೊಳ್ಳಿ ಎಂದರು.


ಮಹಾಜನ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಬಿ.ಆರ್. ಜಯಕುಮಾರಿ, ಕಾಲೇಜು ನೀಡುವ ಅವಕಾಶಗಳನ್ನು ವಿದ್ಯಾರ್ಥಿಗಳು ಸಮರ್ಪಕವಾಗಿ ಬಳಸಿಕೊಂಡು ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಕರೆ ನೀಡಿದರು. ವ್ಯವಹಾರ ನಿರ್ವಹಣಾ ವಿಭಾಗದ ಮುಖ್ಯಸ್ಥ ಡಾ.ಶಿವಕುಮಾರ್, ಕಾರ್ಯಕ್ರಮದ ಸಂಯೋಜಕರಾದ ಡಾ.ಅನಿತ, ಡಾ.ನಿರ್ಮಲ, ಕಾವ್ಯಶ್ರೀ, ಕಾರ್ಯಕ್ರಮದ ವಿದ್ಯಾರ್ಥಿ ಸಂಯೋಜಕರಾದ ಅನ್ವಿತ, ಮನೋಜ್‌ಕುಮಾರ್, ಮೊಹಮ್ಮದ್ ಸುಹೇಲ್ ಹಾಜರಿದ್ದರು. ಕಾರ್ಯಕ್ರಮದಲ್ಲಿ ಅಧ್ಯಾಪಕರು, ಅಧ್ಯಾಪಕೇತರರು ಹಾಗೂ 70ಕ್ಕೂ ಹೆಚ್ಚು ಬಿಬಿಎ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಶಾಲಾ ಕೊಠಡಿ ನಿರ್ಮಾಣ ಕಾಮಗಾರಿಗೆ ಗುದ್ದಲಿಪೂಜೆ



ಮೈಸೂರು ತಾಲೂಕಿನ ಶ್ಯಾದನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಮೈಸೂರು ಅಮಿನಿಟಿ ರೌಂಡ್ ಟೇಬಲ್–156 ವತಿಯಿಂದ ನಿರ್ಮಿಸಲುದ್ದೇಶಿಸಿರುವ ಮೂರು ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಶಾಸಕ ಜಿ.ಟಿ. ದೇವೇಗೌಡರು ಗುದ್ದಲಿಪೂಜೆ ನೆರವೇರಿಸಿದರು. ಈ ವೇಳೆ ಟ್ರಸ್ಟ್ ಛೇರ್ಮನ್‌ಗಳಾದ ದಕ್ಷ್ ದೌಲತ್‌ರಾಮ್, ಕುಮಾರ್‌ಪಾಲ್ ಜೈನ್, ಚಿರಾಗ್ ಮೆಹ್ತಾ, ಸದಸ್ಯರು, ಬಿಇಓ ಪ್ರಕಾಶ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಮಹದೇವಸ್ವಾಮಿ, ಮುಖ್ಯ ಶಿಕ್ಷಕ ಕಿರಣ್, ಸಿಆರ್‌ಪಿ ಲಕ್ಷ್ಮಿ, ಶಾಸಕರ ಆಪ್ತ ಸಹಾಯಕ ಹನುಮೇಶ್, ನಾಗನಹಳ್ಳಿ ಗ್ರಾಪಂ ಅಧ್ಯಕ್ಷೆ ರಶ್ಮಿ, ಪಿಡಿಓ ಭವ್ಯ, ಜಿಪಂ ಸದಸ್ಯ ದಿನೇಶ್, ಗ್ರಾಪಂ ಮಾಜಿ ಅಧ್ಯಕ್ಷ ಭಾಸ್ಕರ್, ಗ್ರಾಪಂ ಸದಸ್ಯ ನಾರಾಯಣ, ಎಸ್‌ಡಿಎಂಸಿ ಅಧ್ಯಕ್ಷ ಮಧು, ಶಿಕ್ಷಕಿಯರಾದ ಭಾನುಮತಿ, ರೇಖಾ, ಮುಖಂಡರಾದ ತಮ್ಮಯ್ಯ, ಪ್ರವೀಣ್, ಶ್ರೀಧರ್, ಚೆಲುವರಾಜು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಕಲಾಸುರುಚಿಯಲ್ಲಿ ದಾಸ ಶ್ರೇಷ್ಠ ಶ್ರೀ ಪುರಂದರದಾಸರ ಹರಿಕಥೆ



ಮೈಸೂರು,ಅ.22–ಮೈಸೂರಿನ ಕಲಾಸುರುಚಿಯ ಸುರುಚಿ ರಂಗಮನೆಯಲ್ಲಿ ದಾಸ ಶ್ರೇಷ್ಠ ಶ್ರೀಪುರಂದರದಾಸರು ಹರಿಕಥಾ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

ಪ್ರಸಿದ್ಧ ಹರಿಕಥೆ ಕಲಾವಿದೆ ಕುಮಾರಿ ಶ್ರೀಲಲಿತಾ ಉಳಿಯಾರು ಅವರು ಪುರಂದರ ದಾಸರ ಜೀವನ ಸಾಧನೆಯನ್ನು ಮನ–ಮುಟ್ಟುವಂತೆ ಪ್ರಸ್ತುತಪಡಿಸಿದರು. ಈಕೆಯ ತಮ್ಮ ಶ್ರೀಹರಿ ಆಚಾರ್ಯ ಉಳಿಯಾರು ಹಾರ್ಮೋನಿಯಂನಲ್ಲಿ, ವಿದ್ವಾನ್ ಎಚ್.ಆರ್. ಉದಯಕುಮಾರ್ ತಬಲಾದಲ್ಲಿ, ಮತ್ತು ಈಕೆಯ ತಂದೆ ವಾಸುದೇವ ಉಳಿಯಾರು ತಾಳದಲ್ಲಿ ಸಹಕಾರ ನೀಡಿದರು.

ಹಿರಿಯ ಸದಸ್ಯ ಶ್ರೀಧರಮೂರ್ತಿ ಮಾತನಾಡಿ, ಹರಿಕಥೆಯನ್ನು ಕೇಳಿ ನೋಡಿ ಅತೀವ ಆನಂದವಾಯಿತು. ಚಿಕ್ಕ ವಯಸ್ಸಿನಲ್ಲಿ ಕುಮಾರಿ ಶ್ರೀಲಲಿತಾ ಉಳಿಯಾರು ತಮ್ಮ ಪ್ರೌಢಿಮೆಯನ್ನು ಮೆರೆದಿದ್ದಾರೆ. ಅವರ ಗಾಯನ ನಿರೂಪಣೆಗಳು ಸಹೃದಯರ ಮೆಚ್ಚುಗೆ ಗಳಿಸುತ್ತವೆ. ಅವರಿಗೆ ಉಜ್ವಲ ಭವಿಷ್ಯವಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಲಾಸುರುಚಿಯ ಮೂಲ ಧ್ಯೇಯ ಇಂದಿಗೂ ಸಾರ್ಥಕವಾಗಿ ಮುಂದುವರಿದಿರುವುದಕ್ಕೆ ಹೆಮ್ಮೆಯೆನಿಸುತ್ತಿದೆ. ಹರಿಕಥೆಯಿಂದ ಅಸಂಗತ ನಾಟಕ ಪ್ರದರ್ಶನದವರೆಗೆ ಎಲ್ಲದಕ್ಕೂ ಇಲ್ಲಿ ಸಮಾನಮಣೆ, ಮನ್ನಣೆ ಎಂದು ಡಾ.ಸಿಂಧುವಳ್ಳಿ ಅನಂತಮೂರ್ತಿ ಹೇಳಿದರು. ಕಾರ್ಯಕ್ರಮದಲ್ಲಿ ನಾಗರಾಜ್, ಶಶಿಧರ ಡೋಂಗ್ರೆ ಸುಮನಾ ಡೋಂಗ್ರೆ ದಂಪತಿ, ಶ್ರೀಮತಿ ವಿಜಯಾ ಮತ್ತು ಇತರ ಹಿರಿಯರು, ಕಲಾಸುರುಚಿ ತಂಡದವರು ಕಲಾವಿದರನ್ನು ಅಭಿನಂದಿಸಿದರು.

ಬೆಂಗಳೂರಲ್ಲಿ ನಿರ್ಮಾಣ ಹಂತದ ಕಟ್ಟಡ ಕುಸಿತ; ಮೂವರ ಸಾವು

ಬೆಂಗಳೂರು: ಬೆಂಗಳೂರಿನಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಹಲವು ಅವಘಡಗಳು ಸಂಭವಿಸುತ್ತಿವೆ. ಹೆಣ್ಣೂರಿನ ಬಾಬುಸಾಬ್ ಪಾಳ್ಯದಲ್ಲಿ ನಿರ್ಮಾಣ ಹಂತದ ಕಟ್ಟಡ ಕುಸಿದಿರುವ ಘಟನೆ ನಡೆದಿದೆ. ಕಾಮಗಾರಿಯ ವೇಳೆ 16 ಕಾರ್ಮಿಕರು ಕೆಲಸ ಮಾಡುತ್ತಿದ್ದರು. ಕಾರ್ಮಿಕರು ಕಟ್ಟಡದ ಅವಶೇಷಗಳಲ್ಲಿ ಸಿಲುಕಿದ್ದು, ಸ್ಥಳಕ್ಕೆ ರಕ್ಷಣಾ ಕಾರ್ಯಾಚರಣೆ ತಂಡ ಭೇಟಿ ನೀಡಿ ಅವಶೇಷಗಳನ್ನು ತೆಗೆಯುವ ಕೆಲಸ ನಡೆಸುತ್ತಿದ್ದಾರೆ. ಅವಶೇಷಗಳಡಿಯಲ್ಲಿ ಸಿಲುಕಿದ್ದ ಮೂವರು ಕಾರ್ಮಿಕರ ಶವಗಳನ್ನು ಅಗ್ನಿಶಾಮಕ ಸಿಬ್ಬಂದಿ ಹೊರತೆಗೆದಿದ್ದಾರೆ.

ಜಾತಿಗಣತಿ ವರದಿ ಅನುಷ್ಠಾನಕ್ಕೆ ಆಗ್ರಹಿಸಿ ದಸಂಸ ಪ್ರತಿಭಟನೆ



ಮೈಸೂರು ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ದಸಂಸ ಮೈಸೂರು ಜಿಲ್ಲಾ ಕಾರ್ಯಕರ್ತರ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಅ.22(ಜಿಎ)–ಜಾತಿಗಣತಿ ವರದಿಯನ್ನು ಅಂಗೀಕರಿಸಿ ಶೀಘ್ರ ಅನುಷ್ಠಾನಗೊಳಿಸಬೇಕು ಹಾಗೂ ದಲಿತ, ಹಿಂದುಳಿದ ವರ್ಗಗಳ ಮೀಸಲಾತಿ ಮಿತಿಯ ಪ್ರಮಾಣವನ್ನು ಶೇ.50 ರಿಂದ ಶೇ.75ಕ್ಕೆ ಹೆಚ್ಚಳ ಮಾಡುವಂತೆ ಒತ್ತಾಯಿಸಿ ದಸಂಸ ಮೈಸೂರು ಜಿಲ್ಲಾ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಬಳಿ ಮಂಗಳವಾರ ಪ್ರತಿಭಟನೆ ನಡೆಸಿದರು.

ರಾಜ್ಯದ ಜನಸಂಖ್ಯೆಯ ಬಹುಭಾಗವಾಗಿರುವ ಆದಿವಾಸಿಗಳು, ಅಲೆಮಾರಿಗಳು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು ಮುಂತಾದ ಶೋಷಿತ ಸಮುದಾಯಗಳು ಹಲವು ದಶಕಗಳಿಂದ ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ಮಾಡುತ್ತಾ ಬಂದಿದ್ದವು. ಆದರೆ ಜಾತಿ ಕೇಂದ್ರಿತ ಪಕ್ಷ ರಾಜಕಾರಣವು ಈ ಸಮುದಾಯಗಳ ಸಾಮಾಜಿಕ,ಶೈಕ್ಷಣಿಕ, ಆರ್ಥಿಕ, ಔದ್ಯೋಗಿಕ ಸ್ಥಿತಿಗತಿಗಳನ್ನು ಉತ್ತಮಪಡಿಸುವ ಹೊಣೆಗಾರಿಕೆಯಿಂದ ನುಣುಚಿಕೊಳ್ಳುತ್ತಿದ್ದವು ಎಂದು ಪ್ರತಿಭಟನಾಕಾರರು ಆಪಾದಿಸಿದರು.

ಜಾತಿ ಜನಗಣತಿ ವರದಿ ಸ್ವೀಕಾರಗೊಂಡ ಕೂಡಲೇ ಕೆಲವು ಪಟ್ಟಭದ್ರ ಜಾತಿವಾದಿ ವ್ಯಕ್ತಿ ಹಾಗೂ ರಾಜಕೀಯ ಪಕ್ಷಗಳು, ಸಂಘ–ಸಂಸ್ಥೆಗಳು ತೀವ್ರ ಅಸಮಾಧಾನ ಹೊರಹಾಕಿ ವಿರೋಧ ವ್ಯಕ್ತಪಡಿಸುತ್ತಿರುವುದು ಕಳವಳಕಾರಿಯಾಗಿದೆ. ಈ ಪಟ್ಟಭದ್ರ ಜಾತಿವಾದಿಗಳು ಜಾತಿ ಜನಗಣತಿ ವರದಿಯನ್ನು ತಿರಸ್ಕರಿಸುವಂತೆ ಸರಕಾರದ ಮೇಲೆ ಒತ್ತಡ ಹೇರುತ್ತಿರುವುದನ್ನು ದಸಂಸವು ತೀವ್ರವಾಗಿ ಖಂಡಿಸುತ್ತದೆ. ಸರಕಾರವು ಸಾಮಾಜಿಕ ನ್ಯಾಯದ ಪರವಾಗಿ ದೃಢ ನಿಲುವು ತಾಳಬೇಕೆಂದು ಒತ್ತಾಯಿಸಿದರು.

ಜಾತಿ ಜನಗಣತಿ ವರದಿಯ ಅಂಕಿ–ಅಂಶಗಳ ಪ್ರಕಾರ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರ ಹಿಂದುಳಿದ ವರ್ಗಗಳ ಈಗಿರುವ ಶೇ.50ರಷ್ಟು ಶೈಕ್ಷಣಿಕ, ಔದ್ಯೋಗಿಕ ಮೀಸಲಾತಿ ಮಿತಿಯ ಪ್ರಮಾಣವನ್ನು ಶೇ.75ಕ್ಕೆ ಹೆಚ್ಚಳ ಮಾಡಲು ಅಗತ್ಯ ಕ್ರಮ ಕೈಗೊಳ್ಳುವುದರ ಮೂಲಕ ರಾಜ್ಯದ ಸಾಮಾಜಿಕ ನ್ಯಾಯದ ಪರಂಪರೆಯನ್ನು ಎತ್ತಿ ಹಿಡಿದು ದೇಶಕ್ಕೇ ರಾಜ್ಯ ಸರಕಾರ ಮಾದರಿಯಾಗಲಿ ಎಂದು ಆಗ್ರಹಿಸಿದರು.

ಸಾಮಾಜಿಕ ನ್ಯಾಯದ ಗುರಿಗಳನ್ನು ತಲುಪಲು ಕಾಲ ಕಾಲಕ್ಕೆ ಜಾತಿ ಜನಗಣತಿಯ ನಿಖರ ವಿವರಗಳನ್ನು ಆಧರಿಸಿ ಮೀಸಲಾತಿ ಹೆಚ್ಚಳ ಹಾಗೂ ಹಿಂದುಳಿದ, ದುರ್ಬಲ ತಳಸಮುದಾಯಗಳ ಉನ್ನತಿಗಾಗಿ ಇನ್ನಿತರ ಯೋಜನೆಗಳನ್ನು ರೂಪಿಸುವುದು ಅನಿವಾರ್ಯ, ಈ ಕೊರತೆಯನ್ನು ರಾಜ್ಯ ಸರ್ಕಾರವು ನೀಗಿಸಲೊರಟಿರುವುದು ನಿಜಕ್ಕೂ ಅಭಿನಂದನಾರ್ಹವಾದುದು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ದಸಂಸ ಜಿಲ್ಲಾ ಸಂಚಾಲಕರಾದ ಬೆಟ್ಟಯ್ಯಕೋಟೆ, ಆಲಗೂಡು ಶಿವಕುಮಾರ್, ಜಿಲ್ಲಾ ಸಂ.ಸಂಚಾಲಕರಾದ ಶಂಭುಲಿಂಗಸ್ವಾಮಿ, ಹೆಗ್ಗನೂರು ನಿಂಗರಾಜು, ಬಿ.ಡಿ.ಶಿವಬುದ್ಧಿ, ಮಂಜು ಶಂಕರಪುರ, ಗೌರಿಪುರ ವೆಂಕಟೇಶ್, ಅತ್ತಿಕುಪ್ಪೆ ರಾಮಕೃಷ್ಣ, ಶಿವರಾಜು, ಕಲ್ಲಹಳ್ಳಿ ಕುಮಾರ್, ಕುಪ್ಪೆಗಾಲ ಸೋಮಣ್ಣ, ಹೊಮ್ಮರಗಳ್ಳಿ ಸಿದ್ದರಾಜು ಯಾಚೇನಹಳ್ಳಿ ಸೋಮಶೇಖರ್, ಕುಕ್ಕೂರು ರಾಜು, ಮಲಾರ ಮಹೇಶ್, ಮುತ್ತು ಉಯ್ಯಂಬಳ್ಳಿ, ಘಟ್ಟವಾಡಿ ಮಹೇಶ್, ಶಿವಶಂಕರ್, ಅಪ್ಸರ್, ಮಹೇಶ್, ರಾಜಣ್ಣ, ತಿಮ್ಮಯ್ಯ, ಶಿವು, ವಿಶ್ವನಾಥ್, ದಿಲೀಪ್, ಪ್ರೇಮ, ಮಹದೇವಮ್ಮ, ಶೇಖರ್, ಶ್ರೀನಿವಾಸ್ ಮತ್ತಿತರರು ಪಾಲ್ಗೊಂಡಿದ್ದರು.

ಭಾರತೀಯ ರೈಲ್ವೇ ವಿಐಪಿ ಆಹಾರದಲ್ಲಿ ಹುಳು ಪತ್ತೆ



ನವದೆಹಲಿ, ಅ.22– ಭಾರತೀಯ ರೈಲ್ವೇ ಆಹಾರದಲ್ಲಿ 'ಜರಿ ಹುಳು' ಪತ್ತೆಯಾಗಿದ್ದು, ಈ ಕುರಿತ ಫೋಟೋ ವ್ಯಾಪಕ ವೈರಲ್ ಆಗುತ್ತಿದೆ. ದೆಹಲಿ ಮೂಲದ ಆರೇನ್ಶ್ ಸಿಂಗ್ ಎಂಬುವವರು ಈ ಫೋಟೋವನ್ನು ಸಾಮಾಜಿಕ ಜಾಲತಾಣದಲ್ಲಿ ಅಪ್ಲೋಡ್ ಮಾಡಿದ್ದು, ದೆಹಲಿಯ ವಿಐಪಿ ಎಕ್ಸಿಕ್ಯುಟಿವ್ ಲಾಂಜ್‌ನಲ್ಲಿ ತಾವು ತೆಗೆದುಕೊಂಡಿದ್ದ ಆಹಾರದಲ್ಲಿ 'ಜರಿ ಹುಳು' ಪತ್ತೆಯಾಗಿದೆ ಎಂದು ಹೇಳಿಕೊಂಡಿದ್ದಾರೆ. ಅಲ್ಲದೆ ಭಾರತೀಯ ರೈಲ್ವೇ ಆಹಾರದ ಗುಣಮಟ್ಟ ಸುಧಾರಿಸಿದ್ದು, ಈಗ ಅವರು ಹೆಚ್ಚು ಪ್ರೋಟೀನ್‌ನೊಂದಿಗೆ ರಾಯ್ತಾವನ್ನು ನೀಡುತ್ತಿದ್ದಾರೆ ಎಂದು ವ್ಯಂಗ್ಯ ಮಾಡಿದ್ದಾರೆ. ಅಲ್ಲದೆ ಆರೇನ್ಶ್ ಸಿಂಗ್ ವಿಐಪಿ ಎಕ್ಸಿಕ್ಯುಟಿವ್ ಲಾಂಜ್‌ನಲ್ಲೇ ಇಂತಹುದು ಸಂಭವಿಸಿದರೆ ಇನ್ನು ನೀವು ಸಾಮಾನ್ಯ ರೈಲುಗಳಲ್ಲಿ ನೀಡುವ ಆಹಾರದ ಗುಣಮಟ್ಟದ ಕುರಿತು ಕಲ್ಪನೆ ಮಾಡಿಕೊಳ್ಳಬಹುದು ಎಂದು ಹೇಳಿದ್ದಾರೆ. ಅಲ್ಲದೆ ಅವರು ಕಲುಷಿತ ಆಹಾರದ ಬಗ್ಗೆ ಸಹ ಪ್ರಯಾಣಿಕರಿಗೆ ಎಚ್ಚರಿಕೆ ನೀಡಿದ್ದು, ರೈಲ್ವೆ ಆಹಾರ ಸುರಕ್ಷತೆಯ ಬಗ್ಗೆ ಕಳವಳಕಾರಿ ಕೊರತೆ ಇದೆ ಎಂದು ಹೇಳಿದ್ದಾರೆ.

ಕ್ಷಮೆ ಯಾಚಿಸಿದ ಐಆರ್‌ಸಿಟಿಸಿ: ಆರೇನ್ಶ್ ಸಿಂಗ್ ಟ್ವೀಟ್ ವೈರಲ್ ಆಗುತ್ತಿದ್ದಂತೆಯೇ ಈ ಕುರಿತು ಪ್ರತಿಕ್ರಿಯೆ ನೀಡಿರುವ ಐಆರ್‌ಸಿಟಿಸಿ, ಸರ್, ನಿಮಗಾದ ಅನಾನುಕೂಲತೆಗಾಗಿ ವಿಷಾದಿಸುತ್ತೇವೆ. ತಕ್ಷಣದ ಕ್ರಮಕ್ಕಾಗಿ ರಶೀದಿ, ಬುಕಿಂಗ್ ವಿವರಗಳು, ನಿಲ್ದಾಣದ ಹೆಸರು ಮತ್ತು ಮೊಬೈಲ್ ಸಂಖ್ಯೆಯೊಂದಿಗೆ ದಯವಿಟ್ಟು ಹಂಚಿಕೊಳ್ಳಿ ಎಂದು ಎಕ್ಸ್ ಖಾತೆಯಲ್ಲಿ ಪ್ರತಿಕ್ರಿಯೆ ನೀಡಿದೆ.

ಋತ್ವಿಕ್‌ಗೆ ಪಿಎಚ್.ಡಿ ಪದವಿ



ಮೈಸೂರು: ಮಹಾರಾಜ ಕಾಲೇಜಿನ ಮನೋವಿಜ್ಞಾನ ವಿಭಾಗದ ಪ್ರಾಧ್ಯಾಪಕ ಡಾ.ಲ್ಯಾನ್ಸಿ ಡಿಸೋಜ ಅವರ ಮಾರ್ಗದರ್ಶನದಲ್ಲಿ ಜೆಎಸ್‌ಎಸ್ ವೈದ್ಯಕೀಯ ಹಾಗೂ ಆಸ್ಪತ್ರೆಯ ಚಿಕಿತ್ಸಾ ಮನೋವಿಜ್ಞಾನ ವಿಭಾಗದ ಸಹಾಯಕ ಪ್ರಾಧ್ಯಾಪಕ ಋತ್ವಿಕ್ ಎಸ್.ಕಶ್ಯಪ್ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

71ನೇ ಅಖಿಲ ಭಾರತ ಸಹಕಾರ ಸಪ್ತಾಹದ ಪೂರ್ವಭಾವಿ ಸಭೆ



ಬೆಂಗಳೂರಿನ ವಿಧಾನಸೌಧದಲ್ಲಿ ಮಂಗಳವಾರ ಸಹಕಾರ ಸಚಿವ ಕೆ.ಎನ್.ರಾಜಣ್ಣ ಅಧ್ಯಕ್ಷತೆಯಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹದ ಪೂರ್ವಭಾವಿ ಸಭೆ ನಡೆಯಿತು. ಸಭೆಯಲ್ಲಿ ಸಹಕಾರ ಮಹಾಮಂಡಳದ ಅಧ್ಯಕ್ಷರೂ ಆದ ಶಾಸಕ ಜಿ.ಟಿ.ದೇವೇಗೌಡರು, ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ಅಧ್ಯಕ್ಷರೂ ಆದ ಶಾಸಕ ಷಡಕ್ಷರಿ, ರಾಜ್ಯ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳದ ಅಧ್ಯಕ್ಷ, ಮಾಜಿ ಸಚಿವ ವೆಂಕಟರಾವ್ ನಾಡಗೌಡ, ಮಾಜಿ ಸಚಿವ, ಬಾಗಲಕೋಟೆ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಜಯ್‌ಕುಮಾರ್ ಸರ್‌ನಾಯಕ, ರಾಜ್ಯ ಮಾರಾಟ ಮಹಾಮಂಡಳದ ಅಧ್ಯಕ್ಷ ರಾಜೇಂದ್ರ ಕುಮಾರ್, ಸಹಕಾರ ಇಲಾಖೆ ನಿಬಂಧಕ ಕುಮಾರ್, ಮಹಾಮಂಡಳದ ಉಪಾಧ್ಯಕ್ಷ ಜಗದೀಶ್ ಕವಟಗಿಮಠ್, ರಾಜ್ಯ ಮಟ್ಟದ ವಿವಿಧ ಮಹಾಮಂಡಳಗಳ ಅಧ್ಯಕ್ಷರು, ಡಿಸಿಸಿ ಬ್ಯಾಂಕ್ ಅಧ್ಯಕ್ಷರು, ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರು, ಮಹಾಮಂಡಳದ ನಿರ್ದೇಶಕರು, ಹಿರಿಯ ಸಹಕಾರಿಗಳು ಹಾಗೂ ಸಹಕಾರ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸುಂದರ-ಸುರಕ್ಷಿತ ವಿದ್ಯುತ್ ದೀಪಾಲಂಕಾರಕ್ಕೆ ಇಂದು ತೆರೆ


ಲಕ್ಷಾಂತರ ಕಣ್ಣುಗಳಿಗೆ ಹಬ್ಬದ ಸಂಭ್ರಮ ನೀಡಿದ ವಿದ್ಯುತ್ ದೀಪಗಳ ಶೃಂಗಾರ

ವಿದ್ಯುತ್ ದೀಪಗಳ ವಯ್ಯಾರ ಕಣ್ತುಂಬಿಕೊಳ್ಳಲು ಇಂದೇ ಕಡೆ ಅವಕಾಶ

ಮೈಸೂರು,ಅ.22(ಪಿಎಂ)– ಸುಂದರ–ಸುರಕ್ಷಿತ ವಿದ್ಯುತ್ ದೀಪಾಲಂಕಾರಕ್ಕೆ ನಾಳೆ (ಅ.23) ತೆರೆ ಬೀಳಲಿದೆ. ಹೌದು, ದಸರಾ ಪ್ರಯುಕ್ತ ಮೈಸೂರು ನಗರದಲ್ಲಿ ಮಾಡಿರುವ ವಿದ್ಯುತ್ ದೀಪಗಳ ಶೃಂಗಾರ ಲಕ್ಷಾಂತರ ಕಣ್ಣುಗಳಿಗೆ ಹಬ್ಬದ ಸಂಭ್ರಮ ನೀಡುವಲ್ಲಿ ಯಶಸ್ವಿಯಾಗಿದೆ.

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ(ಸೆಸ್ಕ್)ದಿಂದ ಮಾಡಿರುವ ವಿದ್ಯುತ್ ದೀಪಾಲಂಕಾರ ಸೊಬಗಿನಲ್ಲಿ ಹೆಚ್ಚಾಗಿ ಯುವ ಸಮೂಹ ರೀಲ್ಸ್, ಸೆಲ್ಫಿ ಹಾಗೂ ಫೋಟೋಗ್ರಫಿ ಮೂಲಕ ಭಾರೀ ಸಂಭ್ರಮಪಟ್ಟಿದ್ದು, ಇಂತಹ ಸಂತಸದ ಕ್ಷಣಗಳಿಗೆ ನಾಳೆ ಕೊನೆ ಅವಕಾಶ ಉಳಿದಿದೆ.

ಅರಮನೆ ಸುತ್ತಲಿನ ರಸ್ತೆಗಳು ಸೇರಿದಂತೆ ನಗರದ 130 ಕಿ.ಮೀ. ವ್ಯಾಪ್ತಿಯಲ್ಲಿ ರಸ್ತೆಗಳಿಗೆ ದೀಪಾಲಂಕಾರ ಮಾಡಲಾಗಿದೆ. ಜೊತೆಗೆ ವಿವಿಧೆಡೆ ವಿದ್ಯುತ್ ದೀಪಗಳಿಂದಲೇ ನಿರ್ಮಿಸಿರುವ 65ಕ್ಕೂ ಹೆಚ್ಚು ಕಲಾಕೃತಿಗಳು ಆಕರ್ಷಿಸುತ್ತಿವೆ. ಈ ಬೆಳಕಿನ ಪ್ರಭೆಗೆ



ಮನಸೋತವರ ಸಂಖ್ಯೆ ಲಕ್ಷಾಂತರವೇ ಸರಿ.

ಅ.3ರಿಂದ ನಗರದಲ್ಲಿನ ವಿದ್ಯುತ್ ದೀಪಾಲಂಕಾರ ಜನತೆಯ ಕಣ್ಮನ ಸೆಳೆಯುತ್ತಿದ್ದು, ದಸರಾ ಮುಗಿದರೂ ಉಳಿದಿರುವ ಬೆಳಕಿನ ಸೊಬಗಿಗೆ ನಾಳೆ ತೆರೆ ಬೀಳುತ್ತಿದೆ. ದೀಪಾಲಂಕಾರ ಕಣ್ತುಂಬಿಕೊಳ್ಳಲು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಕಲ್ಪಿಸಿರುವ ಅಂಬಾರಿ ಡಬಲ್ ಡೆಕ್ಕರ್ ಬಸ್ ಪ್ರಯಾಣಕ್ಕೆ ಬೇಡಿಕೆ ಹೆಚ್ಚಾಗಿತ್ತು.

ಈ ಬಾರಿ ವಿದ್ಯುತ್ ದೀಪಾಲಂಕಾರದಲ್ಲಿ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಿದ್ದರ ಪರಿಣಾಮ ಈವರೆಗೆ ಯಾವುದೇ ವಿದ್ಯುತ್ ಅವಘಡಗಳು ಸಂಭವಿಸಿಲ್ಲ ಎಂಬುದು ಗಮನಾರ್ಹ. ಒಟ್ಟು 21 ದಿನಗಳ ದೀಪಾಲಂಕಾರಕ್ಕೆ ಅ.3ರಂದು ಮೈಸೂರಿನ ಸಯ್ಯಾಜಿರಾವ್ ರಸ್ತೆಯಲ್ಲಿನ ಹಸಿರು ಚಪ್ಪರ ಆವರಣದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ ನೀಡಿದ್ದರು.

ಅಂದಿನಿಂದಲೂ ರಸ್ತೆ ರಸ್ತೆಯಲ್ಲಿ ಸುತ್ತಾಡಿ ವಿದ್ಯುತ್ ದೀಪಗಳ ಬೆಳಕಿನ ವಯ್ಯಾರವನ್ನು ಕಣ್ತುಂಬಿಕೊಂಡವರು ಅಸಂಖ್ಯೆ. ತೆರೆದ ಕಾರು, ದ್ವಿಚಕ್ರ ವಾಹನ ಮಾತ್ರವಲ್ಲದೆ, ನಡಿಗೆ ಮೂಲಕವೂ ವಿದ್ಯುತ್ ದೀಪಗಳಲ್ಲಿ ಕಂಗೊಳಿಸುವ ಮೈಸೂರಿನ ಅಂದ ಚಂದವನ್ನು ಲಕ್ಷಾಂತರ ಜನತೆ ಕಣ್ತುಂಬಿಕೊಂಡಿದ್ದಾರೆ. ರಾತ್ರಿ 7 ಗಂಟೆಯಾಗುವುದನ್ನೇ ಕಾದು ವಿದ್ಯುತ್ ದೀಪಗಳು ಬೆಳಗಲು ಶುರುವಾಗುತ್ತಿದ್ದಂತೆ ನಗರದ ರಸ್ತೆಗಳಲ್ಲಿ ಜನತೆಗೆ ಹರ್ಷೋದ್ಗಾರ ಮುಗಿಲು ಮುಟ್ಟುತ್ತಿರುವುದು ಸಾಮಾನ್ಯವಾಗಿದೆ.

ಅರಮನೆ ವಿದ್ಯುತ್ ದೀಪಾಲಂಕಾರಕ್ಕೂ ತೆರೆ

ಅ.23ರಂದು ಮೈಸೂರು ಅರಮನೆ ವಿದ್ಯುತ್ ದೀಪಾಲಂಕಾರಕ್ಕೂ ತೆರೆ ಬೀಳುತ್ತಿದೆ. ದಸರಾ ಪ್ರಯುಕ್ತ ಪ್ರತಿದಿನ ಸಂಜೆ 7ರಿಂದ 9ರವರೆಗೆ ಅರಮನೆಯು ಹೊಂದಿರುವ ಇಂಕ್ಯಾಂಡೇಸೆಂಟ್ ಬಲ್ಬ್‌ಗಳ ಹೊಂಬಣ್ಣದಲ್ಲಿ ಕಂಗೊಳಿಸುವ ಅದರ ಚಂದವನ್ನು ಪ್ರವಾಸಿಗರು ಮಾತ್ರವಲ್ಲದೇ ಮೈಸೂರಿನ ನಾಗರಿಕರೂ ಭಾರೀ ಸಂಖ್ಯೆಯಲ್ಲಿ ಕಣ್ತುಂಬಿಕೊಂಡಿದ್ದಾರೆ.



ಈ ಪ್ರಮಾಣದಲ್ಲಿ ವಿದ್ಯುತ್ ದೀಪಾಲಂಕಾರ ಮಾಡುವುದು ಸಾಹಸವೇ ಸರಿ. ಇಂತಹ ಪ್ರಯತ್ನದಲ್ಲಿ ನಾವು ಯಶಸ್ವಿಯಾಗಿದ್ದೇವೆ. ನಮ್ಮ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಹ ಅಂಬಾರಿ ಬಸ್‌ನಲ್ಲಿ ಸಾಗಿ ದೀಪಾಲಂಕಾರ ವೀಕ್ಷಿಸಿ ಅತೀವ ಸಂತಸಪಟ್ಟರು. ಲಕ್ಷಾಂತರ ಜನ ದೀಪಾಲಂಕಾರಕ್ಕೆ ಮಾರು ಹೋಗಿದ್ದಾರೆ. ನಮ್ಮ ಪ್ರಯತ್ನಕ್ಕೆ ಇದೇ ಪ್ರೋತ್ಸಾಹ.
-ಮುನಿಗೋಪಾಲರಾಜು, ತಾಂತ್ರಿಕ ನಿರ್ದೇಶಕರು, ಸೆಸ್ಕ್



ದಸರಾ ದೀಪಾಲಂಕಾರ ವಿಸ್ತರಣೆ ಮಾಡುವ ಬಗ್ಗೆ ಯಾವುದೇ ಮನವಿ ಅಧಿಕೃತವಾಗಿ ಬಂದಿಲ್ಲ ಹಾಗಾಗಿ ನಾಳೆ (ಅ.23) ಅಂತ್ಯಗೊಳ್ಳಲಿದೆ. ಯಾವುದೇ ಸಮಸ್ಯೆಯಾಗದೇ ಸುರಕ್ಷಿತವಾಗಿ ಲಕ್ಷಾಂತರ ಜನ ದೀಪಾಲಂಕಾರ ವೀಕ್ಷಣೆ ಮಾಡಿದ್ದಾರೆ.
-ಜಿ.ಶೀಲಾ, ವ್ಯವಸ್ಥಾಪಕ ನಿರ್ದೇಶಕರು, ಸೆಸ್ಕ್

ದೇಶ - ವಿದೇಶ

ದೇಶದಾದ್ಯಂತ ಸಿಆರ್‌ಪಿಎಫ್ ಶಾಲೆಗಳು, 30 ವಿಮಾನಗಳಿಗೆ ಬಾಂಬ್ ಬೆದರಿಕೆ



ನವದೆಹಲಿ: ರಾಷ್ಟ್ರ ರಾಜಧಾನಿ ದೆಹಲಿಯ ರೋಹಿಣಿ ಪ್ರದೇಶದ ಸಿಆರ್‌ಪಿಎಫ್ ಶಾಲೆ ಬಳಿಯ ಸ್ಫೋಟ ಪ್ರಕರಣ ಮಾಸುವ ಮುನ್ನವೇ ಮಂಗಳವಾರ ದೇಶದಾದ್ಯಂತ ಸಿಆರ್‌ಪಿಎಫ್ ಶಾಲೆಗಳಿಗೆ ಬಾಂಬ್ ಬೆದರಿಕೆ ಹಾಕಲಾಗಿದೆ ಎಂದು ವರದಿಯಾಗಿದೆ. ಸೋಮವಾರ ತಡರಾತ್ರಿ ದೆಹಲಿಯ ಎರಡು ಮತ್ತು ಹೈದರಾಬಾದ್‌ನ ಸಿಆರ್‌ಪಿಎಫ್ ಶಾಲೆಯ ಆಡಳಿತ ಮಂಡಳಿಗೆ ಇ–ಮೇಲ್ ಮೂಲಕ ಬೆದರಿಕೆ ಸಂದೇಶ ರವಾನಿಸಲಾಗಿದೆ ಎಂದು ಸುದ್ದಿಸಂಸ್ಥೆ 'ಎಎನ್‌ಐ' ವರದಿ ಮಾಡಿದೆ. ದೆಹಲಿಯ ರೋಹಿಣಿ ಪ್ರದೇಶದ ಪ್ರಶಾಂತ್ ವಿಹಾರದಲ್ಲಿ ಭಾನುವಾರ ಸ್ಫೋಟ ಸಂಭವಿಸಿತ್ತು. ಶಾಲೆಯ ಆವರಣ ಗೋಡೆ ಹಾಗೂ ಸಮೀಪದ ಕೆಲ ಅಂಗಡಿಗಳಿಗೆ ಹಾನಿಯುಂಟಾಗಿದೆ. ಘಟನೆಯಲ್ಲಿ ಯಾರಿಗೂ ಗಾಯಗಳಾಗಿಲ್ಲ. ಭಾರಿ ಸ್ಫೋಟದ ಸದ್ದು ಹಾಗೂ ಸ್ಥಳದಲ್ಲಿ ದಟ್ಟವಾದ ಬಿಳಿ ಹೊಗೆಯಿಂದ ಗಾಬರಿಗೊಂಡ ಜನರು, ಮನೆಗಳಿಂದ ಹೊರಗೆ ಓಡಿ ಬಂದಿದ್ದರು. ಕಚ್ಚಾಬಾಂಬ್ ಅನ್ನು ಪ್ಲಾಸ್ಟಿಕ್ ಬ್ಯಾಗ್‌ನಲ್ಲಿ ಸುತ್ತಿ, ಒಂದು ಅಡಿ ಆಳದ ಗುಂಡಿ ಅಗೆದು ಅದರಲ್ಲಿ ಇಟ್ಟಿರಬಹುದು ಎಂದು ಪೊಲೀಸರು ಶಂಕಿಸಿದ್ದರು. ಘಟನೆ ಸಂಬಂಧ ಭಾರತೀಯ ನ್ಯಾಯ ಸಂಹಿತೆಯ ವಿವಿಧ ಸೆಕ್ಷನ್‌ಗಳಡಿ ಪ್ರಕರಣ ದಾಖಲಿಸಿದ್ದರು.

ಮಾಲ್ಡೀವ್ಸ್‌ನಲ್ಲಿ ಭಾರತದ ಯುಪಿಐ ಪಾವತಿ ವ್ಯವಸ್ಥೆ!



ಮಾಲೆ: ಭಾರತಕ್ಕೆ ಭೇಟಿ ನೀಡಿದ ಬೆನ್ನಲ್ಲೇ ಮಾಲ್ಡೀವ್ಸ್ ಅಧ್ಯಕ್ಷ ಮೊಹಮದ್ ಮುಯಿಜ್ಜು ಅವರು ತಮ್ಮ ದೇಶದಲ್ಲಿ ಭಾರತದ ಯುಪಿಐ ಪಾವತಿ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಿದ್ದಾರೆ. ಈ ಮೂಲಕ ಭಾರತದ ಜತೆಗಿನ ಸಂಬಂಧವನ್ನು ಸುಧಾರಿಸುವ ಪ್ರಯತ್ನವನ್ನು ನಡೆಸಿದ್ದಾರೆ.

ದ್ವೀಪ ರಾಷ್ಟ್ರದಲ್ಲಿ ಯುಪಿಐ ಅನುಷ್ಠಾನವನ್ನು ಟ್ರೇಡ್ ನೆಟ್ ಮಾಲ್ಡೀವ್ಸ್ ಕಾರ್ಪೋರೇಶನ್ ಲಿಮಿಟೆಡ್‌ಗೆ ವಹಿಸಿದ್ದಾರೆ. ಈ ನಡೆ ದೇಶ ವಾಸಿಗಳ ಆರ್ಥಿಕ ಸಶಕ್ತೀಕರಣಕ್ಕೆ ನೆರವಾಗಲಿದೆ ಎಂದು ಕೂಡ ಅವರು ತಿಳಿಸಿದ್ದಾರೆ. ಮಾಲ್ಡೀವ್ಸ್ ದೇಶದ ಆರ್ಥಿಕ ಬೆಳವಣಿಗೆ ವಿದೇಶಿ ಪ್ರವಾಸಿಗರ ಮೇಲೆ ಅವಲಂಬಿತವಾಗಿದ್ದು ಶೇ.30ರಷ್ಟು ಜಿಡಿಪಿ ಇದರಿಂದಲೇ ಹರಿದುಬರುತ್ತಿದೆ. ಆದರೆ ಕಳೆದ ವರ್ಷ ಅಧಿಕಾರಕ್ಕೆ ಬಂದ ಮುಯಿಜ್ಜು ಭಾರತ ವಿರೋಧಿ ನೀತಿ ಹೊಂದಿದ್ದರು. ಇದರಿಂದಾಗಿ ಆ ದೇಶಕ್ಕೆ ಭಾರತೀಯ ಪ್ರವಾಸಿಗರು ಭೇಟಿ ಕೊಡುವುದು ಗಣನೀಯವಾಗಿ ಕಡಿತವಾಗಿತ್ತು. ಈ ಹಿನ್ನೆಲೆಯಲ್ಲಿ ಭಾರತೀಯ ಪ್ರವಾಸಿಗರನ್ನು ಮತ್ತೆ ದೇಶದತ್ತ ಸೆಳೆಯುವುದು ಈ ಹಿಂದಿನ ಉದ್ದೇಶವಾಗಿದೆ. ಮಾಲ್ಡೀವ್ಸ್‌ನಲ್ಲಿ ಡಿಜಿಟಲ್ ಮೂಲಸೌಕರ್ಯ ವೃದ್ಧಿಗೆ ನೆರವಾಗಲು ಇದನ್ನು ಜಾರಿ ಮಾಡಲಾಗಿದೆ.

ಸಿಎಂ ಯೋಗಿ ಸರ್ಕಾರದ ಬುಲ್ಡೋಜರ್ ಕ್ರಮಕ್ಕೆ ಸುಪ್ರೀಂ ತಡೆ, ನಾಳೆ ವಿಚಾರಣೆ



ನವದೆಹಲಿ: ಕೋಮು ಘರ್ಷಣೆಗೆ ಸಂಬಂಧಿಸಿದಂತೆ ಆರೋಪಿಗಳ ಮನೆಗಳನ್ನು ಜೆಸಿಬಿ ಮೂಲಕ ಧ್ವಂಸಗೊಳಿಸುವ ನಿರ್ಧಾರದ ಕುರಿತಂತೆ ಉತ್ತರಪ್ರದೇಶದ ಯೋಗಿ ಆದಿತ್ಯನಾಥ್ ನೇತೃತ್ವದ ಸರ್ಕಾರದ ವಿರುದ್ಧ ಸುಪ್ರೀಂಕೋರ್ಟ್ ಮಂಗಳವಾರ ಪರೋಕ್ಷ ಎಚ್ಚರಿಕೆಯ ಸಂದೇಶ ನೀಡಿದೆ.

ಆರೋಪಿಯ ಮನೆಯನ್ನು ಒಡೆಯುವ ನೋಟಿಸ್ ಅನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್, ಇದು ರಾಜ್ಯ ಸರ್ಕಾರದ ಆಯ್ಕೆಗೆ ಬಿಟ್ಟ ವಿಚಾರವಾಗಿದೆ. ಒಂದು ವೇಳೆ ನ್ಯಾಯಾಲಯದ ನಿರ್ದೇಶನವನ್ನು ಉಲ್ಲಂಘಿಸಲು ಬಯಸುವುದಾದರೆ ಆಯ್ಕೆ ನಿಮ್ಮದು (ಸರ್ಕಾರ) ಎಂದು ಎಚ್ಚರಿಕೆ ನೀಡಿದೆ.

ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ಬಿ.ಆರ್. ಗವಾಯಿ, ಕೆ.ವಿ.ವಿಶ್ವನಾಥನ್ ಅವರನ್ನೊಳಗೊಂಡ ಪೀಠವು ಬುಧವಾರಕ್ಕೆ ವಿಚಾರಣೆ ಮುಂದೂಡಿದ್ದು, ಸರ್ಕಾರ ಯಾವುದೇ ಕ್ರಮ ತೆಗೆದುಕೊಳ್ಳದಂತೆ ತಡೆ ನೀಡಿದೆ. ಬಹ್ರೈಚ್‌ನಲ್ಲಿ ಅ.13ರಂದು ನಡೆದಿದ್ದ ಗಲಭೆಯಲ್ಲಿ ಶಾಮೀಲಾಗಿದ್ದ ಆರೋಪಿಗಳ ಮನೆಗಳನ್ನು ನಾಳೆವರೆಗೆ ಅಧಿಕಾರಿಗಳು ಯಾವುದೇ ಕ್ರಮ ತೆಗೆದುಕೊಳ್ಳುವುದಿಲ್ಲ ಎಂದು ಸರ್ಕಾರದ ಪರ ವಕೀಲರು ಸುಪ್ರೀಂಗೆ ತಿಳಿಸಿದ್ದಾರೆ.

ಹೆಜ್ಬುಲ್ಲಾ ಮುಖ್ಯಸ್ಥ ನಸ್ರುಲ್ಲಾ ಅಡಗಿದ್ದ ಬಂಕರ್‌ನಲ್ಲಿ 500 ಮಿಲಿಯನ್ ಡಾಲರ್ ಹಣ; ಅಪಾರ ಪ್ರಮಾಣದ ಚಿನ್ನ ಪತ್ತೆ



ಟೆಲ್ ಅವೀವ್: ಹೆಜ್ಬುಲ್ಲಾ ಮುಖ್ಯಸ್ಥ ಹಸನ್ ನಸ್ರುಲ್ಲಾ ಅಡಗಿದ್ದ ಬಂಕರ್‌ನಲ್ಲಿ ಬರೋಬ್ಬರಿ 500 ಮಿಲಿಯನ್ ಡಾಲರ್ ನಗದು ಮತ್ತು ಅಪಾರ ಪ್ರಮಾಣದ ಚಿನ್ನದ ಸಂಗ್ರಹ ಪತ್ತೆಯಾಗಿದೆ ಎಂದು ಇಸ್ರೇಲ್ ಸೇನೆ ಹೇಳಿಕೊಂಡಿದೆ.

ಈ ಹಿಂದೆ ಇಸ್ರೇಲ್ ವಾಯುದಾಳಿ ನಡೆಸಿದ್ದ ಬೈರುತ್‌ನ ಆಸ್ಪತ್ರೆಯ ಕೆಳಗಿರುವ ಬಂಕರ್‌ನಲ್ಲಿ 500 ಮಿಲಿಯನ್ ಡಾಲರ್ ನಗದು ಮತ್ತು ಅಪಾರ ಪ್ರಮಾಣದ ಚಿನ್ನದ ಸಂಗ್ರಹ ಪತ್ತೆಯಾಗಿದೆ ಎಂದು ಇಸ್ರೇಲ್ ರಕ್ಷಣಾ ಪಡೆಗಳು ಹಿಜ್ಬುಲ್ಲಾದ ಹಣಕಾಸು ಕೇಂದ್ರದ ಬಗ್ಗೆ ಗುಪ್ತಚರ ಮಾಹಿತಿಯನ್ನು ಬಹಿರಂಗಪಡಿಸಿವೆ.

ಈ ರಹಸ್ಯ ಬಂಕರ್ ಬೈರುತ್‌ನ ಮಧ್ಯದಲ್ಲಿರುವ ಅಲ್ ಸಹೇಲ್ ಆಸ್ಪತ್ರೆಯ ಅಡಿಯಲ್ಲಿದ್ದು, ಇದು ಹೆಜ್ಬುಲ್ಲಾ ಮುಖ್ಯಸ್ಥ ಹಸನ್ ನಸ್ರಲ್ಲಾ ಅಡಗಿದ್ದ ಬಂಕರ್ ಆಗಿತ್ತು. ಇಲ್ಲಿ ಕೋಟ್ಯಂತರ ಮೌಲ್ಯದ ಚಿನ್ನ ಮತ್ತು ನಗದು ಇರಿಸಲಾಗಿತ್ತು. ಭಾರತೀಯ ರೂಪಾಯಿಗಳಲ್ಲಿ ಇದರ ಬೆಲೆ ಸುಮಾರು 4194,50,25,000 ರೂ. ಇಸ್ರೇಲ್ ಹಿಜ್ಬುಲ್ಲಾ ವಿರುದ್ಧ ಕಾರ್ಯಾಚರಣೆಯನ್ನು ಹೆಚ್ಚಿಸಿದೆ ಮತ್ತು ಭಾನುವಾರ ರಾತ್ರಿ ಹಲವಾರು ಸ್ಥಳಗಳಲ್ಲಿ ದಾಳಿ ನಡೆಸಿತು.

ನಾಡಿದ್ದು ಪಶ್ಚಿಮಬಂಗಾಳ, ಒಡಿಶಾಕ್ಕೆ ಚಂಡಮಾರುತ



ಭುವನೇಶ್ವರ: ಬಂಗಾಳಕೊಲ್ಲಿ ಹಾಗೂ ಅಂಡಮಾನ್‌ನಲ್ಲಿ ಸೋಮವಾರ ವಾಯುಭಾರ ಕುಸಿತ ಉಂಟಾಗಿದೆ. ಅ.23ರ ಒಳಗಾಗಿ ಅದು ಚಂಡಮಾರುತವಾಗಿ ಮಾರ್ಪಾಡಾಗಲಿದ್ದು, ಒಡಿಶಾದ ಪುರಿ ಹಾಗೂ ಪಶ್ಚಿಮ ಬಂಗಾಳದ ನಡುವೆ ಹಾದು ಹೋಗಲಿದೆ ಎಂದು ಐಎಂಡಿ ಹೇಳಿದೆ. ಈ ಹಿನ್ನೆಲೆಯಲ್ಲಿ ಶನಿವಾರದವರೆಗೆ ಮೀನುಗಾರರು ಸಮುದ್ರಕ್ಕೆ ತೆರಳದಂತೆ ಎಚ್ಚರಿಕೆ ನೀಡಲಾಗಿದೆ. ಒಡಿಶಾದಲ್ಲಿ ಚಂಡಮಾರುತದ ಪ್ರಭಾವ ಹೆಚ್ಚು ಕಾಲ ಇರಲಿದೆ. ರಾಜ್ಯದ ಕರಾವಳಿಯಲ್ಲಿ ಧಾರಾಕಾರ ಮಳೆಯಾಗಲಿದ್ದು, ಪ್ರತೀ ಗಂಟೆಗೆ 100 ಕಿ.ಮೀ. ವೇಗದಲ್ಲಿ ಗಾಳಿ ಬೀಸಲಿದೆ.

ಚಂಡಮಾರುತ ಹಿನ್ನೆಲೆಯಲ್ಲಿ ಎನ್‌ಡಿಆರ್‌ಎಫ್‌ನ 25 ತಂಡಗಳನ್ನು ಪಶ್ಚಿಮಬಂಗಾಳದಲ್ಲಿ, 11 ತಂಡಗಳನ್ನು ಒಡಿಶಾದಲ್ಲಿ ನಿಯೋಜಿಸಲಾಗಿದೆ. ಜತೆಗೆ ಸೇನೆಯ ರಕ್ಷಣಾ ಹಾಗೂ ಪರಿಹಾರ ತಂಡ, ಕೋಸ್ಟ್ ಗಾರ್ಡ್ ತಂಡಗಳೂ ಸಿದ್ಧತೆ ನಡೆಸಿವೆ.

ಕರ್ನಾಟಕದಲ್ಲಿ ಮಳೆ: ಚಂಡಮಾರುತದ ಹಿನ್ನೆಲೆ ಕರ್ನಾಟಕದ ಕರಾವಳಿ, ಉತ್ತರ ಒಳನಾಡು, ಗುಜರಾತ್, ಗೋವಾ, ಮಧ್ಯ ಮಹಾರಾಷ್ಟ್ರ, ಕೇರಳ, ತಮಿಳುನಾಡು, ರಾಯಲಸೀಮಾ, ಆಂಧ್ರಪ್ರದೇಶದಲ್ಲಿ ಮಳೆಯಾಗಲಿದೆ.

ವಿಶೇಷ ವೇತನಕ್ಕೆ ಒತ್ತಾಯಿಸಿ ಮನವಿ ಸಲ್ಲಿಕೆ



ಪೌರಕಾರ್ಮಿಕರಿಗೆ ವಿಶೇಷ ವೇತನ ನೀಡಬೇಕೆಂದು ಒತ್ತಾಯಿಸಿ ಕೊಡಗು ಜಿಲ್ಲಾ ಸೋಷಿಯಲ್ ಡೆಮಾಕ್ರೆಟಿಕ್ ಟ್ರೇಡ್ ಯೂನಿಯನ್ ಸಂಘಟನೆ ವತಿಯಿಂದ ಅಪರ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಮಡಿಕೇರಿ, ಅ.22– ಐತಿಹಾಸಿಕ ಮಡಿಕೇರಿ ದಸರಾ ಜನೋತ್ಸವ ಸಂದರ್ಭ ರಾತ್ರಿ ಹಗಲೆನ್ನದೆ ಸ್ವಚ್ಛತಾ ಕಾರ್ಯದಲ್ಲಿ ತೊಡಗಿದ ನಗರಸಭೆ ಪೌರಕಾರ್ಮಿಕರಿಗೆ ವಿಶೇಷ ವೇತನ ನೀಡಬೇಕೆಂದು ಒತ್ತಾಯಿಸಿ ಕೊಡಗು ಜಿಲ್ಲಾ ಸೋಷಿಯಲ್ ಡೆಮಾಕ್ರೆಟಿಕ್ ಟ್ರೇಡ್ ಯೂನಿಯನ್ ಸಂಘಟನೆ ವತಿಯಿಂದ ಅಪರ ಜಿಲ್ಲಾಧಿಕಾರಿ ಆರ್. ಐಶ್ವರ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಸಂಘಟನೆ ಪ್ರಮುಖರು ಪೌರ ಕಾರ್ಮಿಕರಿಗೆ ದಸರಾ ವಿಶೇಷ ವೇತನ ನೀಡುವ ಅವಶ್ಯಕತೆ ಇದೆ ಎಂದು ಮನವರಿಕೆ ಮಾಡಿದರು. ದಸರಾ ವೀಕ್ಷಣೆಗೆಂದು ಪ್ರವಾಸಿಗರು ಸೇರಿದಂತೆ ಸಾವಿರಾರು ಮಂದಿ ಮಡಿಕೇರಿಗೆ ಆಗಮಿಸಿದ ಸಂದರ್ಭ ಟನ್ ಗಟ್ಟಲೆ ಕಸದ ರಾಶಿ ಬಿದ್ದಿದೆ. ಇದನ್ನು ತೆರವುಗೊಳಿಸಿ ನಗರವನ್ನು ಸ್ವಚ್ಛಗೊಳಿಸಲು ಪೌರಕಾರ್ಮಿಕರು ಸಾಕಷ್ಟು ಶ್ರಮಿಸಿದ್ದಾರೆ. ಆರೋಗ್ಯದ ಮೇಲಿನ ದುಷ್ಪರಿಣಾಮ ಕೂಡ ಲೆಕ್ಕಿಸದೆ ಮಳೆ ನಡುವೆ ಸ್ವಚ್ಛತಾ ಕಾರ್ಯ ಕೈಗೊಂಡಿದ್ದಾರೆ. ಇವರ ಶ್ರಮಕ್ಕೆ ತಕ್ಕ ಫಲವಾಗಿ ವಿಶೇಷ ವೇತನ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಸಂಘಟನೆ ಪ್ರಧಾನ ಕಾರ್ಯದರ್ಶಿ ಎಂ.ಎ.ಅಬ್ದುಲ್ ರಜಾಕ್, ಉಪಾಧ್ಯಕ್ಷ ಇಬ್ರಾಹಿಂ ಹೊಸತೋಟ ಹಾಗೂ ಸದಸ್ಯ ಅಜೀಜ್ ಸುಂಟಿಕೊಪ್ಪ ಮನವಿ ಮಾಡಿದರು.

ಅ.26ರಂದು ಕೋಟೆ ಗಣಪತಿ ದೇವಾಲಯದಲ್ಲಿ ಶಾಂತಿ ಪೂಜೆ

ಮಡಿಕೇರಿ, ಅ.22–ನಗರದ ಐತಿಹಾಸಿಕ ಶ್ರೀ ಕೋಟೆ ಮಹಾಗಣಪತಿ ದೇವಾಲಯ ದಸರಾ ಮಂಟಪ ಸಮಿತಿ ವತಿಯಿಂದ ಅ.26ರಂದು ದೇವಾಲಯ ಆವರಣದಲ್ಲಿ ಶಾಂತಿ ಪೂಜೆ ನಡೆಯಲಿದೆ. ಅ.16ರಂದು ನಡೆಯಬೇಕಾಗಿದ್ದ ಲಕ್ಕಿಡಿಪ್ ಡ್ರಾವನ್ನು ಶಾಂತಿ ಪೂಜೆಯಂದೇ ಮಾಡಲಾಗುವುದು. 48ನೇ ವರ್ಷದ ಶ್ರೀ ಕೋಟೆ ಮಹಾಗಣಪತಿ ದಸರಾ ಉತ್ಸವದಲ್ಲಿ ಎಲ್ಲರ ಸಹಕಾರದಿಂದ ಮಂಟಪದ ಶೋಭಾಯಾತ್ರೆ ಯಶಸ್ವಿಯಾಗಿದ್ದು, ಪ್ರಥಮ ಬಹುಮಾನ ಬಂದಿದೆ. ಶನಿವಾರ ಸಂಜೆ 7 ಗಂಟೆಗೆ ನಡೆಯುವ ಶಾಂತಿ ಪೂಜೆಯಲ್ಲಿ ಹೆಚ್ಚಿನ ಭಕ್ತರು ಪಾಲ್ಗೊಳ್ಳುವಂತೆ ಸಮಿತಿ ಅಧ್ಯಕ್ಷ ಬಿ.ವಿ.ಅರವಿಂದ್ ಮನವಿ ಮಾಡಿದ್ದಾರೆ.

ಗಾಂಧಿ ಮೈದಾನದಲ್ಲಿ 2 ಕೋಟಿ ವೆಚ್ಚದ ಭವ್ಯ ವೇದಿಕೆ ನಿರ್ಮಾಣ

● ನಗರಸಭಾ ವಿಶೇಷ ಸಾಮಾನ್ಯ ಸಭೆಯಲ್ಲಿ ನಿರ್ಧಾರ ● ಶೌಚಾಲಯ, ವಾಹನ ನಿಲುಗಡೆ ಸ್ಥಳ ಕಾಮಗಾರಿ

ಮಡಿಕೇರಿ, ಅ.22– ಪ್ರತಿ ವರ್ಷ ಗಾಂಧಿ ಮೈದಾನದಲ್ಲಿ ದಸರಾ ಉತ್ಸವದ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜನೆಗೆ ವೇದಿಕೆ ನಿರ್ಮಾಣಕ್ಕೆ ಹೆಚ್ಚಿನ ಹಣ ವ್ಯಯವಾಗುತ್ತಿದೆ. ಆದ್ದರಿಂದ 2 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತ ಭವ್ಯ ವೇದಿಕೆ ನಿರ್ಮಿಸಲು ನಗರಸಭಾ ವಿಶೇಷ ಸಾಮಾನ್ಯ ಸಭೆಯಲ್ಲಿ ನಿರ್ಧಾರ ಕೈಗೊಂಡು, ವಿಸ್ತೃತವಾಗಿ ಚರ್ಚಿಸಲಾಯಿತು.

ನಗರಸಭೆ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ನಗರಸಭಾ ಆಡಳಿತಾಧಿಕಾರಿಗಳಾದ ಜಿಲ್ಲಾಧಿಕಾರಿ ವೆಂಕಟ ರಾಜಾ ಮಾತನಾಡಿ, ಗಾಂಧಿ ಮೈದಾನದಲ್ಲಿರುವ ರಂಗಮಂದಿರವನ್ನು ಕೆಡವಿ ನೂತನ ರಂಗಮಂದಿರ ನಿರ್ಮಾಣ, ಕಲಾವಿದರ ಅನುಕೂಲಕ್ಕಾಗಿ ಗ್ರೀನ್ ರೂಂ, ವೇದಿಕೆಯ ಎರಡು ಬದಿಗಳಲ್ಲಿ ಗ್ಯಾಲರಿ, ಹಣ ಪಾವತಿಸಿ ಬಳಸುವ ಶೌಚಾಲಯ ನಿರ್ಮಾಣ, ವಾಹನ ನಿಲುಗಡೆ ಸ್ಥಳ ಮತ್ತು ವೈದ್ಯಕೀಯ ಸಹಾಯ ಕೇಂದ್ರ ನಿರ್ಮಾಣ ಕಾಮಗಾರಿ ನಡೆಸಲು ಉದ್ದೇಶಿಸಲಾಗಿದೆ ಎಂದು ಮಾಹಿತಿ ನೀಡಿದರು.





ಮಡಿಕೇರಿ ನಗರಸಭಾ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಜಿಲ್ಲಾಧಿಕಾರಿ ವೆಂಕಟ ರಾಜಾ ಮಾತನಾಡಿದರು. ಸಭೆಯಲ್ಲಿ ಸದಸ್ಯರು ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು.

> ಗಾಂಧಿ ಮೈದಾನದಲ್ಲಿ ರಂಗಮಂದಿರದೊಮದಿಗೆ ವ್ಯವಸ್ಥಿತ ಶೌಚಾಲಯ ನಿರ್ಮಿಸಲಾಗುವುದು. ಈ ವಿಭಾಗದಲ್ಲಿ ರಾಜಾ ಸೀಟ್‌ಗೆ ಭೇಟಿ ನೀಡಲು ವರ್ಷಪೂರ್ತಿ ಪ್ರವಾಸಿಗರು ಬರುವುದರಿಂದ ಇದರ ಬಳಕೆ ನಿರಂತರವಾಗಿರುವಂತೆ ನೋಡಿಕೊಂಡಲ್ಲಿ ಸಾರ್ವಜನಿಕರಿಗೂ ಅನುಕೂಲವಾಗಲಿದೆ. ಪ್ರಸ್ತುತ ಸುದರ್ಶನ ವೃತ್ತದಿಂದ ಗಾಂಧಿ ಮೈದಾನ ರಸ್ತೆಯ ಇಕ್ಕೆಲಗಳಲ್ಲಿ ಸೂಕ್ತ ಫುಟ್‌ಪಾತ್ ಇಲ್ಲ. ಈ ಹಿನ್ನೆಲೆ ವ್ಯವಸ್ಥಿತ ಮತ್ತು ಆಧುನಿಕ ಫುಟ್‌ಪಾತ್ ನಿರ್ಮಾಣದ ಪ್ರಯತ್ನವೂ ನಡೆಯುತ್ತಿದೆ. ಇದು ಕಾರ್ಯಗತಗೊಂಡಲ್ಲಿ ಮಡಿಕೇರಿ ಆಕರ್ಷಣೆಯೂ ಹೆಚ್ಚಲಿದೆ.
> -ವೆಂಕಟ ರಾಜಾ, ಜಿಲ್ಲಾಧಿಕಾರಿ

ನೂತನ ರಂಗಮಂದಿರ, ವಾಹನ ನಿಲುಗಡೆ ಸ್ಥಳಗಳನ್ನು ನಗರಸಭೆ ತನ್ನ ವಿವೇಚನೆಯಂತೆ ವರ್ಷಪೂರ್ತಿ ಸಂಘ–ಸಂಸ್ಥೆ, ಶಾಲಾ–ಕಾಲೇಜು ಕಾರ್ಯಕ್ರಮಗಳ ಆಯೋಜನೆಗೆ ಬಾಡಿಗೆ ನಿಗದಿಪಡಿಸಿ ಕೊಡಲು ಅವಕಾಶವಿದೆ. ಇದರಿಂದ ನಗರಸಭೆಗೂ ಆರ್ಥಿಕ ಕ್ರೋಢೀಕರಣವಾಗಲಿದೆ. ಇಂತಹ ರಂಗಮಂದಿಗಳಿಂದ ಜಿಲ್ಲೆಯ ಕಲಾವಿದರಿಗೆ ಸೂಕ್ತ ವೇದಿಕೆ ಕಲ್ಪಿಸಿಕೊಡಲು ಸಹಕಾರಿಯಾಗುತ್ತದೆ. ನಗರಸಭೆಯಲ್ಲಿ ಆರ್ಥಿಕ ಚಟುವಟಿಕೆಗಳಿಗೆ ನಿಗದಿಯಾಗಿರುವ ಎಂಟರ್‌ಪ್ರೈಸಿಂಗ್ ನಿಧಿಯಲ್ಲಿ 7.33 ಕೋಟಿ ರೂ.ಗಳಿದ್ದು, ಇದರಲ್ಲಿ 2 ಕೋಟಿ ರೂ.ಗಳನ್ನು ನೂತನ ರಂಗಮಂದಿರಕ್ಕೆ ಬಳಕೆ ಮಾಡಲಾಗುತ್ತದೆ ಎಂದು ತಿಳಿಸಿದರು.

ನಗರಸಭಾ ಸದಸ್ಯ ಕೆ.ಎಸ್.ರಮೇಶ್ ಮಾತನಾಡಿ, ಪ್ರತಿವರ್ಷ ದಸರಾ ಸಂದರ್ಭ ವೇದಿಕೆ ನಿರ್ಮಾಣಕ್ಕೆ ಸುಮಾರು 35 ಲಕ್ಷ ರೂ. ಹೊರೆ ಬೀಳುತ್ತಿದೆ. ನೂತನ ರಂಗಮಂದಿರವನ್ನು ವ್ಯವಸ್ಥಿತವಾಗಿ ನಿರ್ಮಿಸಿದಲ್ಲಿ ಈ ವೆಚ್ಚಕ್ಕೆ ಕಡಿವಾಣ ಬೀಳಲಿದೆ. ಈ ಹಿನ್ನೆಲೆ ನಗರಸಭೆ ನಿಧಿಯಿಂದ ಹೆಚ್ಚಿನ ಹಣ ಬಳಸುವ ಮೂಲಕ ರಂಗಮಂದಿರ ಉತ್ತಮ ರೀತಿ ನಿರ್ಮಾಣವಾಗಬೇಕು. ಗಾಂಧಿ ಮೈದಾನದಲ್ಲಿ ವ್ಯವಸ್ಥಿತ ಮತ್ತು ಶಾಶ್ವತ ರಂಗಮಂದಿರ ನಿರ್ಮಾಣದೊಂದಿಗೆ ಪ್ರಸ್ತುತ ಕಾವೇರಿ ಕಲಾ ಕ್ಷೇತ್ರವನ್ನು ಉತ್ತಮ ರೀತಿ ಪುನರ್ ನಿರ್ಮಾಣ ಮಾಡುವ ಮೂಲಕ ನಗರದಲ್ಲಿ ಸಾಂಸ್ಕೃತಿಕ ಚಟುವಟಿಕೆಗಳಿಗೆ ಹೆಚ್ಚಿನ ಉತ್ತೇಜನ ಒದಗಿಸಬೇಕು. ಮಡಿಕೇರಿಯನ್ನು 'ಸಾಂಸ್ಕೃತಿಕ ಕೇಂದ್ರವನ್ನಾಗಿ ಮಾಡಬೇಕೆಂಬ ಆಶಯ ವ್ಯಕ್ತಪಡಿಸಿದರು.

ಸದಸ್ಯ ಮನ್ಸೂರ್ ಮಾತನಾಡಿ, ನಗರಸಭಾ ವ್ಯಾಪ್ತಿಯಲ್ಲಿ ಪರಿಶಿಷ್ಟರಿಗೆ ಮೀಸಲಾದ ಶೇ.24ರ ಹಣದಲ್ಲಿ ಬಿಡಿಗಾಸು ಕೂಡ ಅವರ ಕಲ್ಯಾಣ ಕಾರ್ಯಕ್ರಮಗಳಿಗೆ ಬಳಕೆಯಾಗಿಲ್ಲ. ಈ ಬಗ್ಗೆ ತನಿಖೆ ನಡೆಸುವಂತೆ ಜಿಲ್ಲಾಧಿಕಾರಿಗೆ ಮನವಿ ಮಾಡಿದರು.

ಸದಸ್ಯರಾದ ಅರುಣ್‌ಶೆಟ್ಟಿ ಹಾಗೂ ಅಪ್ಪಣ್ಣ ಮಾತನಾಡಿ, ನಗರೋತ್ಥಾನ ಯೋಜನೆಯಡಿ ಕಾಮಗಾರಿಗಳು ಸಮರ್ಪಕವಾಗಿ ನಡೆಯುತ್ತಿಲ್ಲ. ದಸರಾ ಸಂದರ್ಭ ದೇವಸ್ಥಾನಗಳಿಗೆ ತೆರಳುವ ರಸ್ತೆಗಳ ಗುಂಡಿ ಮುಚ್ಚಲಾಗಿದೆ. ಉಳಿದ ಬಡಾವಣೆಗಳಲ್ಲಿ ಇಂದಿಗೂ ರಸ್ತೆಗಳು ಗುಂಡಿಗಳಿಂದ ತುಂಬಿದ್ದು, ದುರಸ್ತಿ ಕಾರ್ಯ ನಡೆಸುವಂತೆ ಮನವಿ ಮಾಡಿದರು.

ನಗರ ವ್ಯಾಪ್ತಿಯ ಸಾಕಷ್ಟು ಬಡಾವಣೆಗಳಲ್ಲಿ ಬೀದಿ ನಾಯಿಗಳ ಉಪಟಳ ಹೆಚ್ಚಾಗಿದ್ದು, ರಸ್ತೆಯಲ್ಲಿ ನಡೆಯಲಾಗದ ಪರಿಸ್ಥಿತಿ ನಿರ್ಮಾಣವಾಗಿದೆ. ನಾಯಿಗಳ ಹಾವಳಿ ತಪ್ಪಿಸಲು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ ಸದಸ್ಯರು, ನಗರದ ವಿವಿಧ ಬಡಾವಣೆಗಳಲ್ಲಿ ಮಿತಿ ಮೀರಿರುವ ಮಂಗಗಳ ಕಾಟ, ಕಾಡುಹಂದಿಗಳ ಉಪಟಳದ ಬಗ್ಗೆಯೂ ಸಭೆಯ ಗಮನ ಸೆಳೆದರು.

ಸಭೆಯಲ್ಲಿ ನಗರಸಭಾ ಪೌರಾಯುಕ್ತ ರಮೇಶ್ ಉಪಸ್ಥಿತರಿದ್ದರು.

ಎಂದಿಗೂ ಇತರರೊಂದಿಗೆ ಹೋಲಿಕೆ ಕೆಲಸ ಬೇಡ

ವಿರಾಜಪೇಟೆ ಕಾವೇರಿ ಕಾಲೇಜಿನಲ್ಲಿ ನಡೆದ ವಿದ್ಯಾರ್ಥಿ ಸಂಘ ಉದ್ಘಾಟನೆ ಕಾರ್ಯಕ್ರಮದಲ್ಲಿ ಡಾ.ಬಿದ್ದಂಡ ಚಂಗಪ್ಪ ಮಾತನಾಡಿದರು.



ವಿರಾಜಪೇಟೆ, ಅ.22–ನಾವು ಗಳಿಸುವ ಯಶಸ್ಸು ಇತರರಿಗೆ ಸದಾ ಮಾರ್ಗದರ್ಶಿ ಆಗಬೇಕೆ ಹೊರತು, ಎಂದಿಗೂ ಇತರರೊಂದಿಗೆ ಹೋಲಿಕೆ ಮಾಡುವ ಕೆಲಸವಾಗಬಾರದು ಎಂದು ಡಾ.ಬಿದ್ದಂಡ ಚಂಗಪ್ಪ ಹೇಳಿದರು.

ಪಟ್ಟಣದ ಕಾವೇರಿ ಕಾಲೇಜಿನಲ್ಲಿ ನಡೆದ ವಿದ್ಯಾರ್ಥಿ ಸಂಘ ಉದ್ಘಾಟಿಸಿ ಮಾತನಾಡಿದ ಅವರು, ಜೀವನದಲ್ಲಿ ನಿರಂತರ ಕಲಿಕೆ ನಡೆಯುತ್ತಿರಬೇಕು. ಕಲಿಕೆ ನಿಂತರೆ ಜೀವನ ನಿಂತಂತೆ. ವಿದ್ಯಾರ್ಥಿ ಜೀವನದಲ್ಲಿ ಸಮಯ ಬಹಳ ಮುಖ್ಯವಾದದ್ದು, ಸಮಯವನ್ನು ಸರಿಯಾಗಿ ಸದ್ಬಳಕೆ ಮಾಡಿಕೊಂಡು ಮುನ್ನಡೆಯುವುದನ್ನು ಕಲಿಯಬೇಕು ಎಂದರು. ನಿತ್ಯ ಪತ್ರಿಕೆಗಳನ್ನು ಓದುವುದು, ಒಂದಷ್ಟು ಪ್ರಚಲಿತ ವಿದ್ಯಮಾನಗಳ ಬಗ್ಗೆ ತಿಳಿದುಕೊಂಡು ಸಮಾಜದಲ್ಲಿ ಜನರೊಂದಿಗೆ ಬೆರೆಯುವುದನ್ನು ಕಲಿಯಬೇಕು. ಜೊತೆಗೆ ಪ್ರತಿಯೊಬ್ಬರನ್ನು ಪ್ರೀತಿ ಗೌರವದಿಂದ ಕಂಡಾಗ ಎಲ್ಲಾ ಕಾರ್ಯಗಳಲ್ಲಿ ಏಳಿಗೆ ಕಾಣಬಹುದು ಎಂದು ಸಲಹೆ ನೀಡಿದರು.

ಕಾವೇರಿ ವಿದ್ಯಾಸಂಸ್ಥೆ ಅಧ್ಯಕ್ಷ ಪ್ರೊ.ಇಟ್ಟೀರ ಬಿದ್ದಪ್ಪ ಮಾತನಾಡಿ, ಶಾಲಾ–ಕಾಲೇಜು ವಿದ್ಯಾರ್ಥಿಗಳಲ್ಲಿ ಇರುವಂತಹ ಪ್ರತಿಭೆಗಳನ್ನು ಗುರುತಿಸಿ ಅವರ ಬೆಳವಣಿಗೆಗೆ ಪೂರಕ ವಾತಾವರಣ ಸೃಷ್ಟಿಸುವುದು ಶಿಕ್ಷಕರ ಜವಾಬ್ದಾರಿ. ವಿದ್ಯಾರ್ಥಿಗಳನ್ನು ಪ್ರತಿಭಾವಂತ ನಾಗರಿಕನಾಗಿ ಸಮಾಜಕ್ಕೆ ನೀಡಲು ವಿದ್ಯೆ ಮುಖ್ಯ. ಮೌಲ್ಯ, ಜ್ಞಾನ, ಕೌಶಲ ಹಾಗೂ ಕಷ್ಟದಿಂದ ಕಲಿತರೆ ಬದುಕು ಹಸನಾಗಲು ಸಾಧ್ಯ. ಗುರು ಹಿರಿಯರು ಮತ್ತು ಸಮಾಜಕ್ಕೆ ಸದಾ ಋಣಿಯಾಗಿ ಅಧ್ಯಯನ, ಕ್ರಿಯಾಶೀಲ, ಆವಿಷ್ಕಾರ, ಚಾರಿತ್ರ್ಯ ಕೊಡುಗೆ ಮನೋಭಾವ ಹೊಂದಬೇಕು ಎಂದರು.

ಈ ಸಂದರ್ಭ ಸಾಂಸ್ಕೃತಿಕ ಹಾಗೂ ಕ್ರೀಡಾ ಸಾಧಕ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಕಾಲೇಜಿನ ಪ್ರಾಂಶುಪಾಲ ಬೆನಡಿಕ್ಟ್ ಆರ್.ಸಲ್ಡಾನ, ಐಕ್ಯೂಎಸಿ ಸಂಚಾಲಕಿ ಪ್ರಿಯ, ವಿದ್ಯಾರ್ಥಿ ಕ್ಷೇಮ ಪಾಲನ ಸಂಘದ ಸಂಚಾಲಕ ನಾಗರಾಜು, ಉಪನ್ಯಾಸಕಿ ವೀಣಾ, ವಿದ್ಯಾರ್ಥಿ ಸಂಘದ ಉಪಾಧ್ಯಕ್ಷ ಕೆ.ಕೆ.ಮುತ್ತಣ್ಣ, ಪ್ರಧಾನ ಕಾರ್ಯದರ್ಶಿ ಪಿ.ಕಿರಣ್, ಕ್ರೀಡಾ ಕಾರ್ಯದರ್ಶಿ ಕಾರ್ಯಪ್ಪ, ಸಾಂಸ್ಕೃತಿಕ ಕಾರ್ಯದರ್ಶಿ ಎಂ.ಪಿ.ಸೋನಿ, ಜಂಟಿ ಕಾರ್ಯದರ್ಶಿ ನಿರೂಪ್ ನಾಣಯ್ಯ, ಬಿ.ಎಸ್.ರಕ್ಷಿತಾ ಹಾಜರಿದ್ದರು.

ನಿರ್ದೇಶಕರ ಅವಿರೋಧ ಆಯ್ಕೆ

ವಿರಾಜಪೇಟೆ, ಅ.22– ವಿರಾಜಪೇಟೆ ಕೊಡವ ಸೌಹಾರ್ದ ಕ್ರೆಡಿಟ್ ಕೋ–ಆಪರೆಟಿವ್ ಸೊಸೈಟಿ ಆಡಳಿತ ಮಂಡಳಿಗೆ ನಿರ್ದೇಶಕರನ್ನು ಅವಿರೋಧ'ವಾಗಿ ಆಯ್ಕೆ ಮಾಡಲಾಯಿತು.

ನೆಲ್ಲಮಕ್ಕಡ ಸಿ.ಬೆಳ್ಯಪ್ಪ, ನೆಲ್ಲಚಂಡ ಭೀಮಯ್ಯ, ಕಾಂಡಂಡ ಎಂ. ಚರ್ಮಣ, ಐನಂಡ ಪಿ.ಗಣಪತಿ, ಕೊಂಗಂಡ ಎ.ನಾಣಯ್ಯ, ವಾಂಚಿರ ಟಿ.ನಾಣಯ್ಯ, ಚೇಂದ್ರಿಮಾಡ ಕೆ. ನಂಜಪ್ಪ, ಬೊಳ್ಳೆಪಂಡ ಎಂ.ಸುರೇಶ್, ವಾಟೇರಿರ ಎಸ್.ಪೂವಯ್ಯ, ಕೇಳಪಂಡ ವಿಶ್ವನಾಥ್, ಚೇಂದಂಡ ವಸಂತ್ ಕುಮಾರ್ (ಸಾಮಾನ್ಯ ಕ್ಷೇತ್ರ), ಪಟ್ಟಡ ದಿವ್ಯಾ, ಮೇಕೇರಿರ ಪಾಲಿ ಸುಬ್ರಮಣಿ (ಮಹಿಳಾ ಕ್ಷೇತ್ರ), ನೆಲ್ಲಮಕ್ಕಡ ಪಿ.ಮುತ್ತಣ್ಣ, ಕಾಳೇಂಗಡ ಪಿ.ತಿಮ್ಮಯ್ಯ (ಹಿಂದುಳಿದ ವರ್ಗ) ಅವರನ್ನು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಅಮ್ಮತ್ತಿಯಲ್ಲಿ ಗುಂಡು ಹೊಡೆಯುವ ಸ್ಪರ್ಧೆ



ಅಮ್ಮತ್ತಿ ಸ್ಪೋರ್ಟ್ಸ್ ಅಂಡ್ ಕಲ್ಚರಲ್ ಅಸೋಸಿಯೇಷನ್ ವತಿಯಿಂದ ನಡೆದ ರಾಜ್ಯ ಮಟ್ಟದ ತೆಂಗಿನಕಾಯಿಗೆ ಗುಂಡು ಹೊಡೆಯುವ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಸಿದ್ದಾಪುರ, ಅ.22– ಅಮ್ಮತ್ತಿ ಸ್ಪೋರ್ಟ್ಸ್ ಅಂಡ್ ಕಲ್ಚರಲ್ ಅಸೋಸಿಯೇಷನ್ ವತಿಯಿಂದ ಅಮ್ಮತ್ತಿ ಶಾಲಾ ಮೈದಾನದಲ್ಲಿ ರಾಜ್ಯ ಮಟ್ಟದ ತೋಕ್ ನಮ್ಮೆ ತೆಂಗಿನಕಾಯಿಗೆ ಗುಂಡು ಹೊಡೆಯುವ ಸ್ಪರ್ಧೆ ನಡೆಸಲಾಯಿತು.

ಮೇಜರ್ ಜನರಲ್ ಬಾಚಮಂಡ ಕಾರ್ಯಪ್ಪ ಹಾಗೂ ಕರ್ನಲ್ ಕಂಡ್ರತಂಡ ಸುಬ್ಬಯ್ಯ ಅವರು ತೆಂಗಿನಕಾಯಿಗೆ ಗುಂಡು ಹೊಡೆಯುವ ಮೂಲಕ ಸ್ಪರ್ಧೆಗೆ ಚಾಲನೆ ನೀಡಿದರು. ಬಳಿಕ ವಿವಿಧ ಕಡೆಗಳಿಂದ ಆಗಮಿಸಿದ್ದ ಸ್ಪರ್ಧಾಳುಗಳು ರೈಫಲ್, ತೋಟದ ಕೋವಿ, ಏರ್‌ಗನ್‌ನಿಂದ ತೆಂಗಿನಕಾಯಿಗೆ ಗುಂಡು ಹೊಡೆದರು.

ಸ್ಪರ್ಧೆಯಲ್ಲಿ ಮಹಿಳೆಯರು, ಮಕ್ಕಳು, ಪುರುಷರು ಸೇರಿದಂತೆ ರಾಜ್ಯ, ರಾಷ್ಟ್ರ ಅಂತಾರಾಷ್ಟ್ರೀಯ ಮಟ್ಟದ ಶೂಟಿಂಗ್ ಸಾಧಕರು ಪಾಲ್ಗೊಂಡಿದ್ದರು. ಅಮ್ಮತ್ತಿ ಸ್ಪೋರ್ಟ್ಸ್ ಅಂಡ್ ಕಲ್ಚರಲ್ ಅಸೋಸಿಯೇಷನ್ ಅಧ್ಯಕ್ಷ ಅಲ್ಲರಂಡ ದೀಪಕ್ ಅಪ್ಪಯ್ಯ, ಜಿಪಂ ಮಾಜಿ ಸದಸ್ಯ ಮೂಕೊಂಡ ವಿಜು ಸುಬ್ರಮಣಿ, ವಿವಿಧ ಸಂಘ–ಸಂಸ್ಥೆಗಳ ಪ್ರಮುಖರಾದ ಅಪ್ಪಂದೆರಂಡ ಪಿ.ದಿನು, ಕೊಕ್ಕಲೆಮಾಡ ಥಾನು ತಿಮ್ಮಯ್ಯ, ಕುಂಞ್ಞಯಂಡ ನಿರು ನಾಣಯ್ಯ, ಬೊಮ್ಮಂಡ ಚಕ್ರವರ್ತಿ ಪೊನ್ನಣ್ಣ, ಮೊಳ್ಳೇರ ಮನೋಜ ಪೊನ್ನಣ್ಣ, ಕುಟ್ಟಂಡ ಪೂಣಚ್ಚ, ಚಂಬಂಡ ದಿಲನ್ ಬೆಳ್ಳಿಯಪ್ಪ, ಚೋಕಂಡ ಸಂಜು ಸುಬ್ಬಯ್ಯ, ಅಚ್ಚೆಯಂಡ ಮದನ್ ಚೆಂಗಪ್ಪ, ಪೂದ್ರಿಮಾಡ ಗಗನ್ ಗಣಪತಿ ಉಪಸ್ಥಿತರಿದ್ದರು.

ಸಮಸ್ಯೆಗಳಿಗೆ ಸ್ಪಂದಿಸದಿದ್ದಲ್ಲಿ ತೀವ್ರ ಹೋರಾಟ

ಅತಿಥಿ ಉಪನ್ಯಾಸಕರ ಸಂಘದ ಅಧ್ಯಕ್ಷ ಶ್ಯಾಮ್ ಪ್ರಸಾದ್ ಎಚ್ಚರಿಕೆ



ಮಡಿಕೇರಿ, ಅ.22– ಕೊಡಗು ವಿಶ್ವವಿದ್ಯಾನಿಲಯ ಅತಿಥಿ ಉಪನ್ಯಾಸಕರ ಸಮಸ್ಯೆಗಳಿಗೆ ಶೀಘ್ರ ಸ್ಪಂದಿಸದಿದ್ದಲ್ಲಿ ಹೋರಾಟ ತೀವ್ರಗೊಳಿಸುವುದಾಗಿ ಕೊಡಗು ಅತಿಥಿ ಉಪನ್ಯಾಸಕರ ಸಂಘದ ಅಧ್ಯಕ್ಷ ಎಂ.ಎ.ಶ್ಯಾಮ್ ಪ್ರಸಾದ್ ಎಚ್ಚರಿಕೆ ನೀಡಿದ್ದಾರೆ.

ಈ ಸಂಬಂಧಿಸಿದ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿ, ಅತಿಥಿ ಉಪನ್ಯಾಸಕರು ಅನುಭವಿಸುತ್ತಿರುವ ಸಮಸ್ಯೆಗಳನ್ನು ಮನವರಿಕೆ ಮಾಡಿಕೊಡಲಾಗಿದೆ. ಆದರೆ, ಇದುವರೆಗೂ ಯಾವುದೇ ಸ್ಪಂದನೆ ದೊರೆತ್ತಿಲ್ಲ. 2023ರ ಆಗಸ್ಟ್, ಸೆಪ್ಟೆಂಬರ್ ಹಾಗೂ 2024ರ ಏಪ್ರಿಲ್ ಮತ್ತು ಮೇನಲ್ಲಿ ನಡೆದ ಪರೀಕ್ಷಾ ಕೊಠಡಿ ಮೇಲ್ವಿಚಾರಕರ ಕೆಲಸ, ಮೌಲ್ಯಮಾಪನ ಸಂಭಾವನೆ ನೀಡದಿರುವುದರಿಂದ ಅತಿಥಿ ಉಪನ್ಯಾಸಕರು ಆರ್ಥಿಕ ಸಂಕಷ್ಟದಲ್ಲಿದ್ದಾರೆ.

ಇದಕ್ಕೆ ವಿಶ್ವವಿದ್ಯಾನಿಲಯದ ಆಡಳಿತ ವೈಫಲ್ಯವೇ ಕಾರಣ. ಅಲ್ಲದೆ, ರಾಜ್ಯ ಕಾಲೇಜು ಶಿಕ್ಷಣ ಇಲಾಖೆಯ ದುರ್ಬಲ ಆಡಳಿತದಿಂದಾಗಿ ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ಮತ್ತು ಇಡಿಗಂಟು ಸೌಲಭ್ಯ ಮರೀಚಿಕೆಯಾಗಿದೆ ಎಂದು ಆರೋಪಿಸಿದ್ದಾರೆ.

ಕೊಡಗು ಗೌಡ ಸಮಾಜದಿಂದ ತೀರ್ಥ ವಿತರಣೆ



ಮೈಸೂರಿನ ಕೊಡಗುಗೌಡ ಸಮಾಜದಲ್ಲಿ ಕಾವೇರಿ ತೀರ್ಥ ವಿತರಿಸಲಾಯಿತು.

ನಾಪೋಕ್ಲು, ಅ.22(ದುಗ್ಗಳ)– ಮೈಸೂರಿನ ಕೊಡಗು ಗೌಡ ಸಮಾಜದ ವತಿಯಿಂದ ಸಮುದಾಯದವರು ಹಾಗೂ ಭಕ್ತರಿಗೆ ಶ್ರೀ ಕಾವೇರಿ ಮಾತೆ ಪುಣ್ಯತೀರ್ಥ ವಿತರಿಸಲಾಯಿತು.

ಸಮಾಜದ ಸಭಾಂಗಣದಲ್ಲಿ ತೀರ್ಥವನ್ನು ದೇವರ ಮಂಟಪದಲ್ಲಿರಿಸಿ ಶ್ರದ್ಧಾ ಭಕ್ತಿಯಿಂದ ಪೂಜೆ ನೆರವೇರಿಸಲಾಯಿತು. ಬಳಿಕ ವಿಶೇಷ ಪ್ರಾರ್ಥನೆ ಸಲ್ಲಿಸಿ, ಪುಣ್ಯತೀರ್ಥ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕೊಡಗು ಗೌಡ ಸಮಾಜದ ಅಧ್ಯಕ್ಷ ಕೊಂಬಾರನ ಬಸಪ್ಪ, ಪದಾಧಿಕಾರಿಗಳಾದ ಕುದುಪಜೆ ಚಂದ್ರಶೇಖರ್, ಪೊನ್ನೆಟಿ ನಂದ, ನಡುಮನೆ ಚಂಗಪ್ಪ, ನಡುವಟ್ಟಿರ ಲಕ್ಷ್ಮಣ, ನಿರ್ದೇಶಕರಾದ ಪಟ್ಟಡ ಶಿವಕುಮಾರ್, ಕೊಂಬಾರನ ಸುಬ್ಬಯ್ಯ, ಹೊಸೂರು ರಾಘವಯ್ಯ, ಕುಂಟುಪಣಿ ರಮೇಶ್, ಪಾಣತ್ತಲೆ ವಸಂತ, ತೋಟಂಬೈಲ್ ಇಂದಿರಾ, ಕುಂಟುಪುಣಿ ಶೀಲಾ, ಚಪ್ಪೇರಾ ಯಮುನಾ, ಗೌಡ ಸಮಾಜದ ಮಾಜಿ ಅಧ್ಯಕ್ಷ ತೊಟಂಬೈಲು ಮನೋಹರ, ಮಾಜಿ ಸೈನಿಕರ ಸಂಘದ ಅಧ್ಯಕ್ಷ ಚಂಡಿರ ಬಸಪ್ಪ ಉಪಸ್ಥಿತರಿದ್ದರು.

ಇಂದು ಭಾಗಮಂಡಲದಲ್ಲಿ ಸಿಎನ್‌ಸಿಯಿಂದ ಜನಜಾಗೃತಿ



ಮಡಿಕೇರಿ, ಅ.22–ಕೊಡಗು ಜಿಲ್ಲಾ ವ್ಯಾಪ್ತಿ ನಡೆಸುತ್ತಿರುವ ಬೃಹತ್ ಭೂ ಪರಿವರ್ತನೆ ಮತ್ತು ಭೂ ವಿಲೇವಾರಿಗೆ ಕಡಿವಾಣ ಹಾಕಬೇಕೆಂದು ಒತ್ತಾಯಿಸಿ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ವತಿಯಿಂದ ಅ.23ರಂದು ಬೆಳಗ್ಗೆ 10.30ಕ್ಕೆ ಭಾಗಮಂಡಲದಲ್ಲಿ ಜನಜಾಗೃತಿ ಮಾನವ ಸರಪಳಿ ಕಾರ್ಯಕ್ರಮ ನಡೆಸಲಾಗುವುದು ಎಂದು ಸಿಎನ್‌ಸಿ ಅಧ್ಯಕ್ಷ ಎನ್.ಯು.ನಾಚಪ್ಪ ತಿಳಿಸಿದ್ದಾರೆ.

ಕೊಡಗಿನಲ್ಲಿ ಕರ್ನಾಟಕ ಭೂ ಸುಧಾರಣಾ ಕಾಯ್ದೆ ತಿದ್ದುಪಡಿ ದುರುಪಯೋಗವಾಗುತ್ತಿದೆ. ಭಾಗಮಂಡಲ ತಲಕಾವೇರಿ ವ್ಯಾಪ್ತಿಯ ಪೇರೂರು ಬಲ್ಲಮಾವಟಿ ಪ್ರದೇಶದಲ್ಲಿ ಕಾವೇರಿ ಉಪನದಿ 'ಕಪ್ಪೊಳೆಯ' ಜಲ ಮೂಲವನ್ನು ಧ್ವಂಸಗೊಳಿಸುವ ಪ್ರಯತ್ನ ನಡೆದಿದೆ. ಕಾವೇರಿ ಪುಣ್ಯಸ್ಥಳ ಸುಪ್ರಸಿದ್ಧ ತೀರ್ಥಯಾತ್ರ ಕ್ಷೇತ್ರವಾಗಿದ್ದು, ಇದು ಪ್ರವಾಸಿ ತಾಣವಾಗುವ ಬದಲು ಆಧ್ಯಾತ್ಮಿಕ, ಪಾರಮಾರ್ಥಿಕ ನೆಲೆಯಾಗಿ ಉಳಿದು ಮುಂದುವರೆಯಬೇಕು. ಭೂ ಸುಧಾರಣಾ ತಿದ್ದುಪಡಿ ಕಾಯ್ದೆ ದುರ್ಬಳಕೆಯಾಗದಂತೆ ಸಾತ್ವಿಕ ಪ್ರತಿರೋಧವನ್ನು ಸಿಎನ್‌ಸಿ ಒಡ್ಡುತ್ತಾ ಬಂದಿದೆ. ಭಾಗಮಂಡಲದಲ್ಲಿ ಸಿಎನ್‌ಸಿಯಿಂದ ಶಾಂತಿಯುತ ಮಾನವ ಸರಪಳಿ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದ್ದಾರೆ.

ಆಯಸ್ಸು ವೃದ್ಧಿಸುವುದೇ ಆಯುರ್ವೇದ



ಚಿಲಕವಾಡಿ ಮಠದಲ್ಲಿ ಆಯೋಜಿಸಿದ್ದ ಆಯುರ್ವೇದ ತಪಾಸಣೆ ಶಿಬಿರಕ್ಕೆ ಗೋ ಪೂಜೆ ನೆರವೇರಿಸುವ ಮೂಲಕ ಮಾಜಿ ಸಚಿವ ಮಹೇಶ್ ಚಾಲನೆ ನೀಡಿದರು.

ಕೊಳ್ಳೇಗಾಲ, ಅ.22– ಆಯುಸ್ಸು ವೃದ್ಧಿಗೊಳಿಸಿಕೊಳ್ಳುವುದೇ ಆಯುರ್ವೇದ ಎಂದು ಮಾಜಿ ಸಚಿವ ಎನ್.ಮಹೇಶ್ ಹೇಳಿದರು.

ತಾಲೂಕಿನ ಚಿಲಕವಾಡಿ ಶಂಭುಲಿಂಗೇಶ್ವರಬೆಟ್ಟದ ನಿಜಗುಣ ಮಠದಲ್ಲಿ ನಿಜಗುಣ ಫೌಂಡೇಷನ್, ಗೋ ಸೇವಾ ಕರ್ನಾಟಕದ ದಕ್ಷಿಣ ಪ್ರಾಂತ್ಯ, ಯೂಥ್ ಫಾರ್ ಸೇವಾ ಹಾಗೂ ಆಯುಷ್ ಇಲಾಖೆ ಸಹಯೋಗದೊಂದಿಗೆ ನಡೆದ ಉಚಿತ ಆಯುರ್ವೇದ ತಪಾಸಣಾ ಶಿಬಿರದಲ್ಲಿ ಗೋ ಪೂಜೆ ನೆರವೇರಿಸಿ ಮಾತನಾಡಿದ ಅವರು, ಪರಿಸರದಲ್ಲಿ ಇರುವಂತಹ ಗಿಡಮೂಲಿಕೆಗಳಿಂದಲ್ಲೇ ಅನೇಕ ರೋಗಗಳಿಗೆ ಔಷಧ ಇದೆ. ಅದನ್ನ ಬಳಸಿಕೊಳ್ಳುವ ನಿಟ್ಟಿನಲ್ಲಿ ಎಲ್ಲರೂ ಮುಂದಾಗಬೇಕು ಎಂದರು.

ಶ್ರೀ ಬಾಲಷಡಕ್ಷರ ಸ್ವಾಮೀಜಿ ಮಾತನಾಡಿ, ಶ್ರೀಮಠದಿಂದ ಈ ಭಾಗದ ಜನರಿಗೆ ಅಗತ್ಯವಿರುವ ಮಂಡಿ ನೋವು, ಬಿಪಿ, ಶುಗರ್, ಕಿಡ್ನಿಸ್ಟೋನ್, ಕ್ಯಾನ್ಸರ್‌ನಿಂದ ಬಳಲುತ್ತಿರುವ ರೋಗಿಗಳಿಗೆ ಗೋ ಆಧಾರಿತ ನಾಟಿ ಆಯುರ್ವೇದ ಔಷಧೀಯ ಚಿಕಿತ್ಸೆ ನೀಡಲಾಗುವುದು. ಇದಕ್ಕಾಗಿ ಪ್ರತಿ ತಿಂಗಳು 5ನೇ ತಾರೀಖು ಮಠದ ವತಿಯಿಂದ ಹಾಗೂ ಇತರೆ ಸಂಸ್ಥೆಗಳ ಸಹಕಾರದೊಂದಿಗೆ ಇಂತಹ ಶಿಬಿರ ನಡೆಸಲಾಗುತ್ತಿದೆ ಎಂದರು.

ಕ್ಯಾನ್ಸರ್ ತಜ್ಞ ಡಾ.ಡಿ.ಪಿ.ರಮೇಶ್ ಮಾತನಾಡಿದರು.

ನಂಜನಗೂಡಿನ ಪಾರಂಪರಿಕ ವೈದ್ಯರಾದ ಈಶ್ವರ್, ಆಯುಷ್ ಇಲಾಖೆಯ ಡಾ.ಸುಧಾ, ಡಾ.ಕುಸುಮ, ಆರ್‌ಎಸ್‌ಎಸ್ ಸ್ವಯಂ ಸೇವಕರಾದ ಬೆಂಡರಹಳ್ಳಿ ಶಿವಕುಮಾರ್, ಸುರೇಶ್, ಅರುಣ್ ಕುಮಾರ್, ವಕೀಲರಾದ ಮಧುಸೂದನ್, ಮುಡಿಗುಂಡ ಉದಯ ಕುಮಾರ್, ತೇರಂಬಳ್ಳಿ ನಾಗಭೂಷಣ್, ಕುಂತೂರು ಗ್ರಾಪಂ ಸದಸ್ಯ ರವಿಕುಮಾರ್, ಗೋ ಸೇವಾ ಘಟಕದ ಮಹಾಲಿಂಗ, ನೈಸರ್ಗಿಕ ಕೃಷಿಕ ರೇಚಣ್ಣ, ಸತ್ತೇಗಾಲ ರವಿಶಂಕರ್ ಇನ್ನಿತರಿದ್ದರು.

ಕುಶಾಲನಗರ: ಕಾವೇರಿ ಮಾತೆಗೆ ಮಹಾಪೂಜೆ



ಕುಶಾಲನಗರ, ಅ.22–ಪಟ್ಟಣದ ಕಾವೇರಿ ನದಿ ದಂಡೆಯಲ್ಲಿರುವ ಕಾವೇರಿ ಮಾತೆ ಪ್ರತಿಮೆ ಆವರಣದಲ್ಲಿ ಬಾರವಿ ಕನ್ನಡ ಸಂಘದ ವತಿಯಿಂದ ತುಲಾಸಂಕ್ರಮಣದ ಅಂಗವಾಗಿ ವಿಶೇಷ ಅಲಂಕಾರ ಹಾಗೂ ಮಹಾಪೂಜೆ ನಡೆಸಲಾಯಿತು.

ಈ ಸಂದರ್ಭ ನೆರೆದಿದ್ದ ಭಕ್ತರಿಗೆ ಕಾವೇರಿ ತೀರ್ಥ ವಿತರಿಸಿ, ಅನ್ನ ದಾನ ನೆರವೇರಿಸಲಾಯಿತು. ತಹಸೀಲ್ದಾರ್ ಕಿರಣ್ ಗೌರಯ್ಯ ಹಾಗೂ ಎಸ್‌ಎಲ್‌ಎನ್ ಕಾಫಿ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ಸಾತಪ್ಪನ್ ಮೊದಲಾದವರು ಪೂಜೆ ಸಲ್ಲಿಸಿದರು. ಇದೇ ವೇಳೆ ಮಾತನಾಡಿದ ಬಾರವಿ ಸಹೋದರರು, ಕೊಡಗಿನ ಕುಲದೈವ ಕಾವೇರಿ ಸಂಕ್ರಮಣದ ಅಂಗವಾಗಿ ಪ್ರತಿವರ್ಷದಂತೆ ಈ ಬಾರಿಯೂ ಕೊಡಗು ಹಾಗೂ ಮೈಸೂರು ಜಿಲ್ಲೆಯ ಭಕ್ತರಿಗೆ ಹತ್ತು ಸಾವಿರ ಬಾಟಲ್‌ಗಳಷ್ಟು ಕಾವೇರಿ ತೀರ್ಥ ವಿತರಿಸಲಾಯಿತು. 8 ಸಾವಿರ ಮಂದಿಗೆ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು. ಉತ್ತಮ ಮಳೆ ಬೆಳೆಯಾಗಿ, ನಾಡು ಸಮೃದ್ಧವಾಗಲೆಂದು ಮಹಾತಾಯಿ ಕಾವೇರಿಯಲ್ಲಿ ಸಾಮೂಹಿಕವಾಗಿ ಪ್ರಾರ್ಥಿಸಲಾಯಿತು ಎಂದು ತಿಳಿಸಿದರು.

ರವಿಚಂದ್ರನ್ ಕನ್ನಡ ಸಂಘದ ಪದಾಧಿಕಾರಿಗಳಾದ ವಿಜೇಂದ್ರ ಪ್ರಸಾದ್, ರವೀಂದ್ರ ಪ್ರಸಾದ್, ಬಬಿಂದ್ರಪ್ರಸಾದ್, ಕಾವೇರಿ ಮಹಾ ಆರತಿ ಬಳಗದ ಸಂಚಾಲಕ ಚಂದ್ರ ಮೋಹನ್, ಗಣಪತಿ ದೇವಾಲಯ ಸಮಿತಿಯ ಚಂದ್ರು ತಾಪಂ ಮಾಜಿ ಸದಸ್ಯ ಮಹದೇವ್, ಅಡುಗೆ ರುದ್ರ, ಮೊದಲಾದವರಿದ್ದರು. ಅರ್ಚಕ ಕೃಷ್ಣಮೂರ್ತಿ ಭಟ್ ಪೂಜಾ ಕಾರ್ಯ ನೆರವೇರಿಸಿದರು.

ಫೆ.7ರಿಂದ ಅಂಬಟ್ಟಿ ದರ್ಗಾದಲ್ಲಿ ಉರುಸ್

ಪೊನ್ನಂಪೇಟೆ, ಅ.22–ವಿರಾಜಪೇಟೆ ಸಮೀಪದ ಬಿಟ್ಟಂಗಾಲ ಅಂಬಟ್ಟಿ ಗ್ರಾಮದ ದರ್ಗಾ ಶರೀಫ್‌ನಲ್ಲಿ ಶೇಕ್ ವಲಿಯುಲ್ಲಾಹಿ ವಾರ್ಷಿಕ ಉರುಸ್ (ಮಕ್ಕಾನಿ ನೇರ್ಚೆ) ಮುಂಬರುವ ಫೆ.7ರಿಂದ 11ರವರೆಗೆ ಅದ್ದೂರಿಯಾಗಿ ನಡೆಸಲು ಅಂಬಟ್ಟಿ ಜುಮಾ ಮಸೀದಿ ಆಡಳಿತ ಮಂಡಳಿ ನಿರ್ಧರಿಸಿದೆ.

ಫೆ.7ರಂದು ಅಂಬಟ್ಟಿ ಮೊಕಾಂ ಉರುಸ್‌ಗೆ ಚಾಲನೆ ದೊರೆಯಲಿದ್ದು, ನಂತರ ಪ್ರತಿ ದಿನ ಸಂಜೆ ಧಾರ್ಮಿಕ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ. ಫೆ.10ರಂದು ಸಾರ್ವಜನಿಕ ಸಮ್ಮೇಳನ ಮತ್ತು ಅನ್ನಸಂತರ್ಪಣೆ ಜರುಗಲಿದೆ ಎಂದು ಅಂಬಟ್ಟಿ ಜುಮಾ ಮಸೀದಿ ಆಡಳಿತ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.



ಅತೀಫ್, ಅನಿತಾ ನೇಮಕ



ಅತೀಫ್ ಮನ್ನಾ



ಹೆಚ್.ಬಿ.ಅನಿತಾ

ವಿರಾಜಪೇಟೆ, ಅ.22–ಪುರಸಭೆಗೆ ಅತೀಫ್ ಮನ್ನಾ ಹಾಗೂ ಅಯ್ಯಪ್ಪ ಬೆಟ್ಟದ ಸುಂಕದಕಟ್ಟೆ ಹೆಚ್.ಬಿ.ಅನಿತಾ ಅವರನ್ನು ಸದಸ್ಯರಾಗಿ ನಾಮ ನಿರ್ದೇಶನವಾಗಿ ನೇಮಕ ಮಾಡಲಾಗಿದೆ.

ಇಂದು ವಿದ್ಯುತ್ ವ್ಯತ್ಯಯ

ಮಡಿಕೇರಿ, ಅ.22–ಸೋಮವಾರಪೇಟೆ ಸೆಸ್ಕ್ ಉಪವಿಭಾಗದ ಶಾಂತಳ್ಳಿ ಫೀಡರ್‌ನಲ್ಲಿ ಮಾರ್ಗನಿರ್ವಹಣೆ ಕಾರ್ಯ ಹಮ್ಮಿಕೊಂಡಿರುವುದರಿಂದ ಅ.23ರಂದು ಬೆಳಗ್ಗೆ 10 ರಿಂದ ಸಂಜೆ 6 ಗಂಟೆವರೆಗೆ ಯಡೂರು, ತಲ್ತಾರೆ ಶೆಟ್ಟಳ್ಳಿ, ಕಿರಗಂದೂರು, ತಾಕೇರಿ, ಗಿಜಗನಮನೆ, ತೊಳೂರು ಶೆಟ್ಟಳ್ಳಿ, ಕೂಲೆಹೊಸ ಬೀಡು, ಕಲ್ಕಂದೂರು, ಬಸವನಕಟ್ಟೆ ನಗರಳ್ಳಿ, ಹೆಮ್ಮನೆಗದ್ದೆ, ಶಾಂತಳ್ಳಿ, ಬೆಟ್ಟದಳ್ಳಿ, ಬೀದಳ್ಳಿ, ಕುಂದಳ್ಳಿ, ಹೆಗ್ಗಡಮನೆ, ಹರಗ, ಕುಂಬಾರಗಡಿಗೆ ಸುತ್ತಮುತ್ತಲ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಅದ್ಧೂರಿ ಕನ್ನಡ ರಾಜ್ಯೋತ್ಸವ ಆಚರಣೆಗೆ ತೀರ್ಮಾನ

▸ ವೈವಿಧ್ಯಮಯ ಕಾರ್ಯಕ್ರಮಗಳ ಆಯೋಜನೆಗೆ ನಿರ್ಧಾರ ▸ ಜಿಲ್ಲಾಧಿಕಾರಿ ಶಿಲ್ಪನಾಗ್ ಅಧ್ಯಕ್ಷತೆಯಲ್ಲಿ ಸಭೆ



ಚಾಮರಾಜನಗರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಡಿಸಿ ಶಿಲ್ಪನಾಗ್ ಅಧ್ಯಕ್ಷತೆಯಲ್ಲಿ ವಿವಿಧ ಸಂಘ-ಸಂಸ್ಥೆ, ಅಧಿಕಾರಿಗಳ ಸಭೆ ನಡೆಯಿತು.

ಚಾಮರಾಜನಗರ, ಅ.22-ಜಿಲ್ಲಾಡಳಿತ ವತಿಯಿಂದ ಎಲ್ಲರ ಸಹಕಾರದೊಂದಿಗೆ ನ.1ರಂದು ಜಿಲ್ಲಾ ಕೇಂದ್ರದಲ್ಲಿ ಕನ್ನಡ ರಾಜ್ಯೋತ್ಸವವನ್ನು ಅದ್ಧೂರಿಯಾಗಿ ಆಚರಿಸಲು ತೀರ್ಮಾನಿಸಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಧಿಕಾರಿ ಶಿಲ್ಪನಾಗ್ ಅಧ್ಯಕ್ಷತೆಯಲ್ಲಿ ನಡೆದ ವಿವಿಧ ಸಂಘ-ಸಂಸ್ಥೆಗಳು, ಅಧಿಕಾರಿಗಳ ಸಭೆಯಲ್ಲಿ ಈ ಬಾರಿ ರಾಜ್ಯೋತ್ಸವವನ್ನು ಅರ್ಥಪೂರ್ಣ ಹಾಗೂ ವೈವಿಧ್ಯಮಯ ಕಾರ್ಯಕ್ರಮಗಳ ಮೂಲಕ ಆಚರಿಸಲು ನಿರ್ಧರಿಸಲಾಯಿತು.

ಜಿಲ್ಲೆಯಲ್ಲಿ ರಾಜ್ಯೋತ್ಸವ ವ್ಯಾಪಕವಾಗಿ ಆಚರಿಸುವಂತಾಗಬೇಕು. ಎಲ್ಲಾ ಗ್ರಾಮ ಪಂಚಾಯಿತಿ, ಬ್ಯಾಂಕ್ ಸೇರಿದಂತೆ ಇನ್ನಿತರೆ ಕಚೇರಿಗಳಲ್ಲಿ ಆಚರಿಸಬೇಕು. ವಿವಿಧ ಕ್ಷೇತ್ರಗಳಲ್ಲಿ ದುಡಿದ ಜಿಲ್ಲೆಯ ಕನ್ನಡಿಗರನ್ನು ಗೌರವಿಸಬೇಕು. ಕನ್ನಡದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಬೇಕು. ಗಡಿ ಭಾಗಗಳಲ್ಲಿ ವಿಶೇಷವಾಗಿ ರಾಜ್ಯೋತ್ಸವ ಕಾರ್ಯಕ್ರಮ ಏರ್ಪಾಡು ಮಾಡಬೇಕು ಎಂದು ಸಭೆಯಲ್ಲಿ ಮುಖಂಡರು ಒತ್ತಾಯಿಸಿದರು.

ಬ್ಯಾಂಕ್‌ಗಳಲ್ಲಿ ಕನ್ನಡ ಭಾಷೆಯಲ್ಲಿ ವ್ಯವಹರಿಸಬೇಕು. ಜಿಲ್ಲೆಯಲ್ಲಿ ಪ್ರಧಾನವಾಗಿ ಕನ್ನಡ ನಾಮಫಲಕಗಳನ್ನು ಅಳವಡಿಸಬೇಕು. ಈ ಬಗ್ಗೆ ಸಾಕಷ್ಟು ಗಮನ ಸೆಳೆಯಲಾಗಿದೆ. ಕಟ್ಟುನಿಟ್ಟಾಗಿ ಕನ್ನಡ ನಾಮಫಲಕಗಳು ಹಾಕುವಂತೆ ಕ್ರಮ ವಹಿಸಬೇಕು. ಕೈಗಾರಿಕಾ ಪ್ರದೇಶದಲ್ಲಿ ಸ್ಥಳೀಯ ಜಿಲ್ಲೆಯ ಕನ್ನಡಿಗರಿಗೆ ಉದ್ಯೋಗ ದೊರಕಬೇಕು. ಕನ್ನಡ ಜಾಗೃತಿ ಅಭಿಯಾನವನ್ನು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕೈಗೊಳ್ಳಬೇಕು. ಗಡಿ ಜಿಲ್ಲೆಯಲ್ಲಿ ಕನ್ನಡಪರ ಹೆಚ್ಚಿನ ಕಾರ್ಯಕ್ರಮಗಳು ನಡೆಸಬೇಕು ಎಂದು ಮುಖಂಡರು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಶಿಲ್ಪನಾಗ್ ಮಾತನಾಡಿ, ಕಳೆದ ಬಾರಿ ಎಲ್ಲರ ಸಹಕಾರದೊಂದಿಗೆ ಅತ್ಯಂತ ಯಶಸ್ವಿಯಾಗಿ ರಾಜ್ಯೋತ್ಸವವನ್ನು ಆಚರಿಸಿದ್ದೇವೆ. ಅರ್ಥಪೂರ್ಣ ಕಾರ್ಯಕ್ರಮ ಏರ್ಪಾಡು ಮಾಡಲಾಗಿತ್ತು. ಈ ಬಾರಿಯೂ ಅದ್ಧೂರಿ ಹಾಗೂ ವೈವಿಧ್ಯಮಯ ಕಾರ್ಯಕ್ರಮಗಳ ಮೂಲಕ ಇನ್ನಷ್ಟು ಆಕರ್ಷಣೀಯವಾಗಿ ರಾಜ್ಯೋತ್ಸವಕ್ಕೆ ಸಕಲ ಸಿದ್ಧತೆ ಮಾಡಲಾಗುವುದು. ಸಭೆಯಲ್ಲಿ ನೀಡಿರುವ ಸಲಹೆಗಳನ್ನು ಪರಿಗಣಿಸಿ ಕಾರ್ಯಕ್ರಮ ರೂಪಿಸಲಾಗುವುದು ಎಂದರು.

ಕನ್ನಡದಲ್ಲೇ ಪ್ರಧಾನವಾಗಿ ನಾಮಫಲಕ ಅಳವಡಿಸಲು ಹಾಗೂ ಕನ್ನಡ ಅನುಷ್ಠಾನದಲ್ಲಿ ಸರ್ಕಾರ ಹೊರಡಿಸಿರುವ ಆದೇಶ ಸೂಚನೆಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಕ್ರಮ ವಹಿಸಬೇಕು. ನಾಮಫಲಕ ಸಂಬಂಧ ನೀಡುವ ಆದೇಶ ಪಾಲನೆ ಮಾಡದ ಅಂಗಡಿ-ಮುಂಗಟ್ಟುಗಳ ಪರವಾನಗಿ ರದ್ದು ಮಾಡಬೇಕು. ಬ್ಯಾಂಕ್‌ಗಳಲ್ಲಿ ಕನ್ನಡ ಬಳಕೆಯಾಗಬೇಕು. ಜೊತೆಗೆ ಗ್ರಾಹಕರಿಗೆ ಅನುಕೂಲವಾಗುವಂತೆ ಸಹಾಯವಾಣಿ ಡೆಸ್ಕ್‌ನಲ್ಲಿ ಕನ್ನಡ ಭಾಷೆ ಬಲ್ಲವರನ್ನು ನಿಯೋಜಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ನ.30ರಂದು ಗಡಿಭಾಗ ಮಣಜನೂರಿನಲ್ಲಿ ಸಹ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಗುವುದು. ಜಿಲ್ಲೆಯನ್ನು ಸಂಪರ್ಕಿಸುವ ಭಾಗಗಳಲ್ಲಿ ಜಿಲ್ಲೆಯ ಸಂಸ್ಕೃತಿಯನ್ನು ಬಿಂಬಿಸುವ ವಿನ್ಯಾಸವುಳ್ಳ ಸ್ವಾಗತ ಕಮಾನುಗಳನ್ನು ಅಳವಡಿಸಲು ಕ್ರಮ ವಹಿಸಲಿದ್ದೇವೆ. ಕನ್ನಡ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಆಯೋಜಿಸಲಾಗುವುದು. ಕೈಗಾರಿಕಾ ಪ್ರದೇಶದಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡಬೇಕು. ಕೌಶಲ ಅಗತ್ಯವಿದ್ದರೆ ತರಬೇತಿ ನೀಡಿ ಉದ್ಯೋಗಕ್ಕೆ ನೇಮಿಸಿಕೊಳ್ಳಬೇಕು ಎಂದು ಈಗಾಗಲೇ ಉದ್ಯಮಿಗಳಿಗೆ ಸೂಚನೆ ನೀಡಲಾಗಿದೆ. ಶೀಘ್ರದಲ್ಲೇ ಮತ್ತೊಮ್ಮೆ ಕೈಗಾರಿಕೋದ್ಯಮಿಗಳ ಸಭೆ ಕರೆಯಲಾಗುವುದು. ಆ ಸಭೆಗೆ ಕನ್ನಡಪರ ಸಂಘಟನೆಗಳ ಮುಖಂಡರನ್ನು ಆಹ್ವಾನಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ. ಕವಿತಾ, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ತಹಸೀಲ್ದಾರ್ ಗಿರಿಜಾ, ವಿವಿಧ ಇಲಾಖೆಗಳ ಅಧಿಕಾರಿಗಳು, ಮುಖಂಡರಾದ ಚಾ.ರಂ.ಶ್ರೀನಿವಾಸಗೌಡ, ಸುರೇಶ್ ವಾಜಪೇಯಿ, ಚಾ.ಗು. ನಾಗರಾಜು, ಸಿ.ಕೆ.ಮಂಜುನಾಥ್, ಸಿ.ಎಂ. ಕೃಷ್ಣಮೂರ್ತಿ, ನಿಜಧ್ವನಿ ಗೋವಿಂದರಾಜು, ಪಣ್ಯದಹುಂಡಿ ರಾಜು, ಸೋಮನಾಯಕ, ಜಿ. ಬಂಗಾರು, ಚಾ.ರಾ.ಕುಮಾರ್, ಕಹಳೆ ರವಿಚಂದ್ರ ಪ್ರಸಾದ್, ಪ್ರಶಾಂತ್, ನಾಗೇಶ್, ನಟರಾಜು, ಶಿವಣ್ಣ, ಮಹೇಶ್, ಶಿವು, ಲಿಂಗರಾಜು ಇತರೆ ಮುಖಂಡರು ಸಭೆಯಲ್ಲಿ ಉಪಸ್ಥಿತರಿದ್ದರು.

ನ.1ರೊಳಗೆ ಶೇ.60ರಷ್ಟು ಕನ್ನಡ ಭಾಷೆ ಪ್ರದರ್ಶನ ಕಡ್ಡಾಯ

ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ-2024ರ ಅನ್ವಯ ಜಿಲ್ಲಾ ವ್ಯಾಪ್ತಿಯಲ್ಲಿ ಪರವಾನಗಿ (ಅನುಮತಿ) ಪಡೆದು ನಡೆಸುವ ವಾಣಿಜ್ಯ, ಕೈಗಾರಿಕೆ, ಶಿಕ್ಷಣ ಸೇರಿದಂತೆ ಎಲ್ಲಾ ಸಾರ್ವಜನಿಕ ಹಾಗೂ ಖಾಸಗಿ ಸಂಘ-ಸಂಸ್ಥೆಗಳು ನ.1ರೊಳಗೆ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ಸೂಚಿಸಿದ್ದಾರೆ. ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಬಳಕೆ ಮಾಡದೇ ಇದ್ದಲ್ಲಿ ಗಂಭೀರವಾಗಿ ಪರಿಗಣಿಸಿ, ಸಂಬಂಧಪಟ್ಟ ಕೈಗಾರಿಕೆ, ಅಂಗಡಿ-ಮುಂಗಟ್ಟು, ವಾಣಿಜ್ಯ, ಶಿಕ್ಷಣ ಸೇರಿದಂತೆ ಇನ್ನಿತರೆ ಉದ್ಯಮ ಸಂಘ-ಸಂಸ್ಥೆಗಳ ಪರವಾನಗಿಯನ್ನು ರದ್ದುಪಡಿಸಲಾಗುವುದು. ನ.1ರೊಳಗಾಗಿ ನಾಮಫಲಕ ಮೇಲ್ಭಾಗದಲ್ಲಿ ಶೇ.60ರಷ್ಟು ಕನ್ನಡವನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು ಎಂದು ತಿಳಿಸಿದ್ದಾರೆ.

ಅಕ್ರಮ ಗೋ ಸಾಗಣೆ ತಡೆಗೆ ಆಗ್ರಹಿಸಿ ಎಸ್ಪಿಗೆ ಮನವಿ ಸಲ್ಲಿಕೆ



ಅಕ್ರಮ ಗೋ ಸಾಗಣೆ ತಡೆಯುವಂತೆ ಒತ್ತಾಯಿಸಿ ಹಿಂದೂ ಜಾಗರಣ ವೇದಿಕೆಯಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಅವರಿಗೆ ಮನವಿ ಸಲ್ಲಿಸಲಾಯಿತು.

ಚಾಮರಾಜನಗರ, ಅ.22-ಗುಂಡ್ಲುಪೇಟೆ ತಾಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಗೋ ಸಾಗಣೆ ಮತ್ತು ಗೋ ಹತ್ಯೆ ತಡೆಯುವಂತೆ ಒತ್ತಾಯಿಸಿ ಹಿಂದೂ ಜಾಗರಣ ವೇದಿಕೆ ವತಿಯಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ಅವರಿಗೆ ಮನವಿ ಸಲ್ಲಿಸಲಾಯಿತು.

ಗುಂಡ್ಲುಪೇಟೆ ತಾಲೂಕಿನಲ್ಲಿ ಅಕ್ರಮವಾಗಿ ಗೋ ಸಾಗಣೆ ಮತ್ತು ಹತ್ಯೆ ನಡೆಯುತ್ತಲೇ ಇದೆ. ಗುಂಡ್ಲುಪೇಟೆ ಟೌನ್‌ನಲ್ಲಿ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿರುವುದರಿಂದ ಗುಂಡ್ಲುಪೇಟೆ ಭಾಗದಲ್ಲಿ ಅತಿ ಹೆಚ್ಚು ಗೋ ಸಾಗಣೆ ನಡೆಯುತ್ತಿದೆ. ಇದಕ್ಕೆ ಸಂಬಂಧಿಸಿದಂತೆ ನಾವು ಗುಂಡ್ಲುಪೇಟೆ ಮತ್ತು ಬೇಗೂರು ಪೊಲೀಸ್ ಠಾಣೆಗೆ ಹಲವು ಬಾರಿ ದೂರು ನೀಡಿದ್ದರು ಸಹ ಇದನ್ನು ತಡೆಯುವಲ್ಲಿ ವಿಫಲರಾಗಿದ್ದಾರೆ.

ಅ.19ರಂದು ಗುಂಡ್ಲುಪೇಟೆ ಹೊರಭಾಗದ ಪುರಸಭೆ ತ್ಯಾಜ್ಯ ವಿಲೇವಾರಿ ಘಟಕದ ಪಕ್ಕದ ಜಮೀನಿನಲ್ಲಿ ಗೋ ಹತ್ಯೆ ಮಾಡಿ ಅದರ ಮಾಂಸವನ್ನು ಸಾಗಿಸುವ ಕೆಲಸ ನಡೆದಿದೆ ಹಾಗೂ ಗೋವಿನ ಕೆಲ ಭಾಗಗಳನ್ನು ಒಣಗಿಸುವ ಕೆಲಸವು ಸಹ ನಡೆದಿದೆ. ಈ ವಿಚಾರವಾಗಿ ಗುಂಡ್ಲುಪೇಟೆ ಟೌನ್ ಪೊಲೀಸ್‌ಗೆ ಮಾಹಿತಿ ನೀಡಿದ್ದರೂ ಗೋ ಹತ್ಯೆ ನಡೆಸಿದ ವ್ಯಕ್ತಿಗಳನ್ನು ವಶಕ್ಕೆ ಪಡೆದಿಲ್ಲ. ಇದು ನಮ್ಮ ವ್ಯಾಪ್ತಿಗೆ ಬರುವುದಿಲ್ಲ ಎಂದು ಅಸಡ್ಡೆ ತೋರಿದ್ದಾರೆ. ಅಲ್ಲದೆ, ಗೋ ಮಾಂಸ ಆಹಾರ ತಯಾರಿಸುತ್ತಿದ್ದರೂ ಸಹ ಯಾವುದೇ ಕ್ರಮ ತೆಗೆದುಕೊಂಡಿಲ್ಲ ಎಂದು ಮನವಿಯಲ್ಲಿ ದೂರಲಾಗಿದೆ.

ಗುಂಡ್ಲುಪೇಟೆಯಿಂದ ಮೂಳೆಹೊಳೆ ಚೆಕ್‌ಪೋಸ್ಟ್ ಮೂಲಕ ನಿರಂತರವಾಗಿ ಕೇರಳಕ್ಕೆ ಗೋವು ಸಾಗಿಸುತ್ತಿದ್ದರೂ ಯಾವುದೇ ತಪಾಸಣೆಯನ್ನು ಪೊಲೀಸ್ ಹಾಗೂ ಸಂಬಂಧಪಟ್ಟ ಇಲಾಖೆ ಮಾಡುತ್ತಿಲ್ಲ ಹಾಗೂ ಕಾನೂನು ಕ್ರಮ ಜರುಗಿಸುತ್ತಿಲ್ಲ ರಾಜ್ಯದಲ್ಲಿ ಗೋ ಹತ್ಯೆ ಕಾಯ್ದೆಯಡಿ ಈ ಬಗ್ಗೆ ಸೂಕ್ತ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಲಾಗಿದೆ. ಈ ಸಂದರ್ಭದಲ್ಲಿ ಹಿಂದೂ ಜಾಗರಣ ವೇದಿಕೆ ಸಹಸಂಚಾಲಕ ಸುಂದರ್ ರಾಜ್, ನಗರಸಭಾ ಸದಸ್ಯ ಮನೋಜ್ ಪಟೇಲ್, ಕೂಸಣ್ಣ, ಕೃಷ್ಣ, ನಾರಾಯಣ್, ಶ್ರೀಕಾಂತ್ ಹಾಜರಿದ್ದರು.

ಚಾಮರಾಜನಗರದಲ್ಲಿ ದಸಂಸ ಕಾರ್ಯಕರ್ತರ ಪ್ರತಿಭಟನೆ



ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಅವರಿಗೆ ದಸಂಸ ಜಿಲ್ಲಾ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ಚಾಮರಾಜನಗರ, ಅ.22- ಜಾತಿಗಣತಿ ವರದಿ ಅಂಗೀಕರಿಸಿ, ಶೀಘ್ರ ಅನುಷ್ಠಾನಗೊಳಿಸಬೇಕು, ದಲಿತ ಹಿಂದುಳಿದ ವರ್ಗಕ್ಕೆ ಮೀಸಲಾತಿ ಮಿತಿ ಪ್ರಮಾಣವನ್ನು ಶೇ.50 ರಿಂದ ಶೇ.75ಕ್ಕೆ ಹೆಚ್ಚಳ ಮಾಡುವಂತೆ ಆಗ್ರಹಿಸಿ ನಗರದಲ್ಲಿ ಮಂಗಳವಾರ ದಲಿತ ಸಂಘರ್ಷ ಸಮಿತಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ಜಿಲ್ಲಾಡಳಿತ ಭವನ ಆವರಣದಲ್ಲಿ ಸಮಾವೇಶಗೊಂಡ ದಸಂಸ ಜಿಲ್ಲಾ ಪದಾಧಿಕಾರಿಗಳು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ನಂತರ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ ಅವರಿಗೆ ಮನವಿ ಸಲ್ಲಿಸಿದರು.

ರಾಜ್ಯ ಸರ್ಕಾರ ಜಾತಿ ಗಣತಿ ವರದಿಯನ್ನು ಸ್ವೀಕರಿಸಿರುವುದು ಪ್ರಶಂಸನೀಯ, ಇದನ್ನು ಸ್ವೀಕರಿಸಿದ ಕೂಡಲೇ ಕೆಲ ಪಟ್ಟಭದ್ರ ರಾಜಕೀಯಪಕ್ಷಗಳು ಹಾಗೂ ಸಂಘ-ಸಂಸ್ಥೆಗಳು ಅಸಮಾಧಾನ ಹೊರಹಾಕುವ ಮೂಲಕ ಜಾತಿ ಗಣತಿ ವರದಿ ತಿರಸ್ಕರಿಸುವಂತೆ ಸರ್ಕಾರದ ಮೇಲೆ ಒತ್ತಡ ಹಾಕಲು ಮುಂದಾಗಿವೆ. ಸರ್ಕಾರ ಯಾರ ಒತ್ತಾಯಕ್ಕೂ ಮಣಿಯದೆ ಜಾತಿ ಗಣತಿ ವರದಿಯನ್ನು ಶೀಘ್ರ ಅನುಷ್ಠಾನಗೊಳಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ದಸಂಸ ಜಿಲ್ಲಾ ಸಂಯೋಜಕ ಸಿ.ರಾಜಣ್ಣ ಯರಿಯೂರು, ಸಂಘಟನಾ ಸಂಚಾಲಕರಾದ ಎಂ.ದೊರೆಸ್ವಾಮಿ, ಶಿವಕುಮಾರ್, ನಂಜುಂಡಸ್ವಾಮಿ, ಚಾಮರಾಜನಗರ ತಾಲೂಕು ಸಂಚಾಲಕ ಅನಿಲ್ ಕುಮಾರ್, ಗುಂಡ್ಲುಪೇಟೆ ತಾಲೂಕು ಸಂಚಾಲಕ ಮಾಡ್ರಳ್ಳಿ ರಂಗಸ್ವಾಮಿ, ಕೊಳ್ಳೇಗಾಲ ತಾಲೂಕು ಸಂಚಾಲಕ ದಾಸನಪುರ ಶಾಂತರಾಜು, ಯಳಂದೂರು ತಾಲೂಕು ಸಂಚಾಲಕ ಗಣಿಗನೂರು ಚಂದ್ರಶೇಖರ್, ರಾಮಸಮುದ್ರ ಸುರೇಶ್, ಅಣಗಳ್ಳಿ ಬಸವರಾಜು, ಸಿ.ಎಂ.ಕೃಷ್ಣಮೂರ್ತಿ, ಬಂಗಾರಸ್ವಾಮಿ, ಕಂದಹಳ್ಳಿ ನಾರಾಯಣ, ಕಾಡಳ್ಳಿ ನಾಗರಾಜು, ಮರಿಯಾಲದಹುಂಡಿ ಕುಮಾರ್, ರವಿಚಂದ್ರ ಪ್ರಸಾದ್, ಷರೀಫ್, ಲೋಕೇಶ್ ಇತರರು ಭಾಗವಹಿಸಿದ್ದರು.

ಪಪಂ, ಗ್ರಾಪಂ ಉಪ ಚುನಾವಣೆ ವೇಳಾಪಟ್ಟಿ ಪ್ರಕಟ

ಚಾಮರಾಜನಗರ, ಅ.22-ವಿವಿಧ ಕಾರಣಗಳಿಂದ ತೆರವಾಗಿರುವ ಜಿಲ್ಲೆಯ ಗ್ರಾಮ ಪಂಚಾಯಿತಿ, ಯಳಂದೂರು ಹಾಗೂ ಹನೂರು ಪಟ್ಟಣ ಪಂಚಾಯಿತಿ ಉಪಚುನಾವಣೆ ವೇಳಾಪಟ್ಟಿ ಪ್ರಕಟಿಸಲಾಗಿದೆ.

ಯಳಂದೂರು ಪಟ್ಟಣ ಪಂಚಾಯಿತಿ 5ನೇ ವಾರ್ಡ್ ಹಾಗೂ ಹನೂರು ಪಟ್ಟಣ ಪಂಚಾಯಿತಿ 12ನೇ ವಾರ್ಡ್ ಉಪಚುನಾವಣೆ ವೇಳಾಪಟ್ಟಿ ಪ್ರಕಟಿಸಿದ್ದು, ನಾಮಪತ್ರ ಸಲ್ಲಿಸಲು ನ.11 ಕೊನೆ ದಿನವಾಗಿದೆ. 12ರಂದು ನಾಮಪತ್ರ ಪರಿಶೀಲನೆ. ಉಮೇದುವಾರಿಕೆ ಹಿಂತೆಗೆದುಕೊಳ್ಳಲು ನ.14 ಕಡೆ ದಿನವಾಗಿದೆ. ನ.23ರಂದು ಮತದಾನ ನಡೆಯಲಿದ್ದು, ನ.26ರಂದು ತಾಲೂಕು ಕೇಂದ್ರಗಳಲ್ಲಿ ಮತ ಎಣಿಕೆ ನಡೆಯಲಿದೆ.

ಗ್ರಾಪಂ ಉಪಚುನಾವಣೆ: ಚಾಮರಾಜನಗರ ತಾಲೂಕಿನ ಸಾಗಡೆ, ಮಂಗಲ ಗ್ರಾಪಂನ ತಲಾ ಒಂದು ಸ್ಥಾನ, ಗುಂಡ್ಲುಪೇಟೆ ತಾಲೂಕಿನ ಕೋಟೆಕೆರೆ ಗ್ರಾಪಂನ 2 ಹಾಗೂ ಅಣ್ಣೂರು, ಹೊರೆಯಾಲ, ಕೂತನೂರು ಗ್ರಾಪಂನ ತಲಾ ಒಂದು ಹಾಗೂ ಹನೂರು ತಾಲೂಕಿನ ರಾಮಾಪುರ, ಶೆಟ್ಟಿಹಳ್ಳಿ, ಪಿ.ಜಿ.ಪಾಳ್ಯ, ಬಂಡಳ್ಳಿ ಗ್ರಾಪಂ ತಲಾ ಒಂದು ಸದಸ್ಯ ಸ್ಥಾನ ಸೇರಿದಂತೆ ಒಟ್ಟು 11 ಸ್ಥಾನಗಳಿಗೆ ಉಪಚುನಾವಣೆ ನಡೆಯಲಿದೆ. ನ.12 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದ್ದು, 13ರಂದು ನಾಮಪತ್ರ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆ ಹಿಂತೆಗೆದುಕೊಳ್ಳಲು ನ.15 ಕಡೆಯ ದಿನವಾಗಿದೆ. ನ.23ರಂದು ಮತದಾನ ನಡೆಯಲಿದ್ದು, ನ.26ರಂದು ಆಯಾ ತಾಲೂಕು ಕೇಂದ್ರಗಳಲ್ಲಿ ಮತ ಎಣಿಕೆ ನಡೆಯಲಿದೆ.

ಸರ್ವರ್ ಸಮಸ್ಯೆ ನಿವಾರಿಸುವಂತೆ ಡಿಸಿಗೆ ಮನವಿ



ಪಡಿತರ ವಿತರಣೆ ಸರ್ವರ್ ಸಮಸ್ಯೆ ನಿವಾರಿಸುವಂತೆ ಆಗ್ರಹಿಸಿ ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪನಾಗ್ ಅವರಿಗೆ ಜಿಲ್ಲಾ ಪಡಿತರ ವಿತರಕರ ಸಂಘದ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

ಚಾಮರಾಜನಗರ. ಅ.22-ಪಡಿತರ ವಿತರಣೆಗೆ ಸರ್ವರ್ ಸಮಸ್ಯೆ ಎದುರಾಗಿದ್ದು, ಕೂಡಲೇ ನಿವಾರಿಸುವಂತೆ ಆಗ್ರಹಿಸಿ ರಾಜ್ಯ ಪಡಿತರ ವಿತರಕರ ಜಿಲ್ಲಾ ಸಮಿತಿ ಪದಾಧಿಕಾರಿಗಳು ಜಿಲ್ಲಾಧಿಕಾರಿ ಸಿ.ಟಿ. ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಿದರು.

ಪಡಿತರ ವಿತರಣೆಗೆ ಆಹಾರ ಇಲಾಖೆ ಅ.17 ರಿಂದ 9 ದಿನ ಗಡುವು ನೀಡಿದೆ. ಸರ್ಕಾರ ಪಡಿತರ ವಿತರಣೆಗೆ ಹೊಸ ಸರ್ವರ್ ನೀಡಿದೆ. ಆದರೆ, ಅದು ಸಮರ್ಪಕವಾಗಿ ಸಿಗುತ್ತಿಲ್ಲ. 4 ದಿನಗಳಿಂದ ಪಡಿತರದಾರರಿಗೆ ಶೇ.10ರಷ್ಟು ಆಹಾರ ಧಾನ್ಯ ವಿತರಿಸಲು ಸಾಧ್ಯವಾಗಿಲ್ಲ. ಜನರು ನ್ಯಾಯಬೆಲೆ ಅಂಗಡಿಗಳ ಮುಂದೆ ಬೆಳಗ್ಗೆಯಿಂದ ಸಂಜೆವರೆಗೂ ಕಾಯುತ್ತಿದ್ದಾರೆ. ಆದ್ದರಿಂದ ಕೂಡಲೇ ಸರ್ವರ್ ವ್ಯವಸ್ಥೆ ಮಾಡಿ, ಸಮರ್ಪಕ ಪಡಿತರ ವಿತರಣೆಗೆ ಕ್ರಮವಹಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಸಮಿತಿಯ ರಾಜ್ಯ ಉಪಾಧ್ಯಕ್ಷ ದುಂಡಯ್ಯ, ಜಿಲ್ಲಾಧ್ಯಕ್ಷ ಗಿರೀಶ್, ಖಜಾಂಚಿ ಚಂಗುಮಣಿ, ಚಾಮರಾಜನಗರ ತಾಲೂಕು ಅಧ್ಯಕ್ಷ ದೊರೆಸ್ವಾಮಿ, ಕಾರ್ಯದರ್ಶಿ ಬಂಕಯ್ಯ, ಶಿವಕುಮಾರ್, ಸಿದ್ದರಾಜು, ಮಹದೇವಯ್ಯ, ಕುಮಾರನಾಯಕ್, ಕೋಟಂಬಳ್ಳಿ ವೀರಭದ್ರಸ್ವಾಮಿ, ಮಲ್ಲೇದೇವರು, ಪ್ರಕಾಶ್, ರಾಜಶೇಖರ, ಎಚ್.ಎಂ. ಕುಮಾರ ಸ್ವಾಮಿ, ಮೂಡ್ಲು ಪುರ ನಿಂಗರಾಜು, ನಹೀಂ, ಫುರ್ಖಾನ್, ಇತರರು ಹಾಜರಿದ್ದರು.

ಕೊಳ್ಳೇಗಾಲ: ತಿಮಿಂಗಿಲ ವಾಂತಿ ಸಾಗಿಸುತ್ತಿದ್ದ ಇಬ್ಬರ ಬಂಧನ

ಕೊಳ್ಳೇಗಾಲ, ಅ.22-ಅಕ್ರಮವಾಗಿ ತಿಮಿಂಗಿಲ ವಾಂತಿ (ಅಂಬರ್ಗ್ರೀಸ್) ಸಾಗಿಸುತ್ತಿದ್ದ ಇಬ್ಬರನ್ನು ಬಂಧಿಸಿರುವ ಕೊಳ್ಳೇಗಾಲ ಉಪವಿಭಾಗ ಪೊಲೀಸರು, 4 ಕೆಜಿ ಅಂಬರ್ಗ್ರೀಸ್ ಅನ್ನು ವಶಪಡಿಸಿಕೊಂಡಿದ್ದಾರೆ.



ಕೊಳ್ಳೇಗಾಲ ಪೊಲೀಸರು ವಶಪಡಿಸಿಕೊಂಡ ತಿಮಿಂಗಿಲ ವಾಂತಿ.

ಮೈಸೂರಿನ ಅಶೋಕಪುರಂನ ವಸಂತಕುಮಾರ್ ಹಾಗೂ ರಾಮನಗರ ಜಿಲ್ಲೆಯ ಚನ್ನಪಟ್ಟಣ ತಾಲೂಕಿನ ಆರೂರು ಗ್ರಾಮದ ವೈರಮುಡಿ ಬಂಧಿತರು. ಈ ಇಬ್ಬರು ಸೋಮವಾರ ತಡರಾತ್ರಿ ಕಾರಿನಲ್ಲಿ ತಾಲೂಕಿನ ಸತ್ತೇಗಾಲ ಮಾರ್ಗವಾಗಿ ತಮಿಳು ನಾಡಿಗೆ ಅಕ್ರಮವಾಗಿ ತಿಮಿಂಗಿಲ ವಾಂತಿ ಸಾಗಿಸುತ್ತಿದ್ದರು. ಈ ವೇಳೆ ಕೊಳ್ಳೇಗಾಲ ಬಳಿ ತಪಾಸಣೆ ನಡೆಸಿದ ಪೊಲೀಸರು ಆರೋಪಿಗಳನ್ನು ಮಾಲುಸಹಿತ ಬಂಧಿಸಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕವಿತಾ, ಡಿವೈಎಸ್ಪಿ ಧರ್ಮೇಂದ್ರ, ವೃತ್ತ ನಿರೀಕ್ಷಕ ಶಿವಮಾದಯ್ಯ ಮಾರ್ಗದರ್ಶನದಲ್ಲಿ ಎಸ್‌ಐ ವರ್ಷಾ, ಎಎಸ್‌ಐ ತಖೀವುಲ್ಲಾ, ಮುಖ್ಯಪೇದೆ ಸೂರ್ಯಪ್ರಕಾಶ್, ಸಿಬ್ಬಂದಿ ಶಿವಮಂಜು, ರವಿ, ವೆಂಕಟೇಶ್, ಬಿಳಿಗೌಡ, ಶಿವಕುಮಾರ್, ಲಿಯಾಖತ್ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು.

ಹೆಣ್ಣು ಮಕ್ಕಳ ಹಕ್ಕು, ಸುರಕ್ಷತೆಗೆ ಆಪ್ತಗೆಳತಿ ಪೂರಕ

• ಶಾಸಕ ಎ.ಆರ್.ಕೃಷ್ಣಮೂರ್ತಿ ಅಭಿಮತ • ಜಿಲ್ಲಾ ಪೊಲೀಸ್ ಇಲಾಖೆಯಿಂದ ವಿನೂತನ ಕಾರ್ಯಕ್ರಮ



ಚಾಮರಾಜನಗರ ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಿಕ್ಷಕರಿಗೆ ಆಪ್ತಗೆಳತಿ ಕಿರು ದೂರು ಪೆಟ್ಟಿಗೆಯನ್ನು ಶಾಸಕ ಎ.ಆರ್.ಕೃಷ್ಣಮೂರ್ತಿ ವಿತರಿಸಿದರು.

ಚಾಮರಾಜನಗರ, ಅ.22-ಪೊಲೀಸ್ ಇಲಾಖೆ ರೂಪಿಸಿರುವ ಆಪ್ತ ಗೆಳತಿ ಕಾರ್ಯಕ್ರಮ ಹೆಣ್ಣು ಮಕ್ಕಳು ಹಾಗೂ ಮಹಿಳೆಯರ ಸುರಕ್ಷತೆ, ಹಕ್ಕು, ಆಶಯಗಳಿಗೆ ಪೂರಕವಾಗಿದೆ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು.

ನಗರದ ಡಾ.ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಿದ್ದ ವಿನೂತನ 'ಆಪ್ತಗೆಳತಿ-ನಿಮ್ಮ ಬಳಿಗೆ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆಪ್ತ ಗೆಳತಿ ಪ್ರತಿಯೊಬ್ಬರ ಕಣ್ಣು ತೆರೆಸುವ ಕಾರ್ಯಕ್ರಮವಾಗಿದೆ. ಶತಶತಮಾನಗಳಿಂದಲೂ ಮಹಿಳೆಯರ ಮೇಲೆ ದೌರ್ಜನ್ಯಗಳು ನಡೆಯುತ್ತಿವೆ. ಸಂವಿಧಾನ ಜಾರಿ ಬಳಿಕ ದೌರ್ಜನ್ಯ ಪ್ರಕರಣಗಳು ಕಡಿಮೆಯಾಗಿದ್ದು, ಹೆಣ್ಣು ಮಕ್ಕಳು ಶೈಕ್ಷಣಿಕ, ಆರ್ಥಿಕವಾಗಿ ಮುನ್ನಡೆದು ಸಬಲರಾಗುತ್ತಿದ್ದಾರೆ. ಇದಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಮಹಿಳೆಯರು, ಮಕ್ಕಳಿಗೆ ನೀಡಿರುವ ಹಕ್ಕುಗಳೇ ಕಾರಣವಾಗಿವೆ ಎಂದರು.

ಇತ್ತೀಚೆಗೆ ಮಹಿಳೆ, ಪುರುಷರೆನ್ನದೇ ದೌರ್ಜನ್ಯ ಪ್ರಕರಣಗಳು ಹೆಚ್ಚಾಗಿ ದಾಖಲಾಗುತ್ತಿವೆ. ದೌರ್ಜನ್ಯ ನಡೆದಾಗ ಮುಗ್ಧ ಹೆಣ್ಣು ಮಕ್ಕಳು ಹೇಳಿಕೊಳ್ಳಲು ಸಾಕಷ್ಟು ಮುಜುಗರ, ಯಾತನೆ ಅನುಭವಿಸುತ್ತಾರೆ. ಹೆಣ್ಣು ತಾಯಿಯಾಗಿ, ಹೆಂಡತಿ, ಮಗಳು, ಅಕ್ಕ, ತಂಗಿಯಾಗಿ ನಮ್ಮನ್ನು ಆವರಿಸಿದ್ದಾರೆ. ದೌರ್ಜನ್ಯಕ್ಕೊಳಗಾದವರಿಗೆ ಮಾನಸಿಕ ಆತ್ಮ ಸ್ಥೈರ್ಯ ತುಂಬುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಆಪ್ತ ಗೆಳತಿ ಕಾರ್ಯಕ್ರಮ ಸಂವಿಧಾನದ ಆಶಯಗಳಿಗೆ ಪೂರಕವಾಗಿದೆ ಎಂದು ತಿಳಿಸಿದರು.

ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್ ಮಾತನಾಡಿ, ಆಪ್ತಗೆಳತಿ ಮಹಿಳೆಯರ ರಕ್ಷಣೆಗಾಗಿ ಕಲ್ಪಿಸಿರುವ ಉತ್ತಮ ಕಾರ್ಯಕ್ರಮ. ಈ ಕಾರ್ಯಕ್ರಮವನ್ನು ಸಮರ್ಪಕವಾಗಿ ಜಾರಿಗೊಳಿಸುವುದರಿಂದ ಶಾಲಾ-ಕಾಲೇಜುಗಳಲ್ಲಿ ಹೆಣ್ಣು ಮಕ್ಕಳು ಕಲಿಯಲು ಒಳ್ಳೆಯ ಪರಿಸರ ನಿರ್ಮಾಣವಾಗಲಿದೆ. ಜೊತೆಗೆ ಕಲಿಕಾ ಪ್ರಕ್ರಿಯೆ ವೃದ್ಧಿಸಲಿದೆ. ದೌರ್ಜನ್ಯ ನಡೆದಾಗ ಹೆಣ್ಣು ಮಕ್ಕಳು ಧೈರ್ಯವಾಗಿ ದೂರು ನೀಡುವ ವಾತಾವರಣ ನಿರ್ಮಾಣವಾಗಬೇಕು ಎಂದರು.

ಜಿಲ್ಲಾಧಿಕಾರಿ ಶಿಲ್ಪನಾಗ್ ಮಾತನಾಡಿ, ಇದೊಂದು ಅರ್ಥಪೂರ್ಣ ಹಾಗೂ ಅತ್ಯದ್ಭುತ ಕಾರ್ಯಕ್ರಮವಾಗಿದೆ. ಮಹಿಳೆಯರು ಅದರಲ್ಲೂ ಚಿಕ್ಕ ಮಕ್ಕಳ ಮೇಲೂ ದೌರ್ಜನ್ಯ ಪ್ರಕರಣಗಳು ದಾಖಲಾಗುತ್ತಿವೆ. ದೌರ್ಜನ್ಯ ಶಾಲೆ, ಮನೆ ಹಾಗೂ ಸಾರ್ವಜನಿಕವಾಗಿ ಎಲ್ಲಿಯಾದರೂ ನಡೆಯಬಹುದು. ಆದರೆ, ಪೊಲೀಸ್ ಠಾಣೆಗೆ ದೂರು ನೀಡಲು ಕೆಲವರು ಮುಂದೆ ಬರುವುದಿಲ್ಲ. ಇದನ್ನು ಮನಗಂಡು ಆಪ್ತ ಗೆಳತಿ ರೂಪಿತವಾಗಿದ್ದು, ಮಹಿಳಾ ಸುರಕ್ಷತೆಗೆ ಲ್ಯಾಂಡ್‌ಮಾರ್ಕ್ ದೊರೆತಿದೆ. ನೊಂದವರಿಗೆ ಪರಿಣಾಮಕಾರಿಯಾಗಿ ನ್ಯಾಯ ದೊರಕಿಸಲು ಪೊಲೀಸ್ ಇಲಾಖೆ ಮುಂದಾಗಬೇಕು ಎಂದು ಹೇಳಿದರು.

ಇದೇ ವೇಳೆ ಜಿಲ್ಲೆಯ ವಿವಿಧ ಶಾಲೆ ಮುಖ್ಯ ಶಿಕ್ಷಕರು ಹಾಗೂ ಕಾಲೇಜು ಪ್ರಾಂಶುಪಾಲರಿಗೆ ಆಪ್ತಗೆಳತಿ ಕಿರು ದೂರು ಪೆಟ್ಟಿಗೆಯನ್ನು ಸಾಂಕೇತಿಕವಾಗಿ ವಿತರಿಸಲಾಯಿತು. ಜಿಪಂ ಉಪಕಾರ್ಯದರ್ಶಿ ಪಿ.ಲಕ್ಷ್ಮೀ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರರಾಜೇ ಅರಸ್, ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಜಿಲ್ಲಾಧ್ಯಕ್ಷ ಹೆಚ್.ವಿ.ಚಂದ್ರು, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಂಜುನಾಥ ಪ್ರಸನ್ನ, ಡಿವೈಎಸ್‌ಪಿ ಲಕ್ಷ್ಮಯ್ಯ, ಉಪಸ್ಥಿತರಿದ್ದರು.

ಶಾಲಾ-ಕಾಲೇಜುಗಳಲ್ಲಿ ಕಿರು ದೂರು ಪೆಟ್ಟಿಗೆ ಅಳವಡಿಕೆ

ಜೀವ ಜಗತ್ತಿನ ಕೇಂದ್ರ ಬಿಂದುವಾಗಿರುವ ಹೆಣ್ಣು ಮಕ್ಕಳು ಹಲವು ಸಂಕೋಲೆ, ಸಂಕಷ್ಟಗಳಿಂದ ಹೊರಬರಲೂ ಇನ್ನೂ ಸಾಧ್ಯವಾಗಿಲ್ಲ. ಹುಟ್ಟಿದ ಮಗುವಿನಿಂದ ಹಿಡಿದು ವೃದ್ಧರಾದಿಯಾಗಿ ಮಹಿಳೆಯರು ದೌರ್ಜನ್ಯಕ್ಕಿಡಾಗುತ್ತಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ತಿಳಿಸಿದರು.

ಶೇ.90ರಷ್ಟು ದೌರ್ಜನ್ಯಗಳು ಪರಿಚಿತರಿಂದಲೇ ನಡೆಯುತ್ತಿವೆ. ಇದು ಕಳವಳಕಾರಿ ಸಂಗತಿಯಾಗಿದೆ. ಈ ದಿಸೆಯಲ್ಲಿ ಹೆಣ್ಣು ಮಕ್ಕಳ ಸುರಕ್ಷತೆಗಾಗಿ ಕಿರು ದೂರು ಪೆಟ್ಟಿಗೆಯನ್ನು ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜುಗಳಲ್ಲೂ ಅಳವಡಿಸಲಾಗುತ್ತಿದೆ. ಯಾವುದೇ ದೌರ್ಜನ್ಯ ನಡೆದರೂ ಹೆಣ್ಣು ಹಾಗೂ ಗಂಡು ಮಕ್ಕಳು ಕಿರುಪೆಟ್ಟಿಗೆ ಮೂಲಕ ಮಾಹಿತಿ, ದೂರು ದಾಖಲಿಸಬಹುದು ಎಂದರು. ಕಿರುಪೆಟ್ಟಿಗೆ ಮೂಲಕ ದೂರು ನೀಡುವ ಮಕ್ಕಳ ಹೆಸರನ್ನು ಗೌಪ್ಯವಾಗಿಡಲಾಗುವುದು. ಆಯಾ ಭಾಗದ ಬೀಟ್ ಕಾನ್ಸ್‌ಟೇಬಲ್‌ಗಳು ಪ್ರತಿ ಶನಿವಾರ ಕಿರುಪೆಟ್ಟಿಗೆ ತೆರೆದು ದೂರುಗಳನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗೆ ಸಲ್ಲಿಸಲಿದ್ದಾರೆ. ಆ ಮೂಲಕ ಮಕ್ಕಳ ರಕ್ಷಣೆಗೆ ಕ್ರಮ ವಹಿಸಲಾಗುವುದು. ಕಾರ್ಯಕ್ರಮದ ಮೊದಲ ಭಾಗವಾಗಿ ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಕಿರುಪೆಟ್ಟಿಗೆ ಅಳವಡಿಸಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಎಲ್ಲಾ ವಿದ್ಯಾರ್ಥಿನಿಲಯ, ರೈಲ್ವೆ ಹಾಗೂ ಬಸ್ ನಿಲ್ದಾಣ ಸೇರಿದಂತೆ ಜನಸಂದಣಿ ಪ್ರದೇಶಗಳಲ್ಲಿ ಅಳವಡಿಸಲು ಇಲಾಖೆ ಮುಂದಾಗಿದೆ. ಕಾರ್ಯಕ್ರಮ ಯಶಸ್ವಿಗೆ ಎಲ್ಲರ ಸಹಕಾರ ಅಗತ್ಯ ಎಂದು ಹೇಳಿದರು.

ಮದ್ದೂರು ಬಳಿ ಬೋನಿಗೆ ಬಿದ್ದ ಚಿರತೆ



ಯಳಂದೂರು, ಅ.22-ತಾಲೂಕಿನ ಮದ್ದೂರು ಗ್ರಾಮದ ಬಳಿ ಅರಣ್ಯ ಇಲಾಖೆ ಇಟ್ಟಿದ್ದ ಬೋನಿಗೆ ಗಂಡು ಚಿರತೆ ಸೋಮವಾರ ರಾತ್ರಿ ಸೆರೆ ಸಿಕ್ಕಿದೆ.

ಕಳೆದ ಕೆಲ ತಿಂಗಳಿಂದಲೂ ತಾಲೂಕಿನ ಯರಿಯೂರು, ಮದ್ದೂರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಚಿರತೆ ಕಾಟ ಹೆಚ್ಚಾಗಿತ್ತು. ಅಲ್ಲದೆ, ನಾಯಿಗಳನ್ನು ತಿಂದು ಜನರಲ್ಲಿ ಆತಂಕ ಮೂಡಿಸಿತ್ತು.

ಇದರಿಂದ ಸಾರ್ವಜನಿಕರು, ರೈತರು ಜಮೀನುಗಳಿಗೆ ತೆರಳಲು ಭಯ ಪಡುವಂತಹ ಸ್ಥಿತಿ ನಿರ್ಮಾಣವಾಗಿತ್ತು. ಸಾರ್ವಜನಿಕರ ಒತ್ತಾಯದ ಮೇರೆಗೆ ಮದ್ದೂರು ಬಳಿ ಅರಣ್ಯ ಇಲಾಖೆ ಬೋನು ಇರಿಸಿತ್ತು. ಸೋಮವಾರ ರಾತ್ರಿ 2-3 ವಯಸ್ಸಿನ ಚಿರತೆ ಬೋನಿಗೆ ಸೆರೆ ಸಿಕ್ಕಿದೆ. ನಂತರ ಅರಣ್ಯ ಸಿಬ್ಬಂದಿ ಚಿರತೆಯನ್ನು ಸುರಕ್ಷಿತವಾಗಿ ಕಾಡಿಗೆ ಬಿಟ್ಟಿದ್ದಾರೆ.

ರಾಜ್ಯೋತ್ಸವ ಜಿಲ್ಲಾ ಪ್ರಶಸ್ತಿಗೆ ಅರ್ಜಿ ಆಹ್ವಾನ

ಚಾಮರಾಜನಗರ, ಅ.22-ಕನ್ನಡ ರಾಜ್ಯೋತ್ಸವ ಜಿಲ್ಲಾ ಪ್ರಶಸ್ತಿಗೆ ಜಿಲ್ಲಾಡಳಿತ ಅರ್ಜಿ ಆಹ್ವಾನಿಸಿದೆ. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಜಿಲ್ಲೆಯ ಸಾಧಕರನ್ನು ಗುರುತಿಸಿ ನ.1ರಂದು ನಡೆಯುವ ರಾಜ್ಯೋತ್ಸವ ಆಚರಣೆ ಕಾರ್ಯಕ್ರಮದಲ್ಲಿ ಗೌರವಿಸಲಾಗುವುದು. ಜಾನಪದ ಕಲೆ, ಸಾಹಿತ್ಯ, ಕನ್ನಡ ಸಾಹಿತ್ಯ ಸೇವೆ, ಕನ್ನಡಪರ ಹೋರಾಟ, ವೈದ್ಯಕೀಯ ಸೇವೆ, ಸೈನಿಕ ಸೇವೆ, ಸಿನಿಮಾ, ಸಂಗೀತ, ನಾಟಕ, ಗಾಯನ, ಗಮಕ, ಕನ್ನಡ ಭಾಷೆ ಮತ್ತು ಲಿಪಿ ಬಳಕೆ, ಗಡಿನಾಡು ಸೇವೆ, ಮಕ್ಕಳ ಸಾಹಸ ಮತ್ತು ರಕ್ಷಣೆ, ಸಮಾಜ ಸೇವೆ, ಪತ್ರಿಕೋದ್ಯಮ, ಮಹಿಳಾ ಸಬಲೀಕರಣ ಸೇರಿದಂತೆ ಇತರ ಅರ್ಹ ಸೇವೆ ಸಲ್ಲಿಸಿರುವ ಸಾಧಕರಿಗೆ ಜಿಲ್ಲಾ ಮಟ್ಟದ ರಾಜ್ಯೋತ್ಸವ ಪ್ರಶಸ್ತಿ ನೀಡಲಾಗುವುದು.

ಆಸಕ್ತರು ಹೆಸರು, ವಿಳಾಸ (ಆಧಾರ್ ಕಾರ್ಡ್ ಲಗತ್ತಿಸಬೇಕು), ಮೊಬೈಲ್ ಸಂಖ್ಯೆ, ಜನ್ಮ ದಿನಾಂಕ, ಪಡೆದಿರುವ ಪ್ರಶಸ್ತಿಗಳ ವಿವರ, ತೊಡಗಿಸಿಕೊಂಡಿರುವ ಸೇವಾ ವಿವರಗಳನ್ನೊಳಗೊಂಡ ಅರ್ಜಿಯನ್ನು, ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಕೊಠಡಿ ಸಂಖ್ಯೆ: 218, ಎರಡನೇ ಮಹಡಿ, ಜಿಲ್ಲಾಡಳಿತ ಭವನ, ಚಾಮರಾಜನಗರ ಅಥವಾ ಇ-ಮೇಲ್ ವಿಳಾಸ ddnc.pue@gmail.com ನಲ್ಲಿ ಅ.27ರೊಳಗೆ ಸಲ್ಲಿಸುವಂತೆ ಜಿಲ್ಲಾಧಿಕಾರಿ ಶಿಲ್ಪನಾಗ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಮಿತ್ರ

ಮೀನುಗಾರರು ಸರ್ಕಾರದ ಸೌಲಭ್ಯ ಸದುಪಯೋಗಪಡಿಸಿಕೊಳ್ಳಿ

ಕೇಂದ್ರೀಯ ಒಳನಾಡು ಮೀನುಗಾರಿಕಾ ಸಂಶೋಧನಾ ಸಂಸ್ಥೆ ಪ್ರಾದೇಶಿಕ ಕೇಂದ್ರದ ಹಿರಿಯ ವಿಜ್ಞಾನಿ ಡಾ.ಪ್ರಿತಾ ಪಣಿಕ್ಕರ



ಗಿರಿಜನ ಮೀನುಗಾರರ ಸಹಕಾರ ಸಂಘಕ್ಕೆ 3 ಲಕ್ಷ ರೂ. ವೆಚ್ಚದ ಫೈಬರ್ ದೋಣಿ ಹಾಗೂ ಔಟ್‌ಬೋರ್ಡ್ ಎಂಜಿನ್ ಹಸ್ತಾಂತರಿಸಲಾಯಿತು.

ಹೆಚ್.ಡಿ.ಕೋಟೆ, ಅ.22– ಕಬಿನಿ ಜಲಾಶಯದಲ್ಲಿ ಫೈಬರ್ ದೋಣಿ ಮೂಲಕ ಮೀನು ಹಿಡಿಯುವುದರಿಂದ ಹಿಂದಿಗಿಂತ ಹೆಚ್ಚಿನ ಲಾಭ ಪಡೆಯಬಹುದು ಎಂದು ಬೆಂಗಳೂರಿನ ಕೇಂದ್ರೀಯ ಒಳನಾಡು ಮೀನುಗಾರಿಕಾ ಸಂಶೋಧನಾ ಸಂಸ್ಥೆ ಪ್ರಾದೇಶಿಕ ಕೇಂದ್ರದ ಹಿರಿಯ ವಿಜ್ಞಾನಿ ಡಾ.ಪ್ರಿತಾ ಪಣಿಕ್ಕರ ತಿಳಿಸಿದರು.

ತಾಲೂಕಿನ ಬೀಚನಹಳ್ಳಿ ಗ್ರಾಮದಲ್ಲಿರುವ ಮೀನುಗಾರಿಕೆ ತರಬೇತಿ ಕೇಂದ್ರದಲ್ಲಿ ಬೆಂಗಳೂರಿನ ಕೇಂದ್ರೀಯ ಒಳನಾಡು ಮೀನುಗಾರಿಕಾ ಸಂಶೋಧನಾ ಸಂಸ್ಥೆಯ ಪ್ರಾದೇಶಿಕ ಕೇಂದ್ರದ ವತಿಯಿಂದ ಪರಿಶಿಷ್ಟ ಪಂಗಡದ ಉಪಯೋಜನೆಯಡಿ ಆಯೋಜಿಸಿದ್ದ ಸುಸ್ಥಿರ ಮೀನುಗಾರಿಕೆಯ ಮಹತ್ವದ ಬಗ್ಗೆ ಜನಜಾಗೃತಿ ಮತ್ತು ಫೈಬರ್ ದೋಣಿ ಹಾಗೂ ಔಟ್‌ಬೋರ್ಡ್ ಎಂಜಿನ್ ಹಸ್ತಾಂತರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಮೀನು ಉತ್ಪಾದನೆ ಮಾಡಲು ಮತ್ತು ಹಿಡಿಯಲು ಸರ್ಕಾರದಿಂದ ಹಲವು ಸೌಲಭ್ಯಗಳು ದೊರೆಯುತ್ತಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಗಿರಿಜನ ಮೀನುಗಾರರ ಸಹಕಾರ ಸಂಘದ ಅಧ್ಯಕ್ಷ ಬಿ.ಕಾವೇರಾ ಮಾತನಾಡಿ, ಮೀನುಗಾರಿಕೆ ಇಲಾಖೆಯಲ್ಲಿ ಹಲವು ಯೋಜನೆಗಳಿದ್ದು, ಅದರ ಸದುಪಯೋಗವನ್ನು ಇದೇ ಮೊದಲ ಬಾರಿಗೆ ಪಡೆದುಕೊಳ್ಳುತ್ತಿದ್ದೇವೆ. ಮುಂದಿನ ದಿನಗಳಲ್ಲೂ ಇಲಾಖೆ ವತಿಯಿಂದ ದೊರೆಯುವ ಸೌಲಭ್ಯ ಪಡೆದುಕೊಳ್ಳಬೇಕು. ಇಲಾಖೆ ವತಿಯಿಂದ ಮುಂದಿನ ದಿನಗಳಲ್ಲಿ ಮೀನು ಹಿಡಿಯುವ ತರಬೇತಿ ಉತ್ತಮವಾಗಿ ನೀಡಬೇಕು ಎಂದರು.

ತಾಂತ್ರಿಕ ಅಧಿಕಾರಿ ಎಂ.ಇ.ವಿಜಯ ಕುಮಾರ್ ಮಾತನಾಡಿ, ಒಬ್ಬ ಮನುಷ್ಯ ಆರೋಗ್ಯವಂತನಾಗಿರಲು ಮೀನು ಸೇವಿಸಬೇಕು. ಆದರೆ ಆ ಪ್ರಮಾಣದಲ್ಲಿ ಮೀನು ಉತ್ಪತ್ತಿಯಾಗುತ್ತಿಲ್ಲ. ಮೀನುಗಳ ಉತ್ಪತ್ತಿ ಪ್ರಮಾಣವನ್ನು ಹೆಚ್ಚಿಸಲು ನಮ್ಮ ಸಂಸ್ಥೆ ಹಲವು ಯೋಜನೆಗಳನ್ನು ರೂಪಿಸಿದ್ದು, ಈ ಯೋಜನೆಗಳ ಸದುಪಯೋಗವನ್ನು ಮೀನುಗಾರರು ಪಡೆದುಕೊಳ್ಳಬೇಕು ಎಂದರು. ಭಾರತದಲ್ಲಿ 3400ಕ್ಕೂ ಹೆಚ್ಚು ಮೀನಿನ ಜಾತಿಗಳಿವೆ. ಹಿಂದೆ ಕಬಿನಿ ಜಲಾಶಯದಲ್ಲಿ 80ಕ್ಕೂ ಹೆಚ್ಚಿನ ಜಾತಿಯ ಮೀನುಗಳು ದೊರೆಯುತ್ತಿದ್ದವು. ಆ ಪ್ರಮಾಣ ಇಂದಿನ ದಿನಗಳಲ್ಲಿ 40ಕ್ಕೆ ಕುಸಿದಿದ್ದು, 40 ರೀತಿಯ ತಳಿಗಳು ಅವಸಾನಗೊಂಡಿವೆ ಎಂದು ಬೇಸರ ವ್ಯಕ್ತಪಡಿಸಿದರು.

ಇದೇ ವೇಳೆ ಬೆಂಗಳೂರಿನ ಕೇಂದ್ರೀಯ ಒಳನಾಡು ಮೀನುಗಾರಿಕಾ ಸಂಶೋಧನಾ ಸಂಸ್ಥೆ ಪ್ರಾದೇಶಿಕ ಕೇಂದ್ರದಿಂದ ಪರಿಶಿಷ್ಟ ಪಂಗಡದ ಉಪಯೋಜನೆಯಡಿ ಗಿರಿಜನ ಮೀನುಗಾರರ ಸಹಕಾರ ಸಂಘಕ್ಕೆ 3 ಲಕ್ಷ ವೆಚ್ಚದ ಫೈಬರ್ ದೋಣಿ ಹಾಗೂ ಔಟ್‌ಬೋರ್ಡ್ ಎಂಜಿನ್ ಹಸ್ತಾಂತರಿಸಲಾಯಿತು.

ಕಾರ್ಯಕ್ರಮದಲ್ಲಿ ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕ ಚಂದನ್, ಮಹದೇವು, ಸಹಾಯಕ ನಿರ್ದೇಶಕ ಎಚ್.ಯು.ಶಿವರಜನ್, ವಿಜ್ಞಾನಿಗಳಾದ ಡಾ.ಸಿಬಿನಾ ಮೋಲ್, ಸೋನಾಲಿಕಾ ಸಾಹು, ಕೆ.ಎಂ. ಶ್ರೀನಿವಾಸ್, ಉಮೇಶ್, ಬಾಲಕೃಷ್ಣ, ಇದ್ದರು.

ತಾಯೂರಲ್ಲಿ ನೂತನ ಪಿಎಸಿಎಸ್ ಉದ್ಘಾಟನೆ



ತಾಯೂರಲ್ಲಿ ನೂತನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘವನ್ನು ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದರು.

ತಿ.ನರಸೀಪುರ, ಅ.22– ನಂಜನಗೂಡು ತಾಲೂಕು ಬಿಲಿಗೆರೆ ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದಿಂದ ಪ್ರತ್ಯೇಕಗೊಂಡು ವರುಣ ವಿಧಾನಸಭಾ ಕ್ಷೇತ್ರದ ತಾಯೂರು ಗ್ರಾಮ ವ್ಯಾಪ್ತಿಯಲ್ಲಿ ಸ್ಥಾಪನೆಗೊಂಡಿರುವ ತಾಯೂರು ನೂತನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಹಾಗೂ ಕಚೇರಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಉದ್ಘಾಟಿಸಿದರು.

ಈ ಮೊದಲು ಬಿಲಿಗೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ತಾಯೂರು ಸಹಕಾರ ಸಂಘ ಒಳಗೊಂಡು ಕಾರ್ಯ ನಿರ್ವಹಿಸುತ್ತಿತ್ತು ನಂತರದಲ್ಲಿ ತಾಯೂರು ಗ್ರಾಮದಲ್ಲಿ ಪ್ರತ್ಯೇಕ ಸಂಘ ಅಸ್ತಿತ್ವಕ್ಕೆ ಬಂದು ಹೆಚ್ಚಿನ ಷೇರುದಾರರು ಹಾಗೂ ಸದಸ್ಯನ್ನೊಳಗೊಂಡು ಕರ್ತವ್ಯ ನಿರ್ವಹಿಸಲು ಆರಂಭಿಸಿದ ಹಿನ್ನೆಲೆಯಲ್ಲಿ ನೂತನ ಕಚೇರಿ ತೆರೆಯಲಾಗಿದ್ದು, ಈಗ ಪ್ರತ್ಯೇಕ ಕಚೇರಿ ಹೊಂದಲಾಗಿದೆ.

ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ, ಸಚಿವ ವೆಂಕಟೇಶ್, ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ, ತಾಯೂರು ಗೇಟ್ ಬಳಿ ನೂತನವಾಗಿ ತೆರೆಯಲಾಗಿರುವ ಕಚೇರಿಗೆ ಭೇಟಿ ನೀಡಿ, ಕಾರ್ಯಕಾರಿ ಸಮಿತಿ ಸದಸ್ಯರಿಗೆ ಶುಭ ಕೋರಿದರು.

ಈ ವೇಳೆ ಸಂಘದ ಅಧ್ಯಕ್ಷ ಜ್ಞಾನೇಶ್, ಉಪಾಧ್ಯಕ್ಷ ಶಿವಣ್ಣ, ನಿರ್ದೇಶಕ ಎಂ.ಬಸವರಾಜು, ಮಹದೇವ ಪ್ರಸಾದ್, ಬಿ.ಪಿ.ಮಹೇಶ್, ಬಿ.ಎಂ.ಮಹದೇವಸ್ವಾಮಿ, ಕುಮಾರ, ಟಿ.ಆರ್.ಅಶೋಕ್, ಪುಟ್ಟಸ್ವಾಮಿ, ಮುದ್ದಮಾದೇಗೌಡ, ಸಾಕಮ್ಮ, ಚಾಮಮ್ಮ, ಜಿಲ್ಲಾ ಬ್ಯಾಂಕ್ ಮೇಲ್ವಿಚಾರಕ ಶಿವಲಿಂಗೇಗೌಡ, ಸಂಘದ ಮುಖ್ಯ ಕಾರ್ಯನಿರ್ವಾಹಕ ಪ್ರಮೋದ್ ಕುಮಾರ್, ಹಿರಿಯ ಸಹಾಯಕ ಆರ್.ಕಿಶೋರ್ ಕುಮಾರ್, ಸಹಾಯಕ ಸಿದ್ದರಾಜು ಹಾಜರಿದ್ದರು.

ಪತ್ರಕರ್ತರ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ

ಹುಣಸೂರು, ಅ.22– ಹುಣಸೂರು ತಾಲೂಕು ಪತ್ರಕರ್ತರ ಸಂಘದ 2024–26 ರವರೆಗಿನ ನೂತನ ಪದಾಧಿಕಾರಿ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರ ಆಯ್ಕೆಗೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಹೆಚ್.ಆರ್.ಕೃಷ್ಣಕುಮಾರ್, ಪ್ರಧಾನ ಕಾರ್ಯದರ್ಶಿಯಾಗಿ ನೇರಳಕುಪ್ಪೆ ಮಹದೇವ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಉಪಾಧ್ಯಕ್ಷರಾಗಿ ಚಲುವರಾಜ್, ಸಹ ಕಾರ್ಯದರ್ಶಿಯಾಗಿ ಕಟ್ಟೆಮಳಲವಾಡಿ ಶಂಕರ್, ಖಜಾಂಚಿಯಾಗಿ ಯೋಗೇಶ್, ಕಾರ್ಯಕಾರಿ ಸಮಿತಿ ಸದಸ್ಯರಾಗಿ ಕೆ.ಕೃಷ್ಣ(ಕೆಕೆ), ಹೆಚ್.ಕೆ.ಕೃಷ್ಣ, ಕೆ.ಪ್ರತಾಪ್, ಎ.ಎಸ್.ಪ್ರದೀಪ್, ದಯಾಕರ್, ಎನ್.ಎಸ್.ಪ್ರದೀಪ್, ಅರುಣ್ ಕುಮಾರ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾಣಾಧಿಕಾರಿಗಳಾದ ಕಾಶಿನಾಥ್ ಹಾಗೂ ಬಾಲಕೃಷ್ಣ ಮದ್ದೂರು ತಿಳಿಸಿದ್ದಾರೆ.

ನೂತನ ಆಡಳಿತ ಮಂಡಳಿ ಸದಸ್ಯರನ್ನು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್, ಪ್ರಧಾನ ಕಾರ್ಯದರ್ಶಿ ಧರ್ಮಪುರ ನಾರಾಯಣ್, ಗ್ರಾಮಾಂತರ ಉಪಾಧ್ಯಕ್ಷ ಹೆಚ್.ಎಸ್.ವೆಂಕಟಪ್ಪ, ಗ್ರಾಮಾಂತರ ಕಾರ್ಯದರ್ಶಿ ದಾ.ರಾ.ಮಹೇಶ್, ಕಾರ್ಯಕಾರಿ ಸಮಿತಿ ಸದಸ್ಯರಾದ ಹನಗೋಡು ನಟರಾಜ್ ಸೇರಿದಂತೆ ಇತರರು ಅಭಿನಂದಿಸಿದ್ದಾರೆ.

ಉಚಿತ ಕಾಲುಬಾಯಿ ಲಸಿಕಾ ಅಭಿಯಾನಕ್ಕೆ ಚಾಲನೆ



ಲಸಿಕಾ ಅಭಿಯಾನ ಕಾರ್ಯಕ್ರಮಕ್ಕೆ ನಗರಸಭೆ ಅಧ್ಯಕ್ಷ ಶ್ರೀಕಂಠ ಎನ್.ಸ್ವಾಮಿ ಚಾಲನೆ ನೀಡಿದರು.

ನಂಜನಗೂಡು, ಅ.22– ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಯೋಜನೆ ಅಡಿ ನ.20ರವರೆಗೆ ಪಶು ಇಲಾಖೆ ವತಿಯಿಂದ ಉಚಿತ ಕಾಲುಬಾಯಿ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ರೈತರು ಜಾನುವಾರುಗಳಿಗೆ ತಪ್ಪದೇ ಲಸಿಕೆ ಹಾಕಿಸಿ ಎಂದು ನಗರಸಭೆ ಅಧ್ಯಕ್ಷ ಶ್ರೀಕಂಠ ಎನ್.ಸ್ವಾಮಿ ಮನವಿ ಮಾಡಿದರು.

ನಗರದ ಶಂಕರಪುರ ಬಡಾವಣೆಯಲ್ಲಿ ಲಸಿಕಾ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, 6ನೇ ಸುತ್ತಿನ ಲಸಿಕಾ ಕಾರ್ಯಕ್ರಮ ರಾಷ್ಟ್ರ ಹಾಗೂ ರಾಜ್ಯಾದ್ಯಂತ ನಡೆಯುತ್ತಿದ್ದು, ರೈತರು ಜಾನುವಾರುಗಳ ರಕ್ಷಣೆಗಾಗಿ ತಪ್ಪದೆ ಲಸಿಕೆ ಹಾಕಿಸುವ ಮೂಲಕ ಈ ಯೋಜನೆ ಸದುಪಯೋಗಪಡಿಸಿಕೊಳ್ಳಬೇಕು ಎಂದರು. ಪಶು ವೈದ್ಯಕೀಯ ಪರೀಕ್ಷಕ ಹೆಚ್.ಎಸ್.ಪುಟ್ಟರಾಜು ಮಾತನಾಡಿ, ಪಶು ವೈದ್ಯಕೀಯ ಪರಿವೀಕ್ಷಕರು ನಿಮ್ಮ ಮನೆ ಬಾಗಿಲಿಗೆ ಬಂದು ಲಸಿಕೆ ಹಾಕಲಿದ್ದಾರೆ. ರೈತರು ಭಯ ಬಿಟ್ಟು ನಿಮ್ಮ ದನ, ಕರು, ಎಮ್ಮೆಗಳಿಗೆ ತಪ್ಪದೇ ಲಸಿಕೆ ಹಾಕಿಸುವ ಮೂಲಕ ಕಾಲುಬಾಯಿ ಜ್ವರವನ್ನು ಹೋಗಲಾಡಿಸಲು ಸಹಕರಿಸಿ ಎಂದರು. ಇದೇ ಸಂದರ್ಭದಲ್ಲಿ ರೈತರು ಹಾಜರಿದ್ದರು.

ದೊಡ್ಡಕೊಪ್ಪಲು ಡೈರಿಗೆ 10 ಮಂದಿ ಅವಿರೋಧ ಆಯ್ಕೆ



ನೂತನ ನಿರ್ದೇಶಕರನ್ನು ಮುಖಂಡರು ಸನ್ಮಾನಿಸಿದರು.

ಚುಂಚನಕಟ್ಟೆ, ಅ.22– ಸಾಲಿಗ್ರಾಮ ತಾಲೂಕಿನ ದೊಡ್ಡಕೊಪ್ಪಲು ಹಾಲು ಉತ್ಪಾದಕರ ಸಹಕಾರ ಸಂಘದ ಆಡಳಿತ ಮಂಡಳಿ ನಿರ್ದೇಶಕರ ಸ್ಥಾನದ ಚುನಾವಣೆಯಲ್ಲಿ 10 ಮಂದಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

10 ಸ್ಥಾನಗಳಿಗೆ ಅ.27ರಂದು ಭಾನುವಾರ ನಡೆಯಬೇಕಿದ್ದ ಚುನಾವಣೆಗೆ ಒಟ್ಟು 13 ಮಂದಿ ನಾಮಪತ್ರ ಸಲ್ಲಿಸಿದ್ದರು. ಆದರೆ ನಾಮಪತ್ರ ವಾಪಸ್ ಪಡೆಯಲು ಕೊನೆ ದಿನವಾಗಿದ್ದ ಸೋಮವಾರ ಡಿ.ಹೆಚ್.ರಮೇಶ್ ಮತ್ತು ವಿಮಲ ಸೇರಿದಂತೆ ಮೂವರು ನಾಮಪತ್ರ ವಾಪಸ್ ಪಡೆದ ಹಿನ್ನೆಲೆಯಲ್ಲಿ ಅವಿರೋಧವಾಗಿ ಆಯ್ಕೆಯಾದರು.

ನೂತನ ನಿರ್ದೇಶಕರಾಗಿ ಡಿ.ಆರ್.ನಾಗರಾಜು, ಡಿ.ಬಿ.ಸುಜೇಂದ್ರ, ಡಿ.ಕೆ.ಭರತಕುಮಾರ್, ದೇವರಾಜ ನಾಯಕ, ಡಿ.ಎನ್.ಕುಮಾರ್, ಡಿ.ಇ.ಅಪ್ಪಾಜಿಗೌಡ, ಡಿ.ಕೆ.ದಿವಾಕರ, ಅನಿತಾ, ಡಿ.ಸಿ.ವಿಶ್ವನಾಥ್, ಲಲಿತಮ್ಮ ಅವಿರೋಧವಾಗಿ ಆಯ್ಕೆಯಾದರು. ಚುನಾವಣಾಧಿಕಾರಿಯಾಗಿ ಕೆ.ಆರ್. ನಗರ ಸಹಕಾರ ಅಭಿವೃದ್ಧಿ ಅಧಿಕಾರಿ ಎಸ್.ರವಿ ಕಾರ್ಯ ನಿರ್ವಹಿಸಿದರು. ಸಂಘದ ಕಾರ್ಯದರ್ಶಿ ಡಿ.ಆರ್.ಶಿವಲಿಂಗೇಗೌಡ ಮತ್ತು ಹಾಲು ಪರೀಕ್ಷ ಡಿ.ಎಸ್.ರಘು ಸಹಕಾರ ನೀಡಿದರು. ನಂತರ ನೂತನ ಆಡಳಿತ ಮಂಡಳಿ ನಿರ್ದೇಶಕರನ್ನು ಗ್ರಾಪಂ ಸದಸ್ಯ ಪ್ರವೀಣ್, ಗ್ರಾಮಸ್ಥರಾದ ಡಿ.ಎನ್.ಅಪ್ಪಾಜಿ, ಡಿ.ಆರ್.ನವೀನ, ಶಂಕರೇಗೌಡ, ಡಿ.ಆರ್.ಚೇತನ್, ಡಿ.ಎಸ್.ಮಧು, ಮಹೇಶ್, ಬಾಲು, ಬೋರೇಗೌಡ, ಡಿ.ಎನ್.ರಾಜಣ್ಣ, ಡಿ.ಆರ್.ಮುತ್ತು, ರಾಜು, ಡಿ.ವಿ.ದಿಲೀಪ್ ಕುಮಾರ್, ಡಿ.ವಿ.ಅಶೋಕ್ ಸೇರಿದಂತೆ ಮತ್ತಿತರರು ಅಭಿನಂದಿಸಿದರು.

ಎಂ.ಸಿ.ತಳಲು ಗ್ರಾಪಂಗೆ ರಂಜಿತಾ ಅಧ್ಯಕ್ಷೆ



ನೂತನ ಅಧ್ಯಕ್ಷೆ ರಂಜಿತಾ ಅವರನ್ನು ಸದಸ್ಯರು, ಗ್ರಾಮಸ್ಥರು ಅಭಿನಂದಿಸಿದರು.

ಸರಗೂರು, ಅ.22– ತಾಲೂಕಿನ ಎಂ.ಸಿ.ತಳಲು ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷೆಯಾಗಿ ರಂಜಿತಾ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಗ್ರಾಪಂ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ರಂಜಿತಾ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆಯಾದರು. ಚುನಾವಣೆಯನ್ನು ಕಬಿನಿ ಜಲಾಶಯದ ಎಇ ಉಷಾ, ಪಿಡಿಓ ಪರಮೇಶ್ ಹಾಗೂ ಗಜೇಂದ್ರ ನಡೆಸಿಕೊಟ್ಟರು.

ಗ್ರಾಪಂ ಸದಸ್ಯ ಎಂ.ಎಲ್.ಪ್ರಕಾಶ್ ಚಂದ್ರು ಮಾತನಾಡಿ, ಗ್ರಾಪಂ ವ್ಯಾಪ್ತಿ ಅಭಿವೃದ್ಧಿ ಕಾರ್ಯಗಳಿಗೆ ನೂತನ ಅಧ್ಯಕ್ಷರು ಹೆಚ್ಚು ಒತ್ತು ನೀಡಬೇಕು. ನಿವೇಶನ, ಮನೆ, ಶೌಚಾಲಯ ಸೇರಿದಂತೆ ಮೂಲಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. ಈ ವೇಳೆ ಉಪಾಧ್ಯಕ್ಷೆ ಲಕ್ಷ್ಮಿ, ಸದಸ್ಯರಾದ ರಮೇಶ್, ಕೆಂಡನಾಯಕ, ರಾಜಕುಮಾರ್, ಅಂಬಿಕಾ, ನಾಗಮ್ಮ, ಚಿಕ್ಕಕ್ಯಾತ, ಲಕ್ಷ್ಮಿಮಾದಪ್ಪ, ಭಾಗ್ಯಮ್ಮ, ನಿಂಗಮ್ಮ, ಮುಖಂಡರಾದ ರಾಜು, ನಾಗೇಂದ್ರ, ವೆಂಕಟರಾಮ್, ಮಲ್ಲಪ್ಪ, ಭವಾನೀಶ್, ಬಸವಣ್ಣ, ಜಂಯ ರಾವ್, ಸಕಲೇಶ್, ಪ್ರಭುಶಂಕರ್, ಮಂಜುಳಾ, ಶಿವಾಜಿನಾಯಕ, ಮಾದಪ್ಪ, ರೇವಣ್ಣ, ಮಂಜು, ಮಹದೇವೇಗೌಡ, ಗುರುಮಲ್ಲೇಗೌಡ, ನಾಗರಾಜು, ಜಗದೀಶ್, ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ಚಾಲನೆ



ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ಮಾಜಿ ಶಾಸಕ ಬಿ. ಹರ್ಷವರ್ಧನ್ ಚಾಲನೆ ನೀಡಿದರು.

ಮಲ್ಲುಂಡಿ, ಅ.22– ಪ್ರಧಾನಿ ಮೋದಿ ಅವರ ವಿಕಾಸ ಭಾರತದ ಪರಿಕಲ್ಪನೆ ಸಾಕಾರಗೊಳಿಸುವ ಸಲುವಾಗಿ ಗ್ರಾಮೀಣ ಜನರು ಬಿಜೆಪಿ ಸದಸ್ಯರಾಗುವ ಮೂಲಕ ಪಕ್ಷ ಸಂಘಟನೆಗೆ ಒತ್ತು ನೀಡಬೇಕು ಎಂದು ಮಾಜಿ ಶಾಸಕ ಬಿ.ಹರ್ಷವರ್ಧನ್ ತಿಳಿಸಿದರು.

ಸಮೀಪದ ಹುರ ಮಹಾಶಕ್ತಿ ಕೇಂದ್ರ ವ್ಯಾಪ್ತಿಯ ಎಂ.ಕೊಂಗಳ್ಳಿ, ಬಳ್ಳೂರಹುಂಡಿ, ದೇವರಾಯಶೆಟ್ಟಿಪುರ, ಹೆಡಿಯಾಲ, ಮಡುವಿನಹಳ್ಳಿ ಗ್ರಾಮಗಳಲ್ಲಿ ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಧಾನಿ ಮೋದಿ ಅವರು ತಮ್ಮ ಆಡಳಿತಾವಧಿಯಲ್ಲಿ ಭ್ರಷ್ಟಾಚಾರ ರಹಿತ ಆಡಳಿತ ನೀಡಿದ್ದಾರೆ. ದೇಶದ ಆರ್ಥಿಕ ಸ್ಥಿತಿ ಉತ್ತಮಗೊಳಿಸಿ ವಿಶ್ವದಲ್ಲೇ ಭಾರತವನ್ನು ಉತ್ತಮ ರಾಷ್ಟ್ರವಾಗಿಸಲು ಸಂಕಲ್ಪ ಮಾಡಿದ್ದಾರೆ.

ವಿಕಾಸ ಭಾರತದ ಕನಸನ್ನು ನನಸು ಮಾಡಲು ಗ್ರಾಮೀಣ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿ ಸದಸ್ಯತ್ವ ಹೊಂದಬೇಕಿದೆ. ಈಗಾಗಲೇ ರಾಜ್ಯದಲ್ಲಿ ಭ್ರಷ್ಟಾಚಾರದ ಸರ್ಕಾರವಾಗಿದೆ ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ ಎಂದು ಆರೋಪಿಸಿದರು.

ಈ ವೇಳೆ ಜಿಪಂ ಮಾಜಿ ಸದಸ್ಯ ಚಿಕ್ಕರಂಗನಾಯಕ, ಗ್ರಾಪಂ ಮಾಜಿ ಅಧ್ಯಕ್ಷ ಚಂದ್ರು, ಹಾಡ್ಯ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಶಂಕರ್, ಹಲ್ಕರೆ ಗ್ರಾಪಂ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ತಾಲೂಕು ಪ್ರಧಾನ ಕಾರ್ಯದರ್ಶಿ ಮಳಗೆರೆ ಪುಟ್ಟಸ್ವಾಮಿ, ತಾಪಂ ಮಾಜಿ ಸದಸ್ಯ ಎಸ್.ಬಸವರಾಜ್, ಕೆಂಪಣ್ಣ, ಮಹದೇವಸ್ವಾಮಿ ಸೇರಿದಂತೆ ಇತರರಿದ್ದರು.

ಹದಗೆಟ್ಟ ರಸ್ತೆ ದುರಸ್ತಿಗೆ ಆಗ್ರಹ



ಹಂಪಾಪುರ, ಅ.22– ನಿತ್ಯ ಸುರಿಯುತ್ತಿರುವ ಭಾರಿ ಮಳೆಯಿಂದಾಗಿ ರಸ್ತೆಗಳು ಹದಗೆಟ್ಟು, ವಾಹನ ಸವಾರರು ಹಾಗೂ ಸಾರ್ವಜನಿಕರು ಪರದಾಡುವಂತಾಗಿದೆ. ಹೀಗಾಗಿ ರಸ್ತೆ ದುರಸ್ತಿಗೊಳಿಸುವಂತೆ ಹೆಚ್.ಡಿ.ಕೋಟೆ ತಾಲೂಕು ಹಂಪಾಪುರ ಹೋಬಳಿ ವ್ಯಾಪ್ತಿಯ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಮಳೆಯಿಂದಾಗಿ ಹಂಪಾಪುರ ಮಾರ್ಗದ ಜಿನಹಳ್ಳಿ, ಮಾಲಾರದಹುಂಡಿ, ಕಂಚಮಳ್ಳಿ, ಇರೇನಂದಿ, ಚಾಮಹಳ್ಳಿ, ಹಾತ್ವಳು ಗ್ರಾಮಗಳ ರಸ್ತೆಗಳು ಹಾಳಾಗಿವೆ. ಈ ರಸ್ತೆಯಲ್ಲಿ ಓಡಾಡಲು ಸಾಧ್ಯವಾಗುತ್ತಿಲ್ಲ. ಅಲ್ಲದೇ ಹುಲ್ಲಹಳ್ಳಿ–ನಂಜನಗೂಡು ರಸ್ತೆಯಲ್ಲಿರುವ ಗುಂಡಿಗಳಲ್ಲಿ ಮಳೆ ನೀರು ನಿಂತು ರಸ್ತೆ ಕೆರೆಯಂತಾಗಿದೆ. ರಸ್ತೆ ದುರಸ್ತಿಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಈಗಲಾದರೂ ಅಧಿಕಾರಿಗಳು ಇತ್ತ ಗಮನಹರಿಸಿ ರಸ್ತೆ ದುರಸ್ತಿಗೊಳಿಸಬೇಕು. ಇಲ್ಲದಿದ್ದರೆ ಹೋರಾಟ ಮಾಡಲಾಗುವುದು ಎಂದು ರಾಜ್ಯ ಕಬ್ಬು ಬೆಳಗಾರರ ಸಂಘದ ತಾಲೂಕು ಅಧ್ಯಕ್ಷ ರಾಜೇಶ್ ಎಚ್ಚರಿಕೆ ನೀಡಿದ್ದಾರೆ.

ನಾಳೆ ಮಹಾರಾಣಿ ಕಾಲೇಜು ನೂತನ ಕಟ್ಟಡ ಕಾಮಗಾರಿಗೆ ಸಿಎಂ ಚಾಲನೆ

ಮೈಸೂರು, ಅ.22(ಎಸ್‌ಬಿಡಿ)– ನಗರದ ಮಹಾರಾಣಿ ಕಾಲೇಜು ನೂತನ ಕಟ್ಟಡಗಳ ಕಾಮಗಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಅ.24ರಂದು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ವೈನಾಡಿನಿಂದ ಬುಧವಾರ ಸಂಜೆ ಮೈಸೂರಿಗೆ ಆಗಮಿಸಿ, ವಾಸ್ತವ್ಯ ಹೂಡಲಿರುವ ಮುಖ್ಯಮಂತ್ರಿಗಳು, ಗುರುವಾರ ಬೆಳಗ್ಗೆ 10.30ಕ್ಕೆ ಮಹಾರಾಜ ಪಿಯು ಕಾಲೇಜು ಮೈದಾನದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಕಾಮಗಾರಿಗಳಿಗೆ ವಿದ್ಯುಕ್ತ ಚಾಲನೆ ನೀಡಲಿದ್ದಾರೆ. ಮಹಾರಾಣಿ ಮಹಿಳಾ ವಿಜ್ಞಾನ ಮತ್ತು ಕಲಾ ಕಾಲೇಜಿನ ವಸತಿ ನಿಲಯ ಕಟ್ಟಡ, ವಿಜ್ಞಾನ ಕಾಲೇಜಿನ ನೂತನ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಅಂದಾಜು 170 ಕೋಟಿ ರೂ. ಮೊತ್ತದಲ್ಲಿ ವಸತಿ ಇಲಾಖೆಯಿಂದ ಮತ್ತು ಪಡುವಾರಹಳ್ಳಿಯ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನ 3 ಮತ್ತು 4ನೇ ಅಂತಸ್ತಿನ ಕಟ್ಟಡ ಮತ್ತು ವಸತಿ ನಿಲಯದ 3ನೇ ಅಂತಸ್ತಿನ ಕಟ್ಟಡದ ನಿರ್ಮಾಣ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆ ಮೂಲಕ ಅಂದಾಜು 49 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗಿದೆ.

ವಿದ್ಯಾರ್ಥಿಗಳಿಂದ ಗುರುಗಳಿಗೆ ಗೌರವ ಸಮರ್ಪಣೆ



ಬೆಟ್ಟದಪುರ ಸಮೀಪದ ಹಾರನಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಂದನಾ ಕಾರ್ಯಕ್ರಮ ನಡೆಯಿತು.

ಬೆಟ್ಟದಪುರ, ಅ.22– ಒಬ್ಬ ಶಿಕ್ಷಕ ತನ್ನ ವೃತ್ತಿ ಆರಂಭದಿಂದ ಕೊನೆವರೆಗೆ ಸಾವಿರಾರು ವಿದ್ಯಾರ್ಥಿಗಳಿಗೆ ವಿದ್ಯಾದಾನ ಮಾಡುವ ಮೂಲಕ ಅವರನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯುವ ಶ್ರೇಷ್ಠ ಕಾರ್ಯ ಮಾಡುತ್ತಾನೆ ಎಂದು ಕುಶಾಲನಗರ ಬಾಲಕಿಂಯರ ಪ್ರೌಢಶಾಲೆಯ ಮುಖ್ಯಶಿಕ್ಷಕಿ ಬಿ.ಎನ್.ಪುಷ್ಪ ತಿಳಿಸಿದರು.

ಪಿರಿಯಾಪಟ್ಟಣ ತಾಲೂಕಿನ ಹಾರನಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ 2005–06ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ವತಿಯಿಂದ ಆಯೋಜಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗುರುಗಳ ಮಾರ್ಗದರ್ಶನದಲ್ಲಿ ಸಾಗಿ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಗುರಿ ಮುಟ್ಟುತ್ತಾರೆ. ಆ ಮೂಲಕ ಗುರುಗಳನ್ನು ನೆನೆದು ಗೌರವ ಸಮರ್ಪಿಸುವುದು ವಿಶೇಷವಾಗಿದೆ ಎಂದರು.

ಮುತ್ತೂರು ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಹೆಚ್.ಡಿ.ವಾಸು ಮಾತನಾಡಿ, ತನ್ನ ವಿದ್ಯಾರ್ಥಿಗಳು ಉನ್ನತ ಸ್ಥಾನ ಗಳಿಸಿದ್ದಾರೆ ಹಾಗೂ ಉತ್ತಮ ನಾಗರಿಕರಾಗಿದ್ದಾರೆ ಎಂಬುದೇ ಶಿಕ್ಷಕರಿಗೆ ಸಿಗುವ ಅತ್ಯಂತ ಅಮೂಲ್ಯವಾದ ಗೌರವ. ಒಬ್ಬ ವ್ಯಕ್ತಿಯನ್ನು ಉತ್ತಮ ನಾಗರಿಕನನ್ನಾಗಿ ಮಾಡುವ ಏಕೈಕ ಶಕ್ತಿ ಶಿಕ್ಷಣ ಮಾತ್ರ. ವಿದ್ಯೆ ಕಲಿತ ವಿದ್ಯಾರ್ಥಿಗಳು ಹತ್ತಾರು ವರ್ಷಗಳ ನಂತರ ಗುರುಗಳನ್ನು ಒಂದು ಕಡೆ ಸೇರಿಸಿ ಗೌರವ ಸಮರ್ಪಿಸುವ ಮೂಲಕ ನೆನೆಯುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದರು.

ದೇವರಹಳ್ಳಿ ಸರ್ಕಾರಿ ಪ್ರೌಢಶಾಲೆ ಶಿಕ್ಷಕ ಅಶೋಕ್‌ಕುಮಾರ್ ಮಾತನಾಡಿ, ಸಂಪಾದಿಸಿದ್ದು ಯಾವುದು ಕೊನೆಯವರೆಗೂ ಉಳಿಯುವುದಿಲ್ಲ. ಆದರೆ ಕಲಿತ ವಿದ್ಯೆ ಕೊನೆವರೆಗೂ ಜೊತೆಗಿರುತ್ತದೆ. ಜೀವನದಲ್ಲಿ ಗುರಿ, ಛಲ, ಗುರುವಿನ ಆಶೀರ್ವಾದ ಇದ್ದರೆ ಮಾತ್ರವೇ ವಿದ್ಯೆ ಕಲಿತು ಸಮಾಜದಲ್ಲಿ ಉನ್ನತ ಸ್ಥಾನಗಳಿಸಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ಶಿಕ್ಷಕರಿಗೆ ಮೈಸೂರು ಪೇಟ ತೊಡಿಸಿ, ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಯಿತು. ಬಳಿಕ ಎಲ್ಲಾ ಶಿಕ್ಷಕರು ವಿದ್ಯಾರ್ಥಿಗಳ ಭವಿಷ್ಯಕ್ಕೆ ಶುಭ ಹಾರೈಸಿದರು. ಹಿರಿಯ ವಿದ್ಯಾರ್ಥಿಗಳು ತಮ್ಮ ಶಾಲಾ ದಿನಗಳನ್ನು ಮೆಲುಕು ಹಾಕಿ ಅನಿಸಿಕೆ ಹಂಚಿಕೊಂಡರು. ಇದೇ ಶಾಲೆಯಲ್ಲಿ ಸೇವೆ ಸಲ್ಲಿಸಿ ಮೃತಪಟ್ಟ ಕನ್ನಡ ಪಂಡಿತ ಶಿವರಾಮೇಗೌಡ (ಎಸ್‌ಆರ್‌ಜಿ) ಹಾಗೂ ಸಿಬ್ಬಂದಿ ಯತೀಂದ್ರ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಹಿರಿಯ ವಿದ್ಯಾರ್ಥಿ ಶಿವು ನೇತೃತ್ವದಲ್ಲಿ ದಿಲಿಶ್ ಮೆಲೋಡಿಸ್ ವತಿಯಿಂದ ಆರ್ಕೆಸ್ಟ್ರಾ ಕಾರ್ಯಕ್ರಮ ನಡೆಸಿಕೊಟ್ಟರು.

ಈ ವೇಳೆ ರತ್ನಪುರಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಸಿ.ಹೆಚ್.ಚಂದ್ರೇಗೌಡ, ನಿವೃತ್ತ ಶಿಕ್ಷಕ ಎ.ಎನ್.ಶಿವಣ್ಣ, ಎನ್. ದೇವರಹಳ್ಳಿ ಸರ್ಕಾರಿ ಪ್ರೌಢಶಾಲೆ ಶಿಕ್ಷಕ ಅಶೋಕ್ ಕುಮಾರ್, ಯಳಂದೂರು ಸರ್ಕಾರಿ ಪ್ರೌಢಶಾಲೆ ಶಿಕ್ಷಕ ಲಕ್ಷ್ಮಣನಾಯಕ, ರವಿಕುಮಾರ್, ಹೆಬ್ಬಾಲೆ ಸರ್ಕಾರಿ ಪ್ರೌಢಶಾಲೆ ಶಿಕ್ಷಕ ಭೋಜೇಗೌಡ, ಸಂತೆಮರೂರು ಸರ್ಕಾರಿ ಪ್ರೌಢಶಾಲೆಯ ಶಿಕ್ಷಕಿ ತೈಜಾಕ್ಷಿ, ಜಿಜೆಸಿಪಿ ಪಿರಿಯಾಪಟ್ಟಣ ಶಾಲೆ ಸಿಬ್ಬಂದಿ ಕುಮಾರ್ ಸೇರಿದಂತೆ ಹಿರಿಯ ವಿದ್ಯಾರ್ಥಿಗಳು ಇದ್ದರು.

ತೊಂಡಾಳು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಉದ್ಘಾಟನೆ



ಶುದ್ಧ ಕುಡಿಯುವ ನೀರಿನ ಘಟಕವನ್ನು ಎಂಎಲ್‌ಸಿ ಹೆಚ್.ವಿಶ್ವನಾಥ್ ಉದ್ಘಾಟಿಸಿದರು.

ಹುಣಸೂರು, ಅ.22– ತಾಲೂಕಿನ ಗಾವಡಗೆರೆ ಗ್ರಾಪಂ ವ್ಯಾಪ್ತಿಯ ತೊಂಡಾಳು ಗ್ರಾಮದಲ್ಲಿ ವಿಧಾನಪರಿಷತ್ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ 12 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕವನ್ನು ವಿಧಾನಪರಿಷತ್ ಸದಸ್ಯ ಎ.ಹೆಚ್. ವಿಶ್ವನಾಥ್ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಸರ್ಕಾರ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ಮಾಣಕ್ಕೆ ಮುಂದಾಗಿರುವುದು ಸಂತಸದ ವಿಷಯ. ಗ್ರಾಮಸ್ಥರ ಬೇಡಿಕೆಯಂತೆ ಆರೋಗ್ಯದ ಹಿತದೃಷ್ಟಿಯಿಂದ ಶುದ್ಧ ಕುಡಿಯುವ ನೀರಿನ ಘಟಕ ತೆರೆಯಲಾಗಿದೆ. ಹೀಗಾಗಿ ನಮ್ಮ ಸುತ್ತಮುತ್ತಲ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಜೊತೆಗೆ ಇದರ ನಿರ್ವಹಣೆಗಾಗಿ ಗ್ರಾಪಂ ಅಧಿಕಾರಿಗಳ ಜೊತೆ ಗ್ರಾಮಸ್ಥರು ಸಹಕರಿಸಬೇಕು ಎಂದರು. ಇದೇ ವೇಳೆ ಗ್ರಾಮಸ್ಥರು ತೊಂಡಾಳು ಮುಖ್ಯರಸ್ತೆಯಿಂದ ಆಸ್ಪತ್ರೆವರೆಗಿನ ರಸ್ತೆ ಹಾಗೂ ಶಾಲಾ ಕೊಠಡಿಗಳು, ಕಾಂಪೌಂಡ್, ಶೌಚಾಲಯ ದುರಸ್ತಿ ಮಾಡಿಕೊಡುವಂತೆ ಮನವಿ ಮಾಡಿದರು.

ಈ ವೇಳೆ ಗ್ರಾಪಂ ಅಧ್ಯಕ್ಷೆ ಶೋಭಾ, ಸದಸ್ಯರಾದ ರುಕ್ಮಾಂಗದ, ದಿನೇಶ್, ಲತಾಕುಮಾರಿ, ಪಿಡಿಓ ಮಂಜುಳಾ, ಕಾರ್ಯದರ್ಶಿ ಗುತ್ತಿಗೆದಾರ ನವೀನ್, ಕೀರ್ತನ, ಎಇಇ ವಿಜಯ್, ರಮೇಶ್, ಅಣ್ಣಯ್ಯನಾಯ್ಕ, ಯಜಮಾನ ಲಕ್ಷ್ಮಣಶೆಟ್ಟಿ, ಪ್ರಕಾಶ್‌ಗೌಡ, ಎಸ್‌ಡಿಎಂಸಿ ಅಧ್ಯಕ್ಷ ಅಶೋಕ, ಹೊನ್ನಪ್ಪ ಕಾಳಿಂಗ, ಶಾಲಾ ಮುಖ್ಯೋಪಾಧ್ಯಾಯರಾದ ಶ್ರೀನಿವಾಸ್, ಅಂಗನವಾಡಿ ಕಾರ್ಯಕರ್ತೆ ಉಮಾ, ಆಶಾ ಕಾರ್ಯಕರ್ತೆ ಮಂಗಳ ಹಾಗೂ ಮುಳ್ಳೂರು ಗ್ರಾಪಂ ಅಧ್ಯಕ್ಷರು, ಸದಸ್ಯರು, ಗ್ರಾಮಸ್ಥರು ಭಾಗವಹಿಸಿದ್ದರು.

ಕೆಂಗೇರಿ ಕೆರೆ ನೀರಿನಲ್ಲಿ ಮುಳುಗಿ ಮಕ್ಕಳಿಬ್ಬರ ಸಾವು



ಬೆಂಗಳೂರು: ಬೆಂಗಳೂರಿನ ಕೆಂಗೇರಿ ಕೆರೆಯಲ್ಲಿ ಇಬ್ಬರು ಮಕ್ಕಳು ಮುಳುಗಿ ಸಾವನ್ನಪ್ಪಿರುವ ದಾರುಣ ಘಟನೆ ವರದಿಯಾಗಿದ್ದು, ಈ ಪೈಕಿ ಮಂಗಳವಾರ ಒಂದು ಮೃತದೇಹ ಪತ್ತೆಯಾಗಿದೆ.

ಸೋಮವಾರ ಸಂಜೆ ಈ ದುರ್ಘಟನೆ ನಡೆದಿದ್ದು, ಮೃತ ಮಕ್ಕಳನ್ನು ಶ್ರೀನಿವಾಸ್ (ಜಾನ್ ಸೀನಾ) (15) ಮತ್ತು ಮಹಾಲಕ್ಷ್ಮಿ (13) ಎಂದು ಗುರುತಿಸಲಾಗಿದೆ.

ಮೂಲಗಳ ಪ್ರಕಾರ ಬಿಬಿಎಂಪಿಯಲ್ಲಿ ಪೌರಕಾರ್ಮಿಕರಾಗಿರುವ ಮೃತ ಮಕ್ಕಳ ತಾಯಿ, ಇತ್ತೀಚೆಗಷ್ಟೇ ಕೆಂಗೇರಿ ಸಮೀಪದ ಹರ್ಷ ಲೇಔಟ್ ಗೆ ಬಂದು ನೆಲೆಸಿದ್ದರು. ಕೆಲಸದ ನಿಮಿತ್ತ ತಾಯಿ ಹೊರ ಹೋಗಿದ್ದರು. ಸಂಜೆ 5:30ರ ವೇಳೆಗೆ ಬಟ್ಟೆ ಒಗೆಯಲು ಬಂದಿದ್ದ ಅಣ್ಣ, ತಂಗಿ ಕಾಲು ಜಾರಿ ಕೆರೆಗೆ ಬಿದ್ದಿದ್ದಾರೆ. ಮಕ್ಕಳನ್ನು ಹುಡುಕಿಕೊಂಡು ಬಂದ ತಾಯಿ ನಾಗಮ್ಮ ಅವರಿಗೆ ಬಟ್ಟೆ ಹಾಗೂ ಪಾತ್ರೆ ಕೆರೆಯ ಬಳಿ ಪತ್ತೆಯಾಗಿದೆ. ಈ ವೇಳೆ ಕೂಡಲೇ ನಾಗಮ್ಮ ಸ್ಥಳೀಯರಿಗೆ ಮಾಹಿತಿ ನೀಡಿದ್ದು, ಬಳಿಕ ಮಾಹಿತಿ ತಿಳಿದ ಪೊಲೀಸರು ಸ್ಥಳಕ್ಕೆ ಆಗಮಿಸಿ ಶೋಧ ಕಾರ್ಯ ನಡೆಸಿದ್ದಾರೆ. ಕೆಂಗೇರಿ ಪೊಲೀಸರು ಮತ್ತು ಅಗ್ನಿಶಾಮಕ ದಳದ ಸಿಬ್ಬಂದಿ ಕಾರ್ಯಾಚರಣೆ ನಡೆಸುತ್ತಿದ್ದು, ರಾತ್ರಿಯವರೆಗೂ ಶವ ಪತ್ತೆಯಾಗಲಿಲ್ಲ. ಮಳೆ ಕಾರಣ ಮುಂಜಾನೆಯಿಂದ ಕಾರ್ಯಾಚರಣೆ ಮುಂದುವರಿಸಲಾಗುವುದು ಎಂದು ಕೆಂಗೇರಿ ಸಿಪಿಐ ಸಂಜೀವ್‌ಗೌಡ ತಿಳಿಸಿದ್ದಾರೆ.

ಬೆಳಗ್ಗೆ ಅಣ್ಣನ, ಸಂಜೆ ಹೊತ್ತಿಗೆ ತಂಗಿಯ ಶವ ಪತ್ತೆ

ಇಂದು ಬೆಳಗ್ಗೆ ಮತ್ತೆ ಶೋಧ ಕಾರ್ಯಾಚರಣೆ ನಡೆಸಿದ ಅಗ್ನಿಶಾಮಕ ದಳ ಸಿಬ್ಬಂದಿಗೆ ಒಂದು ಮಗು ವಿನ ಮೃತ ದೇಹ ಪತ್ತೆಯಾಗಿತ್ತು. ಬಳಿಕ ಮಹಾಲಕ್ಷ್ಮಿಗಾಗಿ ಶೋಧ ಕಾರ್ಯಾಚರಣೆ ಮುಂದುವರೆದಿತ್ತು. ಸಂಜೆ ವೇಳೆ ರಕ್ಷಣಾ ಸಿಬ್ಬಂದಿ ಮಹಾ ಲಕ್ಷ್ಮೀ ಮೃತದೇಹ ಪತ್ತೆ ಮಾಡಿದ್ದಾರೆ. ಜ್ಞಾನಭಾರತಿ ಅಗ್ನಿಶಾಮಕದಳ ಸಿಬ್ಬಂದಿ ಹಾಗೂ ಕೆಂಗೇರಿ ಪೊಲೀಸ್ ಸಿಬ್ಬಂದಿ, ಸಿವಿಲ್ ಡಿಫೆನ್ಸ್? ಸೇರಿದಂತೆ ಸುಮಾರು 15 ಜನರ ತಂಡ ಶೋಧ ಕಾರ್ಯ ನಡೆಸಿ ಎರಡು ಮೃತ ದೇಹಗಳನ್ನು ಪತ್ತೆ ಮಾಡಿದೆ.

ಯಲಹಂಕ ವಲಯದಲ್ಲಿ ದಾಖಲೆಯ ಮಳೆ; 10 ಬಡಾವಣೆ ಜಲಾವೃತ



ಬೆಂಗಳೂರು: ಸಿಲಿಕಾನ್ ಸಿಟಿ ಬೆಂಗಳೂರನ್ನು ಮಳೆ ಬಿಟ್ಟೂ ಬಿಡದೆ ಕಾಡುತ್ತಿದ್ದು, ಸೋಮವಾರ ಬೆಂಗಳೂರಿನಲ್ಲಿ ಮೇಘಸ್ಫೋಟ ಸಂಭವಿಸಿ ಯಲಹಂಕ ವಲಯದಲ್ಲಿ ದಾಖಲೆಯ ಮಳೆಯಾಗಿದೆ ಎಂದು ಹವಾಮಾನ ಇಲಾಖೆ ಮೂಲಗಳು ತಿಳಿಸಿವೆ. ಬೆಂಗಳೂರು ಯಲಹಂಕ ವಲಯದಲ್ಲಿ ಸೋಮವಾರ ರಾತ್ರಿ ಮೇಘಸ್ಫೋಟ ಸಂಭವಿಸಿದ್ದು, ದಾಖಲೆಯ 42 ಮಿ.ಮೀ.ಗೂ ಹೆಚ್ಚು ಮಳೆಯಾಗಿದೆ. ಪರಿಣಾಮ ಇಲ್ಲಿನ 10 ಬಡಾವಣೆಗಳು ಜಲಾವೃತವಾಗಿದ್ದು, 4000ಕ್ಕೂ ಅಧಿಕ ನಿವಾಸಿಗಳು ತೊಂದರೆಗೀಡಾಗಿದ್ದಾರೆ.

ಭರದಿಂದ ಸಾಗಿದ ರಕ್ಷಣಾ ಕಾರ್ಯ: ಇನ್ನು ಕೆವಿಎ (ಕೇಂದ್ರೀಯ ವಿಹಾರ್ ಅಪಾರ್ಟ್ ಮೆಂಟ್) ಪ್ರವಾಹದಿಂದಾಗಿ, ಅಪಾರ್ಟ್‌ಮೆಂಟ್ ಸಂಕೀರ್ಣಕ್ಕೆ ನಾಲ್ಕು ಅಡಿಗೂ ಹೆಚ್ಚು ನೀರು ನುಗ್ಗಿದ್ದರಿಂದ 3000ಕ್ಕೂ ಹೆಚ್ಚು ನಿವಾಸಿಗಳು ಸಂಕಷ್ಟಕ್ಕೆ ಸಿಲುಕಿದ್ದು, ಅವರನ್ನು ರಕ್ಷಿಸಲು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ರಾಜ್ಯ ವಿಪತ್ತು ನಿರ್ವಹಣಾ ಪಡೆ ಎರಡೂ ದೋಣಿಗಳನ್ನು ನಿಯೋಜಿಸಿವೆ. ಇದರಿಂದ 10 ಬಡಾವಣೆಗಳು ಜಲಾವೃತಗೊಂಡಿದ್ದು, 4000 ಜನರ ಜೀವನದ ಮೇಲೆ ಪರಿಣಾಮ ಬೀರಿದೆ ಎಂದು ಬಿಬಿಎಂಪಿ ಅಧಿಕಾರಿಗಳು ಹೇಳಿದ್ದಾರೆ.

ಘಟನೆಯ ನಂತರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಬೆಂಗಳೂರು, ಉಮಾಶಂಕರ್ ಮತ್ತು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಪ್ರವಾಹ ಪೀಡಿತ ಪ್ರದೇಶಕ್ಕೆ ಭೇಟಿ ನೀಡಿ ಕಾರ್ಯಾಚರಣೆಗಳ ಮೇಲ್ವಿಚಾರಣೆ ನಡೆಸಿದರು.

ಸಚಿವ ಕೃಷ್ಣ ಬೈರೇಗೌಡ ಭೇಟಿ: ಈ ವೇಳೆ ಸ್ಥಳಕ್ಕಾಗಮಿಸಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ ಸುದ್ದಿಗಾರರೊಂದಿಗೆ ಮಾತನಾಡಿ, 'ದಿಢೀರ್ ಮೋಡ ಕವಿದ ಕಾರಣ ದೊಡ್ಡಬೊಮ್ಮಸದ್ರ ಕೆರೆಯು 18 ವರ್ಷಗಳಲ್ಲೇ ಮೊದಲ ಬಾರಿಗೆ ಗರಿಷ್ಠ ಸಾಮರ್ಥ್ಯವನ್ನು ತಲುಪಿದ್ದು, ಚರಂಡಿ ಹಾಗೂ ರಸ್ತೆಗಳಿಗೆ ನೀರು ಹರಿದು ಪ್ರವಾಹ ಉಂಟಾಗಿದೆ.



ಸಾರ್ವಜನಿಕ ಪ್ರಕಟಣೆ

ಈ ಪ್ರಕಟಣೆಯ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತನ್ನು ನನ್ನ ಕಕ್ಷಿದಾರರು ಅದರ ಮಾಲೀಕರಾದ, ಮೈಸೂರು ನಗರ, ಶಿವರಾತ್ರೀಶ್ವರ ನಗರ, ಜೆ.ಎಸ್.ಎಸ್. ಶಾಲೆ ಹತ್ತಿರ, ಬಿ-ಲೇಔಟ್, ಮನೆ ನಂಬರ್: 680 ರಲ್ಲಿ ವಾಸವಾಗಿರುವ ಪ್ರಶಾಂತ್ ಕುಮಾರ್.ಎಸ್., ಬಿನ್. ನಾಗರಾಜ ದೇವರು ಮತ್ತು ಅವರ ಕುಟುಂಬದ ಸದಸ್ಯರಿಂದ ಖರೀದಿಸಲು ಉದ್ದೇಶಿಸಿರುತ್ತಾರೆ.

ಷೆಡ್ಯೂಲ್ ಸ್ವತ್ತಿನ ಪರಬಾರೆಯ ವಿಚಾರದಲ್ಲಿ ಯಾರಿಗಾದರೂ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಭಾಗಾಂಶ, ಋಣ, ಬಾಧ್ಯತೆಗಳು ಇದ್ದಲ್ಲಿ, ಇಂದಿನಿಂದ ಹತ್ತು (10) ದಿನಗಳ ಒಳಗೆ ತಮ್ಮ ಲಿಖಿತ ತಕರಾರು ಮತ್ತು ಪೂರಕ ದಾಖಲಾತಿಗಳನ್ನು ಈ ಕೆಳಗೆ ಸಹಿ ಮಾಡಿದವರಿಗೆ ಸಲ್ಲಿಸತಕ್ಕದ್ದು. ಒಂದು ವೇಳೆ ಈ ಅವಧಿಯಲ್ಲಿ ಯಾವುದೇ ತಕರಾರುಗಳು ಈ ಕೆಳಗೆ ಸಹಿ ಮಾಡಿದವರಿಗೆ ಬಾರದಿದ್ದಲ್ಲಿ, ಷೆಡ್ಯೂಲ್ ಸ್ವತ್ತಿನ ಮೇಲೆ ಇತರ ಯಾರಿಗೂ ಯಾವುದೇ ರೀತಿಯ ಹಕ್ಕು, ಹಿತಾಸಕ್ತಿ, ಭಾಗಾಂಶ, ಋಣ, ಬಾಧ್ಯತೆಗಳು ಇರುವುದಿಲ್ಲ ಮತ್ತು ಷೆಡ್ಯೂಲ್ ಸ್ವತ್ತನ್ನು ಮಾರಾಟ ಮಾಡಲು ಸ್ವತ್ತಿನ ಮಾಲೀಕರು ಪೂರ್ಣ ಹಕ್ಕುಳ್ಳವರಾಗಿರುತ್ತಾರೆ ಎಂದು ಪರಿಗಣಿಸಿ ಕ್ರಯದ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು.

ಷೆಡ್ಯೂಲ್: ಮೈಸೂರು ಜಿಲ್ಲೆ ಮತ್ತು ತಾಲ್ಲೂಕು, ಜಯಪುರ ಹೋಬಳಿ, ಕೇರ್ಗಳ್ಳಿ ಗ್ರಾಮದ ಸರ್ವೆ ನಂಬರ್. 124/4 ರಲ್ಲಿ, ನಂಬರ್: A.L.N. (3) C.R. 37/2016-17, ದಿನಾಂಕ: 26/11/2016 ರಂದು ವಸತಿ ಉದ್ದೇಶಕ್ಕಾಗಿ ಭೂ-ಪರಿವರ್ತನೆಯಾಗಿರುವ ಇಪ್ಪತ್ತೈದುವರೆ ಗುಂಟೆ (0.25.08.00) ವಿಸ್ತೀರ್ಣದ ಅನ್ಯಕ್ರಾಂತ ಜಮೀನಿಗೆ ಚಕ್ಕುಬಂದಿ. ಪೂರ್ವಕ್ಕೆ:- ಸರ್ವೆ ನಂಬರ್ 111 ಮತ್ತು 112, ಪಶ್ಚಿಮಕ್ಕೆ:- ಸರ್ವೆ ನಂಬರ್ 124/2, ಉತ್ತರಕ್ಕೆ: ಸರ್ವೆ ನಂಬರ್ 124/1 ದಕ್ಷಿಣಕ್ಕೆ:- ಸರ್ವೆ ನಂಬರ್ 124/3

Sd/- M.N. Prakash Kallappa,
Advocate, KAR 1996-2000# 2-3, First Floor, PRI Complex, 67/7A, New Sayyajirao Road, Fort Mohalla 570004 India Cell: 93431 12535
E-mail: mnprakashkalappa@gmail.com

ಮೈಸೂರು: 22/10/2024

ಗೌರವಾನ್ವಿತ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ನಂಜನಗೂಡು

ಅಸಲು ದಾವೆ ಸಂಖ್ಯೆ : 75/2023

[illegible]


ಪತ್ರಿಕಾ ಪ್ರಕಟಣೆ

[illegible] ದಿನಾಂಕ 13.12.2024 ರಂದು [illegible] ಬೆಳಗ್ಗೆ 11 ಗಂಟೆಗೆ [illegible]

ಷೆಡ್ಯೂಲ್

[illegible] ನಂ.438, ಅಸೆಸ್‌ಮೆಂಟ್ ನಂ.845, ಸೈಟ್ ಸಂಖ್ಯೆ 27, [illegible] 40 ಅಡಿ, [illegible] 30 ಅಡಿಗಳಿಗೆ [illegible] ನಂ.16, [illegible] ನಂ.26, [illegible]

ನ್ಯಾಯಾಲಯದ ಅಪ್ಪಣೆಯ ಮೇರೆಗೆ
ಸಹಿ/- [illegible]
2ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯ ನಂಜನಗೂಡು
ಸಹಿ/- [illegible]
[illegible], ನಂಜನಗೂಡು
ದಿನಾಂಕ: 26-09-2024



Post Vacant	Qualification
Female Warden	B.A. / B.Com / B.Sc
Male Warden	
Physical Education Teacher	B.P.Ed / M.P.Ed
Counsellor	B.Sc / M.Sc